ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ಜೂನ್ 22 ಶನಿವಾರ 2024
ಸಂಪುಟ: 45 | ಸಂಚಿಕೆ: 67 | ಪುಟಗಳು: 12
₹4
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಜು.12, ಜು.19, ಜು.26, ಆ.2 ಆಷಾಢ ಶುಕ್ರವಾರ

ಚಾಮುಂಡಿಬೆಟ್ಟದಲ್ಲಿ ತಾಯಿಗೆ ವಿಶೇಷ ಪೂಜೆ; ಭಕ್ತರಿಗೆ ಸೌಕರ್ಯ ಸಂಬಂಧ ಡಿಸಿ ಸಭೆ; ಅಗತ್ಯ ಎಲ್ಲಾ ಸಿದ್ಧತೆಗೆ ಸೂಚನೆ



ಮೈಸೂರು, ಜೂ.21(ಎಂಟಿವೈ)– ಆಷಾಢ ಮಾಸದ ಶುಕ್ರವಾರದಂದು ಚಾಮುಂಡಿಬೆಟ್ಟದಲ್ಲಿ ಚಾಮುಂಡೇಶ್ವರಿಯ ವಿಶೇಷ ಪೂಜಾ ಮಹೋತ್ಸವಕ್ಕೆ ಬರುವ ಭಕ್ತರು ಹಾಗೂ ಪ್ರವಾಸಿಗರಿಗೆ ಅಗತ್ಯ ಸೌಕರ್ಯಗಳ ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಸೂಚನೆ ನೀಡಿದ್ದಾರೆ.

ಮೈಸೂರಿನ ಜಿ.ಪಂ ಸಭಾಂಗಣದಲ್ಲಿ ಆಷಾಢ ಮಾಸದ ಶುಕ್ರವಾರದಂದು ನಡೆಯುವ ವಿಶೇಷ ಪೂಜಾ ಮಹೋತ್ಸವದ ಅಂಗವಾಗಿ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಪೂರ್ವಾಭಾವಿ ಸಭೆ ನಡೆಸಿದ ಜಿಲ್ಲಾಧಿಕಾರಿಗಳು, ಈ ವರ್ಷ ಜು.12 ರಂದು ಮೊದಲನೇ, ಜು.19 ಎರಡನೇ, ಜು.26 ಮೂರನೇ ಆಷಾಢ ಶುಕ್ರವಾರ, ಜು.27ರಂದು (ಶನಿವಾರ) ಶ್ರೀ ಚಾಮುಂಡೇಶ್ವರಿ ಅಮ್ಮನವರ ವರ್ಧಂತಿ ಮಹೋತ್ಸವ ಹಾಗೂ ಆಗಸ್ಟ್ 2ರಂದು ಕೊನೆಯ ಆಷಾಢ ಶುಕ್ರವಾರದಂದು ಬೆಟ್ಟದಲ್ಲಿ ಭಕ್ತರ ಸಂಖ್ಯೆ ಹೆಚ್ಚಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಭಕ್ತರಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಬೇಕು. ಎಲ್ಲಿಯೂ ಲೋಪವಾಗದಂತೆ ಕಟ್ಟೆಚ್ಚರ ವಹಿಸಬೇಕು ಎಂದು ಸಲಹೆ ನೀಡಿದರು. ಆಷಾಢ ಶುಕ್ರವಾರದ



ಮೈಸೂರಿನ ಜಿ.ಪಂ ಕಚೇರಿ ಸಭಾಂಗಣದಲ್ಲಿ ಆಷಾಢ ಮಾಸದ ವಿಶೇಷ ಪೂಜಾ ಮಹೋತ್ಸವದ ಅಂಗವಾಗಿ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಪೂರ್ವಾಭಾವಿ ಸಭೆ ನಡೆಸಿದರು.

ವಿಶೇಷ ಪೂಜಾ ಮಹೋತ್ಸವದ ಹಿನ್ನೆಲೆಯಲ್ಲಿ ಜುಲೈ ಮೊದಲ ವಾರದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜನಪ್ರತಿನಿಧಿಗಳ ಜೊತೆ ಪರಿಶೀಲನಾ ಸಭೆ ನಡೆಸಲಾಗುವುದು. ಚಾಮುಂಡಿಬೆಟ್ಟದ ತಪ್ಪಲಿನಿಂದ ಭಕ್ತರನ್ನು ಬೆಟ್ಟಕ್ಕೆ ಕರೆದೊಯ್ಯಲು ಉಚಿತ ಬಸ್ ವ್ಯವಸ್ಥೆ ಮಾಡಬೇಕು. ದಾಸೋಹ ಭವನದಲ್ಲಿ ನಡೆಯುವ ಪ್ರಸಾದ ವಿತರಣೆಯೂ ಸೇರಿದಂತೆ ಭಕ್ತಾದಿಗಳು ವಿವಿಧೆಡೆ ಪ್ರಸಾದ ವಿತರಣೆ ಮಾಡುತ್ತಾರೆ. ಆಹಾರ ಸುರಕ್ಷತಾ ಅಧಿಕಾರಿಗಳು ಇದನ್ನು ಪರಿಶೀಲನೆ ನಡೆಸಬೇಕು. ಭಕ್ತರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ವಾಹನಗಳ ಪಾರ್ಕಿಂಗ್ ಕ್ರಮಬದ್ಧವಾಗಿರಬೇಕು. ಚಾಮುಂಡಿ ಬೆಟ್ಟದಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧವಿರುವುದರಿಂದ ಬೆಟ್ಟಕ್ಕೆ ಬರುವವರು ಪ್ಲಾಸ್ಟಿಕ್‌ಗಳನ್ನು ತರದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಬೆಟ್ಟ ಹಾಗೂ ದೇವಾಲಯದ ಆವರಣದಲ್ಲಿ ಸ್ವಚ್ಛತೆ ಕಾಪಾಡಬೇಕು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬರುವುದರಿಂದ ಮೊಬೈಲ್ ಶೌಚಾಲಯ ವ್ಯವಸ್ಥೆ ಕಲ್ಪಿಸಬೇಕು. ಚಾಮುಂಡಿಬೆಟ್ಟದಲ್ಲಿರುವ ಅಂಗಡಿಗಳಲ್ಲಿ ಪ್ಲಾಸ್ಟಿಕ್ ಮಾರಾಟ, ಬಳಕೆ ನಿರ್ಬಂಧಿಸಬೇಕು. ಬೆಟ್ಟದಲ್ಲಿ ಸಿಸಿಟಿವಿ ವ್ಯವಸ್ಥೆ ಸಮರ್ಪಕವಾಗಿ ಕಲ್ಪಿಸಬೇಕು. ಕುಡಿಯುವ ನೀರಿನ ಆರ್‌ಓ ಪ್ಲಾಂಟ್ ವ್ಯವಸ್ಥೆ ಕಲ್ಪಿಸಬೇಕು. ಇದರಿಂದ ಕುಡಿಯುವ ನೀರಿನ ಪ್ಲಾಸ್ಟಿಕ್ ಬಾಟಲ್ ಬಳಕೆ ಕಡಿಮೆ ಮಾಡಬಹುದು. ಪೂಜಾ ಮಹೋತ್ಸವದ ಹಿನ್ನೆಲೆಯಲ್ಲಿ ಫ್ಲೆಕ್ಸ್, ಬ್ಯಾನರ್ ಅಳವಡಿಕೆ ನಿಷೇದಿಸಲಾಗಿದೆ. ● 2ನೇ ಪುಟಕ್ಕೆ



ಖ್ಯಾತ ಗಾಯಕನ ಜಮೀನು ಒತ್ತುವರಿ

ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ವಿರುದ್ಧ ಲೋಕಾಯುಕ್ತಕ್ಕೆ ದೂರು



ಬೆಂಗಳೂರು, ಜೂ.21– ಬಾಲಿವುಡ್‌ನ ಖ್ಯಾತ ಗಾಯಕ, ನಟ ಲಕ್ಕಿ ಅಲಿ ಅವರು ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ವಿರುದ್ಧ ಲೋಕಾಯುಕ್ತಕ್ಕೆ ದೂರು ನೀಡಿದ್ದಾರೆ. ಬೆಂಗಳೂರಿನ ನ್ಯೂ ಯಲಹಂಕ ಟೌನ್ ಬಳಿ ಇರುವ ತಮ್ಮ ಟ್ರಸ್ಟ್‌ಗೆ ಸೇರಿರುವ ಜಮೀನನ್ನು ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ಬಾಲಿವುಡ್ ಗಾಯಕ ಲಕ್ಕಿ ಅಲಿ ಆರೋಪ ಮಾಡಿದ್ದಾರೆ.

ಈ ವಿಚಾರಕ್ಕೆ ಸಂಬಂಧಿಸಿದಂತೆ 2022ರಲ್ಲಿಯೂ ಲಕ್ಕಿ ಅಲಿ ದೂರು ಸಲ್ಲಿಸಿದ್ದರು. ಈ ಕುರಿತಂತೆ ಸರಣಿ ಟ್ವೀಟ್‌ಗಳನ್ನು ಮಾಡಿದ್ದ ಅವರು, ಯಲಹಂಕ ಬಳಿಯ ಕೆಂಚೇನಹಳ್ಳಿ ಬಳಿ ಇರುವ ತನ್ನ ಆಸ್ತಿಯನ್ನು ಒತ್ತುವರಿ ಮಾಡಿಕೊಂಡಿದ್ದಾರೆ. ಎಸಿಪಿಯವರಿಗೆ ● 2ನೇ ಪುಟಕ್ಕೆ

ಮತ್ತೆ ಮುನ್ನೆಲೆಗೆ ಬಂದ ತ್ರಿಬಲ್ ಡಿಸಿಎಂ ಬೇಡಿಕೆ

- ಲೋಕಸಭಾ ಚುನಾವಣೆ ಸೋಲಿಗೆ ಡಿಸಿಎಂ ಡಿಕೆಶಿಯತ್ತ ಸಿಎಂ ಆಪ್ತರ ಬೆರಳು
- ಪಕ್ಷದಲ್ಲೂ ಬದಲಾವಣೆ ಅನಿವಾರ್ಯ ಎಂದ ಸಚಿವ ಸತೀಶ್ ಜಾರಕಿಹೊಳಿ
- ಡಿಕೆಸಿ ಅಧಿಕಾರ ಮೊಟಕುಗೊಳಿಸುವಂತೆ ವರಿಷ್ಠರಿಗೆ ಪರೋಕ್ಷ ಸಂದೇಶ
- ಸರ್ಕಾರ, ನಾಯಕತ್ವದ ಬಗ್ಗೆ ನಮ್ಮ ಅಪಸ್ವರವಿಲ್ಲ

ಬೆಂಗಳೂರು, ಜೂ. 21(ಕುಂಶಿ)– ಲೋಕಸಭಾ ಚುನಾವಣಾ ಪ್ರಕ್ರಿಯೆ ಮುಗಿಯುತ್ತಿದ್ದಂತೆ ಮೂರು ಉಪ ಮುಖ್ಯಮಂತ್ರಿಗಳ ಬೇಡಿಕೆ ಮತ್ತೆ ಮುನ್ನೆಲೆಗೆ ಬಂದಿದೆ.

ಕರ್ನಾಟಕದಲ್ಲಿ ಪಕ್ಷ ಅಧಿಕಾರದಲ್ಲಿದ್ದರೂ ಚುನಾವಣೆಯಲ್ಲಿ ಆದ ಹಿನ್ನಡೆಯನ್ನು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೆಗಲಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಬಲಿಗರು ಹಾಕಿದ್ದಾರೆ.



ಸತೀಶ್ ಜಾರಕಿಹೊಳಿ

ಸುದ್ದಿಗಾರರೊಂದಿಗೆ ಮಾತನಾಡಿದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ, ಹೆಚ್ಚುವರಿ ಉಪ ಮುಖ್ಯಮಂತ್ರಿಗಳ ಅಗತ್ಯವಿದೆ ಎಂದಿದ್ದಾರೆ.

ಈ ಬಗ್ಗೆ ಪಕ್ಷದ ವರಿಷ್ಠರು, ಮುಖ್ಯಮಂತ್ರಿ ಹಾಗೂ ಸಾರ್ವಜನಿಕವಾಗಿ ಚರ್ಚೆಯ ಅಗತ್ಯವಿದೆ, ಚುನಾವಣಾ ಸೋಲಿನಿಂದ ಸರ್ಕಾರದಲ್ಲಿ ಯಾವುದೇ ಬದಲಾವಣೆ ಇಲ್ಲ, ನಾಯಕತ್ವದ ಬಗ್ಗೆಯೂ ಅಪಸ್ವರ ಇಲ್ಲ. ಆದರೆ, ಕೆಪಿಸಿಸಿಯಲ್ಲಿ ಬದಲಾವಣೆಯ ಅಗತ್ಯವಿದೆ ಎಂದು ಸತೀಶ್ ಒತ್ತಿ ಹೇಳುವುದರ ಮೂಲಕ ಶಿವಕುಮಾರ್ ಅಧಿಕಾರವನ್ನು ಮೊಟಕುಗೊಳಿಸುವಂತೆ ವರಿಷ್ಠರಿಗೆ ಪರೋಕ್ಷ ಸಂದೇಶ ನೀಡಿದ್ದಾರೆ.

ಚುನಾವಣೆಯಲ್ಲಿ ಸೋತಿದ್ದನ್ನು ಹೆಚ್ಚು ಗಂಭೀರವಾಗಿ ತೆಗೆದುಕೊಳ್ಳಬೇಕಿದೆ. ಏಕೆ ಸೋತಿದ್ದೇವೆ ಎಂಬುದು ಜನರಿಗೆ ಹಾಗೂ ಕಾರ್ಯಕರ್ತರಿಗೂ ● 2ನೇ ಪುಟಕ್ಕೆ

ಆದಾಯ ಹೆಚ್ಚಿಸುವ ಮೂಲಗಳ ಶೋಧನೆಗೆ ಖಾಸಗಿ ಕಂಪನಿ ಮೊರೆ




ಬೆಂಗಳೂರು, ಜೂ.21–ಕರ್ನಾಟಕ ಆರ್ಥಿಕವಾಗಿ ದಿವಾಳಿಯಾಗುತ್ತಿದೆಯಾ? ರಾಹುಲ್ ಗಾಂಧಿ ಆಪ್ತ ಸಲಹೆಗಾರ ಪ್ರವೀಣ್ ಚಕ್ರವರ್ತಿ ಇದೀಗ ಕರ್ನಾಟಕ ಕಾಂಗ್ರೆಸ್ ಸರ್ಕಾರ ಮಾಡಿರುವ ಎಡ ವಟ್ಟುಗಳನ್ನು ಬಿಚ್ಚಿಟ್ಟಿದ್ದಾರೆ. ಪೆಟ್ರೋಲ್, ಮುದ್ರಾಂಕ, ನೋಂದಣಿ ಶುಲ್ಕ ಸೇರಿದಂತೆ ಹಲವು ಏರಿಕೆ ಬಳಿಕ ಬೇರೆ ದಾರಿ ಕಾಣದ ಸರ್ಕಾರ ಇದೀಗ ಆದಾಯ ಹೆಚಿಸುವ ಮಾರ್ಗ ಪತ್ತೆಗಾಗಿ ಖಾಸಗಿ ಕಂಪನಿಗೆ 10 ಕೋಟಿ ರೂಪಾಯಿಗೆ ಗುತ್ತಿಗೆ ನೀಡಿದೆ. ಈ ಕಂಪನಿ ಇದೀಗ ಆದಾಯ ಕ್ರೋಢೀಕರಿಸಲು ಸಿದ್ದರಾಮಯ್ಯ ಸರ್ಕಾರಕ್ಕೆ ಮಾರ್ಗ ಗಳನ್ನು ಸೂಚಿಸಲಿದೆ.

ಕಾಂಗ್ರೆಸ್ ಅಧಿಕಾರಕ್ಕೇರಲು ಕರ್ನಾಟಕದಲ್ಲಿ 5 ಉಚಿತ ಗ್ಯಾರಂಟಿ ಭರವಸೆ ನೀಡಿತ್ತು. ಇದರಂತೆ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಇದೀಗ 5 ಉಚಿತ ಗ್ಯಾರಂಟಿಯಿಂದ ಹೈರಾಣಾಗಿದೆ. ಕೇವಲ ಗ್ಯಾರಂಟಿಗಾಗಿ ವಾರ್ಷಿಕ 50ರಿಂದ 60 ಸಾವಿರ ಕೋಟಿ ರೂಪಾಯಿ ವೆಚ್ಚವಾಗುತ್ತಿದೆ.ಇತರ ವೆಚ್ಚ, ವೇತನ ಸೇರಿದಂತೆ ಇತರ ಖರ್ಚು–ವೆಚ್ಚಗಳಿಗೆ ರಾಜ್ಯ ಸರ್ಕಾರ ವಾರ್ಷಿಕವಾಗಿ 1 ಲಕ್ಷ ಕೋಟಿ ರೂ. ಕ್ರೋಢಿಕರಿಸಬೇಕಾಗಿದೆ ಆದರೆ ರಾಜ್ಯದ ಆದಾಯ ಈ ಮಟ್ಟಕ್ಕಿಲ್ಲ. ಇದಕ್ಕಾಗಿ ಸಿದ್ದರಾಮಯ್ಯ ಸರ್ಕಾರ ಖಾಸಗಿ ಬೋಸ್ಟನ್ ಕನ್ಸಲ್ಟೆಂಗ್ ಗ್ರೂಪ್ ಕಂಪನಿಯ ಮೊರೆ ಹೋಗಿದೆ. ಈಗಾಗಲೇ ಸಿದ್ದರಾಮಯ್ಯ ಸರ್ಕಾರ ಗ್ಯಾರಂಟಿ ವಿತರಣೆಗೆ ಹಣ ಹೊಂದಿಸಲು ಬೆಲೆ ಏರಿಕೆ ಮಾಡಿದೆ. ಪೆಟ್ರೋಲ್ ಡೀಸೆಲ್ ಬೆಲೆ 3, 3.50 ರೂಪಾಯಿ. ಮುದ್ರಾಂಕ ಶುಲ್ಕ ಶೇ.500ರಷ್ಟು ಏರಿಕೆ, ಹೊಸ ವಾಹನ ಖರೀದಿಗೆ ಹೆಚ್ಚುವರಿ ತೆರಿಗೆ ಮಾಡಲಾಗಿದೆ. ಇನ್ನು ನೀರಿನ ದರ ಏರಿಕೆ ಹಾಗೂ ಆಸ್ತಿ ತೆರಿಗೆ ಹೆಚ್ಚಳಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಪ್ರಯತ್ನದ ಹೊರತಾಗಿಯೂ ಸಿದ್ದರಾಮಯ್ಯ ಸರ್ಕಾರ ಹಣದ ಕೊರತೆ ಅನುಭವಿಸುತ್ತಿದೆ. ● 2ನೇ ಪುಟಕ್ಕೆ

ಪೆಲಿಕಾನ್ ಪಬ್‌ನ ಪೊನ್ನು ಮುತ್ತಣ್ಣ ನಿಧನ

ಇಂದು ಅಂತ್ಯಕ್ರಿಯೆ



ಮೈಸೂರು, ಜೂ.21– ಮೈಸೂರು–ಹುಣಸೂರು ಮುಖ್ಯ ರಸ್ತೆಯಲ್ಲಿನ ಪೆಲಿಕಾನ್ ಪಬ್‌ನ ಚೋನಿರಾ ಪೊನ್ನು ಮುತ್ತಣ್ಣ (86) ಅವರು ಶುಕ್ರವಾರ ನಿಧನರಾದರು.

ಇವರು ಸಹೋದರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಗೋಕುಲಂ ರಸ್ತೆಯ ಸಂಭ್ರಮ ಅಪಾರ್ಟ್‌ಮೆಂಟ್‌ನಿಂದ ಪೊನ್ನು ಮುತ್ತಣ್ಣರ ಪಾರ್ಥಿವ ಶರೀರವನ್ನು ಶನಿವಾರ ಬೆಳಗ್ಗೆ 11.30ಕ್ಕೆ ಅಂತಿಮ ಯಾತ್ರೆ ಮೂಲಕ ಗೋಕುಲಂ ಚಿರ ಶಾಂತಿಧಾಮದಲ್ಲಿ ಅಂತಿಮ ಸಂಸ್ಕಾರ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪೊಲೀಸ್ ಠಾಣೆಯ ಸೆಲ್‌ನ ಕಂಬಿ ಹಿಂದೆ ದರ್ಶನ್



ಬೆಂಗಳೂರು, ಜೂ. 21(ಕೆಎಂಶಿ)–ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಆರೋಪಿ ನಟ ದರ್ಶನ್‌ನನ್ನು ಪೊಲೀಸ್ ಠಾಣೆಯ ಕಂಬಿ ಹಿಂದೆ ಇರಿಸಲಾಗಿದೆ. ಇದುವರೆಗೂ ಠಾಣೆಯ ಮೇಲ್ಮಹಡಿಯಲ್ಲಿ ಪೊಲೀಸರ ವಿಶ್ರಾಂತಿಗಾಗಿ ಇದ್ದ ಕೊಠಡಿಯಲ್ಲಿ ದರ್ಶನ್ ಇರಿಸಲಾಗಿತ್ತು. ಅಲ್ಲಿ ಅವರಿಗೆ ಎಲ್ಲಾ ಸವಲತ್ತುಗಳನ್ನು ಪೊಲೀಸರು ನೀಡಿದ್ದರು. ಆದರೆ, ನಿನ್ನೆ ಸಂಜೆಯಿಂದ ಠಾಣೆಯ ಲಾಕಪ್‌ನಲ್ಲಿ ಸಾಮಾನ್ಯ ಬಂಧಿತರಂತೆ ಇರಿಸಲಾಗಿದೆ.

ದರ್ಶನ್ ನಿನ್ನೆ ಇಡೀ ರಾತ್ರಿ ಲಾಕಪ್‌ನಲ್ಲಿ ಸೊಳ್ಳೆಗಳ ಕಾಟದಿಂದ ನಿದ್ರೆಯಿಲ್ಲದೆ, ಇತರ ಆರೋಪಿಗಳ ಜೊತೆ ಕಳೆಯಬೇಕಾಯಿತು. ನ್ಯಾಯಾಲಯ ನಿನ್ನೆ ದರ್ಶನ್ ಸೇರಿ ನಾಲ್ವರು ಆರೋಪಿಗಳನ್ನು 2 ದಿನ ಪೊಲೀಸ್ ಕಸ್ಟಡಿಗೆ ನೀಡುವ ಸಂದರ್ಭದಲ್ಲಿ ನಡೆದ ವಾದ–ಪ್ರತಿವಾದದ ವೇಳೆ ದರ್ಶನ್‌ಗೆ ಪ್ರತ್ಯೇಕ ಕೊಠಡಿ ನೀಡಿರುವುದರ ಬಗ್ಗೆ ನ್ಯಾಯಾಧೀಶರು ಆಕ್ಷೇಪಿಸಿದ್ದರು.

ಮೈಸೂರಲ್ಲಿ ಯೋಗ ದಿನ ಆಚರಣೆ: ಅರಮನೆ ಆವರಣದಲ್ಲಿ ಸಾವಿರಾರು ಮಂದಿ ಯೋಗದ ವಿವಿಧ ಆಸನ ಪ್ರದರ್ಶನ



ಮೈಸೂರು ಅರಮನೆ ಆವರಣದಲ್ಲಿ ಶುಕ್ರವಾರ ನಡೆದ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ವಿಧಾನ ಪರಿಷತ್ ಸದಸ್ಯ ಸಿಎನ್.ಮಂಜೇಗೌಡ, ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ಎಡಿಸಿ ಪಿ.ಶಿವರಾಜ್ ಯೋಗಪ್ರದರ್ಶನ ಮಾಡಿದರು.

ಮೈಸೂರು, ಜೂ. 21 (ಆರ್‌ಕೆ)– ಹತ್ತನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಭಾರತವೂ ಸೇರಿದಂತೆ ವಿಶ್ವದಾದ್ಯಂತ ಆಚರಿಸಲಾಯಿತು.

ಮೈಸೂರು ಜಿಲ್ಲಾಡಳಿತ, ಆಯುಷ್ ಇಲಾಖೆ, ಜಿಲ್ಲಾ ಪಂಚಾಯತ್, ಮೈಸೂರು ಯೋಗ ಒಕ್ಕೂಟ, ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು, ಜೆಎಸ್‌ಎಸ್, ಶ್ರೀ ಪತಂಜಲಿ ಯೋಗ ಶಿಕ್ಷಣ ಕೇಂದ್ರ ಹಾಗೂ ಇನ್ನಿತರ ಯೋಗ ತರಬೇತಿ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಮೈಸೂರು ಅರಮನೆ ಆವರಣದಲ್ಲಿ ಆಯೋಜಿಸಿದ್ದ 'ನನಗಾಗಿ ಮತ್ತು ಸಮಾಜಕ್ಕಾಗಿ ಯೋಗ' ಸಂಕಲ್ಪದೊಂದಿಗೆ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಅತ್ಯಂತ ಉತ್ಸಾಹದಿಂದ ಆಚರಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ● 2ನೇ ಪುಟಕ್ಕೆ



ಡಾ.ರಾಜ್‌ಕುಮಾರ್ ನಟನೆಯ ಚಲನಚಿತ್ರ ಗೀತೆಗಳ ಗಾಯನ ಕಾರ್ಯಕ್ರಮ



ಮೈಸೂರು, ಜೂ.21(ಜಿಎ)–ಮೈಸೂರಿನ ಡಾ.ರಾಜ್‌ಕುಮಾರ್ ಮ್ಯೂಸಿಕಲ್ ಗ್ರೂಪ್ ವತಿಯಿಂದ ಜೂ. 23ರಂದು ಸಂಜೆ 5 ಗಂಟೆಗೆ ನಿವೇದಿತ ನಗರದಲ್ಲಿರುವ ಸುಬ್ಬರಾವ್ ಉದ್ಯಾನವನದಲ್ಲಿ ಡಾ.ರಾಜ್‌ಕುಮಾರ್ ನೆನಪಿನಲ್ಲಿ ಅವರು ನಟಿಸಿರುವ ಚಲನಚಿತ್ರಗಳ ಗೀತೆಗಳ ಗಾಯನ ಕಾರ್ಯಕ್ರಮ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಮುಖ್ಯಸ್ಥರಾದ ಮೈಸೂರು ಜಯರಾಂ ಈ ವಿಷಯ ತಿಳಿಸಿ, ತಾವು, ಡಾ. ಸುರೇಂದ್ರ, ಸುಧೀಂದ್ರ, ಸುರೇಶ್, ಪುಟ್ಟು, ಸರ್ವಮಂಗಳ, ಅಶ್ವಿನಿ, ಅನಿತಾ, ಧನ್ಯಶ್ರೀ ಹಾಡುಗಳನ್ನು ಹಾಡಲಿದ್ದು, ಶಾಸಕ ಜಿ.ಟಿ. ದೇವೇಗೌಡ ಕಾರ್ಯಕ್ರಮ ಉದ್ಘಾಟಿಸುವರು. ಇದು ಸಂಪೂರ್ಣ ಉಚಿತ ಪ್ರವೇಶದ ಕಾರ್ಯಕ್ರಮವಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಪ್ರೊ.ಎ. ನಾಗರಾಜ್, ಮಂಚೇಗೌಡ, ನಂಜುಂಡಸ್ವಾಮಿ, ಬಸವರಾಜು ಉಪಸ್ಥಿತರಿದ್ದರು.

ಒಂದನೇ ಪುಟದಿಂದ

ತ್ರಿಬಲ್ ಡಿಸಿಎಂ ಬೇಡಿಕೆ

ಗೊತ್ತಾಗಬೇಕು. ಚುನಾವಣೆಗೂ ಮುನ್ನವೇ ಪರಿಶಿಷ್ಟ ಜಾತಿ, ವರ್ಗ, ವೀರಶೈವರಿಗೆ ಒಂದೊಂದು ಉಪಮುಖ್ಯಮಂತ್ರಿ ಸ್ಥಾನಕ್ಕೆ ಬಡ್ತಿ ಅಥವಾ ನೇಮಕಾತಿ ಮಾಡಿದ್ದರೆ ನಮಗೆ ಹೆಚ್ಚು ಸ್ಥಾನ ಬರುತ್ತಿತ್ತು. ಪಕ್ಷದ ಉದ್ದೇಶದಿಂದಲೇ ನಾವುಗಳು ಉಪಮುಖ್ಯ ಮಂತ್ರಿ ಸ್ಥಾನಗಳ ಬೇಡಿಕೆಯನ್ನು ಇಟ್ಟಿದ್ದೆವು. ಈಗಲಾದರೂ ಮತ್ತಷ್ಟು ಹೆಚ್ಚು ಸ್ಥಾನಗಳನ್ನು ನೀಡಬೇಕು ಎಂದು ಒತ್ತಾಯಿಸಿದರು. ನಮ್ಮ ಬೇಡಿಕೆಗಳ ಬಗ್ಗೆ ಸಾರ್ವಜನಿಕವಾಗಿ ಚರ್ಚೆ ನಡೆಯಲಿ. ಒಬ್ಬರಿಗೇ ಎಲ್ಲಾ ಹುದ್ದೆಗಳನ್ನು ನೀಡಿದರೆ, ಪಕ್ಷಕ್ಕೆ ದುಡಿದ ಬೇರೆ ನಾಯಕರ ಗತಿಯೇನು ಎಂದು ಪ್ರಶ್ನಿಸಿದರು.

ಡಿಕೆಶಿ ಸ್ಪರ್ಧೆಗೆ ಆಕ್ಷೇಪ: ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಶಿವಕುಮಾರ್ ಕಣಕ್ಕಿಳಿಯುವ ಬಗ್ಗೆ ಪರೋಕ್ಷವಾಗಿ ಆಕ್ಷೇಪ ವ್ಯಕ್ತಪಡಿಸಿದ ಸಚಿವರು ಅಲ್ಲಿಯೂ ನಮ್ಮ ಒಳ್ಳೆಯ ಕಾರ್ಯಕರ್ತರಿರುತ್ತಾರೆ. ಅಂತಹವರನ್ನು ಹುಡುಕಿ ಕಣಕ್ಕಿಳಿಸಬೇಕು. ಉಪಚುನಾವಣೆಗೆ ಇನ್ನೂ ಆರು ತಿಂಗಳ ಸಮಯಾವಕಾಶ ಇದೆ, ನೋಡೋಣ. ಆದರೆ, ಸಮರ್ಥ ಅಭ್ಯರ್ಥಿ ಆಯ್ಕೆ ಪ್ರಕ್ರಿಯೆ ಸ್ಥಳೀಯವಾಗಿ ಈಗಿನಿಂದಲೇ ನಡೆಯಬೇಕು ಎಂದರು.

ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡು ಮೂರು ತಿಂಗಳು ಮುಗಿಯುತ್ತಿದ್ದಂತೆ ಅವರ ಸಹೋದ್ಯೋಗಿಗಳಾದ ಡಾ.ಜಿ.ಪರಮೇಶ್ವರ್, ಕೆ.ಎನ್.ರಾಜಣ್ಣ ಎಂ.ಬಿ.ಪಾಟೀಲ್ ಹಾಗೂ ಸತೀಶ್ ಜಾರಕಿಹೊಳಿ ಉಪಮುಖ್ಯ ಮಂತ್ರಿ ಸ್ಥಾನಕ್ಕೆ ಬೇಡಿಕೆ ಇಟ್ಟಿದ್ದರು.

ಅಷ್ಟೇ ಅಲ್ಲ ಸಿದ್ದರಾಮಯ್ಯ ಅವರು ಪೂರ್ಣಾವಧಿ ಅಧಿಕಾರದಲ್ಲಿರುತ್ತಾರೆ ಎಂಬ ವಿಚಾರವನ್ನು ಬಹಿರಂಗವಾಗೇ ಚರ್ಚಿಸಿ, ಶಿವಕುಮಾರ್ ನಾಯಕತ್ವಕ್ಕೆ ಪರೋಕ್ಷ ವಿರೋಧ ವ್ಯಕ್ತಪಡಿಸಿದ್ದರು. ಬೆಂಗಳೂರು ಗ್ರಾಮಾಂತರದಲ್ಲಿ ಶಿವಕುಮಾರ್ ಸಹೋದರ ಡಿ.ಕೆ.ಸುರೇಶ್ ಲೋಕಸಭಾ ಚುನಾವಣೆಯಲ್ಲಿ ಹೀನಾಯ ಸೋಲು ಅನುಭವಿಸಿದ ನಂತರ ಸಿದ್ದರಾಮಯ್ಯ ಬಣ ಮತ್ತೆ ಮುನ್ನೆಲೆಗೆ ಬಂದು ತಮ್ಮ ಹಳೇ ಬೇಡಿಕೆಗಳನ್ನು ಮುಂದಿಡುವ ಜೊತೆಗೆ ಪಕ್ಷದಲ್ಲೂ ಬದಲಾವಣೆಗೆ ಆಗ್ರಹಪಡಿಸಿದೆ.

ಯೋಗದ ವಿವಿಧ ಆಸನ ಪ್ರದರ್ಶನ

ಹಾಗೂ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ದೀಪ ಬೆಳಗಿಸುವ ಮೂಲಕ ಯೋಗ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದರು. ಶಾಸಕ ಟಿ.ಎಸ್.ಶ್ರೀವತ್ಸ, ವಿಧಾನಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ, ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ, ನಗರ ಪೊಲೀಸ್ ಆಯುಕ್ತ ಬಿ. ರಮೇಶ್, ಎಡಿಸಿ ಡಾ. ಶಿವರಾಜ್, ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ. ಗಾಯತ್ರಿ, ಅರಮನೆ ಮಂಡಳಿ ಉಪನಿರ್ದೇಶಕ ಟಿ.ಎಸ್. ಸುಬ್ರಹ್ಮಣ್ಯ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಪುಷ್ಪಾ, ಜಿಎಸ್‌ಎಸ್ ಫೌಂಡೇಷನ್ ಮುಖ್ಯಸ್ಥ ಶ್ರೀಹರಿ ಸೇರಿದಂತೆ ಹಲವರು ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಆಸನ ಪ್ರದರ್ಶಿಸಿದರು. ಮಹಿಳಾ ಸಬಲೀಕರಣಕ್ಕಾಗಿ ಯೋಗ ಸಂದೇಶದೊಂದಿಗೆ 45 ನಿಮಿಷಗಳ ಕಾಲ ನಡೆದ ಯೋಗಾಭ್ಯಾಸದಲ್ಲಿ ಸಾವಿರಾರು ಮಂದಿ ಭಾಗವಹಿಸಿದ್ದರು. ಬೆಳಗ್ಗೆ 6.30 ಗಂಟೆಗೆ ಶಂಕನಾದ, ಪ್ರಾರ್ಥನೆಯೊಂದಿಗೆ ಆರಂಭವಾದ ಕಾರ್ಯಕ್ರಮದಲ್ಲಿ ಚಲನ ಕ್ರಿಯೆ, ತಾಡಾಸನ, ವೃಕ್ಷಾಸನ, ಪಾದ ಹಸ್ತಾಸನ, ಅರ್ಧ ಚಕ್ರಾಸನ, ತ್ರಿಕೋಣಾಸನ, ಸಮದಂಡಾಸನ, ಭದ್ರಾಸನ, ವಜ್ರಾಸನ, ಅರ್ಧ ಉಷ್ಟ್ರಾಸನ, ಉಷ್ಟ್ರಾಸನ, ಉತ್ಥಾನ ಮಂಡೋಕಾಸನ, ಮಕರಾಸನ, ಸರಳ ಭುಜಂಗಾಸನ, ಶಲಿಭಾಸನ, ಸೇತುಬಂದಾಸನ, ಉತ್ಥಾನ ಪಾದಾಸನ, ಅರ್ಧ ಹಲಾಸನ, ಪವನ ಮುಕ್ತಾಸನ, ಶವಾಸನ, ಕಪಾಲಿ ಕಾತಿ, ಪ್ರಾಣಾಯಾಮ ಸೇರಿದಂತೆ ಹಲವು ಆಸನಗಳನ್ನು ಪ್ರದರ್ಶಿಸಲಾಯಿತು.

ಅರಮನೆಯ ಪ್ರವೇಶ ದ್ವಾರಗಳಲ್ಲಿ ಮೆಟಲ್ ಡೋರ್ ಡಿಟೆಕ್ಟರ್ ಅಳವಡಿಸಿ, ಪ್ರತಿಯೊಬ್ಬರನ್ನು ತಪಾಸಣೆ ಮಾಡಿ ಪ್ರವೇಶಾವಕಾಶ ಕಲ್ಪಿಸಲಾಯಿತು. ಯೋಗ ಪಟುಗಳೇ ಟೀ ಶರ್ಟ್ ಧರಿಸಿ ಮ್ಯಾಟ್‌ಗಳೊಂದಿಗೆ ಬಂದು ಅರಮನೆ ಆವರಣದಲ್ಲಿ ಯೋಗಾಭ್ಯಾಸ ಮಾಡುವ ಮೂಲಕ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಅತ್ಯಂತ ಉತ್ಸಾಹದಿಂದ ಭಾಗವಹಿಸಿದರು.

ದೇವರಾಜ ಉಪ ವಿಭಾಗದ ಎಸಿಪಿ ಶಾಂತಮಲ್ಲಪ್ಪ, ದೇವರಾಜ ಠಾಣೆ ಇನ್ಸ್‌ಪೆಕ್ಟರ್ ಶಿವಕುಮಾರ್ ನೇತೃತ್ವದಲ್ಲಿ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ವ್ಯಾಪಕ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

ಈ ವೇಳೆ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ, ಭಾರತವು ವಿಶ್ವಸಂಸ್ಥೆ ಮೇಲೆ ಪ್ರಭಾವ ಬೀರಿ ಅಂತಾರಾಷ್ಟ್ರೀಯ ಯೋಗ ದಿನ ಆಚರಿಸಲು ಮುನ್ನುಡಿ ಬರೆಯಿತು. ಅದು ಅಧಿಕೃತವಾಗಿ ಘೋಷಣೆಯಾಗಿ ಇಂದಿಗೆ 10 ವರ್ಷವಾಗಿದೆ ಎಂದರು.

ಯೋಗ ಪ್ರದರ್ಶನದಲ್ಲಿ ಭಾರತವು ವಿಶ್ವದ ಇತರ ರಾಷ್ಟ್ರಗಳಿಗಿಂತ ಮುಂಚೂಣಿಯಲ್ಲಿದೆ ಯೋಗದಿಂದ ದೇಹದ ನಿಯಂತ್ರಣ, ಅಂಗಾಂಗಗಳ ಪರಿಪೂರ್ಣ ಮತ್ತು ಕ್ರಮಬದ್ಧ ಚಟುವಟಿಕೆ, ಮನಸ್ಸಿನ ಸಮತೋಲನ, ಆರೋಗ್ಯ ವೃದ್ಧಿ ಹಾಗೂ ಶಿಸ್ತುಬದ್ಧ ಜೀವನ ನಡೆಸಲು ಪ್ರೇರಣೆಯಾಗಿದೆ ಎಂದು ಅವರು ತಿಳಿಸಿದರು.

ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಮಾತನಾಡಿ, ಭಾರತದಲ್ಲಿ ಆಧುನಿಕ ಕಾಲದ ಯೋಗವು ಮೈಸೂರಿನಿಂದ ಸೃಷ್ಟಿಯಾಗಿದೆ. ಈ ಹಿಂದೆ ಶ್ರೀತತ್ವ ನಿಯಮದಲ್ಲಿ 108 ಆಸನಗಳನ್ನು ದಾಖಲೆ ಮಾಡಿ ಮುಮ್ಮಡಿ ಕೃಷ್ಣರಾಜ ಒಡೆಯರ್ ಕಾಲದಲ್ಲಿ ಯೋಗಾಭ್ಯಾಸವೂ ಸಹ ಮೈಸೂರಲ್ಲಿ ಆರಂಭವಾಯಿತು ಎಂದರು. ಪರಂಪರಾನುಗತವಾಗಿ ಬಂದ ಯೋಗವನ್ನು ಆಚರಿಸಿ, ಗಿನ್ನಿಸ್ ದಾಖಲೆ ಬರೆಯಲು ಸಿದ್ಧರಾಗಬೇಕು. ದಸರಾ ವೇಳೆ ಯೋಗ ಪ್ರದರ್ಶನಕ್ಕೆ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.

ಲೋಕಾಯುಕ್ತಕ್ಕೆ ದೂರು


ದೂರು ನೀಡಿದರೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಸ್ಥಳೀಯ ಪೊಲೀಸರಿಂದ ನನಗೆ ಯಾವುದೇ ಸಹಾಯ ಸಿಗುತ್ತಿಲ್ಲ. ಅವರು ರೋಹಿಣಿ ಸಿಂಧೂರಿ ಕುಟುಂಬದ ಕಡೆಯೇ ನಿಂತಿದ್ದಾರೆ. ನಾವು ಕಳೆದ 50 ವರ್ಷಗಳಿಂದ ಅಲ್ಲಿ ವಾಸಿಸುತ್ತಿದ್ದೇವೆ ಎಂದು ಟ್ವೀಟ್‌ನಲ್ಲಿ ಬರೆದುಕೊಂಡಿದ್ದರು. ನ್ಯೂ ಯಲಹಂಕ ಟೌನ್ ಬಳಿಯಿರುವ ತಮ್ಮ ಜಮೀನನ್ನು ಸುಧೀರ್ ರೆಡ್ಡಿ ಹಾಗೂ ಮಧುಸೂಧನ್ ರೆಡ್ಡಿಯವರು ಒತ್ತುವರಿ ಮಾಡಿಕೊಂಡಿದ್ದಾರೆ. ಈ ಒತ್ತುವರಿಗೆ ರೋಹಿಣಿ ಸಿಂಧೂರಿಯವರು ಸಹಕಾರ ಕೊಟ್ಟಿದ್ದು ಆ ಮೂಲಕ ಅವರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿ ಕೊಂಡಿದ್ದಾರೆ ಎಂದು ಆರೋಪಿಸಿದ್ದರು. ಈಗ ಮತ್ತೆ ತಮ್ಮ ಟ್ರಸ್ಟ್ ಜಮೀನನ್ನು ಸುಧೀರ್ ರೆಡ್ಡಿ ಹಾಗೂ ಮಧುಸೂಧನ್ ರೆಡ್ಡಿ ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ. ಜೊತೆಗೆ ಹಗರಣದಲ್ಲಿ ಯಲಹಂಕ ಎಸಿಪಿ ಮಂಜುನಾಥ್, ಸರ್ವೇಯರ್ ಮನೋಹನ್ ಶಾಮೀಲು ಆಗಿರುವ ಆರೋಪ ಮಾಡಿದ್ದಾರೆ.

ಆಷಾಢ ಶುಕ್ರವಾರ

ದರ್ಶನ ಮಾಡಲು ಯಾವುದೇ ಪಾಸ್ ವ್ಯವಸ್ಥೆ ಇರುವುದಿಲ್ಲ. ಚಾಮುಂಡಿಬೆಟ್ಟಕ್ಕೆ ಬರುವ ಭಕ್ತಾದಿಗಳಿಗೆ ದರ್ಶನ ಸುಗಮವಾಗಿ ಆಗಬೇಕು. ಬರುವ ಭಕ್ತಾದಿಗಳಿಗೆ ಪೊಲೀಸ್ ಇಲಾಖೆಯಿಂದ ಭದ್ರತೆ ಒದಗಿಸಬೇಕು ಎಂದರು. ಸಭೆಯಲ್ಲಿ ಜಿ.ಪಂ. ಸಿಇಓ ಕೆ.ಎಂ.ಗಾಯತ್ರಿ, ಡಿಸಿಎಫ್ ಡಾ.ಕೆ.ಎನ್.ಬಸವರಾಜ್, ಡಿಸಿಪಿಗಳಾದ ಮುತ್ತುರಾಜ್, ಜಾನ್ಹವಿ, ಎಡಿಸಿ ಡಾ.ಪಿ. ಶಿವರಾಜು, ತಹಶೀಲ್ದಾರ್ ಮಹೇಶ್, ಸಂಚಾರ ಎಸಿಪಿ ಪರಶುರಾಮಪ್ಪ, ಚಾಮುಂಡಿಬೆಟ್ಟ ದೇವಾಲಯದ ಆಡಳಿತಾಧಿಕಾರಿ ಕೃಷ್ಣ, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಶೋಧನೆಗೆ ಖಾಸಗಿ ಕಂಪನಿ ಮೊರೆ

ಹೀಗಾಗಿ ಬೋಸ್ಟನ್ ಕನ್ಸಲ್ಟಿಂಗ್ ಗ್ರೂಪ್(BCG) ಕಂಪನಿಗೆ ಗುತ್ತಿಗೆ ನೀಡಿದೆ ಎಂದು ಪ್ರವೀಣ್ ಚಕ್ರವರ್ತಿ ಹೇಳಿದ್ದಾರೆ. ರಾಹುಲ್ ಗಾಂಧಿ ಆಪ್ತ ಸಲಹೆಗಾರರಾಗಿರುವ ಪ್ರವೀಣ್ ಚಕ್ರವರ್ತಿ ಇದೀಗ ಕರ್ನಾಟಕದ ಕಾಂಗ್ರೆಸ್ ಸರ್ಕಾರದ ನಡೆಗೆ ಅಸಮಾಧಾನಗೊಂಡಿದ್ದಾರೆ. ಒಂದು ರಾಜ್ಯ ಸರಿಯಾದ ಮಾರ್ಗದಲ್ಲಿಲ್ಲ ಎಂಬುದನ್ನು ಒತ್ತಿ ಹೇಳಿದ್ದಾರೆ. ಬೋಸ್ಟನ್ ಕನ್ಸಲ್ಟಿಂಗ್ ಗ್ರೂಪ್ ಕಂಪನಿ ಸಿದ್ದರಾಮಯ್ಯ ಸರ್ಕಾರ ಆದಾಯ ಕ್ರೋಢೀಕರಣಕ್ಕೆ ಮಾರ್ಗಗಳನ್ನು ಹುಡುಕಿಕೊಡಲಿದೆ. ಇದೇ ವೇಳೆ ರಾಜ್ಯದ ಖರ್ಚು ವೆಚ್ಚ ಕಡಿಮೆ ಮಾಡಿ, ಆದಾಯ ಹೆಚ್ಚಿಸಲು ಮೂಲಗಳನ್ನು ಹುಡುಕಿಕೊಡಲಿದೆ. ಪಬ್ಲಿಕ್–ಪ್ರೈವೇಟ್ ಪಾರ್ಟ್ನರ್‌ಶಿಪ್(ಪಿಪಿಪಿ ಮಾಡೆಲ್), ಸೋರಿಕೆ ತಡೆಗಟ್ಟುವಿಕೆ, ಆಸ್ತಿಗಳಿಂದ ಆದಾಯ ಕ್ರೋಢೀಕರಣ, ವಿವಿಧ ಇಲಾಖೆಗಳಲ್ಲಿ ಆದಾಯ ಹೆಚ್ಚಳಕ್ಕೆ ಮಾರ್ಗ, ಮೈನಿಂಗ್, ಅರಣ್ಯ ಸೇರಿದಂತೆ ಹಲವು ಮೂಲಗಳಿಂದ ಆದಾಯ ಹೆಚ್ಚಿಸುವ ಮಾರ್ಗಗಳನ್ನು ಪತ್ತೆ ಹಚ್ಚುವ ಜವಾಬ್ದಾರಿಯನ್ನು ಬಿಸಿಜಿ ಹೊತ್ತುಕೊಂಡಿದೆ. ಹಾಗಂತ ಈ ಕಂಪನಿ ಸುಮ್ಮನೆ ಈ ಹೊಣೆ ಹೊತ್ತುಕೊಂಡಿಲ್ಲ. ಸಿದ್ದರಾಮಯ್ಯ ಸರ್ಕಾರ ಕಳೆದ 6 ತಿಂಗಳಲ್ಲಿ ಬೋಸ್ಟನ್ ಗ್ರೂಪ್ ಕಂಪನಿಗೆ ಬರೋಬ್ಬರಿ 9.5 ಕೋಟಿ ರೂಪಾಯಿ ಪಾವತಿಸಿದೆ ಎಂದು ಪ್ರವೀಣ್ ಚಕ್ರವರ್ತಿ ಹೇಳಿದ್ದಾರೆ.







10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

ಪ್ರಧಾನಿ ನರೇಂದ್ರ ಮೋದಿ, ಶುಕ್ರವಾರ ಶ್ರೀನಗರದಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಯೋಗಾಸನ ಮಾಡಿದರು.

ಸಂತೋಷ್‌ಲಾಡ್ ಫೌಂಡೇಷನ್ ಬಳ್ಳಾರಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಯೋಗ ಮಾಡಿದರು.

ದೆಹಲಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೇಂದ್ರ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಯೋಗಾಸನ ಮಾಡಿದರು.

ಮೈಸೂರು ಎಂಜಿ ರಸ್ತೆಯ ತರಕಾರಿ ಮಾರುಕಟ್ಟೆ ಬಳಿ ಸಂಚಾರವೀಗ ಸುಗಮ

ಮೈಸೂರು, ಜೂ.21 (ಆರ್‌ಕೆ)– ಹಲವು ವರ್ಷಗಳಿಂದ ಮೈಸೂರಿನ ಎಂಜಿ ರಸ್ತೆಯ ತರಕಾರಿ ಮಾರುಕಟ್ಟೆ ಬಳಿ ಉಂಟಾಗಿದ್ದ ವಾಹನ ಸಂಚಾರ ಸಮಸ್ಯೆ ಇದೀಗ ನಿವಾರಣೆಯಾಗಿದೆ.

ರಸ್ತೆಯಲ್ಲೇ ವಾಹನ ನಿಲುಗಡೆ, ತರಕಾರಿ ಲೋಡಿಂಗ್–ಅನ್‌ಲೋಡ್, ಮಾರಾಟ ಮಾಡುವುದಕ್ಕೆ ಸದ್ಯಕ್ಕೆ ಬ್ರೇಕ್ ಬಿದ್ದಿದೆ. ಇಲ್ಲಿ ವಾಹನ ಸಂಚಾರಕ್ಕೆ ತೀವ್ರ ಅಡಚಣೆಯಾಗಿ ಸಾರ್ವಜನಿಕರು ಪರದಾಡುವಂತಾಗಿತ್ತು. ಸಮಸ್ಯೆ ತೀವ್ರಗೊಂಡ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ, ನಗರ ಪೊಲೀಸ್ ಆಯುಕ್ತ ಬಿ.ರಮೇಶ್, ನಗರ ಪಾಲಿಕೆ ಆಯುಕ್ತ ಆಶಾದ್ ಉರ್ ರೆಹಮಾನ್ ಷರೀಫ್ ಇತ್ತೀಚೆಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು.

ರೈತರು, ವ್ಯಾಪಾರಿಗಳು ಎಂಜಿ ರಸ್ತೆಯ ಬದಿಯೇ ವಾಹನ ನಿಲ್ಲಿಸಿ ಲೋಡಿಂಗ್, ಅನ್‌ಲೋಡಿಂಗ್ ಮಾಡುತ್ತಿದ್ದರು. ಅಲ್ಲೇ ತರಕಾರಿ ಇರಿಸಿ ವ್ಯಾಪಾರ ಸಹ ಮಾಡುತ್ತಿದ್ದರಿಂದ ಗ್ರಾಹಕರೂ ತಮ್ಮ ವಾಹನ ನಿಲ್ಲಿಸಿಕೊಂಡು ತರಕಾರಿ ಖರೀದಿಸುತ್ತಿದ್ದರು. ಇದರಿಂದ ಸಾರ್ವಜನಿಕರ ವಾಹನ ಸಂಚಾರಕ್ಕೆ ಅಡ್ಡಿಯಾಗುತ್ತಿದೆ ಎಂಬುದು ಮನವರಿಕೆಯಾದ ಹಿನ್ನೆಲೆಯಲ್ಲಿ ತರಕಾರಿ ಮಾರುಕಟ್ಟೆಯನ್ನೇ ಬಂಡಿಪಾಳ್ಯ ಎಪಿಎಂಸಿ ಮಾರುಕಟ್ಟೆಗೆ ಸ್ಥಳಾಂತರಿಸಲು ಅಧಿಕಾರಿಗಳು ಚಿಂತನೆ ನಡೆಸಿದ್ದರು.



ಕೆಲದಿನಗಳ ಹಿಂದೆ ಎಂಜಿ ರಸ್ತೆ ಯ ವಾಹನ ದಟ್ಟಣೆ ಸ್ಥಿತಿ–ಗತಿ



ಶುಕ್ರವಾರ ಬೆಳಗ್ಗೆ ಪೊಲೀಸರ ಕ್ರಮದಿಂದ ಸುಗಮ ವ್ಯವಸ್ಥೆ.


ರೈತರು ತರುವ ತರಕಾರಿಗಳನ್ನು ಮಾರುಕಟ್ಟೆ ಒಳಗೆ ಖಾಲಿ ಜಾಗದಲ್ಲಿ ಇಳಿಸಬೇಕು, ವಾಹನಗಳನ್ನು ಅಲ್ಲಿಯೇ ಖಾಲಿ ಜಾಗದಲ್ಲಿ ನಿಲ್ಲಿಸಬೇಕು, ವ್ಯಾಪಾರಿಗಳು ಸಹ ರಸ್ತೆ ಬದಿಯಿಂದ ಒಳಭಾಗಕ್ಕೆ ಸ್ಥಳಾಂತರಗೊಳ್ಳಬೇಕು ತಪ್ಪಿದ್ದಲ್ಲಿ ಪ್ರಕರಣ ದಾಖಲಿಸಿ ದಂಡ ವಿಧಿಸುವಂತೆ ಜಿಲ್ಲಾಧಿಕಾರಿಗಳು ಪೊಲೀಸ್ ಆಯುಕ್ತರಿಗೆ ತಾಕೀತು ಮಾಡಿದ್ದರು. ಅದೇ ಪ್ರಕಾರವಾಗಿ ಸಿದ್ದಾರ್ಥನಗರ ಸಂಚಾರ ಠಾಣೆ ಪೊಲೀಸರು ಕಾರ್ಯಾಚರಣೆ ನಡೆಸಿ, ಪಾಲಿಕೆ ಅಧಿಕಾರಿಗಳ ನೆರವಿನಿಂದ ರಸ್ತೆ ಬದಿ ವ್ಯಾಪಾರಿಗಳನ್ನು ತೆರವುಗೊಳಿಸಿ ಸ್ಥಳದಲ್ಲಿ ನೋ ಪಾರ್ಕಿಂಗ್ ಬೋರ್ಡ್ ಅಳವಡಿಸಿ ಜಾಗೃತಿ ಮೂಡಿಸಿದ ಹಿನ್ನೆಲೆಯಲ್ಲಿ ಇದೀಗ ಎಂಜಿ ರಸ್ತೆ ವಾಹನ ಸಂಚಾರಕ್ಕೆ ಮುಕ್ತವಾಗಿದ್ದು, ಸಾರ್ವಜನಿಕರ ವಾಹನಗಳು ಯಾವುದೇ ಅಡೆ–ತಡೆ ಇಲ್ಲದೆ ಸಂಚರಿಸುತ್ತಿವೆ.

ಜೊತೆಗೆ ಎಂಜಿ ರಸ್ತೆಯ ಅಂಡರ್ ಬ್ರಿಡ್ಜ್‌ನಿಂದ ಮಾಲ್ ಆಫ್ ಮೈಸೂರು ಸರ್ಕಲ್‌ವರೆಗೆ 1.2 ಮೀಟರ್ ಎತ್ತರದ ಸಿಮೆಂಟ್ ಕಾಂಕ್ರೀಟ್ ರಸ್ತೆ ವಿಭಜಕ ಅಳವಡಿಸಲು ಹಾಗೂ ರಸ್ತೆ ಬದಿಗೆ ವ್ಯಾಪಾರಿಗಳು ಬಾರದಂತೆ ನಿಯಂತ್ರಿಸಲು 1.4 ಮೀ ಎತ್ತರದ ಬ್ಯಾರಿಕೇಡ್ ಅಳವಡಿಸಲು ಪಾಲಿಕೆಯು 80ಲಕ್ಷ ರೂ ವೆಚ್ಚದ ಕಾಮಗಾರಿಗೆ ಟೆಂಡರ್ ಕರೆದು ವರ್ಕ್ ಆರ್ಡರ್ ಸಹ ಗುತ್ತಿಗೆದಾರರಿಗೆ ನೀಡಿದೆ.

ಸದ್ಯದಲ್ಲೇ ಕಾಮಗಾರಿ ಆರಂಭವಾಗಲಿದ್ದು, ಸ್ಥಳದಲ್ಲಿ ನೋ ಪಾರ್ಕಿಂಗ್ ಫಲಕ, ಸಿಸಿ ಟಿವಿ ಕ್ಯಾಮರಾ ಅಳವಡಿಸಲು ಅಧಿಕಾರಿಗಳು ಸಿದ್ಧತೆ ನಡೆಸುತ್ತಿದ್ದಾರೆ. ಅಲ್ಲದೆ ಮಾರುಕಟ್ಟೆ ಹಿಂಭಾಗ ಎಂಆರ್‌ಸಿ ಕಡೆಯಿಂದ ಪ್ರವೇಶಾವಕಾಶ ಕಲ್ಪಿಸಿ, ತರಕಾರಿ ವಾಹನಗಳು ಅಲ್ಲಿಂದಲೇ ಪ್ರವೇಶಿಸುವಂತೆ ವ್ಯವಸ್ಥೆ ಮಾಡುತ್ತಿದ್ದಾರೆ.

ಇಂದು ಜೆಸಿಬಿ ಮೂಲಕ ಸ್ವಚ್ಛಗೊಳಿಸಿ, ಸಮತಟ್ಟು ಮಾಡುವ ಕೆಲಸ ಆರಂಭವಾಗಿದ್ದು, ಎಂಜಿ ರಸ್ತೆಯ ಒತ್ತಡ ಕಡಿಮೆ ಮಾಡುವ ಪ್ರಯತ್ನ ಸಾಗಿರುವುದರಿಂದ ಈಗಲಾದರೂ ಅಲ್ಲಿನ ಸಂಚಾರ ಸಮಸ್ಯೆಗೆ ಪರಿಹಾರದೊರೆಯಬುದೆಂದು ಸಾರ್ವಜನಿಕರು ನಿರೀಕ್ಷಿಸಿದ್ದಾರೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

22.06.2024 ಶನಿವಾರ, ಮಳೆ ನಕ್ಷತ್ರ: ಆರಿದ್ರಾ 22.06.2024 ರಿಂದ 05.07.2024
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ,
ತಿಥಿ: ಹುಣ್ಣಿಮೆ, ನಕ್ಷತ್ರ: ಮೂಲ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ಸರ್ಕಾರಿ ಪ್ರೌಢಶಾಲೆ, ಒಂಟಿಕೊಪ್ಪಲು, ಹಿರಣ್ಮಯಿ ಪ್ರತಿಷ್ಠಾನ ಮತ್ತು ಕಾವೇರಿ ಬಳಗ :** ಪ್ರತಿಭಾ ಪುರಸ್ಕಾರ, ಅಧ್ಯಕ್ಷತೆ : ಮುಖ್ಯ ಶಿಕ್ಷಕ ಕೆ.ಜಿ. ಮಹೇಶ್, ಮುಖ್ಯ ಅತಿಥಿಗಳು : ಸಾಹಿತಿ ಬನ್ನೂರು ಕೆ. ರಾಜು, ಉದ್ಘಾಟನೆ : ಸಂಸ್ಕೃತಿ ಪೋಷಕ ಡಾ. ಕೆ. ರಘುರಾಂ ವಾಜಪೇಯಿ, ಪುರಸ್ಕಾರ ಪ್ರದಾನ : ಉಪನ್ಯಾಸಕರಾದ ಶ್ರೀಮತಿ ಕೆ.ಎನ್. ಕಲ್ಪನಾ, ಪ್ರಾಸ್ತಾವಿಕ ನುಡಿ : ಹಿಂದಿ ಭಾಷಾ ಸಂಪನ್ಮೂಲ ಶಿಕ್ಷಕ ಡಾ. ವಿಜಿ, ವಿಶೇಷ ಅತಿಥಿಗಳು : ಹಿರಣ್ಮಯಿ ಪ್ರತಿಷ್ಠಾನ ಅಧ್ಯಕ್ಷ ಸಂಗಪ್ಪ, ಕಾವೇರಿ ಬಳಗದ ಅಧ್ಯಕ್ಷೆ ಶ್ರೀಮತಿ ಎನ್.ಕೆ. ಕಾವೇರಿಯಮ್ಮ, ಸ್ಥಳ: ಸರ್ಕಾರಿ ಪ್ರೌಢಶಾಲೆ, ಒಂಟಿಕೊಪ್ಪಲು, ಬೆಳಗ್ಗೆ 9.30ಕ್ಕೆ.

■ **ಕರ್ನಾಟಕ ಯೋಗ ಶಿಕ್ಷಕರ ಒಕ್ಕೂಟ :** ಬೆಳಗ್ಗೆ 10ಕ್ಕೆ ರಾಜ್ಯ ಮಟ್ಟದ ಪ್ರಥಮ ಯೋಗ ಸಮ್ಮೇಳನ–2024, ಸಾನ್ನಿಧ್ಯ : ಶ್ರೀ ರಾಮಕೃಷ್ಣ ಆಶ್ರಮದ ಅಧ್ಯಕ್ಷ ಶ್ರೀ ಮುಕ್ತಿದಾನಂದಜೀ ಮಹಾರಾಜ್, ಶ್ರೀ ದತ್ತ ವಿಜಯಾನಂದತೀರ್ಥ ಸ್ವಾಮೀಜಿ, ಶ್ರೀ ತ್ರಿನೇತ್ರ ಮಹಂತೇಶ ಶಿವಯೋಗಿ ಸ್ವಾಮೀಜಿ, ಅಧ್ಯಕ್ಷತೆ : ಸಮ್ಮೇಳನಾಧ್ಯಕ್ಷರು ಹಾಗೂ ಯೋಗ ವಿದ್ವಾಂಸರಾದ ಡಾ. ಕೆ.ಎಲ್. ಶಂಕರನಾರಾಯಣ ಜೋಯಿಸ್, ಉದ್ಘಾಟನೆ : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್, ಯೋಗ ಛಾಯಾಚಿತ್ರ ಪ್ರದರ್ಶನ ಉದ್ಘಾಟನೆ : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಮಹರ್ಷಿ ಪತಂಜಲಿಗೆ ಪುಷ್ಪಾರ್ಚನೆ : ಪತಂಜಲಿ ಯೋಗಾಶ್ರಮ ಟ್ರಸ್ಟ್ ಸಂಸ್ಥಾಪಕ ಪ್ರಕಾಶ್ ಗುರೂಜಿ, ಪ್ರಾಸ್ತಾವಿಕ ನುಡಿ : ಯೋಗ ಸಮ್ಮೇಳನ ಸಮಿತಿ ಅಧ್ಯಕ್ಷ ಡಾ. ಎಸ್.ಪಿ. ಯೋಗಣ್ಣ, ಯೋಗ ಸಾಹಿತಿ ಎನ್. ಅನಂತ ಬರೆದಿರುವ ಮೈಸೂರು ಯೋಗ ಪರಂಪರೆ ಕೃತಿ ಲೋಕಾರ್ಪಣೆ : ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಯೋಗಸಿರಿ ಸವಿಸಂಚಿಕೆ ಲೋಕಾರ್ಪಣೆ : ಆಯುಷ್ ಇಲಾಖೆ ಆಯುಕ್ತ ಶ್ರೀನಿವಾಸುಲು, ಮುಖ್ಯ ಅತಿಥಿಗಳು : ಶಾಸಕರಾದ ಜಿ.ಟಿ. ದೇವೇಗೌಡ, ಶ್ರೀವತ್ಸ, ತನ್ವೀರ್ ಸೇಠ್, ಸಿ.ಎನ್. ಮಂಜೇಗೌಡ, ಡಾ. ಡಿ. ತಿಮ್ಮಯ್ಯ, ಕೆ. ಹರೀಶ್‌ಗೌಡ, ಮುಡಾ ಅಧ್ಯಕ್ಷ ಕೆ. ಮರೀಗೌಡ, ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸ್ಥಳ: ಕರ್ನಾಟಕ ಕಲಾಮಂದಿರ, ವಿನೋಬಾ ರಸ್ತೆ.

■ **ತ್ರಿವೇಣಿ ಗೆಳೆಯರ ಬಳಗ :** ಉಚಿತ ಆರೋಗ್ಯ ತಪಾಸಣಾ ಶಿಬಿರ, ಕಣ್ಣಿನ ಶಿಬಿರ, ದಂತ ಶಿಬಿರ, ಸ್ವಯಂ ಪ್ರೇರಿತ ರಕ್ತದಾನ ಶಿಬಿರ, ಮುಖ್ಯ ಅತಿಥಿಗಳು : ಮಾಜಿ ಶಾಸಕ ಎಲ್. ನಾಗೇಂದ್ರ, ಬಿಜೆಪಿ ಜಿಲ್ಲಾಧ್ಯಕ್ಷ ಮಹದೇವಸ್ವಾಮಿ, ವಸ್ತು ಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಪಿ. ಮಂಜುನಾಥ್, ಹೇಮಂತ್‌ಕುಮಾರ್‌ಗೌಡ, ಮಂಜುನಾಥ್, ಎಚ್.ಜಿ. ಗಿರಿಧರ್, ಬಿ.ಎಂ. ರಘು, ಮುಡಾ ಮಾಜಿ ಅಧ್ಯಕ್ಷ ಯಶಸ್ವಿ ಸೋಮಶೇಖರ್, ರಾಜ್ಯ ಅಲ್ಪಸಂಖ್ಯಾತ ಮೋರ್ಚಾ ಅಧ್ಯಕ್ಷ ಡಾ. ಅನಿಲ್ ಥಾಮಸ್, ಡಾ. ಸುಶ್ರುತ್‌ಗೌಡ, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಹೋಟಲ್ ಉದ್ಯಮಿ ಸತೀಶ್, ಪದ್ಮನಾಭ, ರಮೇಶ್, ಅಶೋಕ್, ಸ್ಥಳ: ಕೆಎಸ್‌ಇಬಿ ಕಾಲೋನಿ, ತ್ರಿವೇಣಿ ವೃತ್ತ, ಬೆಳಗ್ಗೆ 10.30ಕ್ಕೆ.

■ **ದೀಪಾ ಶಿಕ್ಷಣ ಮತ್ತು ಸೇವಾ ಟ್ರಸ್ಟ್, ದೀಪಾ ಶಾಲೆ :** ವಿದ್ಯಾರ್ಥಿ ಸಂಘದ ಉದ್ಘಾಟನಾ ಸಮಾರಂಭ, ಉದ್ಘಾಟನೆ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಜೆ.ಡಿ. ಮಲ್ಲಿಕಾರ್ಜುನಸ್ವಾಮಿ, ಅಧ್ಯಕ್ಷತೆ : ದೀಪಾ ಶಿಕ್ಷಣ ಸಂಸ್ಥೆ ಅಧ್ಯಕ್ಷ ಎಂ. ರಾಮಪ್ಪ, ಸ್ಥಳ: ಸ್ವಾಮಿ ವಿವೇಕಾನಂದ ಸಭಾಂಗಣ, ರೂಪಾನಗರ, ಬೆಳಗ್ಗೆ 11ಕ್ಕೆ.

■ **ಮೈಸೂರು ಆಟೋರಿಕ್ಷಾ ಸರ್ವೀಸ್ ಟ್ರಸ್ಟ್ :** ಎಂಎಆರ್‌ಎಸ್ ಮೈಸೂರು ಆಟೋರಿಕ್ಷಾ ಸರ್ವೀಸ್‌ನ ಆಪ್ ಉದ್ಘಾಟನಾ ಸಮಾರಂಭ, ಉಪಸ್ಥಿತರು : ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ, ಸ್ಥಳ: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ಊಟಿ ರಸ್ತೆ, ಬೆಳಗ್ಗೆ 11ಕ್ಕೆ.

■ **ಸಿ. ಕೃಷ್ಣಯ್ಯ ಚೆಟ್ಟಿ ಗ್ರೂಪ್ ಆಫ್ ಜ್ಯುವೆಲ್ಲರ್ಸ್ :** ಜ್ಯುವೆಲ್ಲರಿ ಪ್ರದರ್ಶನ ಮತ್ತು ಮಾರಾಟ, ಉದ್ಘಾಟನೆ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಸ್ಥಳ: ರೀಜೆಂಟ್ ಹಾಲ್, ಗ್ರ್ಯಾಂಡ್ ಮರ್ಕ್ಯೂರ್, ಬೆಳಗ್ಗೆ 11.30ಕ್ಕೆ.

■ **ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು, ಸ್ನಾತಕೋತ್ತರ ಸಮಾಜ ಕಾರ್ಯ ವಿಭಾಗ ನಿಸರ್ಗ ಫೌಂಡೇಷನ್, ಹೆಚ್.ಡಿ. ಕೋಟೆ :** ಸಮಾಜ ಕಾರ್ಯ ಶಿಬಿರ, ಬೆಳಗ್ಗೆ 11.30 ರಿಂದ ವಿಶೇಷ ಉಪನ್ಯಾಸ–2, ವಿಷಯ ತಜ್ಞರು : ಹೆಚ್.ಡಿ. ಕೋಟೆ ಬುಡಕಟ್ಟು ಕೃಷಿಕರ ಸಂಘದ ಅಧ್ಯಕ್ಷ ವಿಜಯಕುಮಾರ್, ಕಾರ್ಯದರ್ಶಿ ಡಿ.ಎಂ. ಬಸವರಾಜು, ವಿಷಯ : ಬುಡಕಟ್ಟು ಸಮುದಾಯದ ಜೀವನ ಮತ್ತು ಸವಾಲುಗಳು, ಸಂಜೆ 5.30 ರಿಂದ ಸಾಂಸ್ಕೃತಿಕ ಕಾರ್ಯಕ್ರಮ, ಸ್ಥಳ: ಕಾಲೇಜು ಆವರಣ, ಊಟಿ ರಸ್ತೆ.

■ **ಶ್ರೀ ವಿದ್ಯಾಗಣಪತಿ ಹಾಗೂ ಶ್ರೀ ಮಹಾಲಕ್ಷ್ಮೀ ದೇವಸ್ಥಾನ ಟ್ರಸ್ಟ್ :** 5ನೇ ವರ್ಷದ ಶ್ರೀನಿವಾಸ ಕಲ್ಯಾಣೋತ್ಸವ, ಹುಣ್ಣಿಮೆ ಪ್ರಯುಕ್ತ ಶ್ರೀ ಸತ್ಯನಾರಾಯಣ ಪೂಜೆ, ಸಂಜೆ 5ಕ್ಕೆ ಪ್ರಮುಖ ರಸ್ತೆಗಳಲ್ಲಿ ಶ್ರೀಸ್ವಾಮಿಯವರ ದಿವ್ಯ ರಥೋತ್ಸವ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಸ್ಥಳ: ಶ್ರೀ ಮಹಾಲಕ್ಷ್ಮೀ ದೇವಸ್ಥಾನ, ವಿನಾಯಕನಗರ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 CFTRI 'ಶೋಧ – ಅನುಶೋಧ'– ಪ್ರಾಯೋಜಿತ ಬಾನುಲಿ ಸರಣಿ. ಪ್ರಾಯೋಜಕರು– CSIR, CFTRI, Mysuru, ಪ್ರಸ್ತುತಿ : ಡಾ. ಎ. ಜಿ. ಗೋಪಾಲ ಕೃಷ್ಣ, 6.40 ಪದಸಂಸ್ಕೃತಿ, ಪ್ರಸ್ತುತಿ: ಡಾ. ಟಿ. ವಿ. ವೆಂಕಟಾಚಲ ಶಾಸ್ತ್ರಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 'ಹಾದಿಯಲ್ಲಿ ಕಂಡ ಮುಖ'– ಬಾನುಲಿ ಸರಣಿ, ಪ್ರಸ್ತುತಿ : ಅಬ್ದುಲ್ ರಶೀದ್, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ : ಜಾನ್ ಬಿ. ಹಿಗ್ಗಿನ್ಸ್, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ, ಪ್ರಸ್ತುತಿ : ಡಾ. ಮೈಸೂರು ಉಮೇಶ್

ಮಧ್ಯಾಹ್ನ: 12.30 ದೇವರನಾಮ, 12.45 ಜನಪದ ಸಂಗೀತ, 1.20 ಭಾವಗೀತೆಗಳು–ಲಕ್ಷ್ಮೀಶ. ಎಂ. ಎಸ್, 3.00 ಜನಪದ ಸಂಗೀತ, 3.30 ಮಕ್ಕಳ ಮಂಟಪ–ನಂದಗೋಕುಲ, ಪ್ರಸ್ತುತಿ : ಕೆ. ಬಿ. ಮೀನಾ, 4.00ನಾಟಕ 'ಸೋತ ಸಂಜೆಗಳು', ರಚನೆ ಹಾಗೂ ನಿರ್ದೇಶನ : ಜಿ.ಎಂ. ಶಿರಹಟ್ಟಿ, 4.30 ನೆನಪಿನಂಗಳ: ಹಿರಿಯ ಸಾಹಿತಿ ತ. ಸು. ಶ್ಯಾಮರಾಯರೊಂದಿಗೆ ಡಾ. ಹೆಚ್. ತಿಪ್ಪೇರುದ್ರಸ್ವಾಮಿ ಅವರು ನಡೆಸಿದ್ದ ಸಂವಾದ, 5.30 Pashudhan Se Behthar Jeevan, ಪ್ರಾಯೋಜಕರು : ಪಶುಸಂಗೋಪನೆ, ಹೈನುಗಾರಿಕೆ ಮತ್ತು ಮೀನುಗಾರಿಕೆ ಸಚಿವಾಲಯ, 6.50 ಕೃಷಿರಂಗ: ಕಿಸಾನ್‌ವಾಣಿ –ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ ಬಾಳೆಯಲ್ಲಿ ಸಮಗ್ರ ರೋಗ ನಿರ್ವಹಣೆ. ಈ ಕುರಿತು ಮಂಡ್ಯದ ವಿ.ಸಿ. ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕರಾದ ಡಾ. ವಿ.ಬಿ. ಸನತ್ ಕುಮಾರ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್. ಕೇಶವಮೂರ್ತಿ. 7.45 ಟಿ–20 ವಿಶ್ವ ಕಪ್ ಅಂಗವಾಗಿ ತಂಡಗಳ ನಡುವೆ ಸರ್ ವಿವಿಯನ್ ರಿಚರ್ಡ್ಸ್ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುವ ಕ್ರಿಕೆಟ್ ಪಂದ್ಯದ ವೀಕ್ಷಕ ವಿವರಣೆ.

■ **ಕಲಾಸುರುಚಿ :** ಕಥೆ ಕೇಳೋಣ ಬನ್ನಿ ಕಾರ್ಯಕ್ರಮ, ಕಥೆ ಹೇಳುವವರು: ಶ್ರೀಮತಿ ಗೀತಾ ಎಚ್ ಪಿ, ಕನ್ನಡ ಪ್ರಾಧ್ಯಾಪಕರು, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ವಿಜಯನಗರ, ಸ್ಥಳ: ಸುರುಚಿ ರಂಗಮನೆ, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 4.30 ರಿಂದ.

■ **ಮೈಸೂರು ವಿಶ್ವವಿದ್ಯಾನಿಲಯ ಮಾಹಿತಿ ಮತ್ತು ಗ್ರಂಥಾಲಯ ವಿಜ್ಞಾನ ಅಲ್ಯೂಮ್ನಿ ನೆಟ್‌ವರ್ಕ್ :** ಅಕಾಡೆಮಿಕ್ ಪಬ್ಲಿಷಿಂಗ್, ಲೈಬ್ರರೀಸ್ ಮತ್ತು ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಕುರಿತು ವಿಚಾರ ಸಂಕಿರಣದ ಸಮಾರೋಪ ಸಮಾರಂಭ, ಮುಖ್ಯ ಅತಿಥಿಗಳು : ಕಂಪ್ಯೂಟರ್ ಸೈನ್ಸ್ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ. ಹೆಚ್.ಎಸ್. ನಾಗೇಂದ್ರಸ್ವಾಮಿ, ಗೌರವ ಅತಿಥಿಗಳು : ನ್ಯಾಷನಲ್ ಲೈಬ್ರರಿ ಆಫ್ ಇಂಡಿಯಾ ನಿವೃತ್ತ ಡೈರೆಕ್ಟರ್ ಜನರಲ್ ಡಾ. ಪಿ.ವೈ. ರಾಜೇಂದ್ರಕುಮಾರ್, ಬೆಂಗಳೂರು ಇನ್‌ಫಾರ್ಮೆಟಿಕ್ಸ್ ಇಂಡಿಯಾ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕ ಎನ್.ವಿ. ಸತ್ಯನಾರಾಯಣ, ಅಧ್ಯಕ್ಷತೆ : ಇಂಡಿಯನ್ ಸ್ಟ್ಯಾಟಿಕಲ್ ಇನ್ಸ್‌ಟಿಟ್ಯೂಟ್ ನಿವೃತ್ತ ಪ್ರಾಧ್ಯಾಪಕ ಡಾ. ಕೆ.ಎಸ್. ರಾಘವನ್, ಸ್ಥಳ: ವಿಜ್ಞಾನ ಭವನ ಸಭಾಂಗಣ, ಮಾನಸಗಂಗೋತ್ರಿ, ಸಂಜೆ 5ಕ್ಕೆ.

■ **ಶ್ರೀ ನಾದಬ್ರಹ್ಮ ಸಂಗೀತ ಸಭಾ :** ವಿದುಷಿ ಪುಸ್ತಕಂ ರಮಾ ಅವರಿಂದ ಕರ್ನಾಟಕ ಶಾಸ್ತ್ರೀಯ ಗಾಯನ, ವಿದ್ವಾನ್ ಕೇಶವ ಮೋಹನ್ ಕುಮಾರ್–ಪಿಟೀಲು, ವಿದ್ವಾನ್ ಆರ್. ಅದಮ್ಯ–ಮೃದಂಗ, ವಿದ್ವಾನ್ ಶಮಿತ್‌ಗೌಡ–ಘಟಂ, ಸ್ಥಳ: ಶ್ರೀನಾದಬ್ರಹ್ಮ ಸಂಗೀತ ಸಭಾ, ಮೈಸೂರು ಕೆ. ವಾಸುದೇವಾಚಾರ್ಯ ಭವನ, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ.

■ **ಶ್ರೀ ರಾಮಕೃಷ್ಣ ಆಶ್ರಮ :** ಸ್ವಾಮಿ ಇಷ್ಟನಾಥಾನಂದ ಅವರಿಂದ ಆತ್ಮಬೋಧ ಕುರಿತು ಉಪನ್ಯಾಸ, ಸ್ಥಳ: ಆಶ್ರಮದ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಇನ್ಸ್‌ಟಿಟ್ಯೂಷನ್ ಆಫ್ ಇಂಜಿನಿಯರ್ಸ್, ಮೈಸೂರು :** ಡಾ. ಎ. ಚಂದ್ರಶೇಖರ ಅವರಿಂದ ನ್ಯೂಕ್ಲಿಯರ್ ಎನರ್ಜಿ ಕುರಿತು ತಾಂತ್ರಿಕ ಉಪನ್ಯಾಸ, ಅಧ್ಯಕ್ಷತೆ : ಇನ್ಸ್‌ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಅಧ್ಯಕ್ಷ ಡಾ. ಆರ್. ದೀಪು, ಸ್ಥಳ: ಎಸ್.ಪಿ. ಭಟ್ ಹಾಲ್, ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ.

■ **ದೀಕ್ಷಿತ್ ಆರೋಗ್ಯ ಧಾಮ :** ಆನಂದ ಆರೋಗ್ಯ ಹುಣ್ಣಿಮೆಯ ವಿಶೇಷ ಕಾರ್ಯಕ್ರಮ, ವಿದ್ವಾನ್ ಆರ್.ಕೆ. ಪದ್ಮನಾಭ ಅವರಿಂದ ವೀಣಾವಾದನ, ವಿದ್ವಾನ್ ಪಿ.ಎಸ್. ಶ್ರೀಧರ್–ಮೃದಂಗ, ವಿದ್ವಾನ್ ವಿ.ಎಸ್. ರಮೇಶ್–ಘಟಂ, ಡಾ. ಅಜೇಯ ಕೌಶಿಕ್ ಅವರಿಂದ ಕತ್ತು ನೋವು–ಸಾಮಾನ್ಯ ತಿಳುವಳಿಕೆ, ಪರಿಹಾರ ಕುರಿತು ಉಪನ್ಯಾಸ, ಸ್ಥಳ: ದೀಕ್ಷಿತ್ ಆರೋಗ್ಯ ಧಾಮ, ವಿಜಯನಗರ 3ನೇ ಹಂತ, ಸಂಜೆ 6ಕ್ಕೆ.

■ **ನೇತಾಜಿ ಎಜುಕೇಷನ್ ಫೌಂಡೇಷನ್ :** ಆರ್‌ಟಿಓ ಇನ್ಸ್‌ಪೆಕ್ಟರ್ ಹುದ್ದೆಗಳ ನೇಮಕಾತಿ ಪರೀಕ್ಷೆಗಳಿಗೆ ತರಬೇತಿ, ಸ್ಥಳ: ನಂ. 400, ಆತ್ರೇಯ ಕೃಷ್ಣವಿಲಾಸ ರಸ್ತೆ, ಜಗನ್ಮೋಹನ ಅರಮನೆ ಹತ್ತಿರ.

■ **ಉದ್ಯಮಿ ಒಕ್ಕಲಿಗ :** ಮೈಸೂರು ಸೆಂಟ್ರಲ್ ಸರ್ಕಲ್ ಉದ್ಘಾಟನಾ ಸಮಾರಂಭ, ಸಾನ್ನಿಧ್ಯ : ಶ್ರೀ ಸೋಮನಾಥೇಶ್ವರ ಸ್ವಾಮೀಜಿ, ಮುಖ್ಯ ಅತಿಥಿಗಳು : ಜಯರಾಮ್ ರಾಯ್‌ಪುರ, ಶಾಸಕರಾದ ಕೆ. ಹರೀಶ್‌ಗೌಡ, ಜಿ.ಡಿ. ಹರೀಶ್‌ಗೌಡ, ಕವೀಶ್‌ಗೌಡ, ಬಿ. ಮಂಜುನಾಥ್, ಎಂ.ಎ. ಮದನ್‌ಕುಮಾರ್, ಸ್ಥಳ: ಹೋಟೆಲ್ ಲಿ ರುಚಿ, ಹುಣಸೂರು ಮುಖ್ಯ ರಸ್ತೆ, ಸಂಜೆ 6.30ಕ್ಕೆ.

ಸರಗೂರಿನಲ್ಲಿಂದು

■ **ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಪಡುವಲು ಶ್ರೀ ವಿರಕ್ತ ಮಠ, ಬಿಡಗಲು, ಸರಗೂರು ಟೌನ್, ತಾಲೂಕು ಶರಣ ಸಾಹಿತ್ಯ ಪರಿಷತ್ :** ದತ್ತಿ ಉಪನ್ಯಾಸ ಸಮಾರಂಭ, ಸಾನ್ನಿಧ್ಯ : ಪಡುವಲು ಶ್ರೀ ವಿರಕ್ತ ಮಠದ ಶ್ರೀ ಮಹದೇವಸ್ವಾಮಿಗಳು, ಉದ್ಘಾಟನೆ : ಕಾಲೇಜು ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕ ಬಿ. ನಿರಂಜನಮೂರ್ತಿ, ಸಾಹಿತ್ಯ ಲೋಕ ಅಧ್ಯಕ್ಷ ಡಾ. ವೈ.ಡಿ. ರಾಜಣ್ಣ ಅವರಿಂದ ಸಾಂಸ್ಕೃತಿಕ ನಾಯಕರಾಗಿ ಬಸವಣ್ಣ ಕುರಿತು ಉಪನ್ಯಾಸ, ಅಧ್ಯಕ್ಷತೆ : ಜಿಲ್ಲಾ ಕಸಾಪ ಅಧ್ಯಕ್ಷ ಡಾ. ಹೆಳವರಹುಂಡಿ ಸಿದ್ದಪ್ಪ, ಪ್ರಾಸ್ತಾವಿಕ ನುಡಿ : ಜಿಲ್ಲಾ ಕಸಾಪ ನಿಕಟಪೂರ್ವ ಅಧ್ಯಕ್ಷ ಎಂ. ಚಂದ್ರಶೇಖರ್, ಮುಖ್ಯ ಅತಿಥಿಗಳು : ಸಮಾಜ ಸೇವಕ ಶರತ್ ಪುಟ್ಟಬುದ್ಧಿ, ತಾಲೂಕು ಕಸಾಪ ಅಧ್ಯಕ್ಷ ಕೆ. ಗುರುಸ್ವಾಮಿ, ಸ್ಥಳ: ಪಡುವಲು ಶ್ರೀ ವಿರಕ್ತ ಮಠ, ಬಿಡುಗಲು, ಸರಗೂರು ತಾ.

ಶ್ರೀರಾಂಪುರ, ಕಡಕೊಳ, ಬೋಗಾದಿ, ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಯುಜಿಡಿ ಸಮಸ್ಯೆ

● ಶಾಸಕ ಜಿ.ಟಿ.ದೇವೇಗೌಡ ಅಧ್ಯಕ್ಷತೆಯ ಸಭೆಯಲ್ಲಿ ಪರಿಹಾರ ಸೂತ್ರ ● ಸ್ವಚ್ಛ ಭಾರತ್ ಮಿಷನ್–2 ಯೋಜನೆಗೆ ಈ ಪಟ್ಟಣ ಪಂಚಾಯಿತಿ ಸೇರಿಸಲು ಪ್ರಸ್ತಾವನೆ



ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಶುಕ್ರವಾರ ಶಾಸಕ ಜಿ.ಟಿ.ದೇವೇಗೌಡರು ಚಾಮುಂಡೇಶ್ವರಿ ಕ್ಷೇತ್ರದ ಪ್ರಗತಿ ಪರಿಶೀಲನೆ ನಡೆಸಿದರು.

ಮೈಸೂರು, ಜೂ.21(ಬಿಎಲ್‌ಯು)– ಯುಜಿಡಿ ಸಮಸ್ಯೆ ನಿವಾರಣೆ ಮಾಡಲು ಶ್ರೀರಾಂಪುರ, ಕಡಕೊಳ, ಬೋಗಾದಿ ಹಾಗೂ ರಮ್ಮನಹಳ್ಳಿ ಪಟ್ಟಣ ಪಂಚಾಯಿತಿಗಳನ್ನು ಸ್ವಚ್ಛ ಭಾರತ್ ಮಿಷನ್– 2 ಯೋಜನೆಗೆ ಸೇರ್ಪಡೆಗೊಳಿಸಲು ಪ್ರಸ್ತಾವನೆ ಸಲ್ಲಿಸುವಂತೆ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರು ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಇಂದು ನಗರ ವ್ಯಾಪ್ತಿಯ ಬಡಾವಣೆಗಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಸೂತ್ರ ರೂಪಿಸಲು ಚಾಮುಂಡೇಶ್ವರಿ ಕ್ಷೇತ್ರದ ನಗರ ಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಸ್ವಚ್ಛ ಭಾರತ್ ಮಿಷನ್– 2 ಯೋಜನೆಗೆ ಈ ನಾಲ್ಕು ಪಟ್ಟಣ ಪಂಚಾಯಿತಿಗಳನ್ನು ಸೇರಿಸಿದರೆ ಯುಜಿಡಿ ಸಮಸ್ಯೆಗೆ ಪರಿಹಾರ ದೊರೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ಗ್ರಾಮ ಪಂಚಾಯಿತಿಯಿಂದ ನಗರ ಸಭೆ ಹಾಗೂ ಪಟ್ಟಣ ಪಂಚಾಯಿತಿ ಮೇಲ್ದರ್ಜೆಗೇರಿಸಿದ ನಂತರ ನಿವಾಸಿಗಳಿಂದ ಸಂಗ್ರಹವಾಗುವ ತೆರಿಗೆಯಿಂದ ಎಲ್ಲಾ ರೀತಿಯ ನಿರ್ವಹಣೆ ಮಾಡಲಾಗುತ್ತಿದೆ. ಈ ಆದಾಯವಿಲ್ಲದೆ ಸರ್ಕಾರದಿಂದ ಬೇರೆ ಅನುದಾನ ದೊರೆಯುತ್ತಿಲ್ಲ. ಇದರಿಂದ ಬಡಾವಣೆಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಅನುದಾನದ ಕೊರತೆ ಇದೆ ಎಂದು ಹೂಟಗಳ್ಳಿ ನಗರ ಸಭೆ ಆಯುಕ್ತ ಚಂದ್ರಶೇಖರ್ ಸೇರಿದಂತೆ ಇತರೆ ಅಧಿಕಾರಿಗಳು ಜಿ.ಟಿ.ದೇವೇಗೌಡರಿಗೆ ಸಮಸ್ಯೆ ಮನವರಿಕೆ ಮಾಡಿಕೊಟ್ಟರು.

ಈ ವೇಳೆ ಮಾತನಾಡಿದ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಎಕ್ಸಿಕ್ಯೂಟಿವ್ ಇಂಜಿನಿಯರ್ ಆಸೀಫ್, ಈಗಾಗಲೇ ಹೂಟಗಳ್ಳಿ ನಗರಸಭೆ ಸ್ವಚ್ಛ ಭಾರತ್ ಮಿಷನ್ ಯೋಜನೆಗೆ ಸೇರ್ಪಡೆಗೊಂಡಿದೆ. ಇದರಂತೆ ಬೋಗಾದಿ, ಶ್ರೀರಾಂಪುರ, ಕಡಕೊಳ ಹಾಗೂ ರಮ್ಮನಹಳ್ಳಿ ಪಟ್ಟಣ ಪಂಚಾಯಿತಿಗಳನ್ನು ಈ ಯೋಜನೆಗೆ ಸೇರ್ಪಡೆಗೊಳಿಸಿದರೆ ಯುಜಿಡಿ ಸಂಪರ್ಕ ಕಲ್ಪಿಸಲು ಸರ್ಕಾರದಿಂದ ಅನುದಾನ ದೊರೆಯಲಿದೆ ಎಂದು ಪರಿಹಾರ ಸೂಚಿಸಿದರು.

ಆಸೀಫ್ ಅಭಿಪ್ರಾಯಕ್ಕೆ ದನಿಗೂಡಿಸಿದ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ಶುಭಾ, ಈಗಾಗಲೇ ನಂಜನಗೂಡು, ಹುಣಸೂರು ನಗರಸಭೆಗಳು ಸದರಿ ಯೋಜನೆಗೆ ಸೇರಿದೆ. ಈ ನಾಲ್ಕು ಪಟ್ಟಣ ಪಂಚಾಯಿತಿಗಳನ್ನು ಸೇರ್ಪಡೆ ಮಾಡಿದರೆ ಒಳ ಚರಂಡಿ ಸಮಸ್ಯೆ ಪರಿಹಾರ ಮಾಡುಹುದು ಎಂದು ತಿಳಿಸಿದರು.

ಅಧಿಕಾರಿಗಳ ಅಭಿಪ್ರಾಯ ಆಲಿಸಿದ ಜಿ.ಟಿ.ದೇವೇಗೌಡರು, ಪೌರಾಡಳಿತ ನಿರ್ದೇಶನಾಲಯದ ನಿರ್ದೇಶಕ ಜೆ.ಲಕ್ಷ್ಮೀಕಾಂತ ರೆಡ್ಡಿ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿ, ನಗರ ವ್ಯಾಪ್ತಿಗೊಳಪಡುವ ನಾಲ್ಕು ಪಟ್ಟಣ ಪಂಚಾಯಿತಿಗಳನ್ನು ಸ್ವಚ್ಛ ಭಾರತ್ ಮಿಷನ್ ಯೋಜನೆ–2ಕ್ಕೆ ಸೇರಿಸಬೇಕು. ಇದಕ್ಕೆ ಸಂಬಂಧಿಸಿದಂತೆ ಪಟ್ಟಣ ಪಂಚಾಯಿತಿಯಿಂದ ಪ್ರಸ್ತಾವನೆ ಹಾಗೂ ಕ್ರಿಯಾ ಯೋಜನೆ ಸಲ್ಲಿಸಲಾಗುವುದು. ಇದಕ್ಕೆ ಪೌರಾಡಳಿತ ಇಲಾಖೆ ಅನುಮೋದನೆ ನೀಡಬೇಕು ಎಂದು ಹೇಳಿದರು.

ಇದಕ್ಕೆ ಸ್ಪಂದಿಸಿದ ಲಕ್ಷ್ಮೀಕಾಂತ ರೆಡ್ಡಿ ಶೀಘ್ರವೇ ಪ್ರಸ್ತಾವನೆ ಹಾಗೂ ಕ್ರಿಯಾ ಯೋಜನೆ ಸಲ್ಲಿಸಿದರೆ ಅನುಮೋದನೆ ನೀಡಲಾಗುವುದು ಎಂದು ಭರವಸೆ ನೀಡಿದರು. ಈ ಸಂಬಂಧ ಕಾರ್ಯೋನ್ಮುಖರಾಗುವಂತೆ ಜಿ.ಟಿ.ದೇವೇಗೌಡರು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಪಟ್ಟಣ ಪಂಚಾಯಿತಿಗಳ ಮುಖ್ಯಾಧಿಕಾರಿಗಳಾದ ರವಿಕೀರ್ತಿ, ದೀಪಾ, ಸುರೇಶ್, ಬಸವರಾಜು, ಅಸಿಸ್ಟೆಂಟ್ ಇಂಜಿನಿಯರ್‌ಗಳಾದ ಮಂಜುನಾಥ್, ಸದಾಶಿವಪ್ಪ ಸೇರಿದಂತೆ ಇತರೆ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

18 ಕೋಟಿ ವೆಚ್ಚದಲ್ಲಿ ರೈತರಿಗೆ 17 ಲಕ್ಷ ನೀಡುತ್ತಿಲ್ಲ

ಹೂಟಗಳ್ಳಿ ಕೈಗಾರಿಕಾ ಪ್ರದೇಶದಿಂದ ಪೆಟ್ರೋಲ್ ಬಂಕ್‌ಗೆ ಸೇರುವ ಮಾರ್ಗದ ರಸ್ತೆಯನ್ನು 18 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದೆ. ಆದರೆ ರೈತರಿಗೆ 17 ಲಕ್ಷ ರೂಪಾಯಿಗಳ ಭೂಸ್ವಾಧೀನ ಹಣ ನೀಡಿಲ್ಲ. ಇದರಿಂದ ರೈತರು ರಸ್ತೆ ಸಂಚಾರಕ್ಕೆ ಅನುವು ಮಾಡಿಕೊಡುತ್ತಿಲ್ಲ ಎಂದು ಅಧಿಕಾರಿಗಳು ಜಿ.ಟಿ.ದೇವೇಗೌಡರ ಗಮನಕ್ಕೆ ತಂದರು.

ಈ ಸಂಬಂಧ ಕೆಐಎಡಿಬಿ ಭೂ ಸ್ವಾಧೀನಾಧಿಕಾರಿ ಡಾ.ಎನ್.ಸಿ.ವೆಂಕಟರಾಜು ಜೊತೆ ದೂರವಾಣಿಯಲ್ಲಿ ಮಾತನಾಡಿದ ಜಿ.ಟಿ. ದೇವೇಗೌಡರು, ರೈತರಿಗೆ ನೀಡಬೇಕಾದ ಹಣವನ್ನು ಕೂಡಲೇ ಪಾವತಿ ಮಾಡಿ ಸಮಸ್ಯೆ ಇತ್ಯರ್ಥ ಮಾಡುವಂತೆ ತಾಕೀತು ಮಾಡಿದರು. ನಗರ ಸಭೆ ಹಾಗೂ ಪಟ್ಟಣ ಪಂಚಾಯಿತಿಗಳು ಎಲ್ಲಾ ರೀತಿಯ ಕಾಮಗಾರಿಗಳನ್ನು ಕಾಲ ಮಿತಿಯಲ್ಲಿ ಮುಗಿಸಬೇಕು. ಯಾವ ಉದ್ದೇಶಕ್ಕೆ ಅನುದಾನ ಮೀಸಲಾಗಿದೆಯೋ ಅದಕ್ಕೆ ಬಳಸಬೇಕು ಎಂದು ಜಿ.ಟಿ.ದೇವೇಗೌಡರು ಸೂಚಿಸಿದರು.

ನಯಾ ಪೈಸೆ ಹಣ ನೀಡದೆ ಬಡಾವಣೆ ಹಸ್ತಾಂತರಿಸಿದರೆ ಒಪ್ಪಲ್ಲ

ನಯಾ ಪೈಸೆ ಹಣ ನೀಡದೆ ಬಡಾವಣೆಗಳನ್ನು ಪಟ್ಟಣ ಪಂಚಾಯಿತಿಗಳಿಗೆ ಹಸ್ತಾಂತರ ಮಾಡುವ ಮುಡಾ ಪ್ರಸ್ತಾವನೆಗೆ ಶಾಸಕ ಜಿ.ಟಿ.ದೇವೇಗೌಡರು ತೀವ್ರವಾಗಿ ವಿರೋಧಿಸಿದರು.

ಅಪೂರ್ಣಗೊಂಡ ಖಾಸಗಿ ಬಡಾವಣೆಗಳಲ್ಲಿ ನಿವೇಶನ ಮಾರಾಟ ಮಾಡಲು ಮುಡಾ ಅನುಮೋದನೆ ನೀಡಿದೆ. ಜೊತೆಗೆ ಬಡಾವಣೆಗಳ ನಿವಾಸಿಗಳಿಂದ ಮುಡಾ ಅಭಿವೃದ್ಧಿ ವೆಚ್ಚ ಕೂಡ ಸಂಗ್ರಹಿಸಿದೆ ಆದರೆ ಈ ಹಾದಲ್ಲಿ ಯಾವುದೇ ಅಭಿವೃದ್ಧಿ ಆಗಿಲ್ಲ ಇದರಿಂದ ಬಡಾವಣೆಗಳಲ್ಲಿ ಅಗತ್ಯ ಮೂಲ ಸೌಕರ್ಯಗಳಿಲ್ಲ. ಹೀಗಿರುವಾಗ ಅಭಿವೃದ್ಧಿಯಾಗದ ಬಡಾವಣೆಗಳನ್ನು ಪಟ್ಟಣ ಪಂಚಾಯಿತಿಗಳಿಗೆ ಹಸ್ತಾಂತರ ಮಾಡಿದರೆ ಅಭಿವೃದ್ಧಿ ಹಣಕ್ಕಾಗಿ ನಾವೇನು ಮಾಡುವುದು ಎಂದು ಪ್ರಶ್ನಿಸಿದರು.

ಮುಡಾದವರು ಅಭಿವೃದ್ಧಿ ವೆಚ್ಚವಾಗಿ 25 ಕೋಟಿ ಸಂಗ್ರಹಿಸಿದ್ದರೆ, ಇದರಲ್ಲಿ ಕನಿಷ್ಟ 5 ಕೋಟಿಯನ್ನಾದರೂ ಪಟ್ಟಣ ಪಂಚಾಯಿತಿಗಳಿಗೆ ನೀಡಿ, ಬಡಾವಣೆ ಹಸ್ತಾಂತರ ಮಾಡಿದರೆ ಇದಕ್ಕೆ ನಾವು ಒಪ್ಪಬಹುದು. ಅದು ಬಿಟ್ಟು ನಯಾ ಪೈಸೆ ನೀಡದೆ ಬಡಾವಣೆ ಹಸ್ತಾಂತರ ಮಾಡಿ ಅಭಿವೃದ್ಧಿ ಹೊಣೆಯನ್ನು ನಮ್ಮ ಮೇಲೆ ಹೊರಿಸಿದರೆ ನಾವೇನು ಮಾಡುವುದು ಎಂದು ಮರು ಪ್ರಶ್ನಿಸಿದರು.

ಈ ವೇಳೆ ಮಾತನಾಡಿದ ಹೂಟಗಳ್ಳಿ ನಗರ ಸಭೆ ಆಯುಕ್ತ ಚಂದ್ರಶೇಖರ್, 31 ಬಡಾವಣೆಗಳು ಮುಡಾದಿಂದ ಅನುಮೋದನೆಗೊಂಡಿವೆ. ಈ ಬಡಾವಣೆಗಳಲ್ಲಿ 6164 ನಿವೇಶನಗಳಿದ್ದು, 4500 ಮನೆ ನಿರ್ಮಾಣವಾಗಿದೆ. ಆದರೆ ಈ ಬಡಾವಣೆಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಲು ಅನುದಾನದ ಕೊರತೆ ಇದೆ ಎಂದು ಹೇಳಿದರು.

ಬೀದಿ ದೀಪಗಳಿಲ್ಲದೆ ಬಡಾವಣೆಗಳು ಕಗ್ಗತ್ತಲಲ್ಲಿ ಮುಳುಗಿವೆ, ಬೋರ್‌ವೆಲ್ ಇಲ್ಲದೆ ಕುಡಿಯುವ ನೀರಿಲ್ಲ. ಈ ಹಿನ್ನೆಲೆಯಲ್ಲಿ ಮುಡಾದವರು 3 ವರ್ಷದ ತೆರಿಗೆ ಹಣವನ್ನು ನಮಗೆ ಪಾವತಿಸಿದರೆ ಅಭಿವೃದ್ಧಿ ಮಾಡಬಹುದು. ಇಲ್ಲವೆ 10 ಕೋಟಿಯನ್ನಾದರೂ ಕೊಟ್ಟರೆ ಆದ್ಯತೆ ಮೇರೆಗೆ ಅಭಿವೃದ್ಧಿ ಕೈಗೊಳ್ಳಬಹುದು ಎಂದು ತಿಳಿಸಿದರು.

ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲಾಗಿದೆಯೇ ಇಲ್ಲವೇ ಎಂದು ಖಾತ್ರಿಪಡಿಸಿಕೊಳ್ಳದೆ ಮುಡಾದವರು ಅನುಮೋದನೆ ನೀಡಿದ್ದಾರೆ. ನಕ್ಷೆಗಳನ್ನು ಉಲ್ಲಂಘಿಸಿ ಕೆಲವರು ಬೇಕಾಬಿಟ್ಟಿ ಮನೆ ನಿರ್ಮಿಸಿದ್ದಾರೆ, ಮತ್ತೆ ಕೆಲವರು ರಸ್ತೆಯನ್ನೆ ಒತ್ತುವರಿ ಮಾಡಿಕೊಂಡಿದ್ದಾರೆ. ಯುಜಿಡಿ ಮಾರ್ಗ ಅಳವಡಿಸಲು ದಾರಿಯೇ ಇಲ್ಲದಂತಾಗಿದೆ ಎಂದು ಜಿ.ಟಿ.ದೇವೇಗೌಡರು ಹೇಳಿದರು. ಇಷ್ಟೊಂದು ಅವ್ಯವಸ್ಥೆ ಇರುವ ಬಡಾವಣೆಗಳನ್ನು ನಾವು ಹಸ್ತಾಂತರಿಸಿಕೊಂಡು ಅಭಿವೃದ್ಧಿ ಮಾಡಲು ಸಾಧ್ಯವಿಲ್ಲ ಎಂದರು.

ಅಜ್ಜಯ್ಯನ ಕೆರೆ ಸೇರುತ್ತಿರುವ ಕಲುಷಿತ ನೀರು ತಡೆಯಲು 25 ಕೋಟಿ ಯೋಜನೆ

ನಗರದ ಅಜ್ಜಯ್ಯನಕೆರೆ ಸೇರುತ್ತಿರುವ ಕಲುಷಿತ ನೀರು ತಡೆಯಲು 25 ಕೋಟಿ ರೂಪಾಯಿಯ ಕ್ರಿಯಾ ಯೋಜನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಅನುಮೋದನೆ ದೊರೆಯಬೇಕಿದೆ ಎಂದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿ ಎಕ್ಸಿಕ್ಯೂಟಿವ್ ಇಂಜಿನಿಯರ್ ಆಸೀಫ್ ತಿಳಿಸಿದರು.

ಸೋಮನಾಥನಗರ, ಎಸ್ ಬಿಎಂ ಲೇಔಟ್, ಕೇರ್ಗಳ್ಳಿ, ಸಾಲುಂಡಿ ಮೂಲಕ ರಾಯನಕೆರೆಗೆ ಯುಜಿಡಿ ನೀರು ಸೇರಬೇಕು. ಆದರೆ ಈ ನೀರೆಲ್ಲಾ ಅಜ್ಜಯ್ಯನ ಕೆರೆಗೆ ಸೇರುತ್ತಿದೆ ಎಂದರು.

ಈ ಹಿನ್ನೆಲೆಯಲ್ಲಿ ಸಂಪರ್ಕ ಕಲ್ಪಿಸಬೇಕಿರುವ ಸ್ಥಳಗಳಲ್ಲಿ ಎಸ್‌ಟಿಪಿ ಪ್ಲಾಂಟ್ ಮಾಡಿ ಸಂಸ್ಕರಣೆಗೊಂಡ ನೀರು ರಾಯನಕೆರೆಗೆ ಸೇರಲು 25 ಕೋಟಿ ರೂಪಾಯಿ ಕ್ರಿಯಾ ಯೋಜನೆ ರೂಪಿಸಲಾಗಿದೆ. ಸರ್ಕಾರದಿಂದ ಅನುದಾನ ದೊರೆತು ಹಣ ಬಿಡುಗಡೆಯಾದರೆ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ಆಸೀಫ್ ಹೇಳಿದರು.

ಜೂನ್ 26 ರಂದು ಮೈಸೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಕೆಡಿಪಿ ಸಭೆ ನಡೆಯಲಿದೆ. ಅಲ್ಲಿ ಈ ವಿಚಾರ ಪ್ರಸ್ತಾಪ ಮಾಡುತ್ತೇನೆ. ಜೊತೆಗೆ ಬೆಂಗಳೂರಿನಲ್ಲಿ ನಗರಾಭಿವೃದ್ಧಿ ಕಾರ್ಯದರ್ಶಿ ಜೊತೆ ಕೂಡ ಈ ಸಂಬಂಧ ಚರ್ಚೆ ಮಾಡುತ್ತೇನೆ ಎಂದು ಜಿ.ಟಿ.ದೇವೇಗೌಡರು ತಿಳಿಸಿದರು.

ವಿಜಯನಗರ 4 ನೇ ಹಂತದಲ್ಲಿ ಸಂಗ್ರಹವಾಗುವ ಕಸವನ್ನು ಸಂಗ್ರಹಿಸಿ ಒಣ ಕಸ ಮತ್ತು ಹಸಿ ಕಸವೆಂದು ಬೇರ್ಪಡಿಸಲಾಗುವುದು. ಈ ಕಸ ಸ್ವೀಕರಿಸಲು ನಗರ ಪಾಲಿಕೆಯೇ ಒಂದು ಟನ್ ಕಸಕ್ಕೆ ಒಂದು ಸಾವಿರ ರೂಪಾಯಿ ನಿಗದಿ ಮಾಡಿದೆ. ನಗರ ಪಾಲಿಕೆ ಕೇಳಿದಷ್ಟು ಹಣ ಕೊಟ್ಟರೂ ಕಸ ಸ್ವೀಕರಿಸುತ್ತಿಲ್ಲ ಎಂದು ಅಸಿಸ್ಟೆಂಟ್ ಇಂಜಿನಿಯರ್ ಅಶ್ವಿನಿ ತಿಳಿಸಿದರು.

ಈ ಸಂಬಂಧ ನಗರ ಪಾಲಿಕೆ ಆಯುಕ್ತ ಅಸಾದ್ ಉರ್ ರೆಹಮಾನ್ ಷರೀಫ್ ಜೊತೆ ಚರ್ಚಿಸಿ ಕೂಡಲೇ ಸಮಸ್ಯೆ ಇತ್ಯರ್ಥ ಮಾಡುವಂತೆ ಮುಖ್ಯಾಧಿಕಾರಿಗಳಿಗೆ ಜಿ.ಟಿ.ದೇವೇಗೌಡರು ಸೂಚಿಸಿದರು.

ಚನ್ನಪಟ್ಟಣ ಉಪ ಚುನಾವಣೆ ಡಿ.ಕೆ.ಶಿವಕುಮಾರ್ ಸ್ಪರ್ಧಿಸಲ್ಲ

ಶಾಸಕ ಜಿ.ಟಿ.ದೇವೇಗೌಡರ ಅಚ್ಚರಿ ಹೇಳಿಕೆ



ಮೈಸೂರು, ಜೂ.21(ಬಿಎಲ್‌ಯು)– ಚನ್ನಪಟ್ಟಣ ಕ್ಷೇತ್ರದ ಉಪ ಚುನಾವಣೆಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪರ್ಧೆ ಮಾಡುವುದಿಲ್ಲ ಎಂದು ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರೂ ಆದ ಶಾಸಕ ಜಿ.ಟಿ.ದೇವೇಗೌಡ ಅಚ್ಚರಿ ಹೇಳಿಕೆ ನೀಡಿದ್ದಾರೆ.

ನಗರದ ಜಲದರ್ಶಿನಿ ಅತಿಥಿ ಗೃಹದಲ್ಲಿ ಇಂದು ಪತ್ರಕರ್ತರ ಜೊತೆ ಮಾತನಾಡಿದ ಅವರು, ಚನ್ನಪಟ್ಟಣದಲ್ಲಿ ಸ್ಪರ್ಧೆ ಮಾಡುತ್ತೇನೆ ಎಂಬ ಡಿ.ಕೆ.ಶಿವಕುಮಾರ್ ಅವರ ಮಾತಿನಲ್ಲಿ ರಾಜಕೀಯ ತಂತ್ರಗಾರಿಕೆ ಇದೆ ಎಂದು ಹೇಳಿದರು.

ತಮ್ಮ ಸಹೋದರ ಡಿ.ಕೆ.ಸುರೇಶ್ ಸ್ಪರ್ಧೆಗೆ ಇಳಿಸಲು ನಿರ್ಧರಿಸಿದ್ದಾರೆ. ತಾವು ಸ್ಪರ್ಧೆ ಮಾಡುತ್ತೇನೆ ಎಂದೇಳಿದರೆ ಜನರು ಹೆಚ್ಚು ಮತ ಹಾಕುತ್ತಾರೆ ಎಂಬ ರಾಜಕೀಯ ತಂತ್ರಗಾರಿಕೆ ಉದ್ದೇಶದಿಂದ ಡಿ.ಕೆ.ಶಿವಕುಮಾರ್ ಈ ಮಾತು ಹೇಳುತ್ತಿದ್ದಾರೆ. ಇದು ನನ್ನ ರಾಜಕೀಯ ಅನುಭವದ ಮಾತು ಎಂದು ತಿಳಿಸಿದರು.

ಚನ್ನಪಟ್ಟಣ ಕ್ಷೇತ್ರದ ಉಪ ಚುನಾವಣೆ ಅಖಾಡ ಎಲ್ಲಾ ಕ್ಷೇತ್ರಗಳಿಗಿಂತ ಬಹಳ ಜೋರಾಗಲಿದೆ. ಜಿದ್ದಾ ಜಿದ್ದಿನ ಪೈಪೋಟಿ ಎದುರಾಗಲಿದೆ ಎಂದು ಜಿ.ಟಿ.ದೇವೇಗೌಡರು ಅಭಿಪ್ರಾಯಪಟ್ಟರು.

ನಾನೆ ಸ್ಪರ್ಧೆ ಮಾಡುತ್ತೇನೆ ಎಂದು ನಿಖಿಲ್ ಕುಮಾರಸ್ವಾಮಿ ಎಲ್ಲೂ ಹೇಳಿಲ್ಲ. ಜನರ ಒಲವು ನನ್ನ ಪರವಾಗಿದೆ ಎಂದು ಸಿ.ಪಿ. ಯೋಗೇಶ್ವರ್ ಹೇಳಿದ್ದಾರೆ. ಅಭ್ಯರ್ಥಿ ಆಯ್ಕೆ ಸಂಬಂಧ ಮೈತ್ರಿ ಪಕ್ಷದ ನಾಯಕರು ತೀರ್ಮಾನ ಮಾಡುತ್ತಾರೆ ಎಂದರು.

ಆದರೆ ಎಲ್ಲಾ ಉಪ ಚುನಾವಣೆಗಳು ಸರ್ಕಾರದ ಪರವಾಗಿಯೇ ಇರುವುದಿಲ್ಲ. ಒಂದೊಂದು ರೀತಿಯ ಟ್ರೆಂಡ್‌ನಲ್ಲಿ ಚುನಾವಣೆ ನಡೆಯುತ್ತದೆ. ಜೆಡಿಎಸ್ ಪಕ್ಷದ ಅಭ್ಯರ್ಥಿ ಯಾರು ಎಂದು ನಾವು ಇನ್ನು ತೀರ್ಮಾನ ಮಾಡಿಲ್ಲ. ಕೋರ್ ಕಮಿಟಿಯಲ್ಲಿ ಈ ಬಗ್ಗೆ ತೀರ್ಮಾನ ಮಾಡಲಿದ್ದು, ನನ್ನ ವೈಯುಕ್ತಿಕ ಅಭಿಪ್ರಾಯವನ್ನು ಹೇಳುವುದಿಲ್ಲ ಎಂದು ಜಿ.ಟಿ.ದೇವೇಗೌಡರು ಸ್ಪಷ್ಟಪಡಿಸಿದರು.

ಪೊಲೀಸರ ಮೇಲಿನ ಗೌರವ, ನಂಬಿಕೆ ಹೆಚ್ಚಾಗಿದೆ

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ದರ್ಶನ್ ಮತ್ತು ಸಹಚರರನ್ನು ಬಂಧಿಸಿರುವ ಪೊಲೀಸರು ಉತ್ತಮ ರೀತಿಯಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ಶಾಸಕ ಜಿ.ಟಿ.ದೇವೇಗೌಡರು ಅಭಿಪ್ರಾಯಪಟ್ಟರು.

ಈ ಪ್ರಕರಣದಲ್ಲಿ ಪೊಲೀಸರ ಕಾರ್ಯ ವೈಖರಿಯಿಂದ ಜನರಿಗೆ ಅವರ ಮೇಲಿನ ಗೌರವ ಭಾವನೆ ಹಾಗೂ ನಂಬಿಕೆ ಹೆಚ್ಚಾಗಿದೆ ಎಂದರು.

ಈ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ಮಾಡಿದ್ದಾರೆ. ದರ್ಶನ್ ಪರ ಯಾರೂ ಮಾತನಾಡದಂತೆ ಸಚಿವರು ಹಾಗೂ ತಮ್ಮ ಪಕ್ಷದ ನಾಯಕರಿಗೆ ತಾಕೀತು ಮಾಡಿದ್ದಾರೆ ಎಂದು ಹೇಳಿದರು. ಈ ಪ್ರಕರಣದಲ್ಲಿ ಯಾರು ತಪ್ಪು ಮಾಡಿದ್ದಾರೋ ಅವರಿಗೆ ಖಂಡಿತ ಶಿಕ್ಷೆ ಆಗಬೇಕು ಎಂದು ಜಿ.ಟಿ.ದೇವೇಗೌಡರು ಆಗ್ರಹಿಸಿದರು.

ಆಧುನಿಕ ತಂತ್ರಜ್ಞಾನದಿಂದ ಕಬ್ಬು ಇಳುವರಿ ಹೆಚ್ಚಾಗಿ ಪಡೆಯಬಹುದು

ಕಬ್ಬು ತಳಿ ಸಂಸ್ಥೆ ನಿರ್ದೇಶಕಿ ಡಾ.ಜಿ.ಹೇಮಪ್ರಭಾ ಅಭಿಮತ



ದಕ್ಷಿಣ ಕರ್ನಾಟಕದ 22ನೇ ಕಬ್ಬು ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಐಸಿಎಆರ್–ಕಬ್ಬು ತಳಿ ಸಂಸ್ಥೆ ನಿರ್ದೇಶಕಿ ಡಾ.ಜಿ.ಹೇಮಪ್ರಭಾ ಮಾತನಾಡಿದರು

ಮೈಸೂರು, ಜೂ.21(ಎಂಕೆ)– ಆಧುನಿಕ ತಂತ್ರಜ್ಞಾನದ ಅಳವಡಿಕೆ, ನೀರು ಹಾಗೂ ನ್ಯಾನೋ ಗೊಬ್ಬರಗಳ ಸದ್ಬಳಕೆಯಿಂದ ಕಬ್ಬಿನ ಹೆಚ್ಚುವರಿ ಇಳುವರಿ ಪಡೆಯಲು ಸಾಧ್ಯ ಎಂದು ಕೊಯಮುತ್ತೂರಿನ ಐಸಿಎಆರ್ (ಇಂಡಿಯನ್ ಕೌನ್ಸಿಲ್ ಆಫ್ ಅಗ್ರಿಕಲ್ಚರಲ್ ರಿಸರ್ಚ್)–ಕಬ್ಬು ತಳಿ ಸಂಸ್ಥೆ ನಿರ್ದೇಶಕಿ ಡಾ.ಜಿ.ಹೇಮಪ್ರಭಾ ಹೇಳಿದರು.

ಮೈಸೂರು ವಿವಿ ಮಾನಸ ಗಂಗೋತ್ರಿಯ ರಾಣಿ ಬಹದ್ದೂರ್ ಸಭಾಂಗಣದಲ್ಲಿ ಕೆ.ಆರ್.ಪೇಟೆಯ ಕೋರಮಂಡಲ್ ಸಕ್ಕರೆ ಕಾರ್ಖಾನೆ, ಮಂಡ್ಯದ ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಕೇಂದ್ರ, ಬೆಳಗಾವಿಯ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ ಸಹಯೋಗದಲ್ಲಿ ಆಯೋಜಿಸಿದ್ದ ದಕ್ಷಿಣ ಕರ್ನಾಟಕದ 22ನೇ ಕಬ್ಬು ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಾಗಾರದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಬರಗಾಲದಲ್ಲಿ ಮಣ್ಣಿನ ಫಲವತ್ತತೆ ಉಳಿಸಿಕೊಂಡು ಉತ್ತಮ ಇಳುವರಿ ಪಡೆಯುವುದರ ಕಡೆಗೆ ರೈತರು ಗಮನ ಹರಿಸುವಂತೆ ಕ್ಷೇತ್ರ ಸಿಬ್ಬಂದಿ ಮಾರ್ಗದರ್ಶನ ನೀಡುವಂತೆ ಸಲಹೆ ನೀಡಿದರು.

ನೀರಿನ ಪೂರೈಕೆ ಕಡಿಮೆ ಇದ್ದಾಗ ಮಣ್ಣಿನಲ್ಲಿ ಲವಣಾಂಶಗಳು ಕಡಿಮೆಯಾಗಲಿದೆ. ಮುಖ್ಯವಾಗಿ ನೈಟ್ರೋಜನ್ ಬಳಕೆ ಕಡಿಮೆ ಮಾಡಬೇಕು. ಸಾಧ್ಯವಾದಷ್ಟು ಹನಿ ನೀರಾವರಿ ಸೇರಿದಂತೆ ಆಧುನಿಕ ಕೃಷಿ ಪದ್ಧತಿ ಅಳವಡಿಸಿಕೊಳ್ಳುವಂತೆ ರೈತರಿಗೆ ತಿಳಿಹೇಳಬೇಕು ಎಂದು ತಿಳಿಸಿದರು.

ಕೆ.ಆರ್.ಪೇಟೆಯ ಕೋರಮಂಡಲ್ ಸಕ್ಕರೆ ಕಾರ್ಖಾನೆಯ ಹಿರಿಯ ಉಪಾಧ್ಯಕ್ಷ ವಿ.ಜೆ.ರವಿ ಮಾತನಾಡಿ, ಎರಡು ದಿನಗಳ ಕಾರ್ಯಾಗಾರದಲ್ಲಿ ಕಬ್ಬು ಬೆಳೆ, ಹೆಚ್ಚಿನ ಇಳುವರಿ ಪಡೆಯುವ ವಿಧಾನ, ತಂತ್ರಜ್ಞಾನ ಅಳವಡಿಕೆ ಸೇರಿದಂತೆ ಸಾಕಷ್ಟು ಮಾಹಿತಿ ಪಡೆದಿರುವ ಕ್ಷೇತ್ರ ಸಿಬ್ಬಂದಿಗಳು ಫೀಲ್ಡ್‌ನಲ್ಲಿ ತಮ್ಮ ಕಲಿಕೆಯನ್ನು ಪ್ರಯೋಗಿಸಿ, ರೈತರಿಗೆ ಅನುಕೂಲವಾಗುವಂತೆ ಸಲಹೆಗಳನ್ನು ನೀಡಿ ಎಂದರು.

ಮಂಡ್ಯ ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶ್ರೀಹರ್ಷ ಮಾತನಾಡಿ, ಸಕ್ಕರೆ ನಾಡು ಎಂದೇ ಖ್ಯಾತಿ ಪಡೆದಿರುವ ಮಂಡ್ಯದಲ್ಲಿ 30–35 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಕಬ್ಬು ಬೆಳೆಯಲಾಗುತ್ತದೆ. ಕಳೆದ ವರ್ಷ ಇಳುವರಿ ಕಡಿಮೆಯಾಗಿದೆ. ಈ ವರ್ಷ ಉತ್ತಮ ಇಳುವರಿಗಾಗಿ ಸೂಕ್ತ ಮಾರ್ಗದರ್ಶನದ ಅವಶ್ಯಕತೆ ಇದೆ ಎಂದು ತಿಳಿಸಿದರು. ಕೃಷಿ ಇಲಾಖೆ ನಿವೃತ್ತ ಜಂಟಿ ನಿರ್ದೇಶಕ ವಿಷಕಂಠ, ಮಂಡ್ಯ ವಿ.ಸಿ.ಫಾರಂನ ಎಡಿಆರ್ ಶಿವಕುಮಾರ್, ಬೆಳಗಾವಿ ಎಸ್‌ಎನ್‌ಎಸ್‌ಐನ ಎನ್.ಆರ್.ಯುಕ್ಕಲೆ, ನಾಗರಾಜು ಮತ್ತಿತರರು ಉಪಸ್ಥಿತರಿದ್ದರು.

ಅಂತರರಾಷ್ಟ್ರೀಯ ಯೋಗ ದಿನಾಚರಣೆ



ಅಂತರರಾಷ್ಟ್ರೀಯ ಯೋಗ ದಿವಸ್ ಅಂಗವಾಗಿ ನರಸಿಂಹರಾಜ ಕ್ಷೇತ್ರದಲ್ಲಿ ಬಿಜೆಪಿಯಿಂದ ಯೋಗ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಈ ಕಾರ್ಯಕ್ರಮದಲ್ಲಿ ಮಾಜಿ ಮೇಯರ್ ಸಂದೇಶ್ ಸ್ವಾಮಿ, ಪಕ್ಷದ ಮೈಸೂರು ನಗರ ಪ್ರಧಾನ ಕಾರ್ಯದರ್ಶಿ ಗಿರಿಧರ್, ಕ್ಷೇತ್ರದ ಅಧ್ಯಕ್ಷ ಮಂಜುನಾಥ್, ಪದ್ಮನಾಭ, ಮಂಜು ಸಿ, ಶಿವಕುಮಾರ್, ಮಾಲಿನಿ, ಪಾಲಾಕ್ಷ, ಕವಿತಾ ಸಿಂಗ್, ಉಮಾ, ಸ್ವಾಮಿ, ಕಾರ್ತಿಕ್, ಸಿಂಗ್, ಯಶ್ವಂತ್ ಸಿಂಗ್, ಶಿವಾನಂದ್ ರಾವ್, ನವೀನ್, ಪ್ರಕಾಶ್, ಸತೀಶ್, ಕೃಷ್ಣಮೂರ್ತಿ ಮುಂತಾದವರು ಉಪಸ್ಥಿತರಿದ್ದರು.

ಜುಲೈ 1ರಿಂದ ದುಬಾರಿ ಮದ್ಯ ಕಡಿಮೆಗೆ ಸಿಗಲಿದೆ!

ಬೆಂಗಳೂರು, ಜೂ.21– ಜುಲೈ 1 ರಿಂದ ಕರ್ನಾಟಕದಲ್ಲಿ ಪ್ರೀಮಿಯಂ ಮದ್ಯದ ಬೆಲೆಗಳು ಭಾರಿ ಇಳಿಕೆಯಾಗಲಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್‌ನಲ್ಲಿ ಘೋಷಿಸಿದಂತೆ, ರಾಜ್ಯ ಸರ್ಕಾರವು ಗುರುವಾರ ಕರಡು ಅಧಿಸೂಚನೆ ಹೊರಡಿಸಿದೆ.

ನೆರೆಹೊರೆಯ ರಾಜ್ಯಗಳಲ್ಲಿನ ಮದ್ಯದ ಬೆಲೆಗೆ ಅನುಗುಣವಾಗಿ ಕರ್ನಾಟಕದಲ್ಲೂ ಸೆಮಿ ಪ್ರೀಮಿಯಂ ಮತ್ತು ಪ್ರೀಮಿಯಂ ಬ್ರಾಂಡ್‌ಗಳ ಮದ್ಯದ ಬೆಲೆಯನ್ನು ಪರಿಷ್ಕರಿಸುವುದಾಗಿ ಸರಕಾರ ಬಜೆಟ್‌ನಲ್ಲೇ ಘೋಷಿಸಿತ್ತು. ಈ ಘೋಷಣೆ ಈಗ ಜಾರಿಯಾಗುತ್ತಿದ್ದು, ಹೊರ ರಾಜ್ಯಗಳಲ್ಲಿನ ಮದ್ಯದ ದರಪಟ್ಟಿ ಆಧರಿಸಿ ಹೊಸದಾಗಿ ಬೆಲೆ ನಿಗದಿಪಡಿಸಲಾಗಿದೆ.

ಅಧಿಸೂಚನೆಯ ಪ್ರಕಾರ, ಹೊಸ ಬೆಲೆಗಳು ಜುಲೈ 1 ರಿಂದ ಜಾರಿಗೆ ಬರಲಿವೆ. ಅಬಕಾರಿ ಇಲಾಖೆಯು 16 ವರ್ಗಗಳ ಮದ್ಯದ ಮೇಲಿನ ಅಬಕಾರಿ ಸುಂಕವನ್ನು ಕಡಿತಗೊಳಿಸಲು ಆಕ್ಷೇಪಣೆಗಳನ್ನು ಆಹ್ವಾನಿಸಿದೆ. ಜುಲೈ 1 ರಿಂದ ಬ್ರಾಂಡ್‌ಗಳ ಆಧಾರದ ಮೇಲೆ ಬೆಲೆಗಳು 100 ರಿಂದ 2,000 ರೂ.ವರೆಗೆ ಕಡಿಮೆಯಾಗಲಿವೆ ಎಂದು ಸರ್ಕಾರದ ಮೂಲಗಳು ತಿಳಿಸಿವೆ. ಬ್ರಾಂಡಿ, ವಿಸ್ಕಿ, ಜಿನ್, ರಮ್ ಮತ್ತು – ಬಿಯರ್, ವೈನ್, ಟಾಡಿ ಮತ್ತು ಫೆನ್ನಿ ಹೊರತುಪಡಿಸಿ ಇತರ ಮದ್ಯದ ಬೆಲೆಗಳು ಕಡಿಮೆಯಾಗಲಿದೆ ಎಂದು ಮೂಲಗಳು ತಿಳಿಸಿವೆ. ನಿಖರವಾದ ಕಡಿತವು ಬ್ರಾಂಡ್ ಮತ್ತು ಪ್ರಮಾಣವನ್ನು ಅವಲಂಬಿಸಿರುತ್ತದೆ.

ಅಗ್ಗದ ಮದ್ಯ ದುಬಾರಿ: ಬಜೆಟ್‌ನಲ್ಲಿ ಪ್ರಕಟಿಸಿದಂತೆ ಜುಲೈ ಒಂದರಿಂದ ರಾಜ್ಯದಲ್ಲಿ ಮದ್ಯದ ಬೆಲೆಗಳಲ್ಲಿ ಏರಿಳಿತ ಆಗಲಿದೆ. ಅಗ್ಗದ ಬೆಲೆಯ ಮದ್ಯಗಳು ದುಬಾರಿಯಾದರೆ ದುಬಾರಿ ಮದ್ಯಗಳ ದರದಲ್ಲಿ ಸ್ವಲ್ಪ ಪ್ರಮಾಣದ ಇಳಿಕೆ ಆಗಲಿದೆ. ಅಗ್ಗದ ಮದ್ಯದ ಬೆಲೆ ಹೆಚ್ಚಿಸುವ ಈ ಮೂಲಕ ಬಡ ಎಣ್ಣೆ ಪ್ರಿಯರ ಮೇಲೆ ಮತ್ತಷ್ಟು ಭಾರ ಹಾಕಲು ಸರ್ಕಾರ ಮುಂದಾಗಿದೆ. ಈ ಸಂಬಂಧ ಸರ್ಕಾರ ಅಧಿಸೂಚನೆ ಹೊರಡಿಸಿದೆ.

ಪರೀಕ್ಷೆಗೂ ಒಂದು ದಿನ ಮುಂಚೆ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ

ತಪ್ಪೊಪ್ಪಿಕೊಂಡ ಬಂಧಿತ ವಿದ್ಯಾರ್ಥಿ

ಪಾಟ್ನಾ, ಜೂ.21– 2024 ಸಾಲಿನ ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಆರೋಪದ ನಡುವೆ, ಸಮಸ್ತಿಪುರದ ಅಭ್ಯರ್ಥಿಯೊಬ್ಬರು ಈ ವರ್ಷದ ಮೇನಲ್ಲಿ ನಡೆದ ಪರೀಕ್ಷೆಗೆ ಒಂದು ದಿನ ಮೊದಲು ತನ್ನ ಚಿಕ್ಕಪ್ಪನಿಂದ ಸೋರಿಕೆಯಾದ ಪ್ರಶ್ನೆ ಪತ್ರಿಕೆ ಪಡೆದಿರುವುದಾಗಿ ಒಪ್ಪಿಕೊಂಡಿರುವುದಾಗಿ ಪೊಲೀಸರು ತಿಳಿಸಿದ್ದಾರೆ.

22 ವರ್ಷದ ಅನುರಾಗ್ ಯಾದವ್ ಪಾಟ್ನಾ ಪೊಲೀಸರಿಗೆ ನೀಡಿದ ತಪ್ಪೊಪ್ಪಿಗೆ ಪತ್ರದಲ್ಲಿ, ಪರೀಕ್ಷೆಗೆ ಎಲ್ಲಾ ವ್ಯವಸ್ಥೆ ಮಾಡಲಾಗಿದೆ ಎಂದು ಹೇಳಿ ತನ್ನ ಚಿಕ್ಕಪ್ಪ ರಾಜಸ್ಥಾನದ ಕೋಟಾದಿಂದ ಬಿಹಾರದ ಸಮಸ್ತಿಪುರ್‌ಗೆ ಕರೆಸಿಕೊಂಡಿದ್ದರು ಎಂದು ಹೇಳಿದ್ದಾರೆ.

ಅನುರಾಗ್ ಯಾದವ್ ಅವರ ಚಿಕ್ಕಪ್ಪ ಸಿಕಂದರ್ ಪ್ರಸಾದ್ ಯಾದವ್, ಬಿಹಾರದ ದಾನಪುರ ಟೌನ್ ಕೌನ್ಸಿಲ್(ದಾನಪುರನಗರ ಪರಿಷತ್)ನಲ್ಲಿ ಎಂಜಿನಿಯರ್ ಆಗಿದ್ದು, ಸಮಸ್ತಿಪುರಕ್ಕೆ ಹಿಂತಿರುಗುವಂತೆ ಕೇಳಿಕೊಂಡಿದ್ದಾರೆ.

ಮೇ 5ರಂದು ನಡೆದ ಪರೀಕ್ಷೆಯ ಮುನ್ನಾ ದಿನದಂದು ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಮತ್ತು ಉತ್ತರ ಪತ್ರಿಕೆಯನ್ನು ತನಗೆ ನೀಡಲಾಗಿತ್ತು ಮತ್ತು ಉತ್ತರಗಳನ್ನು ನೆನಪಿಟ್ಟುಕೊಳ್ಳುವಂತೆ ಮಾಡಲಾಯಿತು ಎಂದು ಅನುರಾಗ್ ಪೊಲೀಸರಿಗೆ ನೀಡಿದ ತಪ್ಪೊಪ್ಪಿಗೆ ಪತ್ರದಲ್ಲಿ ತಿಳಿಸಿದ್ದಾರೆ.

ನಾನು ಕೋಟಾದಿಂದ ಹಿಂದಿರುಗಿದೆ ಮತ್ತು 2024ರ ಮೇ 4ರ ರಾತ್ರಿ ನನ್ನ ಚಿಕ್ಕಪ್ಪ ಅಮಿತ್ ಆನಂದ್ ಮತ್ತು ನಿತೀಶ್ ಕುಮಾರ್ ಅವರ ಬಳಿಗೆ ಕರೆದೊಯ್ದರು. ಅಲ್ಲಿ ನನಗೆ ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಮತ್ತು ಉತ್ತರ ಪತ್ರಿಕೆಯನ್ನು ನೀಡಲಾಯಿತು. ಅದನ್ನು ರಾತ್ರಿಯಿಡೀ ಓದಲು ಮತ್ತು ಉತ್ತರಗಳನ್ನು ನೆನಪಿಟ್ಟುಕೊಳ್ಳುವಂತೆ ಸೂಚಿಸಿದರು. ಡಿವೈ ಪಾಟೀಲ್ ಶಾಲೆ ನನ್ನ ಪರೀಕ್ಷಾ ಕೇಂದ್ರವಾಗಿತ್ತು ಎಂದು ಯಾದವ್ ಹೇಳಿದ್ದಾರೆ.

NEET ಆಕಾಂಕ್ಷಿಯು ಪರೀಕ್ಷೆಯ ದಿನದಂದು ನಿಜವಾದ ಪ್ರಶ್ನೆ ಪತ್ರಿಕೆಯನ್ನು ನೋಡಿದಾಗ, ತನ್ನ ಚಿಕ್ಕಪ್ಪ ತನಗೆ ನೀಡಿದ ಪ್ರಶ್ನೆ ಪತ್ರಿಕೆಯೊಂದಿಗೆ ಹೋಲಿಕೆಯಾಯಿತು.

ನನ್ನ ಪರೀಕ್ಷಾ ಕೇಂದ್ರದಲ್ಲಿ ನಾನು ಸ್ವೀಕರಿಸಿದ ಪ್ರಶ್ನೆ ಪತ್ರಿಕೆ ಮತ್ತು ಮೇ 4ರ ರಾತ್ರಿ ನನಗೆ ನೀಡಿದ ಪ್ರಶ್ನೆ ಪತ್ರಿಕೆ ಎರಡೂ ಒಂದೇ ಆಗಿತ್ತು. ನಾನು ಅಪರಾಧದಲ್ಲಿ ಭಾಗಿಯಾಗಿರುವುದನ್ನು ಒಪ್ಪಿಕೊಳ್ಳುತ್ತೇನೆ ಎಂದು ಅನುರಾಗ್ ಯಾದವ್ ತಿಳಿಸಿದ್ದಾರೆ.

ಮಳೆ ಅವಾಂತರ ತಪ್ಪಿಸಲು ಸೂಕ್ತ ತಯಾರಿ ಮಾಡಿಕೊಳ್ಳಿ

ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲಿಕೆ ಅಧಿಕಾರಿಗಳಿಗೆ ಶಾಸಕ ಕೆ.ಹರೀಶ್‌ಗೌಡ ಸೂಚನೆ



ಮೈಸೂರು ನಗರ ಪಾಲಿಕೆ ಹಳೇ ಕೌನ್ಸಿಲ್ ಸಭಾಂಗಣದಲ್ಲಿ ಶಾಸಕ ಕೆ.ಹರೀಶ್‌ಗೌಡರ ಅಧ್ಯಕ್ಷತೆಯಲ್ಲಿ ಚಾಮರಾಜ ವಿಧಾನಸಭಾ ಕ್ಷೇತ್ರದ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಮೈಸೂರು, ಜೂ.21(ಆರ್‌ಕೆ)– ಮಳೆಯಿಂದಾಗುವ ಅವಾಂತರ ತಪ್ಪಿಸಲು ಸಿದ್ಧತೆ ಮಾಡಿಕೊಳ್ಳಿ ಎಂದು ಶಾಸಕ ಕೆ.ಹರೀಶ್ ಗೌಡ, ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮೈಸೂರು ಮಹಾನಗರ ಪಾಲಿಕೆ ಹಳೇ ಕೌನ್ಸಿಲ್ ಸಭಾಂಗಣದಲ್ಲಿ ಶುಕ್ರವಾರ ತಾವು ಪ್ರತಿನಿಧಿಸುವ ಚಾಮರಾಜ ಕ್ಷೇತ್ರದ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಮಳೆಯಿಂದಾಗುವ ಅವಾಂತರ ಹಾಗೂ ಅನಾಹುತಗಳನ್ನು ತಪ್ಪಿಸಲು ನಿಟ್ಟಿನಲ್ಲಿ ಪಾಲಿಕೆ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ಪಡೆದು, ತ್ವರಿತವಾಗಿ ಸಿದ್ಧತೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಭಾರೀ ಮಳೆ ಸುರಿದಾಗ ಚರಂಡಿಗಳಲ್ಲಿ ನೀರು ತುಂಬಿ, ಮನೆಗಳಿಗೂ ನುಗ್ಗಿ ಅವಾಂತರವಾಗುತ್ತದೆ. ಆದರೆ ಮುಂಚಿತವಾಗಿಯೇ ಚರಂಡಿ ಹೂಳೆತ್ತಿದ್ದರೆ ಈ ಸಮಸ್ಯೆಯನ್ನು ಆದಷ್ಟು ತಡೆಯಬಹುದು. ರಾಜಕಾಲುವೆಗಳಲ್ಲಿ ಹೂಳು ತೆಗೆಯಬೇಕು, ಚರಂಡಿ ಸ್ವಚ್ಛಗೊಳಿಸಿ ಮಳೆ ನೀರು ಸರಾಗವಾಗಿ ಹರಿಯಲು ಕ್ರಮ ವಹಿಸಬೇಕು. ರಸ್ತೆಯಲ್ಲಿ ಮಳೆ ನೀರು ನಿಲ್ಲದಂತೆ ನಿರ್ವಹಣೆ ಮಾಡಬೇಕು. ಮಳೆ ನೀರು ಚರಂಡಿ ದುರಸ್ಥಿಯಾಗಬೇಕಿದಲ್ಲಿ ಅದು ಜರೂರಾಗಿ ಆಗಬೇಕು. ಮಳೆ–ಗಾಳಿಯಿಂದ ಬೀಳಬಹುದಾದ ದುರ್ಬಲ ರೆಂಬೆ–ಕೊಂಬೆಗಳನ್ನು ಗುರುತಿಸಿ, ಅರಣ್ಯ ಇಲಾಖೆಯವರೊಂದಿಗೆ ಸಮನ್ವಯತೆಯಿಂದ ತೆರವು ಕಾರ್ಯಾಚರಣೆ ನಡೆಸಬೇಕು ಎಂದು ಸೂಚನೆ ನೀಡಿದರು.

ಕೆಲವು ಪ್ರದೇಶಗಳಲ್ಲಿ ಸೊಳ್ಳೆ ಕಾಟ ವಿಪರೀತವಾಗಿದ್ದು, ಜನ ಸಾಂಕ್ರಾಮಿಕ ರೋಗಗಳ ಭೀತಿಯಲ್ಲಿದ್ದಾರೆ. ಎಲ್ಲಾ ವಾರ್ಡ್‌ಗಳಲ್ಲೂ ಸೊಳ್ಳೆ ನಿಯಂತ್ರಣಕ್ಕೆ ಫಾಗಿಂಗ್ ಮಾಡಿಸಿ. ಅವೈಜ್ಞಾನಿಕ ವಿದ್ಯುತ್ ವೈರ್‌ಗಳನ್ನು ತೆರವುಗೊಳಿಸಿ, ಹೊಸ ವೈರ್ ಅಳವಡಿಸಲು ಕ್ರಮ ವಹಿಸಿ.

ಶುದ್ಧ ಕುಡಿಯುವ ನೀರು ಸರಬರಾಜು, ಬೋರ್‌ವೆಲ್‌ಗಳ ದುರಸ್ತಿ, ನೀರಿನ ಘಟಕಗಳ ರಿಪೇರಿ ಮಾಡಿಸಬೇಕು. ಶುದ್ಧ ಕುಡಿಯುವ ನೀರು ಪೂರೈಕೆಗೆ ಆದ್ಯತೆ ನೀಡಬೇಕು. ಅಗತ್ಯವಿದ್ದರೆ ನಿಯಮಾನುಸಾರ ಹೊಸ ಬೋರ್‌ವೆಲ್ ತೆಗೆಸಿ, ಸಮರ್ಪಕವಾಗಿ ನೀರು ಪೂರೈಸಬೇಕು. ಹಲವೆಡೆ ಶುದ್ಧ ಕುಡಿಯುವ ನೀರಿನ ಘಟಕಗಳು ನಿರ್ವಹಣೆ ಇಲ್ಲದೆ ಕೆಟ್ಟಿವೆ. ಕೂಡಲೇ ಅವುಗಳನ್ನು ರಿಪೇರಿ ಮಾಡಿಸಿ. ಯಾವುದೇ ಕಾರಣಕ್ಕೂ ನೀರಿಗೆ ಸಮಸ್ಯೆಯಾಗದಂತೆ ನಿರ್ವಹಿಸುವುದು ವಾಣಿವಿಲಾಸ ನೀರು ಸರಬರಾಜು ಕೇಂದ್ರದ ಅಧಿಕಾರಿಗಳ ಜವಾಬ್ದಾರಿ ಎಂದು ತಿಳಿಸಿದರು.

ಸರ್ಕಾರದಿಂದ ವಿವಿಧ ಯೋಜನೆಗಳಡಿ ಬರುವ ಅನುದಾನವನ್ನು ಫಲಾನುಭವಿಗಳಿಗೆ ತಲುಪಿಸಿ. ಪಾಲಿಕೆ ವತಿಯಿಂದ ಶೇ.24.10 ಹಾಗೂ 7.25ರ ಯೋಜನೆಯ ಸೌಲಭ್ಯಗಳು ಸಾರ್ವಜನಿಕರಿಗೆ ಸಮರ್ಪಕವಾಗಿ ತಲುಪುತ್ತಿಲ್ಲ ಎಂಬ ದೂರಿದೆ ಫಲಾನುಭವಿಗಳ ಆಯ್ಕೆಯಲ್ಲಿ ಯಾವುದೇ ತಾರತಮ್ಯ ಮಾಡದೆ ಅರ್ಹರನ್ನು ಮಾತ್ರ ಪರಿಗಣಿಸಬೇಕು. ಖಾತೆ, ಕಂದಾಯ ಸಂಬಂಧ ಸಾರ್ವಜನಿಕರನ್ನು ಅಲೆದಾಡುವಂತೆ ಮಾಡಬೇಡಿ. ನಿಗದಿತ ಸಮಯದಲ್ಲಿ ಸಾರ್ವಜನಿಕರ ಕೆಲಸ ಮಾಡಿಕೊಡುವುದು ಆಯಾ ವಲಯ ಕಚೇರಿ ಆಯುಕ್ತರ ಜವಾಬ್ದಾರಿ ಎಂದರು.

ಕೆಲವೆಡೆ ಇಂದಿರಾ ಕ್ಯಾಂಟೀನ್ ಸ್ಥಗಿತಗೊಂಡಿದ್ದು, ಪರಿಶೀಲಿಸಿ ಕ್ರಮ ಕೈಗೊಳ್ಳಿ. ಮೇಟಗಳ್ಳಿ ಕರಕುಶಲ ನಗರ, ರಾಜರಾಜೇಶ್ವರಿನಗರ, ಮೇದರ ಬ್ಲಾಕ್, ಗೋಕುಲಂಗಳಲ್ಲಿ ನಿರ್ಮಿಸಿರುವ ನರ್ಮ್ ಮನೆಗಳನ್ನು ಪಾಲಿಕೆಗೆ ಹಸ್ತಾಂತರಿಸಿಕೊಂಡು ಮೂಲ ಸೌಲಭ್ಯ ಕಲ್ಪಿಸುವುದರೊಂದಿಗೆ, ಫಲಾನುಭವಿಗಳಿಗೆ ಮನೆಗಳ ಖಾತೆ ಮಾಡಿಕೊಡಲು ಕ್ರಮ ವಹಿಸಿ ಎಂದು ಶಾಸಕರು ಸೂಚಿಸಿದರು. ಈ ವೇಳೆ ಸಭೆಯಲ್ಲಿ ಹಾಜರಿದ್ದ ಕೊಳಚೆ ನಿರ್ಮೂಲನಾ ಮಂಡಳಿಯ ಅಧಿಕಾರಿಗಳು, ಪೂರ್ಣ ವಿವರಗಳೊಂದಿಗೆ ಪಾಲಿಕೆಗೆ ಹಸ್ತಾಂತರಿಸಲು ಸಿದ್ಧರಿರುವುದಾಗಿ ತಿಳಿಸಿದರು. ಆಗ ಶಾಸಕರು ಈ ಬಗ್ಗೆ ಮುಂದಿನ ಕ್ರಮ ವಹಿಸಲು ಪಾಲಿಕೆ ಆಯುಕ್ತರಿಗೆ ಸೂಚಿಸಿದರು.

ಪಾಲಿಕೆ ಆಯುಕ್ತ ಅಶಾದ್ ಉರ್ ರೆಹಮಾನ್ ಷರೀಫ್, ಸೂಪರಿಂಟೆಂಡಿಂಗ್ ಇಂಜಿನಿಯರ್ ಕೆ.ಜೆ.ಸಿಂಧು, ವಲಯಾಧಿಕಾರಿಗಳು, ಅಭಿವೃದ್ಧಿ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

> ಅಭಿವೃದ್ಧಿ ಅಧಿಕಾರಿಗಳು ಬಾಕಿ ಇರುವ ಕಾಮಗಾರಿಗಳನ್ನು ಜುಲೈ ಅಂತ್ಯದೊಳಗೆ ಪೂರ್ಣಗೊಳಿಸಲು ಕ್ರಮ ವಹಿಸಬೇಕು. ಮುಖ್ಯ ರಸ್ತೆಗಳಲ್ಲೇ ರಾಶಿ ಕಸ ಬಿದ್ದಿದ್ದೂ ಆರೋಗ್ಯ ನಿರೀಕ್ಷಕರು ಹಾಗೂ ವಾರ್ಡ್ ಮೇಸ್ತ್ರಿಗಳು ಗಮನ ಹರಿಸುವುದಿಲ್ಲ. ವಾರ್ಡ್ ಜನಸಂಖ್ಯೆ ಹಾಗೂ ಭೌಗೋಳಿಕ ಪ್ರದೇಶಕ್ಕೆ ಅನುಗುಣವಾಗಿ ಪೌರಕಾರ್ಮಿಕರನ್ನು ನಿಯೋಜಿಸಬೇಕು. ಆರೋಗ್ಯ ನಿರೀಕ್ಷಕರು ನಿತ್ಯ ವಾರ್ಡ್‌ಗಳಿಗೆ ಭೇಟಿ ನೀಡಿ, ಸ್ವಚ್ಛತೆ ಪರಿಶೀಲಿಸಬೇಕು. ತ್ಯಾಜ್ಯ ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು. ನಿರ್ಲಕ್ಷಿಸಿದರೆ ಸಾರ್ವಜನಿಕರ ದೂರುಗಳಿಗೆ ನೀವೇ ಜವಾಬ್ದಾರರಾಗುತ್ತೀರಿ.
>
> -ಕೆ.ಹರೀಶ್‌ಗೌಡ

ನಕ್ಕರೆ ಅದೇ ಸ್ವರ್ಗ

ಗುಂಡ : ಬಾಳೆ ಹಣ್ಣಿಗೆ ಎಷ್ಟು?
ಅಂಗಡಿಯವ : ಹತ್ತು ರೂಪಾಯಿ
ಗುಂಡ : ನಾಲ್ಕು ರೂಪಾಯಿಗೆ ಕೊಡು
ಅಂಗಡಿಯವ : ನಾಲ್ಕು ರೂಪಾಯಿಗೆ ಸಿಪ್ಪೆ ಕೊಡ್ತೀನಿ ಅಷ್ಟೆ.
ಗುಂಡ : ಹಾಗಿದ್ರೆ ತಗೋ ಆರು ರೂಪಾಯಿ. ಸಿಪ್ಪೆ ನೀನೇ ಇಟ್ಕೊಂಡು ಹಣ್ಣು ಕೊಡು.

ಮೈಸೂರು ಮಿತ್ರ

ಶನಿವಾರ, 22 ಜೂನ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ಯಾರನ್ನೇ ಆದರೂ ಪರೀಕ್ಷಿಸದೆ ನಂಬಬಾರದು.
ನಂಬಿದ ಮೇಲೆ ಪರೀಕ್ಷಿಸಬಾರದು. –ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ವಿವಿಧ ರೋಗಗಳಿಗೆ ಮದ್ದಿವೆ, ಹೊಟ್ಟೆ ಉರಿಗೆ ಮದ್ದಿಲ್ಲ.

ನಿಮ್ಮ ಪತ್ರಗಳು

ಡಾ.ಶಿವರಾತ್ರಿ ರಾಜೇಂದ್ರ ಸ್ವಾಮಿಗಳ ಪ್ರತಿಮೆಯನ್ನು ಸಂಸದ ಯದುವೀರ್ ಅನಾವರಣ ಮಾಡಲಿ !!



ಮಾನ್ಯರೇ,

ಸುತ್ತೂರು ಮಠದ ಪೀಠಾಧ್ಯಕ್ಷರಾಗಿದ್ದ ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳು ಧಾರ್ಮಿಕ, ಶಿಕ್ಷಣ, ಆರೋಗ್ಯ, ಸಾಮಾಜಿಕ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ಹಲವಾರು ಸಾಧನೆಗಳನ್ನು ಮಾಡಿ ಆದರ್ಶಪ್ರಾಯರಾಗಿದ್ದಾರೆ. ಸುತ್ತೂರು ಸಂಸ್ಥಾನವು 250ಕ್ಕೂ ಅಧಿಕ ಶಿಕ್ಷಣ ಸಂಸ್ಥೆಗಳು, ತಾಂತ್ರಿಕ ಸಂಸ್ಥೆಗಳು ಉಚಿತ ವಿದ್ಯಾರ್ಥಿ ನಿಲಯಗಳು, ಮೆಡಿಕಲ್ ಕಾಲೇಜು, ಬೃಹತ್ ಆಸ್ಪತ್ರೆ ಹೊಂದಿದೆ. ಸುತ್ತೂರು ಶ್ರೀ ಕ್ಷೇತ್ರದಲ್ಲಿ 4,000ಕ್ಕೂ ಹೆಚ್ಚು ಅನಾಥ ಹಾಗೂ ಬಡ ವಿದ್ಯಾರ್ಥಿಗಳಿಗೆ ಉಚಿತ ವಸತಿ ಶಿಕ್ಷಣ, ದಾಸೋಹ ಇವುಗಳು ನಿರಂತರವಾಗಿ ನಡೆಯುತ್ತಿವೆ. ದೇಶ ಮತ್ತು ವಿದೇಶಗಳಲ್ಲಿ ಸುತ್ತೂರು ಸಂಸ್ಥಾನ ಪ್ರಖ್ಯಾತಿ ಹೊಂದಿದೆ. ಈಗಿನ ಪೀಠಾಧಿಪತಿಗಳಾದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಗುರುಗಳ ಆಶಯದಂತೆ ಶಿಕ್ಷಣ ಮತ್ತು ಧಾರ್ಮಿಕ ಕ್ಷೇತ್ರದಲ್ಲಿ ಕ್ರಾಂತಿ ಮಾಡಿದ್ದಾರೆ. ಬರ, ಕೊರೊನಾ ಹಾಗೂ ಅತಿವೃಷ್ಟಿ ಸಮಯದಲ್ಲಿ ಸುತ್ತೂರು ಮಠ ತನ್ನದೇ ಆದ ರೀತಿಯಲ್ಲಿ ಸೇವೆ ಸಲ್ಲಿಸಿ, ಪ್ರಖ್ಯಾತಿ ಹೊಂದಿದೆ.ಈಗಾಗಲೇ ಜೆಎಸ್‌ಎಸ್ ವೃತ್ತದಲ್ಲಿ ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಪ್ರತಿಮೆ ಸ್ಥಾಪಿತವಾಗಿದೆ. ಆದರೆ ತಾಂತ್ರಿಕ ಕಾರಣಗಳಿಂದ ಮುಸುಕು ಹಾಕಲಾಗಿದೆ. ಮಹಾದಂಯಾಳುಗಳಾದ ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಪ್ರತಿಮೆಯನ್ನು ರಾಜವಂಶಸ್ಥ ಹಾಗೂ ಲೋಕಸಭಾ ಸದಸ್ಯರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್‌ರವರು ಕೂಡಲೇ ಅನಾವರಣ ಮಾಡಲಿ. ಯದುವೀರ್ ಅವರು ಚುನಾವಣಾ ಮುಂಚೆ ಹಾಗೂ ಸಂಸದರಾದ ಮೇಲೆ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳ ಆಶೀರ್ವಾದ ಪಡೆದಿದ್ದು, ಗುರುಮನೆ ಮತ್ತು ಅರಮನೆಗಳ ಅರ್ಥಪೂರ್ಣವಾಗಿದೆ. ಡಾ.ಶಿವರಾತ್ರಿ ರಾಜೇಂದ್ರ ಮಹಾ ಸ್ವಾಮಿಗಳ ಪ್ರತಿಮೆ ಅನಾವರಣವಾದರೆ ಅದು ಮೈಸೂರು ನಗರದ ಸಾಂಸ್ಕೃತಿಕ ಲೋಕಕ್ಕೆ ಹೆಗ್ಗಳಿಕೆಯಾಗುತ್ತದೆ. ನೂತನ ಸಂಸದರು ಬೇಗನೇ ಕಾರ್ಯೋನ್ಮುಖ ರಾಗಲಿ ಎಂಬುದೇ ಎಲ್ಲರ ಅನಿಸಿಕೆಯಾಗಿದೆ.

– ಅಮೋಘವರ್ಷ ನಾಗರಾಜ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು, ಮೈಸೂರು.

ಸಿಇಟಿ ಮತ್ತೆ ಅಸ್ತಿತ್ವಕ್ಕೆ ಬರಲಿ

ಮಾನ್ಯರೆ,

ಎನ್‌ಟಿಎ ನಡೆಸುವ ನೀಟ್ ಪರೀಕ್ಷೆಯಲ್ಲಿ ಅಕ್ರಮದ ಹಿನ್ನೆಲೆಯಲ್ಲಿ ಕೃಪಾಂಕ ಪಡೆದಿದ್ದ 1563 ಮಂದಿಗೆ ಮತ್ತೆ ಪರೀಕ್ಷೆ ಬರೆಯಲು ಸುಪ್ರೀಂ ಕೋರ್ಟ್ ಆದೇಶಿಸಿದೆ.

ಆದರೆ ಕರ್ನಾಟಕದ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ನ್ಯಾಯಯುತವಾಗಿ, ವೈದ್ಯಕೀಯ, ಇಂಜಿನಿಯರಿಂಗ್ ಸೀಟುಗಳು ಲಭ್ಯವಾಗಲಿ ಹಾಗೂ ಸೀಟು ಹಂಚಿಕೆ ಪಾರದರ್ಶಕವಾಗಿರಲಿ ಎಂಬ ಕಾರಣದಿಂದ ವೀರಪ್ಪ ಮೊಯ್ಲಿಯವರು ಮುಖ್ಯಮಂತ್ರಿಗಳಾಗಿದ್ದಾಗ ಸಿಇಟಿ (ಕಾಮನ್ ಎಂಟ್ರೆನ್ಸ್ ಟೆಸ್ಟ್) ಅನ್ನು ಜಾರಿಗೆ ತಂದರು. ಅದು ದೇಶವ್ಯಾಪಿ ಜನಪ್ರಿಯವೂ ಆಯಿತು. ದೇಶದಲ್ಲೇ ಅತಿ ಹೆಚ್ಚು ವೈದ್ಯಕೀಯ ಮತ್ತು ಎಂಜಿನಿಯರಿಂಗ್ ಕಾಲೇಜು ಹೊಂದಿರುವ ಕರ್ನಾಟಕಕ್ಕೆ ದೇಶದ ಎಲ್ಲಾ ರಾಜ್ಯಗಳಿಂದಲೂ ಬೆಂಗಳೂರು ಮತ್ತು ಜಿಲ್ಲಾ ಕೇಂದ್ರಗಳಲ್ಲಿ ನಡೆಯುತ್ತಿದ್ದ ಸಿಇಟಿ ಪರೀಕ್ಷೆ ಬರೆಯಲು ಪರೀಕ್ಷಾರ್ಥಿಗಳು ಬರುತ್ತಿದ್ದರು. ಇದು ಕರ್ನಾಟಕಕ್ಕೆ ಹೆಮ್ಮೆಯ ವಿಷಯವೂ ಆಗಿತ್ತು. ಕರ್ನಾಟಕ ವಿದ್ಯಾರ್ಥಿಗಳಿಗೆ ಹೆಚ್ಚಿನ ಸೀಟುಗಳು ಲಭ್ಯವಾಗಿ ಹೊರ ರಾಜ್ಯದ ವಿದ್ಯಾರ್ಥಿಗಳು ಕೂಡ ಸೀಟು ಪಡೆಯುತ್ತಿದ್ದರು. ಅಲ್ಲದೆ ಸಿಇಟಿಯ ನಿಯಂತ್ರಣ ಕರ್ನಾಟಕ ಸರ್ಕಾರದ್ದೇ ಆದ ಕಾರಣ ಸೀಟು ಹಂಚಿಕೆಯನ್ನು ಕರ್ನಾಟಕದ ವಿದ್ಯಾರ್ಥಿಗಳಿಗೆ ಅನ್ಯಾಯವಾಗದ ರೀತಿಯಲ್ಲಿ ನಡೆಸಲಾಗುತ್ತಿತ್ತು.

ಆದರೆ ಈಗ ಕೇಂದ್ರ ಸರ್ಕಾರವು ಇದನ್ನು ರದ್ದುಪಡಿಸಿ ತನ್ನ (ನೀಟ್) ನಿಯಂತ್ರಣಕ್ಕೆ ಒಳಪಡಿಸಿದ ನಂತರ ಕರ್ನಾಟಕದ ಸೀಟುಗಳು ಪರಕೀಯರ ಪಾಲಾಗಿ ಕರ್ನಾಟಕ ವಿದ್ಯಾರ್ಥಿಗಳು ಸೀಟು ವಂಚಿತರಾಗುತ್ತಿರುವುದರ ಜೊತೆಗೆ, ಸೀಟು ಪಡೆದವರು ದೇಶದ ಇನ್ಯಾವ ಮೂಲೆಗಾದರೂ ಹೋಗಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇಂತಹುದೇ ಪರಿಸ್ಥಿತಿಯನ್ನು ಎದುರಿಸುತ್ತಿರುವ ತಮಿಳುನಾಡು ಕೂಡ ಕಳೆದ ವರ್ಷದಿಂದ ನೀಟ್‌ನಿಂದ ರಾಜ್ಯದ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದೆ ಎಂದು ಜೋರಾಗಿ ಪ್ರತಿಭಟಿಸುತ್ತಿದೆ. ಈಗ ಕರ್ನಾಟಕದ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಕೂಡ ಆಕ್ಷೇಪ ವ್ಯಕ್ತಪಡಿಸಿದ್ದು, ರಾಜ್ಯದಲ್ಲಿ ನಮ್ಮವರೇ ಕಟ್ಟಿ ಬೆಳಸಿದ ವೈದ್ಯಕೀಯ ಕಾಲೇಜುಗಳಲ್ಲಿ ನಮ್ಮವರಿಗೇ ಸೀಟು ಸಿಗುತ್ತಿಲ್ಲ ಎಂದು ತಮ್ಮ ಅಸಮಾಧಾನ ವನ್ನು ಹೊರಹಾಕಿದ್ದಾರೆ.

ಆದ್ದರಿಂದ ಕರ್ನಾಟಕವು ತಮಿಳು ನಾಡು ಹಾಗೂ ದಕ್ಷಿಣದ ರಾಜ್ಯಗಳೊಂದಿಗೆ ಸಭೆ ನಡೆಸಿ ನೀಟ್‌ನಿಂದ ಹೊರಬರಲು ದೊಡ್ಡ ಹೋರಾಟ ಮಾಡಬೇಕಾದ್ದು ಇಂದಿನ ಅಗತ್ಯವಾಗಿದೆ. ಅಲ್ಲದೆ ಖಾಸಗಿ ಸ್ವಯತ್ತ ವಿವಿಗಳ ವೈದ್ಯಕೀಯ ಕಾಲೇಜುಗಳನ್ನು ಕೂಡ ಸಿಇಟಿ ವ್ಯಾಪಿಗೆ ಒಳಪಡಿಸಬೇಕು. ಖಾಸಗಿ ಕಾಲೇಜುಗಳಿಗೆ ನೀಡುತ್ತಿರುವ ಸ್ವಯತ್ತ ಸ್ಥಾನಮಾನವನ್ನು ರದ್ದು ಪಡಿಸಿ ಅವುಗಳನ್ನು ಸರ್ಕಾರಿ ವಿವಿಗಳ ನಿಯಂತ್ರಣಕ್ಕೆ ಒಳಪಡಿಸುವುದು ಕೂಡ ಶೈಕ್ಷಣಿಕ ಸಮಾನತೆಯ ದೃಷ್ಟಿಯಿಂದ ಅಗತ್ಯವಾಗಿದೆ. ಸರ್ಕಾರ ಇಚ್ಛಾ ಶಕ್ತಿಯನ್ನು ತೋರಬೇಕಿದೆ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಆರೋಪಿಗಳನ್ನೇ ರಾಜಾಕಾಲುವೆಗೆ ಇಳಿಸಬೇಕಾಗಿತ್ತು!

ಮಾನ್ಯರೆ,

ಆರೋಪಿಗಳು ರೇಣುಕಾಸ್ವಾಮಿಯ ಶವದೊಂದಿಗೆ ಮೊಬೈಲ್ ಫೋನನ್ನೂ ರಾಜಾಕಾಲುವೆಗೆ ಎಸೆದಿರುವುದನ್ನು ಖಚಿತಪಡಿಸಿಕೊಂಡ ಪೊಲೀಸರು ಪೌರ ಕಾರ್ಮಿಕರನ್ನು ರಾಜಾಕಾಲುವೆಗೆ ಇಳಿಸಿ ಮೊಬೈಲ್ ಫೋನಿನ ಶೋಧಕಾರ್ಯ ನಡೆಸಿದ ವಿಚಾರ ಸುದ್ದಿಯಾಗಿದೆ. ಮೊಬೈಲ್ ಫೋನಿನ ಶೋಧ ಕಾರ್ಯಕ್ಕಾಗಿ ಪೌರಕಾರ್ಮಿಕರನ್ನು ರಾಜಾಕಾಲುವೆಗೆ ಇಳಿಸುವ ಬದಲಾಗಿ ಆ ಎಲ್ಲಾ ಆರೋಪಿಗಳನ್ನೂ (ಸಾಕಷ್ಟು ಭದ್ರತೆಯೊಂದಿಗೆ) ರಾಜಾ ಕಾಲುವೆಗಿಳಿಸಿ ಶೋಧ ಕಾರ್ಯ ನಡೆಸಿದ್ದರೆ ಮೊಬೈಲ್ ಫೋನ್ ಸಿಗುತ್ತಿತ್ತು.

ಆಮೆವೇಗ–ಶರವೇಗ!

ದರ್ಶನಾವತಾರದ ತನಿಖೆಯು ಶರವೇಗದಲ್ಲಿ ನಡೆಯುತ್ತಿದೆ. ಬಹಳ ಸಂತೋಷ! ಅದರೆ... ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ತನಿಖೆಗೇಕೆ ಆಮೆವೇಗ? ಇದು ಯಕ್ಷಪ್ರಶ್ನೆ!

–ಪಿ.ಜೆ.ರಾಘವೇಂದ್ರ ನ್ಯಾಯವಾದಿ ಮೈಸೂರು



ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ: 94482 08746/ 97421 79000

ಚಿಂತನೆ

ವೃತ್ತಿ ನಿರತರು ಅಪ್‌ಡೇಟ್ ಆಗಲೇಬೇಕು!!



ಇತ್ತೀಚೆಗೆ ಪತ್ರಿಕೆಯಲ್ಲಿ ಒಂದು ವರದಿ ಪ್ರಕಟವಾಗಿತ್ತು. ವಿದ್ಯಾರ್ಥಿಗಳ ಅಭಿಪ್ರಾಯ ಸಂಗ್ರಹಿಸಲು ಒಂದು ವಿಶ್ವವಿದ್ಯಾಲಯವು ಆಂತರಿಕ ಗುಣಮಟ್ಟ ಭರವಸೆ ಸಮಿತಿಯಿಂದ ವಿದ್ಯಾರ್ಥಿಗಳ ಸಮೀಕ್ಷೆ ನಡೆಸಿತ್ತು. ಅದರಂತೆ ವಿಶ್ವ ವಿದ್ಯಾಲಯದ ಕಾಲೇಜುಗಳಲ್ಲಿ ಆಗಬೇಕಾಗಿರುವ ಸುಧಾರಣೆ ಕುರಿತು ವಿವಿಧ ಕಾಲೇಜುಗಳ ವಿದ್ಯಾರ್ಥಿಗಳ ಸಮೀಕ್ಷೆ ಮಾಡಲಾಯಿತು. ಅದರಲ್ಲಿ ಎರಡು ವಿಷಯಗಳು ವಿಶೇಷವಾಗಿ ಗಮನ ಸೆಳೆದವು. ಒಂದು ತಮ್ಮ ಶಿಕ್ಷಕರು ಅಪ್‌ಡೇಟ್ ಆಗಬೇಕು ಎಂಬ ಅಭಿಪ್ರಾಯ ಹಾಗೂ ಮತ್ತೊಂದು ತಮ್ಮ ಶಿಕ್ಷಕರು ಬಹುಶಿಸ್ತೀಯ ಶಿಕ್ಷಣದಲ್ಲಿ ಪ್ರಾವೀಣ್ಯತೆ ಪಡೆದಿರಬೇಕು ಎಂಬ ಅಭಿಪ್ರಾಯವನ್ನು ಹಲವು ವಿದ್ಯಾರ್ಥಿಗಳು ವ್ಯಕ್ತ ಪಡಿಸಿದರು ಎಂಬುದು.

ಇಲ್ಲಿ ಮುಖ್ಯವಾಗಿ ಶಿಕ್ಷಕರು ಅಪ್‌ಡೇಟ್ ಆಗಿರಬೇಕು ಎಂದು ಹೇಳಿದ್ದು ವಿಶೇಷವಾಗಿ ಗಮನ ಸೆಳೆಯುತ್ತದೆ. ಇಂದು ಅನೇಕ ವಿದ್ಯಾರ್ಥಿಗಳು ಶಿಕ್ಷಕರಿಗಿಂತಲೂ ಬುದ್ಧಿವಂತರಾಗಿರುತ್ತಾರೆ. ಕೆಲವರಿಗೆ ಶಿಕ್ಷಕರು ಮಾಡುವ ಪಾಠದ ಬಗ್ಗೆ ಪೂರ್ವ ತಿಳುವಳಿಕೆ ಇರುತ್ತದೆ. ಕೆಲವು ಕಾಲೇಜು ವಿದ್ಯಾರ್ಥಿಗಳು ಇಂಟರ್‌ನೆಟ್ ಹಾಗೂ ವಿವಿಧ ಜರ್ನಲ್‌ಗಳ ಮೂಲಕ ಹೆಚ್ಚಿನ ಮಾಹಿತಿ ಪಡೆದಿರುತ್ತಾರೆ. ಅಂತಹವರ ಮುಂದೆ ಪಾಠ ಮಾಡುವ ಶಿಕ್ಷಕರು ತಮಗೆ ಜ್ಞಾನದ ಕೊರತೆ ಇದೆ ಎಂದು ತೋರ್ಪಡಿಸಿಕೊಂಡರೆ ಅವಮಾನಕರ. ಕೆಲವು ಶಿಕ್ಷಕರು ಕೇವಲ ಪಾಠ ಮಾಡುತ್ತಾರೆ, ಆದರೆ ವಿದ್ಯಾರ್ಥಿಗಳಿಗೆ ಪ್ರಶ್ನೆ ಕೇಳಲು ಅವಕಾಶ ವನ್ನೇ ನೀಡುವುದಿಲ್ಲ. ಇದಕ್ಕೆ ಕಾರಣ ಎಲ್ಲಿ ತನಗೆ ಗೊತ್ತಿಲ್ಲದ ವಿಷಯದ ಬಗ್ಗೆ ಪ್ರಶ್ನೆಗಳನ್ನು ವಿದ್ಯಾರ್ಥಿಗಳು ಕೇಳಿಬಿಡುತ್ತಾರೋ ಎಂಬ ಶಂಕೆ–ಆತಂಕ. ಹಾಗಾಗಿ ಪ್ರಶ್ನೆ ಕೇಳುವ ವಿದ್ಯಾರ್ಥಿಗಳ ಅವರು ಇಷ್ಟಪಡುವುದಿಲ್ಲ. ಹಾಗಾಗಿ ಸಮೀಕ್ಷೆಯ ಸಮಯದಲ್ಲಿ ವಿದ್ಯಾರ್ಥಿಗಳು ತಮ್ಮ ಶಿಕ್ಷಕರು ಅಪ್‌ಡೇಟ್ ಆಗಬೇಕು ಎಂದು ಹೇಳುವುದಕ್ಕೆ ಕಾರಣ ಎನ್ನಿಸುತ್ತದೆ.

ಇದು ಕೇವಲ ಕಾಲೇಜು ಶಿಕ್ಷಕರಿಗೆ ಮಾತ್ರ ಅನ್ವಯಿಸುತ್ತದೆ ಎಂದು ಭಾವಿಸಬಾರದು. ಪ್ರಾಥಮಿಕ ಶಾಲಾ ಶಿಕ್ಷಕರಿಂದ ಹಿಡಿದು ಸ್ನಾತಕ ಹಾಗೂ ಸ್ನಾತಕೋತ್ತರ ಪದವಿ ತರಗತಿಗಳ ಶಿಕ್ಷಕರಿಗೂ ಈ ಮಾತು ಅನ್ವಯಿಸುತ್ತದೆ. ವಿದ್ಯಾಭ್ಯಾಸ ಎಂದರೆ ಜ್ಞಾನಾರ್ಜನೆ ಎಂದರ್ಥ. ಜ್ಞಾನವನ್ನು ಪಡೆಯಲು ಬಂದವರಿಗೆ ತಮ್ಮ ಶಿಕ್ಷಕರಲ್ಲಿ ಬೋಧನಾ ಕೊರತೆ ಕಂಡುಬಂದಾಗ ಅವರನ್ನು ವಿದ್ಯಾರ್ಥಿಗಳು ಇಷ್ಟ ಪಡುವುದಿಲ್ಲ. ಆದ್ದರಿಂದ ಕಾಲಕ್ಕೆ ಅನುಗುಣವಾಗಿ ಶಿಕ್ಷಕರೂ ಅಪ್‌ಡೇಟ್ ಆಗುವುದು ಅನಿವಾರ್ಯವಾಗಿರುತ್ತದೆ. ಆದರೆ ಇಂದು ಈ ರೀತಿ ಎಷ್ಟು ಜನ ಶಿಕ್ಷಕರು ಅಪ್‌ಡೇಟ್ ಆಗಲು ಬಯಸುತ್ತಾರೆ ಎಂಬುದೇ ಪ್ರಶ್ನೆ !!

ಇತ್ತೀಚೆಗೆ ಗಣಿತ ಶಾಸ್ತ್ರದ ಕೆಲವು ಅಧ್ಯಾಪಕರು ಸೇರಿ ಒಂದು ವಾಟ್ಸಾಪ್ ಗ್ರೂಪ್ ರಚಿಸಿಕೊಂಡರು. ಅದರಲ್ಲಿ ಯಾವುದೇ ಶಿಕ್ಷಕರಿಗೆ ಗಣಿತ ವಿಷಯದ ಬಗ್ಗೆ ಏನಾದರೂ ಅನುಮಾನ ಬಂದರೆ ಅದನ್ನು ಆ ವೇದಿಕೆಯಲ್ಲಿ ಪರಿಹರಿಸಿಕೊಳ್ಳಬಹುದು. ಇದಕ್ಕಾಗಿ ಆಗಾಗ್ಗೆ ವೆಬಿನಾರ್‌ಗಳನ್ನು ಏರ್ಪಡಿಸಲಾಗುತ್ತದೆ. ಗುಂಪಿನಲ್ಲಿ ಇನ್ನೂರು ಶಿಕ್ಷಕರ ಹೆಸರಿದೆ. ಆದರೆ ವೆಬಿನಾರ್‌ಗೆ ಸೇರುವವರ ಸಂಖ್ಯೆ ಇಪ್ಪತ್ತು, ಮೂವತ್ತಕ್ಕೆ ಸೀಮಿತ. ತಮಗಾಗೇ ರಚಿಸಿಕೊಂಡ ಹಾಗೂ ತಮ್ಮದೇ ವಿಷಯದ ಬಗ್ಗೆ ಚರ್ಚೆಗಳಾದಾಗ ತಾವು ಭಾಗವಹಿಸಬೇಕು, ತಮ್ಮದು ಏನಾದರೂ ಅನುಮಾನಗಳಿದ್ದರೆ ಅದರಲ್ಲಿ ಪರಿಹರಿಸಿಕೊಳ್ಳಬೇಕು, ಇತರರು ಪ್ರಸ್ತಾಪಿಸುವ ವಿಷಯವನ್ನು ಅರಿಯಬೇಕು ಎಂದು ಅವರಿಗೆ ಅನ್ನಿಸುತ್ತಿಲ್ಲ. ಇದು ಅವರ ವಿಮುಖತೆಯನ್ನು ಸೂಚಿಸುತ್ತದೆ. ಶಿಕ್ಷಕರು ಎಂದರೆ ಕೇವಲ ಪಾಠ ಮಾಡುವವರಲ್ಲ, ಬದಲಿಯಾಗಿ ಅವರೂ ವಿದ್ಯಾರ್ಥಿಗಳೇ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ನನ್ನ ಪರಿಚಿತರೊಬ್ಬರು ಇತಿಹಾಸದ ನಿವೃತ್ತ ಪ್ರಾಧ್ಯಾಪಕರು. ಅವರು ಅತ್ಯಂತ ಸೊಗಸಾಗಿ ಪಾಠ ಮಾಡುತ್ತಿದ್ದರು. ನಿವೃತ್ತಿಯಾದ ನಂತರವೂ ಅನೇಕ ಸಂಶೋಧನಾತ್ಮಕ ಪ್ರಬಂಧಗಳನ್ನು ಬರೆದು ಪ್ರಕಟಿಸಿದ್ದಾರೆ. ಈಗಲೂ ಪರಿಚಯ ಮಾಡಿಕೊಳ್ಳುವಾಗ 'ನಾನು ಇತಿಹಾಸದ ವಿದ್ಯಾರ್ಥಿ' ಎಂದೇ ಹೇಳುತ್ತಾರೆ. ತಾನು ದೊಡ್ಡ ಹುದ್ದೆಯಲ್ಲಿದ್ದೆ ಎಂದು ಎಲ್ಲೂ ಹೇಳಿಕೊಳ್ಳುವುದಿಲ್ಲ. ಅವರ ಹವ್ಯಾಸ ಈಗಲೂ ಓದುವುದು, ಸಂಶೋಧಿಸುವುದೇ ಆಗಿದೆ. ಇಂತಹ ಮನೋಭಾವ ನಮಗೆ ಬರಬೇಕು. ಯಾವ ಶಿಕ್ಷಕರು ನಿರಂತರವಾಗಿ ವಿದ್ಯಾರ್ಥಿಗಳಂತೆ ಓದುತ್ತಾರೋ, ಅದನ್ನು ಪಾಠ–ಪ್ರವಚನಗಳಲ್ಲಿ ಬಳಸುತ್ತಾರೋ ಅಂತಹವರು ವಿದ್ಯಾರ್ಥಿಗಳ ಮೆಚ್ಚಿನ ಶಿಕ್ಷಕರಾಗುತ್ತಾರೆ.

ಇತ್ತೀಚೆಗೆ ಒಬ್ಬರು ಬೇಸರದಿಂದ ಹೇಳಿಕೊಂಡ ಒಂದು ಮಾತು; 'ಇತ್ತೀಚಿನ ದಿನಗಳಲ್ಲಿ ಅನೇಕ ಶಿಕ್ಷಕರು ಪಾಠ ಮಾಡುವುದಕ್ಕಿಂತ ರಾಜಕಾರಿಣಿಗಳೊಡನೆ ಒಡನಾಟ ಇಟ್ಟುಕೊಳ್ಳಲು ಆಸಕ್ತರಾಗಿದ್ದಾರೆ' ಎಂದು. ಇತ್ತೀಚೆಗೆ ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್‌ಗೆ ನಡೆದ ಚುನಾವಣೆಯ ಸಮಯದಲ್ಲಿ ಪತ್ರಕರ್ತರು ಚುನಾವಣಾ ಕಣದಲ್ಲಿದ್ದ ಅಭ್ಯರ್ಥಿಗಳೊಡನೆ ಸಂವಾದ ನಡೆಸಿದರು. ಅದರಲ್ಲಿ ನೀವು ಚುನಾಯಿತರಾದರೆ ಶಿಕ್ಷಕರಿಗಾಗಿ ಏನು ಮಾಡಲು ಬಯಸಿದ್ದೀರಿ ಎಂದು ಪ್ರತಿಯೊಬ್ಬರ ಕೇಳಿದರು. ಅದಕ್ಕೆ ನಿರ್ದಿಷ್ಟ ಉತ್ತರದ ಬದಲು ಅವರು ಶಿಕ್ಷಕರಿಗೆ ಹಣ ಹಂಚುತ್ತಿದ್ದಾರೆ, ಉಡುಗೊರೆಗಳನ್ನು ನೀಡುತ್ತಿದ್ದಾರೆ ಎಂದು ಪರಸ್ಪರ ಆಪಾದಿಸಿದರು. ಸರಿ, ಆದರೆ ಅವರು ನೀಡುವ ಹಣ ಹಾಗೂ ಉಡುಗೊರೆಗಳನ್ನು ಶಿಕ್ಷಕರು ಸ್ವೀಕರಿಸಿದರೆ? ಅದಕ್ಕೆ ಮಾತ್ರ ಯಾರಿಂದಲೂ ಉತ್ತರವೇ ಇಲ್ಲ! ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದುದು, ಭವಿಷ್ಯದ ಪ್ರಜೆಗಳನ್ನು ನಿರ್ಮಾಣ ಮಾಡುವವರು ಅವರು. ಅವರೇ ಹೀಗೆ ಮಾಡಿದರೆ ಶಿಕ್ಷಣ ಕ್ಷೇತ್ರದಿಂದ ಏನನ್ನು ಅಪೇಕ್ಷಿಸಲು ಸಾಧ್ಯ?

ಶಿಕ್ಷಕರು ಉತ್ತಮ ಶಿಕ್ಷಕರಾಗಬೇಕಾದರೆ ಅವರು ಕಾಲಮಾನಕ್ಕೆ ತಕ್ಕ ಹಾಗೆ ಅಪ್‌ಡೇಟ್ ಆಗಬೇಕು. ಅದನ್ನು ಮೇಲಿನ ಸಂದರ್ಶನ ಸಮಯದಲ್ಲಿ ವಿದ್ಯಾರ್ಥಿಗಳು ಬಹಿರಂಗವಾಗಿ ಹೇಳಿಕೊಂಡಿದ್ದಾರೆ. ಇದನ್ನು ತಪ್ಪು ಎಂದು ಹೇಳಲಾಗುವುದಿಲ್ಲ. ಕೆಲವು ವಿದ್ಯಾರ್ಥಿಗಳಾದರೂ ಹೆಚ್ಚಿನ ತಿಳುವಳಿಕೆಯನ್ನು ಹೊಂದಲು ಬರುತ್ತಾರೆ. ಅವರಿಗೆ ಶಿಕ್ಷಕ ಮಾರ್ಗದರ್ಶಿಯಾಗಬೇಕು. ಹಾಗಾಗಬೇಕಾದರೆ ಅವರು ಶ್ರಮ ಪಡಲೇಬೇಕು. ಜೊತೆಗೆ ಸಮೀಕ್ಷೆಯಲ್ಲಿ ವಿದ್ಯಾರ್ಥಿಗಳು ತಮ್ಮ ಶಿಕ್ಷಕರು ಬಹುಶಿಸ್ತೀಯ ಶಿಕ್ಷಣದಲ್ಲಿ ಪ್ರಾವಿಣ್ಯತೆ ಪಡೆಯಬೇಕು' ಎಂದು ಹೇಳಿದ್ದಾರೆ. ನಿಜಕ್ಕೂ ಇದು ಉತ್ತಮ ಸಲಹೆ ಎನ್ನಿಸುತ್ತದೆ. ಇಂದು ಶಿಕ್ಷಕರು ತಾವು ಪಾಠ ಮಾಡುವ ವಿಷಯಕ್ಕೆ ಮಾತ್ರ ಸೀಮಿತವಾಗುತ್ತಾರೆ. ಅದರ ಬದಲು ಮತ್ತೊಂದು ವಿಷಯದಲ್ಲೂ ಅವರು ಜ್ಞಾನ ಹೊಂದಿದರೆ ಅವರು ಪಾಠ ಮಾಡುವ ರೀತಿಯೂ ಬೇರೆಯಾಗುತ್ತದೆ, ಅದರಿಂದ ವಿದ್ಯಾರ್ಥಿಗಳಿಗೂ ಅನುಕೂಲವಾಗುತ್ತದೆ.

> “ ಜ್ಞಾನ ಯಾರೊಬ್ಬರ ಸ್ವತ್ತೂ ಅಲ್ಲ. ನಾವು ಕಿರಿಯರಿಂದಲೂ, ಸಾಮಾನ್ಯರಲ್ಲಿ ಸಾಮಾನ್ಯರಿಂದಲೂ ಕಲಿಯಬೇಕಾಗುತ್ತದೆ. ಕಲಿಯುವ ಮನಸ್ಸು ಇದ್ದರೆ ನಮ್ಮದು ಯಶಸ್ವೀ ಜೀವನವಾಗುತ್ತದೆ. ಕಲಿಯಬೇಕು, ಕಲಿತು ಅಪ್‌ಡೇಟ್ ಆಗಬೇಕು.

ಇದು ಕೇವಲ ಶಿಕ್ಷಕರಿಗೆ ಮಾತ್ರ ಅನ್ವಯಿಸುವ ವಿಚಾರವಲ್ಲ. ಇಂದು ಪ್ರಪಂಚ ವೇಗವಾಗಿ ಬದಲಾಗುತ್ತಿದೆ. ನಾವೂ ಅದರೊಡನೆ ಸಾಗಬೇಕಾಗುತ್ತದೆ. ಇಲ್ಲವಾದಲ್ಲಿ ನಾವು ಹಿಂದೆ ಬೀಳುತ್ತೇವೆ. ನಾನಾ ನಷ್ಟ ಅನುಭವಿಸಬೇಕಾಗುತ್ತದೆ. ಮೊಬೈಲ್‌ಗಳು ಬಂದಾಗ ಅನೇಕ ಹಿರಿಯರು ಅದನ್ನು ಉಪಯೋಗಿಸುವುದು ಕಷ್ಟ ಎಂದು ಅದರ ಸಹವಾಸಕ್ಕೆ ಹೋಗಲಿಲ್ಲ. ಆದರೆ ಅದು ಅನಿವಾರ್ಯ ಎಂದಾದಾಗ ಅದನ್ನು ಉಪಯೋಗಿಸುವುದನ್ನು ಕಲಿತರು. ಇಂದು ಅದು ಅವರ ಜೀವನದ ಅವಿಭಾಜ್ಯ ಅಂಗವಾಗಿ ಹೋಗಿದೆ. ಕಲಿಯಲು ವಯಸ್ಸು ಎಂದಿಗೂ ಅಡ್ಡಿಯಲ್ಲ. ಕಲಿಯಬೇಕು ಎಂದಾದಾಗ ಕಲಿಯಬಹುದು. ಇಂದು ಸರ್ಕಾರಿ ಕೆಲಸಕ್ಕೆ ಹೊಸದಾಗಿ ಸೇರುವವರು ತಮಗೆ ತರಬೇತಿಯಲ್ಲಿ ಏನೇ ಹೇಳಿಕೊಟ್ಟಿದ್ದರೂ, ಅಲ್ಲಿನ ಅನುಭವಸ್ಥ ಗುಮಾಸ್ತರನ್ನೇ ಅವಲಂಬಿಸಬೇಕಾಗುತ್ತದೆ. ಅವರಿಂದ ಕೆಲಸ ಕಲಿಯಬೇಕಾಗುತ್ತದೆ. ನಾನು ದೊಡ್ಡ ಅಧಿಕಾರಿ, ಗುಮಾಸ್ತರನ್ನು ಏನು ಕೇಳುವುದು? ಎಂದರೆ ಅವರು ಮುಂದೆ ತೊಂದರೆಗೆ ಸಿಲುಕುತ್ತಾರೆ. ಜ್ಞಾನ ಯಾರ ಮನೆಯ ಸ್ವತ್ತೂ ಅಲ್ಲ. ಅದನ್ನು ನಿಷ್ಠೆಯಿಂದ ಕಲಿತವರಿಗೆ ಅದು ಒಲಿಯುತ್ತದೆ.

ನಮ್ಮಲ್ಲಿ ಒಂದು ಮಾತನ್ನು ಸಾಮಾನ್ಯವಾಗಿ ಹೇಳುವುದುಂಟು. ಹೊಸ ವೈದ್ಯನಿಗಿಂತ ಹಳೆಯ ರೋಗಿಯೇ ವಾಸಿ ಎಂದು. ಹೊಸ ವೈದ್ಯನಿಗೆ ಪುಸ್ತಕದ ಜ್ಞಾನ ಇದ್ದರೆ, ರೋಗಿಗೆ ಖಾಯಿಲೆಯ ಮೂಲವೇ ತಿಳಿದಿರುತ್ತದೆ. ಅವನನ್ನು ಕೇಳಿ ಜ್ಞಾನ ಪಡೆದುಕೊಂಡರೆ ಹೊಸ ವೈದ್ಯ ಯಶಸ್ವಿಯಾಗುತ್ತಾನೆ.

ಈ ಹಿಂದೆ ಓದಿದ ಒಂದು ಘಟನೆಯನ್ನು ಇಲ್ಲಿ ಉಲ್ಲೇಖಿಸುವುದು ಸೂಕ್ತ ಅನ್ನಿಸುತ್ತದೆ. ಒಬ್ಬರು ಬಹಳ ಅನುಭವಸ್ಥ ವೈದ್ಯರಿದ್ದರು. ಅವರು ತಮ್ಮ ವೃತ್ತಿ ಆರಂಭಿಸಿದ ನಂತರ ತಮ್ಮಲ್ಲಿಗೆ ಬರುವ ಪ್ರತಿಯೊಂದು ಪ್ರಕರಣದ ಬಗ್ಗೆ ಆಸಕ್ತಿ ತೋರಿಸುತ್ತಿದ್ದರು. ಅವರು ನಂತರ ಹೇಳಿದ ಮಾತು ಎಂದರೆ ಓದಿ ಕಲಿತ ಜ್ಞಾನಕ್ಕಿಂತ ವಿಭಿನ್ನವಾದ ಜ್ಞಾನವನ್ನು ಹೊಸಹೊಸ ರೋಗಿಗಳು ಕಲಿಸಿದರು. ಅವರಿಂದ ನಾನು ಸಾಕಷ್ಟು ಕಲಿತೆ ಎಂದು. ಅವರು ಒಂದು ಸಲ ವಿಚಿತ್ರ ಪ್ರಕರಣವನ್ನು ಎದುರಿಸಬೇಕಾಯಿತು. ಅವರ ಬಳಿ ಒಬ್ಬ ಗರ್ಭಿಣಿ ಬಂದರು. ಮದುವೆಯಾಗಿ ಬಹಳ ವರ್ಷಗಳ ನಂತರ ಗರ್ಭವತಿಯಾಗಿದ್ದರು. ಆಕೆ ಒಮ್ಮೆ ರಸ್ತೆಯಲ್ಲಿ ನಡೆದುಬರುತ್ತಿರುವಾಗ ಒಂದು ಗೂಳಿ ಅವರಿಗೆ ತಿವಿಯಿತು. ಅದರಿಂದ ಆಕೆಯ ಹೊಟ್ಟೆಗೆ ಗಾಯವಾಯಿತು. ಅವರ ಗರ್ಭಕೋಶದ ಮೇಲ್ಪದರ ತೆರೆಯಿತು. ಹಾಗಾಗಿ ಆಕೆಯ ಹೊಟ್ಟೆಯಲ್ಲಿದ್ದ ಇನ್ನೂ ಪೂರ್ಣ ಬೆಳವಣಿಗೆ ಆಗದ ಮಗುವಿನ ಒಂದು ಕೈ ಹೊರಗೆ ಚಾಚಿಕೊಂಡಿತ್ತು. ಅದು ಇನ್ನೂ ಉಸಿರಾಡುತ್ತಿತ್ತು. ಆಪರೇಷನ್ ಮಾಡಿ ಮಗುವನ್ನು ಹೊರ ತೆಗೆಯಬೇಕೆಂದರೆ ಹೆರಿಗೆಗೆ ಇನ್ನು ಸಾಕಷ್ಟು ಸಮಯವಿತ್ತು. ಆಪರೇಷನ್ ಮಾಡಿ ಮಗು ಹೊರತೆಗೆದರೆ ಮಗುವಿನ ಜೀವಕ್ಕೆ ಅಪಾಯವೂ ಇತ್ತು. ಆದರೆ ಹಾಗೇ ಬಿಡಲೂ ಆಗುವುದಿಲ್ಲ. ಮಗುವಿನ ಕೈಯನ್ನು ಹಿಂದಕ್ಕೆ ಅಂದರೆ ಗರ್ಭಕೋಶದೊಳಗೆ ತಳ್ಳಿದರೆ ತಾಯಿ ಹಾಗೂ ಮಗು ಇಬ್ಬರೂ ಉಳಿಯಬಹುದು. ಆದರೆ ಮಗುವಿನ ಕೈಯನ್ನು ಹಿಂದಕ್ಕೆ ಸರಿಸುವುದಾದರೂ ಹೇಗೆ?. ಆಗ ಮನೆಯವರು ತಾಯಿಯ ಪ್ರಾಣ ಉಳಿದರೆ ಸಾಕು ಎಂದರು. ಆದರೆ ಈ ವೈದ್ಯರಿಗೆ ಆ ಹಸುಗೂಸನ್ನು ಬಿಟ್ಟುಕೊಡುವ ಮನಸ್ಸು ಇರಲಿಲ್ಲ. ಆದರೆ ಮಗು ಉಳಿಯುವುದು ಕಷ್ಟಸಾಧ್ಯವಾಗಿತ್ತು ಕೊನೆಗೆ ಆಪರೇಷನ್ ಮಾಡುವುದು ಎಂದು ತೀರ್ಮಾನಿಸಿ ಶಸ್ತ್ರಚಿಕಿತ್ಸಾ ಕೊಠಡಿಗೆ ಕರೆದೊಯ್ದರು. ಅಲ್ಲಿ ಅವರಿಗೆ ಇಬ್ಬರು ಸಹಾಯಕರಿದ್ದರು. ಅದರಲ್ಲಿ ಒಬ್ಬ ಮದ್ಯವ್ಯಸನಿ, ಆದರೆ ಪ್ರಾಮಾಣಿಕ ಹಾಗೂ ಪರಿಣಿತ ಕೆಲಸಗಾರ.

ವೈದ್ಯರು ಮತ್ತೇನೂ ಮಾಡಲು ತೋಚದೆ ಮನಸ್ಸಿನಲ್ಲಿ ಆ ಮಗುವಿನ ಕ್ಷಮೆಯಾಚಿಸಿ ಶಸ್ತ್ರಚಿಕಿತ್ಸೆಗೆ ಅನುವಾಗುತ್ತಿದ್ದರು. ಇದನ್ನು ಗಮನಿಸಿದ ಸಹಾಯಕ, ವೈದ್ಯರಿಗೆ ಒಂದು ಸಲಹೆ ನೀಡಲು ಬಯಸುತ್ತಾನೆ. ಆ ಮಗು ಕೈಯನ್ನು ಸರಿಸಿಕೊಳ್ಳಲು ಒಂದು ಉಪಾಯವಿದೆ ಎನ್ನುತ್ತಾನೆ. ಮೊದಲೇ ಬೇಸರದಲ್ಲಿದ್ದ ವೈದ್ಯರು ಸಿಟ್ಟಿನಿಂದ ಅವನೆಡೆಗೆ ನೋಡುತ್ತಾರೆ. ಆದರೆ ಅವರ ಒಳ ಮನಸ್ಸು ಅವನು ಏನು ಹೇಳುತ್ತಾನೋ ಕೇಳೋಣ ಎನಿಸಿ, ಹೇಳು ಎನ್ನುತ್ತಾರೆ. ಆಗ ಆತ ಇಂಜೆಕ್ಷನ್ ಕೊಡುವ ಸೂಜಿಯನ್ನು ಸ್ವಲ್ಪ ಬಿಸಿ ಮಾಡಿ ಮಗುವಿನ ಕೈಗೆ ತಾಕಿಸಿದರೆ ಅದು ನೋವಿನಿಂದ ಕೈಯನ್ನು ಹಿಂದಕ್ಕೆ ಸರಿಸಿಕೊಳ್ಳಬಹುದು ಎನ್ನುತ್ತಾನೆ. ಆಗ ವೈದ್ಯರಿಗೆ ತುಸು ಆಶಾಭಾವನೆ. ಅದರಂತೆ ಮಾಡಿದರೂ ಸಹ, ಮಗು ಕೈಯನ್ನು ಸರಕ್ಕನೆ ಒಳಕ್ಕೆ ಸರಿಸಿಕೊಂಡಿತು. ವೈದ್ಯರಿಗೆ ಸಂತೋಷವೋ ಸಂತೋಷ. ಆ ವ್ಯಕ್ತಿಯನ್ನು ಬಿಗಿಯಾಗಿ ಆಲಂಗಿಸಿ ಧನ್ಯವಾದ ಅರ್ಪಿಸಿದರು. ಮುಂದೆ ತಾಯಿಗೆ ಶಸ್ತ್ರಚಿಕಿತ್ಸೆ ನಡೆಸಿದರು. ತಾಯಿ–ಮಗು ಇಬ್ಬರು ಸುರಕ್ಷಿತವಾದರು.


ಹೀಗೆ ಜ್ಞಾನ ಯಾರೊಬ್ಬರ ಸ್ವತ್ತೂ ಅಲ್ಲ. ನಾವು ಕಿರಿಯರಿಂದಲೂ, ಸಾಮಾನ್ಯರಲ್ಲಿ ಸಾಮಾನ್ಯರಿಂದಲೂ ಕಲಿಯಬೇಕಾಗುತ್ತದೆ. ಕಲಿಯುವ ಮನಸ್ಸು ಇದ್ದರೆ ನಮ್ಮದು ಯಶಸ್ವೀ ಜೀವನವಾಗುತ್ತದೆ. ಕಲಿಯಬೇಕು, ಕಲಿತು ಅಪ್‌ಡೇಟ್ ಆಗಬೇಕು.

ಅರಣ್ಯಕ್ಕೆ ಮಾರಕವಾದ ಲಾಂಟನಾ, ಸನ್ನಾ ಕಳೆ ಗಿಡ ತೆರವಿಗೆ ಸಚಿವ ಈಶ್ವರ ಖಂಡ್ರೆ ಸೂಚನೆ

● ಹುಲಿ ಸಂರಕ್ಷಣೆ ಪ್ರತಿಷ್ಠಾನದ 15ನೇ ಸಭೆಯಲ್ಲಿ ನಿರ್ಧಾರ ● ಅರಣ್ಯಗಳನ್ನು ಪ್ಲಾಸ್ಟಿಕ್ ಮುಕ್ತ ವಲಯವಾಗಿಸಲು ಸೂಚನೆ

ಬೆಂಗಳೂರು, ಜೂ.21(ಎಂಟಿವೈ)–ನಾಗರಹೊಳೆ, ಬಂಡೀಪುರ, ಬಿಆರ್‌ಟಿ ಸೇರಿದಂತೆ ರಾಜ್ಯದ ಹುಲಿ ಸಂರಕ್ಷಿತ ಪ್ರದೇಶ ಹಾಗೂ ಅರಣ್ಯ ಪ್ರದೇಶದಲ್ಲಿ ವನ್ಯಜೀವಿಗಳಿಗೆ ಕಂಟಕವಾಗಿರುವ ಲಾಂಟನಾ, ಸನ್ನಾ ಹಾಗೂ ಇತರ ಕಳೆಯನ್ನು ತ್ವರಿತವಾಗಿ ತೆರವುಗೊಳಿಸಲು ಕ್ರಮಕೈಗೊಳ್ಳುವಂತೆ ಅರಣ್ಯ ಸಚಿವ ಈಶ್ವರ ಬಿ. ಖಂಡ್ರೆ ಸೂಚನೆ ನೀಡಿದ್ದಾರೆ.

ಬೆಂಗಳೂರಿನ ವಿಕಾಸಸೌಧದ ತಮ್ಮ ಕಚೇರಿಯಲ್ಲಿ ನಡೆದ ಹುಲಿ ಸಂರಕ್ಷಣಾ ಪ್ರತಿಷ್ಠಾನದ 15ನೇ ಆಡಳಿತ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹುಲಿ ಪ್ರತಿಷ್ಠಾನದ ಮೂಲ ಉದ್ದೇಶ ಹುಲಿ ಸಂತತಿ, ವನ್ಯಸಂಪತ್ತಿನ ವೈವಿಧ್ಯತೆ ಹಾಗೂ ವನ್ಯಜೀವಿಗಳ ಆವಾಸಸ್ಥಾನದ ಸಂರಕ್ಷಣೆ ಮಾಡುವುದೇ ಆಗಿದೆ. ಆದರೆ ಅರಣ್ಯ ಪ್ರದೇಶದಲ್ಲಿ ಮಿತಿ ಮೀರಿದ ಪ್ರಮಾಣದಲ್ಲಿ ಲಂಟಾನ ಹಾಗೂ ಸನ್ನಾ ಸೇರಿದಂತೆ ಇನ್ನಿತರ ಕಳೆ ಗಿಡಗಳು ಬೆಳೆದಿವೆ. ಇದರಿಂದ ಅರಣ್ಯ ಹಾಗೂ ವನ್ಯಸಂಪತ್ತಿಗೆ ಧಕ್ಕೆಯಾಗುತ್ತಿದೆ ಎಂಬ ಆಕ್ಷೇಪ ಕೇಳಿ ಬಂದಿರುವುದರಿಂದ ರಾಜ್ಯದ ಪ್ರಮುಖ ಹುಲಿ ಸಂರಕ್ಷಿತ ಪ್ರದೇಶವಾದ ಬಂಡೀಪುರ, ನಾಗರಹೊಳೆ, ಬಿಳಿಗಿರಿರಂಗನಾಥಬೆಟ್ಟ ಹುಲಿ ಸಂರಕ್ಷಿತ ಪ್ರದೇಶ ಸೇರಿದಂತೆ ರಾಜ್ಯದ ಎಲ್ಲಾ ಅರಣ್ಯ ಪ್ರದೇಶದಲ್ಲಿ ಯಥೇಚ್ಛವಾಗಿ ಬೆಳೆದಿರುವ ಲಂಟಾನ, ಸನ್ನಾ ಕಳೆಗಳ ತೆರವಿಗೆ ತ್ವರಿತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.



ಹುಲಿ ಸಂರಕ್ಷಣಾ ಪ್ರತಿಷ್ಠಾನದ 15ನೇ ಆಡಳಿತ ಮಂಡಳಿ ಸಭೆಯಲ್ಲಿ ಸಚಿವ ಈಶ್ವರ್ ಖಂಡ್ರೆ ಅರಣ್ಯ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಇಡಿಸಿಗೆ ಆದ್ಯತೆ ನೀಡಿ: ಹುಲಿ ಸಂರಕ್ಷಣಾ ಪ್ರತಿಷ್ಠಾನದ ನಿಧಿಯಿಂದ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿರುವ ಆದಿವಾಸಿಗಳ ಕ್ಷೇಮಾಭಿವೃದ್ಧಿಗೆ ಹಣ ವಿನಿಯೋಗಿಸಲು ಅವಕಾಶವಿದ್ದು, ಪರಿಸರ ಅಭಿವೃದ್ಧಿ ಸಮಿತಿ(ಇಡಿಸಿ)ಗಳ ವಿವಿಧ ಚಟುವಟಿಕೆಗಳ ಮೂಲಕ ಅರಣ್ಯದೊಳಗಿನ ಆದಿವಾಸಿಗಳ ಸಬಲೀಕರಣಕ್ಕೆ ಕ್ರಮ ಕೈಗೊಳ್ಳಬೇಕು. ಕಾಳಿ, ಬಿಆರ್‌ಟಿ., ನಾಗರಹೊಳೆ, ಬಂಡೀಪುರ, ಭದ್ರಾ ಹುಲಿ ಅಭಯಾರಣ್ಯಗಳ ವ್ಯಾಪ್ತಿಯಲ್ಲಿ ಇಡಿಸಿ ಚಟುವಟಿಕೆಗೆ ಮೆಚ್ಚುಗೆ ವ್ಯಕ್ತವಾಗಿದೆ. ಇನ್ನೂ ಹೆಚ್ಚಿನ ಕಾರ್ಯಕ್ರಮ ರೂಪಿಸಿ, ಮಹಿಳೆಯರಿಗೆ ಸ್ವಾವಲಂಬಿಗಳಾಗಿ ಬದುಕಲು ನೆರವು ಒದಗಿಸಲು ಕ್ರಮ ಕೈಗೊಳ್ಳಬೇಕು. ಆದಿವಾಸಿ ಮಕ್ಕಳ ಶಾಲೆಗಳಲ್ಲಿ ಸ್ಮಾರ್ಟ್ ತರಗತಿ ಆರಂಭಿಸಿ, ಪ್ರತಿಭಾವಂತ ಆದಿವಾಸಿ ಮಕ್ಕಳಿಗೆ ಲ್ಯಾಪ್ ಟಾಪ್ ನೀಡಲು ಕ್ರಮ ಕೈಗೊಳ್ಳುವಂತೆ ಆದೇಶಿಸಿದರು.

ಕಳ್ಳಬೇಟೆ ನಿಗ್ರಹ ಶಿಬಿರ ಬಲವರ್ಧನೆಗೆ ಕ್ರಮ: ಹುಲಿ ಸಂರಕ್ಷಿತ ಪ್ರದೇಶಗಳ ವ್ಯಾಪ್ತಿಯಲ್ಲಿರುವ ಕಳ್ಳಬೇಟೆ ನಿಗ್ರಹ ಶಿಬಿರಗಳಲ್ಲಿ ಕೆಲಸ ಮಾಡುವ ಸಿಬ್ಬಂದಿಗೆ ದಿನವೊಂದಕ್ಕೆ ನೀಡಲಾಗುವ ಆಹಾರ ಧಾನ್ಯ ಭತ್ಯೆಯನ್ನು 80 ರೂ.ನಿಂದ 100 ರೂ.ಗೆ ಹೆಚ್ಚಿಸ ಬೇಕು. ಅಲ್ಲದೆ, ಕಳ್ಳಬೇಟೆ ತಡೆ ಶಿಬಿರದ ಬಲವರ್ಧನೆ ಕ್ರಮ ಕೈಗೊಳ್ಳಬೇಕು. ಇನ್ನಷ್ಟು ಸವಲತ್ತು ನೀಡಲು ಸಾಧ್ಯವೆ ಎಂದು ಪರಿಶೀಲಿಸುವಂತೆ ತಿಳಿಸಿದರು.

ಭದ್ರಾ ಹುಲಿ ಯೋಜನೆಗೆ 25 ವರ್ಷ: ಭದ್ರಾ ಅರಣ್ಯವನ್ನು ಹುಲಿ ಸಂರಕ್ಷಿತ ಪ್ರದೇಶ ಎಂದು ಘೋಷಿಸಿ 25 ವರ್ಷ ಆಗಿದ್ದು, ರಜತ ಮಹೋತ್ಸವ ಆಚರಣೆಗೆ ಸಭೆಯಲ್ಲಿ ಅನುಮತಿ ನೀಡಲಾಯಿತು. ಬಿಳಿಗಿರಿ ರಂಗನಾಥಬೆಟ್ಟ(ಬಿಆರ್‌ಟಿ)ಯಲ್ಲಿ ಪಾರಂಪರಿಕ ಕಟ್ಟವಿದ್ದು, ಇದನ್ನು ಸಿಬ್ಬಂದಿಯ ವಸತಿಗೃಹವಾಗಿ ಬಳಸಲಾಗುತ್ತಿದೆ. ಶಿಥಿಲಾವಸ್ಥೆಯಲ್ಲಿದ್ದು, ಮೂಲ ಸ್ವರೂಪಕ್ಕೆ ಚ್ಯುತಿ ಆಗದಂತೆ ಇದರ ದುರಸ್ತಿಗೆ ಸಹ ಇಂದಿನ ಸಭೆಯಲ್ಲಿ ಒಪ್ಪಿಗೆ ನೀಡಲಾಯಿತು.

ಪ್ಲಾಸ್ಟಿಕ್ ಮುಕ್ತ ವಲಯವಾಗಿಸಿ: ರಾಜ್ಯದ ಹುಲಿ ಸಂರಕ್ಷಿತ ಪ್ರದೇಶ ಸೇರಿದಂತೆ ಎಲ್ಲ ಅರಣ್ಯ ಪ್ರದೇಶವನ್ನು ಸಂಪೂರ್ಣ ಪ್ಲಾಸ್ಟಿಕ್ ಮುಕ್ತಗೊಳಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಬಂಡೀಪುರ, ನಾಗರಹೊಳೆ, ಕುಮಾರ ಪರ್ವತದ ಅರಣ್ಯ ಪ್ರದೇಶಕ್ಕೆ ಸಾಗುವ ರಸ್ತೆಗಳ ಬದಿಯಲ್ಲಿ ಪ್ಲಾಸ್ಟಿಕ್ ಕವರ್, ನೀರಿನ ಬಾಟಲಿಗಳು ಬಿದ್ದಿರುವುದನ್ನು ನೋಡಿದ್ದೇನೆ. ವನ್ಯಜೀವಿಗಳ ಪ್ರಾಣಕ್ಕೇ ಈ ಪ್ಲಾಸ್ಟಿಕ್ ಕುತ್ತು ತರುತ್ತದೆ. ಇತ್ತೀಚೆಗೆ ಮೃತಪಟ್ಟ ಮೊಸಳೆ, ಜಿಂಕೆಯ ಹೊಟ್ಟೆಯಲ್ಲಿ 3–4 ಕೆ.ಜಿ. ಪ್ಲಾಸ್ಟಿಕ್ ಇದ್ದ ಬಗ್ಗೆ ಮಾಹಿತಿ ಇದೆ ಇದು ಆತಂಕಕಾರಿ ವಿಷಯವಾಗಿದ್ದು, ಅರಣ್ಯದೊಳಗಿನ ಮಾರ್ಗದಲ್ಲಿ ಸಾಗುವ ಎಲ್ಲ ವಾಹನಗಳನ್ನು ಎರಡು ಹಂತದಲ್ಲಿ ಕಟ್ಟು ನಿಟ್ಟಿನ ತಪಾಸಣೆಗೆ ಒಳಪಡಿಸಿ ಎಂದು ಸೂಚಿಸಿದರು.

ಮೊದಲ ಹಂತದಲ್ಲಿ ಸ್ವಯಂ ಪ್ರೇರಿತವಾಗಿ ಕಸದ ಬುಟ್ಟಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಹಾಕಲು ತಿಳಿಸಿ, ಎರಡನೇ ಹಂತದಲ್ಲಿ ತಪಾಸಣೆ ಮಾಡಿ ಪ್ಲಾಸ್ಟಿಕ್ ಬಾಟಲಿ, ಕ್ಯಾರಿಬ್ಯಾಗ್ ತೆಗೆದುಕೊಂಡು ಬರುವವರಿಗೆ ದಂಡ ವಿಧಿಸಬೇಕು. ಅರಣ್ಯ ಪ್ರದೇಶದೊಳಗೆ ಹರಿಯುವ ನದಿಗಳ ಮೂಲಕವೂ, ಕಬಿನಿ ಹಿನ್ನೀರಿನಲ್ಲೂ ಪ್ಲಾಸ್ಟಿಕ್ ತ್ಯಾಜ್ಯ ಬರುತ್ತಿದೆ. ಇದನ್ನು ತಡೆಯಲು ಕ್ರಮ ಕೈಗೊಳ್ಳಿ ಎಂದು ಸೂಚಿಸಿದರು.

ಸಭೆಯಲ್ಲಿ ಶಾಸಕರಾದ ಎ.ಎಸ್. ಪೊನ್ನಣ್ಣ, ಮಂಥರ್‌ಗೌಡ, ಜಿ.ಡಿ.ಹರೀಶ್ ಗೌಡ, ಅರಣ್ಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮಂಜುನಾಥ್ ಪ್ರಸಾದ್, ಮುಖ್ಯ ಪ್ರಧಾನ ಅರಣ್ಯ ಸಂರಕ್ಷಣಾಧಿಕಾರಿ(ಹೆಚ್‌ಓಪಿಸಿಸಿಎಫ್) ಬ್ರಿಜೇಶ್ ದೀಕ್ಷಿತ್, ಪಿಸಿಸಿಎಫ್ ಸುಭಾಷ್ ಮಾಲ್ಕಡೆ, ಚಾಮರಾಜನಗರ ವೃತ್ತದ ಸಿಸಿಎಫ್ ಟಿ. ಹೀರಾಲಾಲ್, ಮಡಿಕೇರಿ ಸಿಸಿಎಫ್ ಮನೋಜ್ ತಿವಾರಿ, ಮೈಸೂರು ವೃತ್ತದ ಸಿಎಫ್ ಡಾ.ಮಾಲತಿಪ್ರಿಯಾ, ಹುಲಿ ಯೋಜನೆಯ ಸಿಎಫ್ ಡಾ.ಪಿ.ರಮೇಶ್ ಕುಮಾರ್, ನಾಗರಹೊಳೆ ಡಿಸಿಎಫ್ ಹರ್ಷ ಕುಮಾರ್ ಚಿಕ್ಕನರಗುಂದ, ಬಂಡೀಪುರ ಡಿಸಿಎಫ್ ಎಸ್.ಪ್ರಭಾಕರನ್, ಬಿಆರ್‌ಟಿ ಡಿಸಿಎಫ್ ದೀಪಾ ಜೆ.ಕಂಟ್ರಾಕ್ಟರ್, ಭದ್ರಾ ಡಿಸಿಎಫ್ ಯಶ್ಪಾಲ್, ಕಾಳಿ ಡಿಸಿಎಫ್ ನೀಲೇಶ್ ಶಿಂಧೆ ಹಾಗೂ ಇನ್ನಿತರರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visweswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 2496522/23

JN Mysore Ayurvedic Neuro & Panchakarma Centre
2 DAYS FREE AYURVEDIC NEURO THERAPY CAMP
For Low Back Pain
Neck pain/ cervical Spondylosis
Disc bulge, Sciatica pain.
Frozen shoulder pain
Lumar Spondylosis
T.K.Layout Mysore
9964205255,6360049827

ಅಪಾರ್ಟ್‌ಮೆಂಟ್ ಬಾಡಿಗೆಗೆ ಇದೆ
ಸಿಂಗಲ್ ಬೆಡ್ರೂಮ್ ಸಂಕಲ್ಪ ಮಣಿ ಮಂದಿರ ಲಕ್ಷ್ಮಿಪುರಂ, ಮೈಸೂರು
9845316076

FOR RENT
4/2 BHK, GF, SEMI-COMMERCIAL, CLOSE TO JSS HOSPITAL, SUITABLE FOR RESIDENT / PG / STORES
9845293278

AVAILABLE FOR RENT
Newly built Semi furnished Independent Duplex House 3 BHK with 2 car parkings Modular Kitchen 3200sqft of built up area, Solar with UPS backup CCTV facility. Located in a Serene locality having all the amenities, Lalitadrinagara South (MUDA Layout) Near Lalitadripura Ring Road, Mysore. (Rent expected - 40K)
Suitable for : Guest House, Banks, Companies Etc.,
Call : 94498 52488

WANTED
For SKY Institution Part Lime Teacher Job Weekly Two Days only Attractive salary
Call: 9632159434

20x40 ಸೈಟು ಮಾರಾಟಕ್ಕಿದೆ
ನಮೂನೆ-3, ನಗರ ಸಭೆ, ಹೂಟಗಳ್ಳಿ, ಮೈಸೂರು
ಪೂರ್ವ ದಿಕ್ಕು, 30 ಲಕ್ಷ (ನೆಗೋ.)
8050257887, 876270588

ಬೇಕಾಗಿದ್ದಾರೆ
ಮೊಬೈಲ್ ಫೋನ್ ಶೋರೂಂಗೆ ಕೆಲಸಕ್ಕೆ ಬೇಕಾಗಿದ್ದಾರೆ.
(ಫುಲ್ ಟೈಂ ಮಾತ್ರ) ಸಂಪರ್ಕಿಸಿ.
9886409722

ಸಂಪು ಮತ್ತು ಟ್ಯಾಂಕ್
ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7975101020

ಉಚಿತ ಕುಡಿತ ಬಿಡಿಸುವ ಶಿಬಿರ
ಮೈಸೂರಿನ ಮನೋಶ್ರೇಷ್ಠ ಪುನರ್ವಸತಿ ಕೇಂದ್ರದಲ್ಲಿ ಜೂನ್ 25 ರಿಂದ 21 ದಿನಗಳ ಕಾಲ ವ್ಯಸನಮುಕ್ತ ಶಿಬಿರವನ್ನು ಏರ್ಪಡಿಸಲಾಗಿದೆ. ಊಟ ವಸತಿ ಮತ್ತು ಇನ್ನಿತರ ಸೌಲಭ್ಯಗಳು ಉಚಿತ.
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:
7019073118
8123297920

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

LAND CARE SOLUTIONS
SITES FOR SALE
T - Narasaipura Road - Chikkalli (MUDA)
Bogadi Road - Jettihundi (DTCP)
Call : 0821-3137855 / 9845414842

EAST FACE MUDA APPROVED
40X60 SITE FOR SALE
NITYANANDASAGARA HUILALU MYSORE
8217851695

FOR SALE
1. 20x30, 30x40, Sites @ Bogadi, Rainbow School
2. 18x40 Site in Kuvempu Ngr
3. 2&3 BHK Flats at RK Nagar
4. 70x140 Farm House Plots @ KRS Back Water Attach 20L
5. 50x30 Site@Saraswathi Puram Semi Commercial
6. 20x30, Sites For Sale At Yelwala
30x40 Sites attached to Brahmins Lyt
PRAKRUTHI PROPERTIES
95386 90359, 90359 90359

ಮನೆ ಮಾರಾಟಕ್ಕಿದೆ
33x57 ನಿವೇಶನದಲ್ಲಿ (11/B ಖಾತೆ) ಸುಸಜ್ಜಿತವಾಗಿ ನಿರ್ಮಿಸಿರುವ, 3 ರೂಂ, ವಾರ್ಡ್‌ರೋಬ್, ಸೋಲಾರ್, ಸ್ವಂತ ಬೋರ್‌ವೆಲ್ ಹೊಂದಿರುವ 4 ವರ್ಷದ ಮನೆ ಕೇರ್ಗಳ್ಳಿಯಲ್ಲಿ ಮಾರಾಟಕ್ಕಿದೆ (ಆದಿತ್ಯ ಸರ್ಕಲ್ ಹತ್ತಿರ) ಸಂಪರ್ಕಿಸಿ:
8660097318

OFFICE SPACE FOR RENT
3 BHK 1st Floor At Saraswathipuram Kamakshi Hospital Road, Opp. Dhanalakshmi Bank
9740098182

ಮನೆ ಮಾರಾಟಕ್ಕಿದೆ HOUSE FOR SALE
30x40 ಅಳತೆಯಲ್ಲಿ ನಿರ್ಮಿಸಿರುವ ನವ ವಿನ್ಯಾಸವುಳ್ಳ ಸುಂದರವಾದ ಮನೆ ಚಾಮುಂಡೇಶ್ವರಿ ರೈಲ್ವೆ ಲೇಔಟ್‌ನಲ್ಲಿ ಕೆ.ಆರ್.ಎಸ್ ಮುಖ್ಯರಸ್ತೆಯಲ್ಲಿ ಜೆ.ಎಸ್.ಎಸ್.ಎಸ್ ಇಂಜಿನಿಯರಿಂಗ್ ಕಾಲೇಜ್) ಮಾರಾಟಕ್ಕಿದೆ
9482746287

ಮನೆ ಬಾಡಿಗೆಗೆ ಇದೆ
E/F, 2BHK
ಸೋಲಾರ್ ಸೌಲಭ್ಯ ಇರುವ ಮನೆ ನಂ. 37, ಕಪನಿ 'ಬಿ' ಬ್ಲಾಕ್, 18ನೇ ಕ್ರಾಸ್, ಜೆ.ಪಿ.ನಗರ, ಮೈಸೂರು
9448553699
9844143544

ಅನುಬಂಧ ವೃದ್ಧಾಶ್ರಮ
(ಸಸ್ಯಾಹಾರಿಗಳಿಗೆ ಮಾತ್ರ)
ವಯಸ್ಸಾದ ಹಾಸಿಗೆ ಹಿಡಿದ ಮತ್ತು ಪಾರ್ಶ್ವವಾಯು ಪೀಡಿತ ವಯೋವೃದ್ಧರನ್ನು ಸುಸಜ್ಜಿತವಾದ ಸಸ್ಯಹಾರಿ ಊಟ, ವಸತಿ ಮತ್ತು ವೈದ್ಯಕೀಯ ಸೌಲಭ್ಯಗಳೊಂದಿಗೆ ನಮ್ಮ ಆಶ್ರಮದಲ್ಲಿ ನೋಡಿಕೊಳ್ಳಲಾಗುವುದು.
9880793910
8050999438

ಬೋಳು ತಲೆಯ ಸಮಸ್ಯೆಯೇ?

ಕಿಮೊತೆರಪಿ ಚಿಕಿತ್ಸೆಗೆ ಒಳಪಡುತ್ತಿರುವ ರೋಗಿಗಳಿಗೆ ಸ್ಥಳಾಂತ್ಮಕ ಬೆಲೆಯಲ್ಲಿ ಹೇರ್ ವಿಗ್‌ಗಳು ದೊರೆಯುತ್ತವೆ.
SMART HAIR FIXING
574, 9th Cross, Anikethana Road, kuvempunagar, Mysuru
MYSURU 9611028523 MANGALORE 9343142258

ಸಂಪು ಮತ್ತು ಟ್ಯಾಂಕ್
ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 6360485921

ಸೈಟ್ ಮಾರಾಟಕ್ಕಿದೆ
(MUDA) ಅಮೃತ ಸಾಗರ 30x40 (S/F) 26 ಲಕ್ಷ ಹುಣಸೂರು ರಸ್ತೆ (ಹುಯಿಲಾಳು) ಖರೀದಿದಾರರು ಮಾತ್ರ ಕರೆಮಾಡಿ
8296442979

Industrial shed FOR SALE
KIADB Industrial shed FOR SALE at Hebbal Industrial Area, Metagalli, Site Area - (50x80) 4000 sqft South Face contact Owner
8095444834

ಮಳಿಗೆ ಬಾಡಿಗೆಗೆ ದೊರೆಯುತ್ತದೆ
ಮೈಸೂರು ನಗರ ತ್ಯಾಗರಾಜ ಮುಖ್ಯ ರಸ್ತೆಯಲ್ಲಿ ಅರಸು ಮಂಡಳಿ ಸಹಕಾರ ಸಂಘದ ಕಟ್ಟಡದ ಪೂರ್ವಾಭಿಮುಖವಾಗಿರುವ 12x10 ಅಳತೆಯ ಮೇಲಂತಸ್ತಿನ ಮಳಿಗೆ ಬಾಡಿಗೆಗೆ ದೊರೆಯುತ್ತದೆ.
0821-2439609
7019480195

ಸಂಪು ಮತ್ತು ಟ್ಯಾಂಕ್
ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

ಪ್ರಸಿದ್ಧ ಕೇರಳ ಶ್ರೀ ಭಗವತಿ ಜ್ಯೋತಿಷ್ಯರು
ಪಂ|| ಕುಮಾರ್ ಪ್ರಸಾದ್ ಗುರೂಜಿ
Mob: 9731839596
ಸ್ತ್ರೀ-ಪುರುಷಪ್ರೇಮ, ಸಂತಾನ, ದಾಂಪತ್ಯ, ಸಮಸ್ಯೆ, ನಿಮ್ಮ ಯಾವುದೇ ಗುಪ್ತ ಸಮಸ್ಯೆಗಳಿಗೆ, ಅಷ್ಟಮಂಗಳ, ಪ್ರಶ್ನೆಯಿಂದ, ನೇರ ಉತ್ತರ ಹಾಗೂ ಶಾಶ್ವತ, ಪರಿಹಾರಕ್ಕಾಗಿ, ಚೋಟನಿಕರ, ಭಗವತಿ ತಾಯಿ, ರಾಜರಾಜೇಶ್ವರಿ, ಕುಟ್ಟಿಚೇತನ್, ಕೇರಳದ, ಮಾಂತ್ರಿಕ ಶಕ್ತಿಯಿಂದ, 2 ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ಮನೆ ವಿಳಾಸ: ಲಕ್ಷ್ಮಿ ನಿವಾಸ ನಂ.19/D2, ಬುದ್ಧ ಮಾರ್ಗ, ಹೋಟೆಲ್ ದೋಸೆ ಕಾರ್ನರ್ ಪಕ್ಕ, ಹೊಸ DC ಆಫೀಸ್ ಎದುರು, ಸಿದ್ಧಾರ್ಥ ಲೇಔಟ್, ಮೈಸೂರು

ಸಂಪು ಮತ್ತು ಟ್ಯಾಂಕ್
ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 9108566022

ಕೇರಳ ಕೊಳ್ಳೇಗಾಲದ ಶ್ರೀ ಜ್ಯೋತಿಷ್ಯರು
ಪಂ|| ರಾಜು ಗುರೂಜಿ
Mob: 99022 39655
ಸತತವಾಗಿ 12 ವರ್ಷ ಕೇರಳ ಕೊಳ್ಳೇಗಾಲದ ವಿದ್ಯೆಯನ್ನು ಸಿದ್ಧಿ ಮಾಡಿಕೊಂಡಿರುವ ದಿವ್ಯ ಜ್ಞಾನಿ ರಾಜು ಗುರೂಜಿ ಯವರು ಸ್ತ್ರೀ-ಪುರುಷ ಪ್ರೇಮ, ದಾಂಪತ್ಯ ಸಮಸ್ಯೆ, ಶತ್ರು ಭಾದೆ, ನಿಮ್ಮ ಯಾವುದೇ ಜಟಿಲವಾದ ಸಮಸ್ಯೆಗಳಿಗೆ 2 ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ. ಭೇಟಿಯಾಗಿ ಖಾಯಂ ವಿಳಾಸ: ರೂಂ ನಂ. 9, 2ನೇ ಮಹಡಿ, ಸಿಟಿ ಬಸ್ ಸ್ಟ್ಯಾಂಡ್ ಬಿಲ್ಡಿಂಗ್, ಕೆ.ಆರ್. ಸರ್ಕಲ್, ಮೈಸೂರು-1

ಶ್ರೀ ಸಿದ್ದೇಶ್ವರ ಟೂರಿಸ್ಟ್ & ಟ್ರಾವೆಲ್ಸ್
ಗಾಂಧಿ ಚೌಕ್, ಮೈಸೂರು
ಉತ್ತರ ಭಾರತದ 12 ದಿನಗಳ ಪ್ರವಾಸ ರೈಲು ಮತ್ತು ಬಸ್ಸಿನಲ್ಲಿ ಪ್ರಯಾಣ ದಿನಾಂಕ: 22-07-2024
ಕ್ಷೇತ್ರಗಳ ದರ್ಶನ: ದೆಹಲಿ, ಮಥುರಾ, ಆಗ್ರಾ, ಅಲಹಾಬಾದ್, ಕಾಶಿ, ಅಯೋಧ್ಯ, ಹರಿದ್ವಾರ್, ಋಷಿಕೇಶ್ ಇತ್ಯಾದಿ
ವ್ಯವಸ್ಥಾಪಕರು : ರಾಜಣ್ಣ
9343288718,8296956718

ಸ್ತ್ರೀ ಶಕ್ತಿ ಸಂಘದ ಸದಸ್ಯರಿಗೆ ಒಂದು ಸುವರ್ಣಾವಕಾಶ
ಮಹಿಳೆಯರಿಗೆ ಉದ್ಯೋಗ ಅವಕಾಶವನ್ನು ನೀಡಲಾಗುತ್ತದೆ. ಹಾಗೆಯೇ ಆನ್‌ಲೈನ್ / ಆಫ್‌ಲೈನ್ ಉದ್ಯೋಗದ ಅವಕಾಶವು ಸಹ ನೀಡಲಾಗುತ್ತದೆ.
9036822577

ಬೇಕಾಗಿದ್ದಾರೆ
ಮೈಸೂರಿನ ಪೆಟ್ರೋಲ್ ಬಂಕ್‌ನಲ್ಲಿ ನೈಟ್ ಶಿಫ್ಟ್ ಕೆಲಸಕ್ಕಾಗಿ ಪುರುಷರು/ ಹುಡುಗರು ಬೇಕಾಗಿದ್ದಾರೆ.
ಸಂಬಳ: 15,000/-
8892258814

ಕೇವಲ 2000 ರೂಪಾಯಿಗೆ
ದಪ್ಪನೆಯ Double ಹಾಸಿಗೆ 2 ದಿಂಬು ಸಹ ಒಂದು ಬೆಡ್‌ಶೀಟ್ ಮತ್ತು 2 ದಿಂಬಿನ ಕವರ್ ಮತ್ತು ಒಂದು ಸೂಟ್‌ಕೇಸ್ ರಗ್ಗು ಸೇರಿ.
8884179981

ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್
ಜರ್ಮನ್ ಟೆಕ್ನಾಲಜಿ ಬಳಸಿ ಸಂಪು, ಟ್ಯಾಂಕ್ ಮತ್ತು ಸೋಲಾರ್ ಸರ್ವೀಸ್ ಮಾಡಲಾಗುತ್ತದೆ.
Mob: 9008711654

ಕ್ರಿಶ್ಚಿಯನ್ ವರ ಬೇಕಾಗಿದೆ
ವಯಸ್ಸು 27, SSLC ಕಲಿತಿರುವ / ವಯಸ್ಸು 29, ನರ್ಸ್ ಉದ್ಯೋಗದಲ್ಲಿರುವ / ವಯಸ್ಸು 33, PUC / ವಯಸ್ಸು 38, SSLC ಕಲಿತಿರುವ ವಧುವಿಗೆ ಆದಾಯವಿರುವ ವರ ಬೇಕಾಗಿದೆ. ವಧುವರರಿಗಾಗಿ ಸಂಪರ್ಕಿಸಿ. 'ವಧುಗಳಿಗೆ' ಮಾತ್ರ ಉಚಿತ ನೋಂದಾವಣೆ (ಮಂಗಳೂರು). ಸಂಪರ್ಕಿಸಿ:
Mob: 9880685177

AFFIDAVIT
I, Raghava N., residing at No. #52, 2nd Stage, 5th Main, Gokulam, Mysore-570 002, declared that my name is Raghava N. as recorded in my PAN Card and Aadhar Card, that my name has been entered as Raghavendra N. in my old DL documents. I hereby state that Raghava N. and Raghavendra N. are the name of one & the same person & that is myself. I declare this in front of Notary Usha. D. on 17-6-2024.
Sd/- Raghava N.

ಸೈಟು ಮಾರಾಟಕ್ಕಿದೆ
ಮನೆಗಳು, ಬಾಡಿಗೆ, ಭೋಗ್ಯಕ್ಕೆ - ಇಲವಾಲ ಗ್ರಾಮ, ಕರಸನಹಳ್ಳಿ ಪ್ರಾಥಮಿಕ ಶಾಲೆ, ಶಿಕ್ಷಕರ ಬಡಾವಣೆಯಲ್ಲಿ ಅಳತೆ 30x50 ಪಶ್ಚಿಮ, ನಿವೇಶನದ ಸಂಖ್ಯೆ 85. ಬೆಲೆ 30 ಲಕ್ಷ ಮತ್ತು ನಗುವಿನಹಳ್ಳಿ ಗಾರ್ಡನಿಯಾ ಲೇಔಟ್ ಸೈಟು ನಂ. 56 ಅಳತೆ 30x40 ಪೂರ್ವ ದಿಕ್ಕು ಬೆಲೆ 24 ಲಕ್ಷ ಮಾರಾಟಕ್ಕಿದೆ ಮತ್ತು ಬನ್ನಿಮಂಟಪ ಹುಡ್ಕೋ ಬಡಾವಣೆಯಲ್ಲಿ ಬಾಡಿಗೆ ಮತ್ತು ಭೋಗ್ಯಕ್ಕೆ ಮನೆ ಇದೆ. ಸಂಪರ್ಕಿಸಿ: ಶಿವಪ್ಪ, ಬನ್ನಿಮಂಟಪ
Mob: 9141050266

ಕಾರ್ ಡ್ರೈವರ್ ಬೇಕಾಗಿದ್ದಾರೆ
ಮೈಸೂರಿನಲ್ಲಿ ಮನೆಗೆ ಅನುಭವವುಳ್ಳ ಕಾರ್ ಡ್ರೈವರ್ ಬೇಕಾಗಿದ್ದಾರೆ.
9880102700

ಹೊಸ ಮನೆ ಮಾರಾಟಕ್ಕಿದೆ
(3BHK) # 102, ವಿನಾಯಕ ಎನ್‌ಕ್ಲೈವ್ ಉತ್ತರದಿಕ್ಕು ರಸ್ತೆ ನಂತರ ಪಾರ್ಕ್ ಪೂರ್ವ ಬಾಗಿಲು,
20x35, 15 ಚದರ ಡ್ಯೂಪ್ಲೆಕ್ಸ್ ಮನೆ, ವಿಜಯನಗರ 4ನೇ ಹಂತದ ಹತ್ತಿರ ಹಾಗೂ ಹೂಟಗಳ್ಳಿ ವೃತ್ತದಿಂದ 1 ಕಿ.ಮೀ.
9900954048
9663816466

Change of Name
I, Vasantha, residing at No. 2551, 3rd Cross, Kalidasa Road, Vontikoppal, Mysore, have changed my name as Vasanthamma on my own free will, in front of Notary L.N. Rajendran on 20-6-2024.
Sd/- Vasanthamma

ಹೊಸ ಮನೆ ಮಾರಾಟಕ್ಕಿದೆ (MUDA)
20x40 E/F ground floor, F/F Floor 2 BHK with attached. 100% Vaasthu, fully furnished, near ring Road, JP Nagar, Mysore. 80% bank loan available.
Mob: 9886734344

ನಿರ್ಮಲ ಸರ್ವೀಸ್
ಸಂಪು ಕ್ಲೀನಿಂಗ್‌ಗಾಗಿ ಸಂಪರ್ಕಿಸಿ:
6364079244

ಕಳೆದಿದೆ
ನರಸಯ್ಯ, ದೇವೇಗೌಡನ ಕೊಪ್ಪಲು ಗ್ರಾಮ, ಕಸಬಾ ಹೋಬಳಿ, ಪಿರಿಯಾಪಟ್ಟಣ ತಾಲ್ಲೂಕು, ಮೈಸೂರು ಜಿಲ್ಲೆ, ಇವರಿಗೆ ಆಶ್ರಯ ಬಡಾವಣೆಯಲ್ಲಿ ಪಿರಿಯಾಪಟ್ಟಣ ಪುರಸಭೆ ವತಿಯಿಂದ ದಿ. 12-2-1991 ರಂದು ಮಂಜೂರಾಗಿದ್ದ ನಿವೇಶನ ಸಂಖ್ಯೆ 65 (20x30 ಅಳತೆ) ರ ಹಕ್ಕುಪತ್ರ (ನಂ. 0007871) ದಿ. 10-6-2024 ರಂದು ಪಿರಿಯಾಪಟ್ಟಣದಿಂದ ಮೈಸೂರಿಗೆ ಹೋಗುವ ದಾರಿಯಲ್ಲಿ ಆಕಸ್ಮಿಕವಾಗಿ ಕಳೆದಿದ್ದು, ಸಿಕ್ಕಿದವರು ಸಂಪರ್ಕಿಸಿ:
Mob: 8296502293



Solar Water Heater SALES & SERVICE
BAJAJ FINSERV
SUNZONE SOLAR SYSTEM
VM Double Road, Kuvempunagar, Mysuru
9845175443

ಸೈಟುಗಳು ಮಾರಾಟಕ್ಕಿದೆ
ಶ್ರೀರಾಂಪುರ ರಿಂಗ್ ರೋಡ್ ಹಾಗೂ ಶ್ರೀನಗರ ಹಿಂಭಾಗ, ಮೈಸೂರು
9945321020

ಚಾಮುಂಡೇಶ್ವರಿ ವಾಟರ್ ಸರ್ವಿಸ್
ಶೆಡ್ ಮತ್ತು ವಾಟರ್ ಸರ್ವಿಸ್ ಮಿಷನ್‌ಗಳು ಮಾರಾಟಕ್ಕಿದೆ. ಮಹದೇಶ್ವರ ದೇವಸ್ಥಾನ ಎದುರು, ಟಿ.ನರಸೀಪುರ ರಸ್ತೆ, ಆಲನಹಳ್ಳಿ, ಮೈಸೂರು
8453455539

ಉದ್ಯೋಗವಕಾಶ
ಮಹಿಳೆಯರು, ಯುವತಿಯರು, ನಮ್ಮ ಶಾಖೆಗಳಲ್ಲಿ ವಯಸ್ಸಾದ ಹಿರಿಯ ನಾಗರೀಕರನ್ನು ನೋಡಿಕೊಳ್ಳಲು ಹೋಂ ನರ್ಸ್‌ಗಳು ಬೇಕಾಗಿದ್ದಾರೆ. ತಿಂಗಳ ವೇತನ: 13000 ರಿಂದ 20000 ರೂ. ವರೆಗೆ. ಉಚಿತ ಊಟ ಮತ್ತು ವಸತಿಯೊಂದಿಗೆ ವಯೋಮಿತಿ: 18-50 ವರ್ಷ ವಯಸ್ಸಿನವರು. ಸಂಪರ್ಕಿಸಿ:
Mob: 9739292222

100% TEAK WOOD
FACTORY FINISH DOORS & FRAMES
@ FACTORY DEPOT RATES

10 YEARS WARRANTY*
9901291267
9731591267

LANDS HOMES APARTMENTS
The Property Consultants
BUY SELL
PR Properties
✆ 88808 99994

ಪೂರ್ವ ದಿಕ್ಕು
40x60 ಮುಡಾ ಅಪ್ರೂವ್ಡ್ ಸೈಟು ಮಾರಾಟಕ್ಕಿದೆ
ಬೋರ್‌ವೆಲ್ ಇದೆ.
ನಿತ್ಯಾನಂದಸಾಗರ, ಹುಯಿಲಾಳು, ಮೈಸೂರು
Mob: 8217851695

MUDA Approved Site 80% Loan
ತಕ್ಷಣ ಮನೆ ಕಟ್ಟಲು, ನಮ್ಮ ಬಡಾವಣೆಗಳಲ್ಲಿ SBM / ರೂಪ ನಗರ ಪಕ್ಕ - 58 ಲಕ್ಷ. ಬನ್ನೂರು ರಸ್ತೆ, ಮಾನಸಿ ನಗರ ಪಕ್ಕ - 57 ಲಕ್ಷ
Police / JSS ಲೇಔಟ್ ಪಕ್ಕ - 46.5 ಲಕ್ಷ. ವಿಜಯನಗರ 3ನೇ ಹಂತ ಪಕ್ಕ - 76 ಲಕ್ಷ. ಇಲವಾಲ ಬಸ್‌ಸ್ಟ್ಯಾಂಡ್ ಹಿಂಭಾಗ 20x30 - 16 ಲಕ್ಷ, 30x40 - 25 ಲಕ್ಷ.
BROKERS EXCUSE
Mob: 7892445689

ಮನೆ ಬಾಡಿಗೆಗೆ/ಭೋಗ್ಯಕ್ಕೆ ಇದೆ
ಶ್ರೀರಾಂಪುರ ರಿಂಗ್ ರಸ್ತೆ ಹತ್ತಿರ (ಯನಿವರ್ಸಿಟಿ ಲೇಔಟ್ ಎದುರು) ಗಾಯಿತ್ರಿ ಬಡಾವಣೆಯಲ್ಲಿ 2BHK 1ನೇ ಮಹಡಿ, 1BHK 2ನೇ ಮಹಡಿಯಲ್ಲಿರುತ್ತದೆ.
9108946647
9448092818

ವಧು-ವರರ ಮಾಹಿತಿ ಕೇಂದ್ರ
ಮೈಸೂರಿನಲ್ಲಿ ಹೊಸದಾಗಿ ಪ್ರಾರಂಭಿಸುತ್ತಿರುವ ಎಲ್ಲಾ ಜಾತಿಯ ವಧುವರರ ಮಾಹಿತಿ ಕೇಂದ್ರಕ್ಕೆ ಯಾವುದೇ ನೋಂದಣಿ ಶುಲ್ಕವಿಲ್ಲದೆ ತಮ್ಮ ಸ್ವವಿವರ ಮತ್ತು ಫೋಟೋದೊಂದಿಗೆ ಈ ಕೆಳಕಂಡ ಮೊಬೈಲ್ ನಂಬರ್‌ಗೆ ವಾಟ್ಸ್‌ಪ್ (Whatsapp) ವಿವರ ಕಳುಹಿಸುವ ಮೂಲಕ ನೋಂದಾಯಿಸಿಕೊಳ್ಳಿ
7804633200

1 BHK, 3.5 km to city
ಬಾಡಿಗೆ 4,500, ಭೋಗ್ಯ 4.5 ಲಕ್ಷ. ಲಲಿತಮಹಲ್ ರಸ್ತೆ, ಪೊಲೀಸ್ ಕ್ವಾಟ್ರಸ್ ಸಮೀಪ ಪೂರ್ವ-ಉತ್ತರ ದಿಕ್ಕಿನ ಮನೆ
Pay 5 Lakh & buy site
80% ಲೋನ್ ಸೌಲಭ್ಯದೊಂದಿಗೆ ಸಪ್ತಮಾತೃಕ ಲೇಔಟ್ 16 - 22 ಲಕ್ಷ. ಬೋಗಾದಿ ರಸ್ತೆ, ಜಟ್ಟಿಹುಂಡಿ ಪಕ್ಕ - 27.6 ಲಕ್ಷ.
Brokers Excuse
Mob: 8123075038

HOUSE SALE Kuvempunagar
2 BHK Old Demolish House, 35x55, N/F Site, Park Opp, Price -2.05 Cr,
Near Vijaya Bank Circle
8660105902

DTCP APPROVED LAYOUT
21x40 E/F Site @Rs.11.20 ಲಕ್ಷ
ಚಾಮುಂಡಿಬೆಟ್ಟದ ಹಿಂಭಾಗ ಮಾರಶೆಟ್ಟಿಹಳ್ಳಿ ನಂತರ
9538583377

40x45 SITE FOR SALE
North West Corner, MUDA Auction Site, Vijayanagar 1st Stage, Price - 1.90 Cr
Behind Yoganarasimhaswamy Temple
8660105902

SITES for SALE JP Nagar Ring Road
30 x 40 - 33 Lakhs, Near Gurur Bus Stop, Ramabainagar, Mysore.
DTCP approved (Corporation limits)
1.5 Kms from JP Nagar Ring Road
8660105902

ಮಾರಾಟಕ್ಕೆ ಅಥವಾ ಬಾಡಿಗೆಗೆ
8x38 ಪೂರ್ವ ದಿಕ್ಕು ಸಣ್ಣ ಕಲ್ನಾರ್ ಶೀಟಿನ ಮನೆ 4ನೇ ಕ್ರಾಸ್ (ಗಲ್ಲಿಯಲ್ಲಿ) ಕೃಷ್ಣಮೂರ್ತಿಪುರಂ
7975447262

HOUSES & OFFICE SPACE FOR RENT
@ SARASWATHIPURAM, KUVEMPUNAGAR & SURROUNDINGS
S.S. PROPERTY SERVICES
(Opp. Kuvempu School) S.S. Puram, Mysore
Mob: 9342125252

SITE FOR SALE
40X60 At Kuvempunagar Dattagalli,
40x60 Ground & First Floor House Sale at Ramakrishnanagar
9844915156
9844911156

WANTED
Accountant (Female)
Sales Boy+Incentive
Salary 10K- 20K
Furniture Showroom
Shardadevi Nagar, Mysore
8050744784

ಬೇಕಾಗಿದ್ದಾರೆ
ನೇಗಿಲಯೋಗಿ ವಿವಿಧೋದ್ದೇಶ ಸೌಹಾರ್ದ ಸಹಕಾರಿ ನಿಯಮಿತ (ರಿ)
ಸೌಹಾರ್ದ ಸಹಕಾರಿ ಕಛೇರಿಗೆ ಅಕೌಂಟೆಂಟ್ ಹುದ್ದೆಗೆ ಟ್ಯಾಲಿ, ಕನ್ನಡ ಟೈಪಿಂಗ್, ಎಂ.ಎಸ್.ಆಫೀಸ್ ಗೊತ್ತಿರುವ ಕಛೇರಿ ಕೆಲಸಕ್ಕೆ ಒಬ್ಬ ಅಭ್ಯರ್ಥಿ ಬೇಕಾಗಿದ್ದಾರೆ, ಅರ್ಹತೆ: ಯಾವುದೇ ಪದವಿ ಆಸಕ್ತ ಅಭ್ಯರ್ಥಿಗಳು ತಮ್ಮ ದಾಖಲಾತಿಗಳ ನಕಲು ಪ್ರತಿಗಳೊಡನೆ ಕಛೇರಿಗೆ ಸಂಪರ್ಕಿಸುವುದು ಅರ್ಜಿ ಸಲ್ಲಿಸಲು ಕಡೆಯ ದಿನಾಂಕ; 25-06-2024, ವಿಳಾಸ ಜಯನಗರ ಹೊಸ ಕೋರ್ಟ್ ಎದುರು, ಮೈಸೂರು.
9620621999, 9740600682

ಮುಡಾ ಅಪ್ರೂವ್ಡ್ ಸೈಟ್ ಮಾರಾಟಕ್ಕಿದೆ
ಬ್ರಾಹ್ಮಿನ್ ಲೇಔಟ್ "A" ಬ್ಲಾಕ್ 60 ಅಡಿ ರಸ್ತೆಗೆ ಒಂದೇ ಸೈಟ್‌ನಲ್ಲಿ 30x40, 30x24 ಹಾಗೂ 10x10, 5 ಅಂಗಡಿ ಮಳಿಗೆಗೆ ಸ್ಥಳಾವಕಾಶವುಳ್ಳ ಸೈಟ್ ಮಾರಾಕಟಕ್ಕಿದೆ. ಒಟ್ಟು ವಿಸ್ತೀರ್ಣ 2900 ಸ್ಕ್ವೇರ್ ಫೀಟ್ ಚ.ಅ.ಗೆ 1850/-
8618644386
9880280299

40x60 SITE FOR SALE
W/F, 60 feet Road DOLLARS COLONY Adj. to University Layout
7899214181

ನೇರ ನೇಮಕಾತಿ
1. ಹಾಸ್ಟೆಲ್ ವಾರ್ಡನ್ (ಮಹಿಳೆ) (ವಿದ್ಯಾರ್ಹತೆ -BEd) ಸಂಬಳ 20,000/- ಊಟ, ವಸತಿ ಸೌಲಭ್ಯವಿದೆ.
2. P T ಟೀಚರ್ (ಮಹಿಳೆ) ಸಂಬಳ : 15000/- ಹಳ್ಳಿ ಮೈಸೂರು, ಹೊಳೆನರಸೀಪುರ,
3. ಸೆಕ್ಯೂರಿಟಿ ಗಾರ್ಡ್ : 5 ಹುದ್ದೆ ಸಂಬಳ 15000/- ಊಟ, ವಸತಿ ಸೌಲಭ್ಯವಿದೆ.
ನಂಜನಗೂಡು, ದೇವನೂರು ಸುತ್ತಮುತ್ತ ಸಂಪರ್ಕಿಸಿ (10 ರಿಂದ 6)
9972837203
9036745292

ಹೊಸ ಸೈಟ್‌ಗಳ ಮಾರಾಟ
Yelwala ನಂತರ School ಮತ್ತು College ಹತ್ತಿರ ಹುಣಸೂರು ರಸ್ತೆ, ಮೈಸೂರು
9880774395

SITE FOR SALE
20X30 S/F Vijayanagar 4th Stage 2nd Phase
8050821108

20x30 Newly construction HOUSE FOR SALE
West Facing North Door G+2 3BHK
DATAGALLI. 30*40 new House For Sale West Facing North Door G+2 Somnathanagar Dattagalli
9900251194,9738884777

House For Sale
@ MUDA Layout 2+1 BHK 20x30 South Facing site East Facing Door, Shanthaveri Gopal Gowda Nagar, Mysore
9740019514
9900251194

ಉದ್ಯೋಗವಕಾಶ
ಮೈಸೂರಿನ ಹೆಸರಾಂತ ಹೋಂ ನರ್ಸಿಂಗ್ ಸಂಸ್ಥೆಯಲ್ಲಿ ಮಕ್ಕಳನ್ನು ಹಾಗೂ ಬಾಣಂತಿಯರನ್ನು ಆರೈಕೆ ಮಾಡಲು Full Time, Day / Night Shift ಕೆಲಸಕ್ಕೆ ಆಸಕ್ತಿಯುಳ್ಳ ಯುವತಿಯರು ಹಾಗೂ ಮಹಿಳೆಯರು ತಕ್ಷಣ ಬೇಕಾಗಿದ್ದಾರೆ.
ವೇತನ : 10,000/- ರಿಂದ 15000/-ರೂ.ಗಳು ಅನುಭವದ ಅಗತ್ಯ ಇಲ್ಲ. ತರಬೇತಿ ನೀಡಲಾಗುತ್ತದೆ.
8021-4242351
9606714441, 7349278503

ಶ್ರೀ ಸ್ವರ್ಣ ಬೋರ್‌ವೆಲ್ಸ್
ಮೈಸೂರು ತಾಲ್ಲೂಕಿಗೆ ಮಾತ್ರ ಅನ್ವಯ
6 1/2 ಮತ್ತು 4 1/2 ಡ್ರಿಲ್ಲಿಂಗ್ ಮಾಡಿಕೊಡಲಾಗುತ್ತದೆ.
ಡ್ರಿಲ್ಲಿಂಗ್ ದರ 80 ರೂ. ಒಂದು ಅಡಿಗೆ

9945743473
9740843473,9880943473

MUDA SITE FOR SALE
40*60 West facing 40 feet Road width Site For Sale at Paramanandasagara Telecom Layout off Hunsur Road.. Suitable for Immediate Construction
9590911111

WANTED
Telecallers
Marketing Manager
TV Anchors
Pigmy collection boy
Office Assistant
9980959598

Water Proofing Tiles Work, Plumbing, Electrical Work,
ಮಾಡಲಾಗುತ್ತದೆ. ಹಾಗೂ ಹಳೇ ಮನೆಗಳನ್ನು Renovation ಮಾಡಿಕೊಡಲಾಗುತ್ತದೆ.
8660384527

ಕೆಲಸಕ್ಕೆ ಬೇಕಾಗಿದ್ದಾರೆ
ಮೈಸೂರಿನ ಬೋಗಾದಿಗೆ PUC ಪಾಸ್ ಆಗಿರುವ (35 ರಿಂದ 40 ವರ್ಷದ ವರೆಗೂ ವಯೋಮಿತಿ) ಅಭ್ಯರ್ಥಿಗಳು ಬೇಕಾಗಿದ್ದಾರೆ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ
9035050652
9035050654

ಮನೆ ಮಾರಾಟಕ್ಕಿದೆ
20x30 ಅಳತೆಯ Muda ನಿವೇಶನದಲ್ಲಿ ಕಟ್ಟಿರುವ Independent ಮನೆ W/North ದಿಕ್ಕಿನ ಬಾಗಿಲು Ground Floor 2BHK, Ist Floor One ಮಿನಿ ಹಾಲ್ ಹಾಗೂ Clear Documetnts ಹೊಂದಿರುವ ಮನೆ ಶ್ರೀರಾಂಪುರ 2ನೇ ಹಂತ ಆದ್ಯ ಸೂಪರ್ ಮಾರ್ಕೆಟ್‌ಗೆ ಹತ್ತಿರವಿರುತ್ತದೆ.
ಬೆಲೆ : 60 ಲಕ್ಷ Slightly Negotiable
8105253621
8050504660

ಮೈಸೂರು ಮಿತ್ರ ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 6 ರಲ್ಲಿ

ಜಿಲ್ಲೆಯಾದ್ಯಂತ 10ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ

ಯೋಗಾಭ್ಯಾಸ ಸ್ವಂತ ಶ್ರಮದ ಆರೋಗ್ಯ ವಿಮೆ

ಮಂಡ್ಯ, ಜೂ.21– ರೋಗವನ್ನು ದೂರವಿಟ್ಟು ಆರೋಗ್ಯವನ್ನು ವೃದ್ಧಿಸುವ ಶಕ್ತಿ ಯೋಗಾಭ್ಯಾಸಕ್ಕೆ ಇದೆ. ಯೋಗ ಎಂಬುದು ದಿನನಿತ್ಯ ರೂಡಿಸಿಕೊಂಡರೆ, ಅದು ಹಣ ಕಟ್ಟದೆ ಸ್ವಂತ ಶ್ರಮದಿಂದ ಪಡೆಯುವ ಆರೋಗ್ಯ ವಿಮೆ ಇದ್ದಂತೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ 10ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಯೋಗ ಮನಸ್ಸು ಹಾಗೂ ದೇಹದ ಆರೋಗ್ಯಕ್ಕೆ ಪೂರಕವಾಗಿದ್ದು, ಯೋಗವನ್ನು ಸಂಜೀವಿನಿ ಎಂದು ಕರೆಯಬಹುದು. ಪ್ರತಿಯೊಬ್ಬರೂ ದಿನದ 24 ಗಂಟೆಯಲ್ಲಿ ಒಂದು ಗಂಟೆ ಯೋಗಾಭ್ಯಾಸಕ್ಕೆ ಮೀಸಲಿಡಬೇಕು. ಯೋಗ ಬಲ್ಲವನಿಗೆ ರೋಗದ ಭಯವಿಲ್ಲ, ರೋಗ ಇರುವವನಿಗೆ ಯೋಗದ ಅರಿವಿಲ್ಲ. ರೋಗ ಬರುವ ಮುಂಚೆಯ ಯೋಗಾಭ್ಯಾಸ ಮಾಡುವ ಯೋಗ ನಮ್ಮದಾಗಲಿ ಎಂದರು.

ಆದಿಚುಂಚನಗಿರಿ ಶಿಕ್ಷಣ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಶ್ರೀ ಪುರುಷೋತ್ತಮನಂದ ನಾಥ ಸ್ವಾಮೀಜಿ ಮಾತನಾಡಿ, ದೇಹ ದಂಡನೆ ಮಾಡಲು ಹೋಗಿ ಎಷ್ಟೋ ಜನರು ಪ್ರಾಣ ಕುತ್ತು ತಂದು ಕೊಂಡಿರುವವರು ಕೂಡ ಇದ್ದಾರೆ, ಆದರೆ ಯೋಗ ಮಾಡುವುದರಿಂದ ಯಾವುದೇ ತರಹ ಪ್ರಾಣ ಹಾನಿ ಇಲ್ಲ, ಹಣ ಖರ್ಚು ಮಾಡುವ ಆಗಿಲ್ಲ. ಹೆಚ್ಚು ಶ್ರಮ ಕೂಡ ಹಾಕುವ ಆಗಿಲ್ಲ ಆದ್ದರಿಂದ ಪ್ರತಿಯೊಬ್ಬರು ಕೂಡ ಯೋಗವನ್ನು ಮಾಡಿ ಮನಸ್ಸಿನ ನೆಮ್ಮದಿಯನ್ನು ಪಡೆದುಕೊಳ್ಳಿ ಎಂದು ಹೇಳಿದರು.

ಯೋಗಾಭ್ಯಾಸವನ್ನು ಕೇವಲ ಒಂದು ದಿನ ಮಾಡಿದರೆ ಸಾಲದು ಅದರ ಪ್ರಯೋಜನ ಕಂಡುಕೊಳ್ಳಬೇಕು ಎಂದರೆ ಪ್ರತಿನಿತ್ಯ ಯೋಗಾಭ್ಯಾಸವನ್ನು ಮಾಡಬೇಕು ಎಂದು ತಿಳಿಸಿದರು.





ಅಂತರರಾಷ್ಟ್ರೀಯ ಯೋಗ ದಿನವನ್ನು ಶ್ರೀಗಳ ಸಮ್ಮುಖದಲ್ಲಿ ಜಿಲ್ಲಾಧಿಕಾರಿ ಡಾ.ಕುಮಾರ್ ಉದ್ಘಾಟಿಸಿದರು. ಯೋಗದಲ್ಲಿ ಪಾಲ್ಗೊಂಡಿರುವ ಯೋಗಪಟುಗಳನ್ನು ಬಲಚಿತ್ರದಲ್ಲಿ ಕಾಣಬಹುದು


ಶ್ರೀರಂಗಪಟ್ಟಣದ ಬೇಬಿ ಮಠ ಮತ್ತು ಚಂದ್ರವನಾಶ್ರಮ ಪೀಠಧ್ಯಕ್ಷರಾದ ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿಗಳು ಮಾತಾನಾಡಿ ಇಡೀ ವಿಶ್ವಕ್ಕೆ ಯೋಗ ಪರಿಚಯಿಸಿದ ಹೆಮ್ಮೆ ಭಾರತ ದೇಶಕ್ಕಿದೆ. ಇಂದು ಎಲ್ಲಾ ರಾಷ್ಟ್ರಗಳ ಜೊತೆಗೆ ಏಕಕಾಲಿಕವಾಗಿ ಯೋಗ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದು ಹೇಳಿದರು.

ದೇಹವನ್ನು ದಂಡಿಸದೆ ದೇಹಕ್ಕೆ ಹಾಗೂ ಮನಸ್ಸಿಗೆ ಉಲ್ಲಾಸ ಕೊಡುವ ಜೊತೆಗೆ ಸದೃಢ ಆರೋಗ್ಯವನ್ನು ಹೊಂದಲು ಯೋಗ ಬಹಳ ಉಪಯುಕ್ತವಾಗಿದೆ. ಶಾಲಾ ಪಠ್ಯ ಪುಸ್ತಕದಲ್ಲಿ ಎಲ್ಲಾ ವಿಷಯದ ಬಗ್ಗೆ ಪಾಠಗಳನ್ನು ಅಳವಡಿಸಿದ್ದಾರೆ ಅದೇ ರೀತಿ ಪಠ್ಯ ಪುಸ್ತಕದಲ್ಲಿ ಯೋಗ ಶಾಸ್ತ್ರವನ್ನು ಅಳವಡಿಸಿದರೆ ಆರೋಗ್ಯದ ಬಗ್ಗೆ ಅರಿವು ಹೆಚ್ಚಾಗುತ್ತದೆ ಎಂದು ಹೇಳಿದರು.

ಯೋಗಾಭ್ಯಾಸದಿಂದ ಅಂಗಾಂಗಗಳು ಬಲವಾಗುತ್ತವೆ, ಕಣ್ಣುಗಳು ದೃಷ್ಟಿ ಚೆನ್ನಾಗಿರುತ್ತದೆ, ಯಾವುದೇ ಅನಾರೋಗ್ಯವು ಸಹ ನಮ್ಮ ಬಳಿ ಸುಳಿಯುವುದಿಲ್ಲ. ಆದ್ದರಿಂದ ದಿನ ನಿತ್ಯ ಯೋಗಾಭ್ಯಾಸ ಮಾಡಿ ಎಂದರು.

ಜಿ.ಪಂ. ಸಿಇಓ ಶೇಕ್ ತನ್ವೀರ್ ಆಸೀಫ್, ಎಸ್ಪಿ ಎನ್.ಯತೀಶ್, ಎಡಿಸಿ ಡಾ.ಹೆಚ್.ಎಲ್. ನಾಗರಾಜ್, ಆಯುಷ್ ಇಲಾಖೆ ವೈದ್ಯಾಧಿಕಾರಿ ಡಾ.ಸೀತಾಲಕ್ಷ್ಮಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಓಂ ಪ್ರಕಾಶ್, ನೆಹರು ಯುವ ಕೇಂದ್ರದ ಅಧಿಕಾರಿ ರಾಜೇಶ್ ಕಾರಂತ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ತುಷಾರಮಣಿ, ಪತಂಜಲಿಯೋಗ ಶಿಕ್ಷಣ ಸಂಸ್ಥೆಯ ಸಂಚಾಲಕ ಶಂಕರನಾರಾಯಣ ಶಾಸ್ತ್ರಿ ರೆಡ್ ಕ್ರಾಸ್ ಸಂಸ್ಥೆಯ ಗೌರವಾಧ್ಯಕ್ಷ ಮೀರಾಶಿವಲಿಂಗಯ್ಯ, ಭಾರತ ಸ್ಕೌಟ್ಸ್ ಅಂಡ್ ಗೈಡ್‌ನ ಭಕ್ತವತ್ಸಲ, ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕಿಕ್ಕೇರಿಯಲ್ಲೂ ಯೋಗ ಪ್ರದರ್ಶನ



ಕಿಕ್ಕೇರಿ: ಪಟ್ಟಣದ ಕೆಪಿಎಸ್ ಶಾಲೆಯಲ್ಲಿ ವಿದ್ಯಾರ್ಥಿಗಳು ಯೋಗಾಭ್ಯಾಸದಲ್ಲಿ ತಲ್ಲೀನರಾಗಿ ನಮ್ಮ ದೇಶದ ಯೋಗದ ಮಹತ್ವ ಸಾರಿದರು.

ಸಾಮೂಹಿಕ ಯೋಗದಲ್ಲಿ ಯೋಗಪಟು ಅಲ್ಲಮಪ್ರಭು ಮಾರ್ಗದರ್ಶನದಲ್ಲಿ ವಿವಿಧ ಆಸನಗಳನ್ನು ಏಕಾಗ್ರತೆಯಿಂದ ಪ್ರದರ್ಶಿಸಿದರು.

ಅಂತರಾಷ್ಟ್ರೀಯ ಯೋಗಪಟು ಅಲ್ಲಮಪ್ರಭು ಮಾತನಾಡುತ್ತ ದೇಹವನ್ನು ದಂಡಿಸಿ ಮಾಡುವ ಯೋಗದಿಂದ ನಿರೋಗಿಗಳಾಗಿ ಧೀರ್ಘಾಯಸ್ಸು ಪಡೆಯಬಹುದು. ವಿದ್ಯಾರ್ಥಿಗಳಿಗೆ ಏಕಾಗ್ರತೆ, ಮನೋವಿಕಾಸ, ಆರೋಗ್ಯ, ದೈಹಿಕ ಶಕ್ತಿ, ಉಲ್ಲಾಸದೊಂದಿಗೆ ಆಯಾಸವನ್ನು ದೂರಮಾಡುವ ಏಕೈಕ ಸಾಧನವಾಗಿದೆ. ಬುದ್ಧಿಗೆ ನವಚೈತನ್ಯ ತುಂಬುವ ಯೋಗವನ್ನು ಗುರುವಿಲ್ಲದೆ ಕಲಿಯುವ ಸಾಹಸ ಮಾಡಬಾರದು. ಪತಾಂಜಲಿಮುನಿ ನೀಡಿದ ಯೋಗ ವಿದ್ಯೆ ಇಂದು ವಿಶ್ವವ್ಯಾಪಿ ಆರೋಗ್ಯಕ್ಕೆ ಮದ್ದಾಗಿದೆ ಎಂದರು.

ಶಾಲಾ ವಿಶಾಲ ಕ್ರೀಡಾಂಗಣದಲ್ಲಿ ಯೋಗ ಮುನಿ ಪತಾಂಜಲಿ ಮುನಿಗೆ ನಮಿಸಲಾಯಿತು. ಪ್ರಾರ್ಥನೆಯೊಂದಿಗೆ ಆರಂಭವಾದ ಯೋಗ ದಿನದಲ್ಲಿ ಮಕ್ಕಳು ವಜ್ರಾಸನದಲ್ಲಿ ಕುಳಿತು ವಿವಿಧ ಭಂಗಿಗಳನ್ನು ಪ್ರದರ್ಶಿಸಿದರು.

ಎಸ್‌ಡಿಎಂಸಿ ಅಧ್ಯಕ್ಷ ಐಕನಹಳ್ಳಿ ಕೃಷ್ಣೇಗೌಡ, ಸದಸ್ಯ ದಿನೇಶ್‌ಬಾಬು, ಪ್ರಾಂಶುಪಾಲ ದೊರೆಸ್ವಾಮಿ, ಉಪಪ್ರಾಂಶುಪಾಲ ಎಚ್.ಎಂ.ಬಸವರಾಜಪ್ಪ, ಬಿಆರ್‌ಸಿ ವೀರಭದ್ರಯ್ಯ, ಸಿಆರ್‌ಪಿ ರಾಮಚಂದ್ರು, ಎನ್‌ಎಸ್‌ಎಸ್ ಘಟಕಾಧಿಕಾರಿ ಕುಮಾರಸ್ವಾಮಿ, ಎನ್‌ಸಿಸಿ ಘಟಕಾಧಿಕಾರಿ ಎಸ್.ಎಂ. ಬಸವರಾಜು, ಸುರೇಶ್, ಬಿ.ಎನ್. ಪರಶಿವಮೂರ್ತಿ, ಎ.ಎಂ. ಮಂಜುನಾಥ್, ರಮೇಶ್, ನಾಗೇಶ್, ವಿನಾಯಕ, ರವೀಂದ್ರ, ಶ್ರೀಕಾಂತ್ ಚಿಮ್ಮಲ್, ಮಮತಾ, ಪಾರ್ವತಿ. ಲೀಲಾವತಿ, ಇಂದಿರಾ ಇದ್ದರು.

ಅರ್ಜಿ ಆಹ್ವಾನ

ಮಂಡ್ಯ,ಜೂ.21– ಕ್ರೀಡಾ ವಿದ್ಯಾರ್ಥಿ ವೇತನ ಯೋಜನೆಯಡಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಪ್ರತಿಭಾವಂತ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಮಾಧ್ಯಮಿಕ/ಪ್ರೌಢಶಾಲಾ ವಿದ್ಯಾರ್ಥಿ ಕ್ರೀಡಾಪಟುಗಳಿಗೆ ವಾರ್ಷಿಕ ರೂ 10,000 ಗಳಂತೆ ಪ್ರೋತ್ಸಾಹಿತ ಕ್ರೀಡಾ ವಿದ್ಯಾರ್ಥಿ ವೇತನ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಜೂ.30ರೊಳಗೆ ಅರ್ಜಿಯನ್ನು https://sevasindhu service.karnataka. gov.in ವೆಬ್‌ಸೈಟ್ ಮೂಲಕ ಸಲ್ಲಿಸತಕ್ಕದ್ದು.

ಪ್ರತ್ಯೇಕ ಪ್ರಕರಣದಲ್ಲಿ ಇಬ್ಬರು ನಾಪತ್ತೆ

ಮಂಡ್ಯ,ಜೂ.21– ಪ್ರತ್ಯೇಕ ಪ್ರಕರಣದಲ್ಲಿ ಇಬ್ಬರು ನಾಪತ್ತೆಯಾಗಿದ್ದಾರೆ. ಶ್ರೀರಂಗಪಟ್ಟಣ ತಾಲೂಕು ಅರಕೆರೆ ಹೋಬಳಿ ಆಲುಗೂಡು ಗ್ರಾಮದ ನಾಗರಾಜು(38) ಕಾಣೆಯಾಗಿದ್ದಾರೆ ಎಂದು ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿ ಸಾಧಾರಣ ಮೈಕಟ್ಟು, ಕಪ್ಪು ಮೈ ಬಣ್ಣ, ಎಡೆಗಡೆ ಎದೆಯ ಮೇಲೆ ಮಧು ಎಂಬ ಹಚ್ಚೆ ಇರುತ್ತದೆ ಬಲ ಕೈನ ಮೇಲೆ ಎ.ಎಸ್.ಪಿ.ಎನ್ ಎಂಬ ಇಂಗ್ಲೀಷ್ ಅಕ್ಷರದ ಹಚ್ಚೆ ಇರುತ್ತದೆ. ಮತ್ತೊಂದು ಪ್ರಕರಣದಲ್ಲಿ ಬಲ್ಲೇನಹಳ್ಳಿ ಗ್ರಾಮದ ಕುಮಾರಆರ್(65) ಕಾಣೆಯಾಗಿದ್ದಾರೆ ಎಂದು ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯು 6.4 ಅಡಿ ಎತ್ತರ, ಸಾಧಾರಣ ಮೈಕಟ್ಟು ಎಣ್ಣೆ ಗೆಂಪು ಮೈ ಬಣ್ಣ, ಮೂಗಿನ ಮೇಲೆ ಹಳೆ ಗಾಯಕ್ಕೆ ಹೋಲಿಕೆ ಹಾಕಿರುವ ಗುರುತು ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232–22488, 9480804800ನ್ನು ಸಂಪರ್ಕಿಸಬಹುದು ಎಂದು ಶ್ರೀರಂಗಪಟ್ಟಣ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭಾರತೀನಗರದಲ್ಲೂ ಯೋಗ ಪ್ರದರ್ಶನ



ಭಾರತೀನಗರದ ಭಾರತೀ ಕಾಲೇಜಿನ ಆವರಣದಲ್ಲಿ ಆಯೋಜಿಸಿದ್ದ 10ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಯೋಗಪಟುಗಳು ಯೋಗ ಪ್ರದರ್ಶನ ನೀಡಿ ಗಮನ ಸೆಳೆದರು.

ದೊಡ್ಡಬ್ಯಾಡರ ಹಳ್ಳಿ ಗ್ರಾಪಂಗೆ ಜೆಡಿಎಸ್‌ನ ಮನು ಅವಿರೋಧ ಆಯ್ಕೆ

ಪಾಂಡವಪುರ: ತಾಲೂಕಿನ ದೊಡ್ಡಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷರಾಗಿ ಜೆಡಿಎಸ್ ಬೆಂಬಲಿತ ಅಭ್ಯರ್ಥಿ ತಿಮ್ಮನಕೊಪ್ಪಲು ಕೆ.ಮನು ಶುಕ್ರವಾರ ಅವಿರೋಧವಾಗಿ ಆಯ್ಕೆಯಾದರು.

ಹಿಂದಿನ ಅಧ್ಯಕ್ಷ ಶಂಕರ್ ಅವರಿಂದ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಶುಕ್ರವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಆಯ್ಕೆ ಬಯಸಿ ಕೆ.ಮನು ಹೊರತುಪಡಿಸಿ ಉಳಿದ ಯಾವೊಬ್ಬ ಸದಸ್ಯರು ನಾಮಪತ್ರ ಸಲ್ಲಿಸಿದ ಹಿನ್ನೆಲೆಯಲ್ಲಿ ಕೆ.ಮನು ಅವರನ್ನು ಗ್ರಾಪಂನ ನೂತನ ಅಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿಯೂ ಆದ ಹೇಮಾವತಿ ನೀರಾವರಿ ನಿಗಮದ ಎಇಇ ಪುಟ್ಟಮಾಯಿಗೌಡ ಘೋಷಿಸದರು.



ಕೆ.ಮನು ಗ್ರಾಪಂ ನೂತನ ಅಧ್ಯಕ್ಷರಾಗಿ ಘೋಷಣೆಯಾಗುತ್ತಿದ್ದಂತೆಯೇ ಬೆಂಬಲಿಗರು, ಕಾರ್ಯಕರ್ತರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು. ಎಲ್ಲಾ ಸದಸ್ಯರು, ಮುಖಂಡರು ನೂತನ ಅಧ್ಯಕ್ಷ ಕೆ.ಮನು ಅವರನ್ನು ಅಭಿನಂಧಿಸಿದರು.

ಈ ಸಂದರ್ಭದಲ್ಲಿ ಗ್ರಾಪಂ ಉಪಾಧ್ಯಕ್ಷೆ ಪವಿತ್ರ ಸದಸ್ಯರಾದ ಶಂಕರ್, ಪ್ರಸನ್ನ, ನಿಂಗರಾಜು, ಕೆ.ರವಿರಾಜ, ಮಂಜುಳ, ಎಸ್. ಆನಂದ್, ಮಹದೇವಮ್ಮ, ಕುಮಾರಿ, ಶಿವಲಿಂಗ, ಬಿ.ಕೆ.ಶಕುಂತಲ, ಪಿಡಿಓ ನಿರಂಜನ್, ಕಾರ್ಯದರ್ಶಿ ಸಿದ್ದರಾಜು, ಮುಖಂಡರಾದ ಗ್ರಾಪಂ ಮಾಜಿ ಅಧ್ಯಕ್ಷ ರವಿ, ವಿಎಸ್‌ಎಸ್‌ಎನ್‌ಬಿ ಅಧ್ಯಕ್ಷ ಶಿವಣ್ಣ, ಚಿಕ್ಕಬ್ಯಾಡರಹಳ್ಳಿ ಡೇರಿ ಅಧ್ಯಕ್ಷ ಸಿ.ಎನ್.ಚಂದನ್, ಪರಮೇಶ್, ರಾಮಲಿಂಗು, ಕುಳ್ಳೇಗೌಡ, ಪಟ್ಟಸೋಮನಹಳ್ಳಿ ರಾಮಲಿಂಗೇಗೌಡ, ಶಂಕರೇಗೌಡ, ಟಿ.ಜಿ.ರವಿ, ಬುಸಿಗೌಡ, ಅಶೋಕ, ರಮೇಶ್, ಅಂಗಡಿಚನ್ನೇಗೌಡ ಸೇರಿದಂತೆ ಮುಖಂಡರು, ಗ್ರಾಮಸ್ಥರು ಹಾಜರಿದ್ದರು.

ಅಂತರ್ಜಾತಿ ವಿವಾಹ: ಪ್ರಶ್ನಿಸಿದವರ ಮೇಲೆ ಹಲ್ಲೆ

ನಾಗಮಂಗಲ: ತನ್ನ ಅಣ್ಣನ ಮಗಳನ್ನು ಬೇರೆ ಜಾತಿಯ ಯುವಕನೊಬ್ಬ ಮದುವೆಯಾದ ವಿಷಯವನ್ನು ತಿಳಿದು, ಕೇಳಲು ಹೋದ ಯುವತಿಯ ಚಿಕ್ಕಪ್ಪನ ಮೇಲೆ ಯುವಕನ ಕಡೆಯವರು ಹಲ್ಲೆ ಮಾಡಿದ ಘಟನೆ ತಾಲೂಕಿನ ದೇವಲಾಪುರ ಹೋಬಳಿಯ ಅರಸೇಗೌಡನ ಕೊಪ್ಪಲು ಗ್ರಾಮದ ಬಳಿ ನಡೆದಿದೆ.

ಘಟನೆಯ ಹಿನ್ನೆಲೆ: ರಾಜೇಗೌಡ ಎಂಬುವನೇ ಹಲ್ಲೆಗೊಳಗಾದವರಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ತನ್ನ ಅಣ್ಣನ ಮಗಳು ಮತ್ತು ಅದೇ ಗ್ರಾಮದ ಗಿರೀಶ ಪರಸ್ಪರ ಪ್ರೀತಿಸುತ್ತಿದ್ದು, ಮದುವೆಯಾಗಿದ್ದರು ಎನ್ನಲಾಗಿದೆ. ವಿಷಯ ತಿಳಿದ ಯುವತಿಯ ತಂದೆ ಚಿಕ್ಕರಸಯ್ಯ ತನ್ನ ಸಹೋದರ ರಾಜೇಗೌಡನ ಜೊತೆ ಗಿರೀಶ್ ಮನೆಯ ಬಳಿ ಹೋಗಿ ಪ್ರಶ್ನಿಸಿದ್ದಾರೆ.

ಇದರಿಂದ ಕೆರಳಿದ ಗಿರೀಶನ ಕುಟುಂಬದವರು ರಾಜೇಗೌಡನ ಮನೆಯ ಬಳಿ ತೆರಳಿ ಜಗಳ ಮಾಡಿದ್ದು, ಗ್ರಾಮದ ಮುಖಂಡರು ಸಮದಾನಿಸಿ ಕಳಿಸಿದ್ದರೆಂದು ತಿಳಿದುಬಂದಿದೆ.

ಅಷ್ಟಕ್ಕೆ ಸುಮ್ಮನಾಗದ ಆರೋಪಿಗಳು ರಾಜೇಗೌಡ ತಿಬ್ಬನಹಳ್ಳಿ ಗ್ರಾಮಕ್ಕೆ ಹೋಗಿ ಬೈಕ್‌ನಲ್ಲಿ ವಾಪಸ್ ಬರುತ್ತಿದ್ದ ಸಮಯದಲ್ಲಿ ಅಪ್ಪೇಗೌಡರ ಜಮೀನಿನ ಬಳಿ ಅಡ್ಡಗಟ್ಟಿ ಅವ್ಯಾಚ್ಯ ಶಬ್ದಗಳಿಂದ ನಿಂದಿಸಿ ಕೈಲಿದ್ದ ಬಡಿಗೆಯಿಂದ ಎಲ್ಲೆಂದರಲ್ಲಿ ಹಲ್ಲೆ ಮಾಡಿದರು. ಅದೇ ರಸ್ತೆಯಲ್ಲಿ ಬರುತ್ತಿದ್ದ ಗ್ರಾಮಸ್ಥನ್ನು ನೋಡಿ ಆರೋಪಿಗಳು ಪರಾರಿಯಾಗಿದ್ದಾರೆ.

ಕಣ್ಣು, ಕೈ, ಎಡಬುಜಕ್ಕೆ ತೀವ್ರ ಪೆಟ್ಟು ಬಿದ್ದು ಅಸ್ವಸ್ಥನಾಗಿ ರಸ್ತೆಯಲ್ಲಿ ಬಿದ್ದಿದ್ದ ರಾಜೇಗೌಡರನ್ನು, ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ಸ್ಪರ್ಷ್ ಆಸ್ಪತ್ರೆಗೆ ಸೇರಿಸಲಾಗಿದೆ. ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹರೀಶ್ ಮತ್ತು ಶಿವಕುಮಾರ ಅವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗಿದೆ.

ಲಕ್ಷ್ಮಮ್ಮ ನಿಧನ



ಕೆ.ಆರ್.ಪೇಟೆ, ಜೂ.21– ತಾಲೂಕಿನ ಕಸಬಾ ಹೋಬಳಿಯ ಹರೀನಹಳ್ಳಿ ಗ್ರಾಮದ ಹಿರಿಯ ಮುಖಂಡರಾದ ಲೇಟ್ ಕೃಷ್ಣೇಗೌಡರ ಧರ್ಮಪತ್ನಿ ಲಕ್ಷ್ಮಮ್ಮ(78) ಅವರು ಶುಕ್ರವಾರ ನಿಧನ ಹೊಂದಿದ್ದಾರೆ.

ಮೃತರು ಓರ್ವ ಪುತ್ರಿ ಶಾಂತಮ್ಮ ಚಂದ್ರೇಗೌಡ, ಅಳಿಯ ನಿವೃತ್ತ ಶಿಕ್ಷಕ ಚಂದ್ರೇಗೌಡ, ಮೊಮ್ಮಕ್ಕಳಾದ ಅಗ್ರಹಾರ ಬಾಚಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಎ.ಸಿ.ದಿವಿಕುಮಾರ್, ಚಂದ್ರೋ ದಯ ಬೋರ್ ವೆಲ್ಸ್ ಮಾಲೀಕರಾದ ಎ.ಸಿ.ಅನಿಲ್ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯ ಕ್ರಿಯೆಯು ಶುಕ್ರವಾರ ಮಧ್ಯಾಹ್ನ ಹರೀನಹಳ್ಳಿ ಗ್ರಾಮದ ಮೃತರ ತೋಟದಲ್ಲಿ ನಡೆಯಿತು.

ಗೂಡ್ಸ್ ವಾಹನ ಡಿಕ್ಕಿ; ಬೈಕ್ ಸವಾರರಿಬ್ಬರು ಸಾವು

ನಾಗಮಂಗಲ: ಗೂಡ್ಸ್ ವಾಹನ ಬೈಕಿಗೆ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸ್ಥಳದಲ್ಲಿಯೇ ಸಾವನ್ನಪ್ಪಿದ ದಾರುಣ ಘಟನೆ ತಾಲೂಕಿನ ಬೆಳ್ಳೂರು ಹೋಬಳಿಯ ನೆಲ್ಲಿಗೆರೆ ವೃತ್ತದ ಬಳಿ ನಡೆದಿದೆ.

ತುರುವೇಕೆರೆ ತಾಲೂಕಿನ ಅಂಗಡಿಗೆರೆ ಗ್ರಾಮದ ಕೃಷ್ಣ ಮತ್ತು ಅವನ ಸ್ನೇಹಿತ ತಮ್ಮ ಗ್ರಾಮದಿಂದ ಚನ್ನಪಟ್ಟಣ ಗ್ರಾಮಕ್ಕೆ ತೆರಳುತ್ತಿದ್ದು ನೆಲ್ಲಿಗೆರೆ ಕ್ರಾಸ್ ಬಳಿ ಅಂಗಡಿಯೊಂದರಲ್ಲಿ ಟೀ ಕುಡಿದು ಬೈಕ್ ಹತ್ತಿ ಹೊರಡುತ್ತಿದ್ದಂತೆ ಎದುರಿನಿಂದ ಬಂದ ಗೂಡ್ಸ್ ಗಾಡಿಯೊಂದು ಡಿಕ್ಕಿ ಹೊಡೆದಿದ್ದು ಬೈಕ್ ಸವಾರರಿಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಪ್ರಕರಣ ಬೆಳ್ಳೂರು ಠಾಣೆಯಲ್ಲಿ ದಾಖಲಾಗಿದೆ.

ಶ್ರೀರಂಗಪಟ್ಟಣದಲ್ಲಿ ಜನಸ್ಪಂದನ ಕಾರ್ಯಕ್ರಮ

ಶ್ರೀರಂಗಪಟ್ಟಣ, ಜೂ.21– ಶಾಸಕ ರಮೇಶ ಬಂಡಿಸಿದ್ದೇಗೌಡರ ಅಧ್ಯಕ್ಷತೆಯಲ್ಲಿ ತಾಲೂಕು ಪಂಚಾಯಿತಿ ಆವರಣದಲ್ಲಿ ಜನ ಸ್ಪಂಧನ ಕಾರ್ಯಕ್ರಮ ನಡೆಯಿತು. ಜಿಲ್ಲಾಧಿಕಾರಿ ಡಾ.ಕುಮಾರ, ಜಿಪಂ ಸಿಇಒ ಶೇಖ್ ತನ್ವೀರ್ ಆಸೀಫ್ ಹಾಗೂ ಪೊಲೀಸ್ ವರಿಷ್ಠಾಧಿಕಾರಿ ಯತೀಶ್ ಅವರುಗಳು ಪಾಲ್ಗೊಂಡಿದ್ದ ಸಭೆಯಲ್ಲಿ ಸಾರ್ವಜನಿಕರಿಂದ ಸಮಸ್ಯೆಗಳ ಅರ್ಜಿಗಳನ್ನು ಸ್ವೀಕರಿಸಲಾಯಿತು. ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



ಜನರಿಂದ ಅಹವಾಲು ಸ್ವೀಕರಿಸುತ್ತಿರುವ ಶಾಸಕರು ಮತ್ತು ಅಧಿಕಾರಿಗಳು.

ಶಾಸಕ ರಮೇಶ್ ಬಂಡಿಸಿದ್ದೇಗೌಡ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸರ್ಕಾರ ಸಾರ್ವಜನಿಕರಿಗೆ ಗ್ಯಾರಂಟಿ ಯೋಜನೆಗಳನ್ನು ನೀಡುವ ಮೂಲಕ ಮಾತು ತಪ್ಪದಂತೆ ನಡೆದುಕೊಂಡಿದೆ. ಇದರೊಂದಿಗೆ ಶ್ರೀರಂಗಪಟ್ಟಣ ಅಭಿವೃದ್ಧಿ ಕುರಿತಂತೆ ಹಲವಾರು ಯೋಜನೆಗಳು ಜಾರಿಯಾಗಿದೆ ಗ್ರಾಮೀಣ ಪ್ರದೇಶದ ರೈತರಿಗೆ ನಿರಂತರ ವಿದ್ಯುತ್ ನೀಡಲು ಮೊದಲು ಸ್ವಲ್ಪ ಅಡೆ ತಡೆಯಾಗಿತ್ತು. ನಂತರ ಅದನ್ನೂ ಸರಿಪಡಿಸಿ ನಿರಂತರ 7ಗಂಟೆ ವಿದ್ಯುತ್ ನೀಡಲಾಗುತ್ತಿದೆ. ಬೇಸಿಗೆ, ಬರಗಾಲ, ಮಳೆಯಾಗದೆ ಬೆಳೆಗಳು ಕೈ ತಪ್ಪಿ ಹೋಗಿವೆ. ಈ ನಡುವೆ ಕುಡಿಯುವ ನೀರಿಗೂ ತೊಂದರೆ ಅನ್ನುವಷ್ಟರಲ್ಲಿ ಮಳೆ ಆರಂಭವಾಗಿದೆ. ಕುಡಿಯುವ ನೀರು, ರಸ್ತೆ, ಒಳ ಚರಂಡಿ ಯೋಜನೆಗಳಿಗೆ ಸುಮಾರು 30 ಕೋಟಿಗೂ ಅಧಿಕ ಅನುಧಾನ ಬಂದಿದೆ ಎಂದರು.

ಕ್ಷೇತ್ರದಲ್ಲಿ 50 ಕೋಟಿಯಷ್ಟು ರಸ್ತೆ ಅಭಿವೃದ್ದಿಗೆ ಚಾಲನೆ ನೀಡಲಾಗಿದೆ. ಲೋಕಸಭಾ ಚುನಾವಣಾ ನೀತಿ ಸಂಹಿತೆಯಿಂದ ಕಾಮಗಾರಿಗಳು ವಿಳಂಭವಾಗಿತ್ತು. ಇದೀಗ ಎಲ್ಲವೂ ಸರಾಗವಾಗಿ ಪೂರ್ಣಗೊಳಿಸಲಾಗುತ್ತಿದೆ. ಜನಸ್ಪಂಧನ ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆಗೆ ಸೇರಿದ ಪೋಡಿ, ಆರ್‌ಟಿಸಿ ಬದಲಾವಣೆ, ತಿದ್ದುಪಡಿಗಳು ಹೆಚ್ಚು ದೂರುಗಳಿದ್ದು, ಸ್ಥಳದಲ್ಲೇ ಬಗೆಹರಿಸಿ ಕೊಡಲಾಗುತ್ತದೆ ರೈತರು ಜಿಲ್ಲಾಧಿಕಾರಿಗಳ ಮೂಲಕ ದೂರಿನ ಅರ್ಜಿಗಳನ್ನು ನೀಡಬೇಕು. ಅದಕ್ಕೆ ಪರಿಹಾರ ಅಥವಾ ಇತ್ಯಾರ್ಥವನ್ನು ಸ್ಥಳದಲ್ಲೇ ಪಡೆದುಕೊಳ್ಳಬೇಕು ಎಂದರು.

ನಂತರ ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ, ಈಗಾಗಲೇ ಜನ ಸ್ಪಂಧನಾ ಕಾರ್ಯಕ್ರಮಗಳನ್ನು ನಡೆಸಿ 21 ಸಾವಿರಕ್ಕೂ ಹೆಚ್ಚು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ. ರೈತರು, ಬಡವರ ಸಮಸ್ಯೆಗಳನ್ನು ಸ್ಥಳದಲ್ಲೇ ಬಗೆ ಹರಿಸಲಾಗಿದೆ. ಸರ್ಕಾರ ಇಂತಹ ಕಾರ್ಯಕ್ರಮ ಗಳ ಮೂಲಕ ಇರುವ ಸಮಸ್ಯೆಗಳನ್ನು ಬಗೆ ಹರಿಸಲು ಮುಂದಾಗಿದೆ. ಸಾರ್ವಜನಿಕರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಹೆಚ್ಚಿನ ವರ್ಗೀಕೃತ ಜಾಹೀರಾತು ಪುಟ 5ರಲ್ಲಿ

ದೇಶ - ವಿದೇಶ

ಸಮುದ್ರದಾಳದಲ್ಲಿ ಸಿಕ್ಕು 3 ಸಾವಿರ ವರ್ಷಗಳಷ್ಟು ಹಳೆಯ ಹಡಗು!

ಟೆಲ್ ಅವೀವ್ (ಇಸ್ರೇಲ್), ಜೂ.21– ಸಮುದ್ರದ ಆಳದಲ್ಲಿ ಸುಮಾರು 3 ಸಾವಿರ ವರ್ಷಗಳಷ್ಟು ಹಳೆಯ ಹಡಗನ್ನು ಇಸ್ರೇಲ್‌ನ ತಜ್ಞರು ಪತ್ತೆ ಹಚ್ಚಿದ್ದಾರೆ. ಈ ಹಡಗು ಅತ್ಯಂತ ಸುರಕ್ಷಿತವಾಗಿದೆ ಎಂದು ತಜ್ಞರು ಹೇಳಿಕೊಂಡಿದ್ದಾರೆ. ಇದೊಂದು ಸರಕು ಸಾಗಣೆ ಹಡಗು ಇರಬಹುದು ಎಂದು ಅಂದಾಜು ಮಾಡಲಾಗಿದೆ.



ಈ ಹಡಗಿನಲ್ಲಿ ಸಾಗಣೆ ಮಾಡಲಾಗುತ್ತಿದ್ದ ಸರಕು ಕೂಡಾ ಪತ್ತೆಯಾಗಿವೆ. ಲಂಡನ್ ಮೂಲದ ಇಂಧನ ಸಂಸ್ಥೆ ಎನರ್ಜೀನ್‌ನ ತಜ್ಞರು ಮೆಡಿಟರೇನಿಯನ್ ಸಮುದ್ರದ ಆಳದಲ್ಲಿ ಶೋಧ ಕಾರ್ಯ ನಡೆಸುವ ವೇಳೆ ಸಮುದ್ರದ ಮೇಲ್ಮೈನಿಂದ ಸುಮಾರು ಒಂದು ಮೈಲು ಆಳದಲ್ಲಿ ಈ ಹಡಗು ಪತ್ತೆಯಾಗಿದೆ.

ಈ ಹಡಗಿನಲ್ಲಿ ರೋಮನ್ ಹಾಗೂ ಗ್ರೀಕರ ಕಾಲದ ಉದ್ದನೆಯ ಹೂಜಿಗಳು ಪತ್ತೆಯಾಗಿವೆ. ಈ ಹೂಜಿಗಳಲ್ಲಿ ವೈನ್ ಅಥವಾ ಆಲೀವ್ ಎಣ್ಣೆ ಸಂಗ್ರಹಿಸಿ ಇಡುತ್ತಿದ್ದರು ಎಂದು ಶಂಕಿಸಲಾಗಿದೆ. ಈ ಹಡಗು ಕಂಚಿನ ಯುಗದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಸಮುದ್ರ ಸಾರಿಗೆ ಆಗಿರಬಹುದು ಎಂದು ತೀರ್ಮಾನಿಸಲಾಗಿದೆ. ಇಸ್ರೇಲ್ ದೇಶದ ಪ್ರಾಚ್ಯ ವಸ್ತು ಪ್ರಾಧಿಕಾರದ ಮುಖ್ಯಸ್ಥರಾದ ಜಾಕೋಬ್ ಶರ್ವಿಟ್, ಈ ಕುರಿತಾಗಿ ಅಧಿಕೃತ ಮಾಹಿತಿ ನೀಡಿದ್ದು, ಈ ಹಡಗು ಯಾವುದೋ ದುರಂತಕ್ಕೆ ತುತ್ತಾಗಿ ಮುಳುಗಡೆ ಆಗಿರಬಹುದು ಎಂದು ಶಂಕಿಸಿದ್ದಾರೆ.

ಹಳೆಯ ಪೇಂಟಿಂಗ್ ಬಟ್ಟಲನ್ನು 314 ಕೋಟಿಗೆ ಖರೀದಿಸಿದ ಉದ್ಯಮಿ

ಹಾಂಕ್‌ಕಾಂಗ್, ಜೂ.21– ಹಳೆಯ ಬಟ್ಟಲಿಗೆ ಉದ್ಯಮಿಯೊಬ್ಬ ಬರೋಬ್ಬರಿ 314 ಕೋಟಿ ರೂ. ಕೊಟ್ಟು ಖರೀದಿ ಮಾಡಿದ್ದಾನೆ. ಚೀನಾದ ಹಾಂಗ್ ಕಾಂಗ್‌ನಲ್ಲಿ ನಡೆದ ಹರಾಜಿನಲ್ಲಿ ಖರೀದಿಸಲಾಗಿದೆ.



ಇನ್ನು ಈ ಬಟ್ಟಲು ಚೀನಾದ ಉತ್ತರ ಭಾಗದ ಸಾಂಗ್ ರಾಜಮನೆತನಕ್ಕೆ ಸೇರಿದ ಬರೋಬ್ಬರಿ 1,000 ವರ್ಷಗಳಷ್ಟು ಹಳೆಯದು ಎಂಬುದು ಇದರ ವಿಶೇಷ.

ಈ ಬಟ್ಟಲಿನ ಹರಾಜಿನಲ್ಲಿ ಹಲವಾರು ಶ್ರೀಮಂತರು ಭಾಗವಹಿಸಿದ್ದರು. ಕೆಲವರು ನೇರವಾಗಿ ಭಾಗವಹಿಸಿದರೆ, ಇನ್ನು ಕೆಲವರು ಆನ್‌ಲೈನ್ ಮೂಲಕ ಪಾಲ್ಗೊಂಡಿದ್ದರು. ಈ ಬಟ್ಟಲನ್ನು ಸೋಥೆಬಿಸ್ ಎನ್ನುವವರು ಆರಂಭದಲ್ಲಿ 67 ಕೋಟಿ ರೂ.ಗೆ ಮಾರಾಟ ಮಾಡಲು ಹರಾಜಿಗಿಟ್ಟಿದ್ದರು. ಆದರೆ, ಉದ್ಯಮಿಗಳು ಹಾಗೂ ಶ್ರೀಮಂತರು ಈ ಬಟ್ಟಲನ್ನು ನಾವೇ ಖರೀದಿ ಮಾಡಬೇಕು, ರಾಜವಂಶದ ಹೆಗ್ಗಳಿಕೆ ನಮಗೆ ಸಿಗಬೇಕು ಎಂದು ಜಿದ್ದಿಗೆ ಬಿದ್ದವರಂತೆ ಬೆಲೆ ಏರಿಸಿ ಬಿಡ್ ಕೂಗಿದ್ದಾರೆ. ಕೊನೆಗೆ 20 ನಿಮಿಷಗಳ ಅಂತರದಲ್ಲಿ ಬಟ್ಟಲು ಮೂಲ ಹರಾಜು ಬೆಲೆಗಿಂತ 5 ಪಟ್ಟು ಜಾಸ್ತಿ 314 ಕೋಟಿಗೆ ವ್ಯಾಪಾರವಾಗಿದೆ.

ಈ ಬಟ್ಟಲು ಕೇವಲ 13 ಸೆಂಟಿಮೀಟರ್ ಗಾತ್ರವಿದೆ. ನೀಲಿ–ಹಸಿರು ಬಣ್ಣವನ್ನು ಹೊಂದಿದ್ದು, ಇದನ್ನು ಸಾಂಗ್ ರಾಜಮನೆತನದಲ್ಲಿ ಪೇಂಟಿಂಗ್ ಮಾಡುವ ಬ್ರಷ್ ತೊಳೆಯಲು ಬಳಕೆ ಮಾಡಲಾಗುತ್ತಿತ್ತು ಎಂದು ತಿಳಿದು ಬಂದಿದೆ.

ತಮಿಳುನಾಡಲ್ಲಿ ಕಳ್ಳಬಟ್ಟಿ ದುರಂತ: ಮೃತರ ಸಂಖ್ಯೆ 47ಕ್ಕೆ ಏರಿಕೆ

ಚೆನ್ನೈ, ಜೂ.21– ಕರುಣಾಪುರಂನಲ್ಲಿ ನಡೆದ ಕಳ್ಳಬಟ್ಟಿ ದುರಂತದಲ್ಲಿ ಮೃತಪಟ್ಟವರ ಸಂಖ್ಯೆ 47ಕ್ಕೆ ಏರಿದೆ ಎಂದು ತಮಿಳುನಾಡು ಸರ್ಕಾರ ಶುಕ್ರವಾರ ತಿಳಿಸಿದೆ. ಗುರುವಾರದವರೆಗೆ ಮೃತಪಟ್ಟ 29 ಜನರ ಪಾರ್ಥಿವ ಶರೀರವನ್ನು ಅವರ ಸಂಬಂಧಿಕರಿಗೆ ಹಸ್ತಾಂತರಿಸಲಾಗಿದೆ ಎಂದು ಕಲ್ಲಕುರಿಚ್ಚಿ ಜಿಲ್ಲಾಧಿಕಾರಿ ಪ್ರಶಾಂತ್ ಎಂ.ಎಸ್ ತಿಳಿಸಿದ್ದಾರೆ.




ಘಟನೆ ಬಳಿಕ ಒಟ್ಟು 165 ಜನರನ್ನು ಚಿಕಿತ್ಸೆಗಾಗಿ ಕಳ್ಳಕುರಿಚಿ, ಜಿಪ್ಮರ್, ಸೇಲಂ ಮತ್ತು ಮುಂಡಿಯಂಬಕ್ಕಂ ಆಸ್ಪತ್ರೆಗಳಲ್ಲಿ ದಾಖಲಿಸಲಾಗಿತ್ತು. ಅವರಲ್ಲಿ ಇದುವರೆಗೆ 47 ಮಂದಿ ಸಾವಿಗೀಡಾಗಿದ್ದು, ಚಿಕಿತ್ಸೆ ಪಡೆಯುತ್ತಿರುವ 118 ಮಂದಿಯಲ್ಲಿ 30 ಜನರ ಸ್ಥಿತಿ ಗಂಭೀರವಾಗಿದೆ. ಮೂವರು ಚೇತರಿಸಿಕೊಂಡಿದ್ದಾರೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

ಜಿಲ್ಲೆಯಲ್ಲಿ ಅಕ್ರಮ ಮದ್ಯ ಮಾರಾಟ ತಡೆಯಲು ವಿಶೇಷ ತಂಡಗಳನ್ನು ರಚಿಸಲಾಗಿದ್ದು, ತೀವ್ರ ಕಾರ್ಯಾಚರಣೆ ನಡೆಸುವಂತೆ ತಿಳಿಸಲಾಗಿದೆ. ವಿಷ ಪೂರಿತ ಮದ್ಯ ಸೇವಿಸಿದವರು ಸ್ವಯಂ ಪ್ರೇರಿತವಾಗಿ ವೈದ್ಯಕೀಯ ಪರೀಕ್ಷೆ ಮಾಡಿಸಿಕೊಳ್ಳಿ ಎಂದೂ ಅವರು ಮನವಿ ಮಾಡಿದ್ದಾರೆ. ಮೆಥನಾಲ್ ಮಿಶ್ರಿತ ಕಳ್ಳಬಟ್ಟಿ ಸೇವನೆ ಸಾವಿಗೆ ಕಾರಣ ಎಂದು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ತಿಳಿಸಿದ್ದಾರೆ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು. ಮೃತರ ಕುಟುಂಬದ ಸದಸ್ಯರಿಗೆ ತಲಾ 10 ಲಕ್ಷ, ಚಿಕಿತ್ಸೆ ಪಡೆಯುತ್ತಿರುವವರಿಗೆ 50 ಸಾವಿರ ಆರ್ಥಿಕ ನೆರವು ನೀಡಲಾಗುವುದು ಎಂದು ತಮಿಳುನಾಡು ಸಿಎಂ ಸ್ಟಾಲಿನ್ ಹೇಳಿದ್ದಾರೆ.

ಅಹಮದಾಬಾದ್‌ನ ಜನಪ್ರಿಯ ರೆಸ್ಟೋರೆಂಟ್‌ನ ಸಾಂಬಾರ್‌ನಲ್ಲಿ ಸತ್ತ ಇಲಿ ಪತ್ತೆ!

ನವದೆಹಲಿ, ಜೂ.21– ಅಹಮದಾಬಾದ್‌ನ ಜನಪ್ರಿಯ ರೆಸ್ಟೋರೆಂಟ್ ಒಂದರ ಸಾಂಬಾರ್‌ನಲ್ಲಿ ಸತ್ತ ಇಲಿ ಪತ್ತೆಯಾಗಿದ್ದು, ಆಹಾರ ಸುರಕ್ಷತೆಯ ಬಗ್ಗೆ ತೀವ್ರ ಆತಂಕ ಉಂಟಾಗಿದೆ. ನಿಕೋಲ್‌ನಲ್ಲಿರುವ ದೇವಿ ದೋಸೆ ರೆಸ್ಟೋರೆಂಟ್‌ನಲ್ಲಿ ಈ ಆಘಾತಕಾರಿ ಘಟನೆ ಬೆಳಕಿಗೆ ಬಂದಿದ್ದು, ಗ್ರಾಹಕರಲ್ಲಿ ಆತಂಕಕ್ಕೆ ಕಾರಣವಾಗಿದೆ.



ಅಹಮದಾಬಾದ್‌ನ ದೇವಿ ದೋಸೆ ಫುಡ್ ಜಾಯಿಂಟ್‌ನಲ್ಲಿ ಗ್ರಾಹಕರಿಗೆ ನೀಡಿದ್ದ ಸಾಂಬಾರ್‌ನಲ್ಲಿ ಸತ್ತ ಇಲಿ ಪತ್ತೆಯಾಗಿದೆ. ಈ ಸಂಬಂಧ ಗ್ರಾಹಕರು ಅಹ್ಮದಾಬಾದ್ ಮುನ್ಸಿಪಲ್ ಕಾರ್ಪೊರೇಷನ್ (ಎಎಂಸಿ)ಗೆ ಮಾಹಿತಿ ನೀಡಿದ್ದು, ಆರೋಗ್ಯ ಇಲಾಖೆಯು ರೆಸ್ಟೋರೆಂಟ್ ಮಾಲೀಕರಿಗೆ ನೋಟಿಸ್ ಜಾರಿ ಮಾಡಿದೆ.

ಸುದ್ದಿಗಾರರೊಂದಿಗೆ ಈ ಕುರಿತು ಮಾತನಾಡಿದ ಎಎಮ್‌ಸಿಯ ಆಹಾರ ಸುರಕ್ಷತಾ ಅಧಿಕಾರಿ ಭವಿನ್ ಜೋಶಿ, ಅಹಮದಾಬಾದ್ ಕಾರ್ಪೊರೇಷನ್‌ನ ಎಲ್ಲ ವ್ಯಾಪಾರಸ್ಥರು ಗ್ರಾಹಕರಿಗೆ ತಾವು ನೀಡುವ ಆಹಾರ ಪದಾರ್ಥಗಳ ವಿಚಾರದಲ್ಲಿ ಬಹಳ ಜಾಗರೂಕರಾಗಿರಲು ಮನವಿ ಮಾಡುತ್ತೇನೆ. ಇದರಿಂದ ಇಂತಹ ಘಟನೆಗಳನ್ನು ತಪ್ಪಿಸಬಹುದು ಎಂದಿದ್ದಾರೆ. ಸತ್ತ ಇಲಿ ಸಾಂಬಾರ್‌ನಲ್ಲಿ ಪತ್ತೆಯಾಗಿರುವುದನ್ನು ಗ್ರಾಹಕರು ತೋರಿಸುವ ವಿಡಿಯೋ ಅಂತರ್ಜಾಲದಲ್ಲಿ ವೈರಲ್ ಆಗಿದ್ದು, ಸಾಕಷ್ಟು ವೀಕ್ಷಣೆಗಳನ್ನು ಕಂಡಿದೆ.

ನವದೆಹಲಿಯಲ್ಲಿ 24 ಗಂಟೆಗಳಲ್ಲಿ ಬಿಸಿಗಾಳಿ ಸಂಬಂಧಿತ ಕಾಯಿಲೆಯಿಂದ 22 ಜನ ಸಾವು

ನವದೆಹಲಿ, ಜೂ.21– ರಾಷ್ಟ್ರ ರಾಜಧಾನಿ ಭಾರೀ ಬಿಸಿಗಾಳಿ ಹೊಡೆತಕ್ಕೆ ಸಿಲುಕಿದ್ದು, ಈ ಸಂಬಂಧಿತ ಕಾಯಿಲೆಗಳಿಂದಾಗಿ ಕಳೆದ 24 ಗಂಟೆಗಳಲ್ಲಿ ಆರ್‌ಎಂಎಲ್, ಸಫ್ದರ್ ಜಂಗ್ ಮತ್ತು ಎಲ್ ಎನ್ ಜೆಪಿ ಆಸ್ಪತ್ರೆಯಲ್ಲಿ ಒಟ್ಟು 22 ಜನರು ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಕಳೆದ ಕೆಲವು ದಿನಗಳಿಂದ ದೆಹಲಿ ವಿಪರೀತ ಬಿಸಿಗಾಳಿಯಿಂದ ನಲುಗಿದೆ. ಆಸ್ಪತ್ರೆಗೆ ದಾಖಲಾಗುವವರು ಹಾಗೂ ಸಾವನ್ನಪ್ಪುತ್ತಿರುವವರ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಕಳೆದ 24 ಗಂಟೆಗಳಲ್ಲಿ ಬಿಸಿಗಾಳಿ ಸಂಬಂಧಿತ ಕಾಯಿಲೆಯಿಂದ ದಾಖಲಾದ 33 ರೋಗಿಗಳ ಪೈಕಿ 13 ಜನರು ದುರ್ಮರಣ ಹೊಂದಿದ್ದಾರೆ ಎಂದು ಸಫ್ದರ್ ಜಂಗ್ ಆಸ್ಪತ್ರೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ ರಾಮ್ ಮನೋಹರ್ ಲೋಹಿಯಾ ಆಸ್ಪತ್ರೆಯಲ್ಲಿ ಇದೇ ರೀತಿಯ ಕಾರಣದಿಂದ ದಾಖಲಾದ 22 ರೋಗಿಗಳ ಪೈಕಿ ನಾಲ್ವರು ಮೃತಪಟ್ಟಿರುವುದಾಗಿ ಆಸ್ಪತ್ರೆ ಮೂಲಗಳು ತಿಳಿಸಿವೆ. ಎಲ್‌ಎನ್‌ಜೆಪಿ ಆಸ್ಪತ್ರೆಯಲ್ಲಿ ದಾಖಲಾಗಿದ್ದ 17 ರೋಗಿಗಳ ಪೈಕಿ ಐವರು ಸಾವನ್ನಪ್ಪಿದ್ದಾರೆ ಎಂದು ಅಧಿಕೃತ ಮೂಲಗಳು ಹೇಳಿವೆ. ಈ ಮಧ್ಯೆ ನಗರದ ಪ್ರಮುಖ ಸ್ಮಶಾನ ನಿಗಮ್ ಬೋದ್ ಘಾಟ್ ನಲ್ಲಿ ಅಂತ್ಯಸಂಸ್ಕಾರದ ಸಂಖ್ಯೆಗಳು ಹೆಚ್ಚಾಗುತ್ತಿವೆ. ಆದಾಗ್ಯೂ, ಅವರೆಲ್ಲರೂ ಬಿಸಿಗಾಳಿಯಿಂದಾಗಿ ಸಾವನ್ನಪ್ಪಿದ್ದಾರೆ ಎಂಬುದು ದೃಢಪಟ್ಟಿಲ್ಲ.

ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್ ಫೋನ್ ವಿತರಿಸಿದ ಜಿಟಿಡಿ

ಅಂಗನವಾಡಿ ಕೇಂದ್ರಗಳ ದುರಸ್ತಿ ಸೇರಿದಂತೆ ಮೂಲ ಸೌಕರ್ಯಕ್ಕೆ ಆದ್ಯತೆ



ಮೈಸೂರಿನ ವಿಜಯನಗರದ ವಿಭಾಗೀಯ ಸ್ತ್ರೀಶಕ್ತಿ ಭವನದಲ್ಲಿ ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಯಾಮ್‌ಸಂಗ್ ಮೊಬೈಲ್ ಸ್ಮಾರ್ಟ್‌ಫೋನ್ ವಿತರಣಾ ಕಾರ್ಯಕ್ರಮದಲ್ಲಿ ಮೈಸೂರು ತಾಲ್ಲೂಕಿನ ಕಾರ್ಯಕರ್ತೆಯರಿಗೆ ಶಾಸಕ ಜಿ.ಟಿ.ದೇವೇಗೌಡ ಸ್ಮಾರ್ಟ್‌ಫೋನ್ ವಿತರಿಸಿದರು.

ಮೈಸೂರು, ಜೂ.21(ಜಿಎ)–ಅಂಗನವಾಡಿ ಕೇಂದ್ರಗಳ ದುರಸ್ತಿ ಸೇರಿದಂತೆ ಯಾವುದೇ ಮೂಲ ಸೌಕರ್ಯದ ಕೊರತೆ ಇದ್ದರೆ ತಕ್ಷಣವೇ ಗಮನಹರಿಸಿ ಪರಿಹರಿಸಲಾಗುವುದು ಎಂದು ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಭರವಸೆ ನೀಡಿದರು.

ಮೈಸೂರಿನ ವಿಜಯನಗರದ ವಿಭಾಗೀಯ ಸ್ತ್ರೀಶಕ್ತಿ ಭವನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ವತಿಯಿಂದ ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯಡಿ ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್ ಫೋನ್ ವಿತರಣಾ ಕಾರ್ಯಕ್ರಮದಲ್ಲಿ ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಕಾರ್ಯಕರ್ತೆಯರಿಗೆ ಫೋನ್ ವಿತರಿಸಿ ಅವರು ಮಾತನಾಡಿದರು.

ಅಂಗನವಾಡಿ ಕೇಂದ್ರದ ಕಾರ್ಯಕರ್ತೆಯರಿಗೆ ಸ್ಮಾರ್ಟ್‌ಫೋನ್ ನೀಡಿರುವುದರಿಂದ ಸಾಕಷ್ಟು ಮಾಹಿತಿಯನ್ನು ಅಪ್‌ಡೇಟ್ ಮಾಡಲಾಗುತ್ತದೆ. ಇಲಾಖೆಯ ಕೆಲಸಗಳು ಸುಗಮವಾಗಿ ಮಾಡಲು ಮತ್ತು ಮಕ್ಕಳಿಗೆ ಬೇಕಾದ ಸೌಲಭ್ಯ ಒದಗಿಸಲು ಸಹಕಾರಿಯಾಗಿದೆ. ಮತ್ತಷ್ಟು ಮಾಹಿತಿಯನ್ನು ಅಳವಡಿಸಿ ಕೊಂಡು ಚೆನ್ನಾಗಿ ಕೆಲಸ ಮಾಡಬೇಕು. ಅಂಗನವಾಡಿಗಳು ದುರಸ್ತಿಗೆ ಬಂದಿದ್ದರೆ ಹೇಳಬೇಕು. ಕುಡಿಯುವ ನೀರು, ಶೌಚಾಲಯದ ಸಮಸ್ಯೆ ಇದ್ದರೆ ನೇರವಾಗಿ ಹೇಳಬಹುದು. ಇಲ್ಲವೇ ಆಯಾಯ ಗ್ರಾಪಂಗಳಿಗೆ ಮಾಹಿತಿ ಕೊಟ್ಟರೆ ಸರಿಯಾಗುತ್ತದೆ. ಮೂಲ ಸೌಕರ್ಯಗಳನ್ನು ಒದಗಿಸಲು ಬೇಕಾದ ಅನುದಾನ ನೀಡಲಾಗುವುದು ಎಂದು ಆಶ್ವಾಸನೆ ನೀಡಿದರು.

ಮಕ್ಕಳಿಗೆ ಕಾರ್ಯಕರ್ತೆಯರು, ಸಹಾಯಕಿಯರು ದೇವರಿದ್ದಂತೆ. ಅದೇ ರೀತಿ ಮಕ್ಕಳನ್ನು ಕಂಡು ಕೆಲಸ ಮಾಡಬೇಕು. ಪ್ರೀತಿ, ವಿಶ್ವಾಸದಿಂದ ಮಕ್ಕಳನ್ನು ಕರೆತಂದು ಅವರನ್ನು ನೋಡಿಕೊಂಡು ವಾಪಸ್ ಕಳುಹಿಸುವುದು ಸುಲಭವಲ್ಲ. ವೇತನಕ್ಕಾಗಿ ಕೆಲಸ ಮಾಡುತ್ತೇವೆ ಅಂತ ಹೇಳಬಹುದು. ಆದರೆ, ಇದೊಂದು ಮಾನವೀಯ ಸೇವೆಯಾಗಿದೆ. ಮೊದಲೆಲ್ಲಾ ಆರತಿಗೊಬ್ಬ ಮಗಳು, ಕೀರ್ತಿಗೊಬ್ಬ ಮಗ ಬೇಕು ಎನ್ನುತ್ತಿದ್ದರು. ಆದರೆ, ಇಂದು ಒಂದು ಮಗುವನ್ನು ಸಾಕಲು ಸಾಧ್ಯವಾಗದಂತಾಗಿದೆ. ಒಂದು ಮಗುವನ್ನು ನೋಡಿಕೊಳ್ಳಲು ಆಗೋದಿಲ್ಲ ಅಂತಾರೆ. ಅಂತಹದರಲ್ಲಿ ಹತ್ತಾರು ಮಕ್ಕಳನ್ನು ನೋಡಿಕೊಂಡು ಆರೈಕೆ ಮಾಡುವುದು ಸುಲಭವಲ್ಲ. ಅದಕ್ಕಾಗಿಯೇ ಕಾರ್ಯಕರ್ತೆಯರೇ ದೇವರ ಸಮಾನರಾಗಿದ್ದಾರೆ ಎಂದು ಹೇಳಿದರು.

ಮಹಿಳೆಯರು ಅಬಲೆಯರಲ್ಲ ಸಬಲೆಯರು ಎನ್ನುವುದು ಇಡೀ ಜಗತ್ತಿಗೆ ಗೊತ್ತಾಗಿದೆ. ಸಣ್ಣ ಕೆಲಸದಿಂದ ವಿಮಾನ ಹಾರಾಡಿಸುವ ಪೈಲಟ್‌ಗಳಾಗಿದ್ದಾರೆ. ಎಲ್ಲಾ ಕ್ಷೇತ್ರಗಳಲ್ಲೂ ಮುಂಚೂಣಿಯಲ್ಲಿದ್ದಾರೆ. ದೇಶದ ಅಭಿವೃದ್ಧಿಗೆ ಮಹಿಳೆಯರ ಪಾತ್ರ ಅಪಾರವಾಗಿದೆ. ಗ್ರಾಮಾಂತರ ಪ್ರದೇಶದಲ್ಲಿ ಮಹಿಳೆಯರ ಶೋಷಣೆ, ದೌರ್ಜನ್ಯ ಮತ್ತು ಇನ್ನಿತರ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಬೇಕು. ಅಧಿಕಾರಿಗಳು ಕೂಡ ಗ್ರಾಪಂಗೆ ಹೋಗಿ ಸಮಸ್ಯೆಗಳನ್ನು ಆಲಿಸುವಂತೆ ಹೇಳಿದ್ದೇನೆ. ಶಾಲೆ, ಅಂಗನವಾಡಿ ಕಟ್ಟಡಗಳ ನಿರ್ಮಾಣ,ದುರಸ್ತಿ ಇದ್ದರೆ ಮಾಹಿತಿ ಕೊಡುವಂತೆ ಸೂಚನೆ ನೀಡಿದ್ದೇನೆ. ಯಾವುದೇ ಸಮಸ್ಯೆ ಇದ್ದರೆ ನೇರವಾಗಿ ತಿಳಿಸಬಹುದು ಎಂದರು.

ಸದಾ ಒತ್ತಡದಲ್ಲಿ ಕಾರ್ಯ ನಿರ್ವಹಿಸುವ ಅಂಗನವಾಡಿ ಕಾರ್ಯಕರ್ತೆಯರು ಅರ್ಧ ಗಂಟೆ ಯೋಗಾಭ್ಯಾಸ ಮಾಡಬೇಕು. ಯೋಗ ಬಹಳ ಮುಖ್ಯ. ಆರೋಗ್ಯ, ಮಾನಸಿಕ,ದೈಹಿಕವಾಗಿ ಚೆನ್ನಾಗಿರಲು ಸಹಾಯವಾಗುತ್ತದೆ. ಬೆಳಿಗ್ಗೆ ಎದ್ದು ಪ್ರಾಣಾಯಾಮ, ಧ್ಯಾನ ಮಾಡಬೇಕು. ಇದರಿಂದ ಹುರುಪಿನಿಂದ ಕೆಲಸ ಮಾಡಬಹುದು ಎಂದು ಸಲಹೆ ನೀಡಿ, ಇಲಾಖೆಯ ಕೆಲಸಗಳನ್ನು ಮಾಡುವಾಗ ಒತ್ತಡ ಬರುವುದು ಸಹಜ. ಮೊದಲು ಮಕ್ಕಳನ್ನು ಮಾತ್ರ ನೋಡಿಕೊಳ್ಳಬೇಕಿತ್ತು. ಆದರೆ, ಸರ್ಕಾರದ ವಿವಿಧ ಯೋಜನೆಗಳ ಕುರಿತಂತೆ ಹಲವಾರು ಜವಾಬ್ದಾರಿಗಳನ್ನು ನಿರ್ವಹಣೆ ಮಾಡಬೇಕಿರುವ ಕಾರಣ ಮಾನಸಿಕವಾಗಿ ಚೆನ್ನಾಗಿ ಇರಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಡಿ.ಮಂಜುನಾಥ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸುಬ್ಬಯ್ಯ, ತಾಪಂ ಕಾರ್ಯ ನಿರ್ವಹಣಾಧಿಕಾರಿ ಗಿರಿಧರ್ ಉಪಸ್ಥಿತರಿದ್ದರು.

> ನನ್ನ ಹುಟ್ಟೂರು ಗುಂಗ್ರಾಲ್ ಛತ್ರದ ಸೊಸೈಟಿಯಲ್ಲಿ ನಾನು ಕಾರ್ಯದರ್ಶಿಯಾಗಿ ಕೆಲಸ ಮಾಡುವಾಗ 1969ರಲ್ಲಿ 100ರೂ.ವೇತನ ಕೊಡಲಾಗುತ್ತಿತ್ತು. ಕೇವಲ ನೂರು ರೂಪಾಯಿ ವೇತನ ಅಂತ ಅರಿಯದೆ ಸೇವೆ ಎನ್ನುವಂತೆ ಭಾವಿಸಿ ಕೆಲಸ ಮಾಡಿದ ಫಲವಾಗಿ ಈ ಮಟ್ಟಕ್ಕೆ ಬೆಳೆಯಲು ಕಾರಣವಾಯಿತು. ಕಡಿಮೆ ವೇತನಕ್ಕೆ ಇಷ್ಟೊಂದು ಕೆಲಸ ಮಾಡಬೇಕೆಂಬ ಯೋಚನೆ ಬಿಟ್ಟು ಮಕ್ಕಳ ಸೇವೆ ದೊರೆತಿರುವುದು ಸೌಭಾಗ್ಯ ಅಂದುಕೊಳ್ಳಬೇಕು.
>
> –ಜಿ.ಟಿ.ದೇವೇಗೌಡ, ಶಾಸಕರು.

ಇಂದಿನಿಂದ ಕುದೇರು ಮಠದಲ್ಲಿ ಗುರು ಮಲ್ಲೇಶ್ವರರ 12ನೇ ಪ್ರಮಥ ಗಣಾರಾಧನೆ

ಪ್ರಾರ್ಥನ ಮಂದಿರ ಉದ್ಘಾಟನೆ, ಗುರುವಂದನಾ ಕಾರ್ಯಕ್ರಮ ಆಯೋಜನೆ

ಮೈಸೂರು, ಜೂ.21(ಜಿಎ)–ಆಲನಹಳ್ಳಿ ಬಡಾವಣೆಯಲ್ಲಿರುವ ಕುದೇರು ಮಠದಲ್ಲಿ ಗುರುಮಲ್ಲೇಶ್ವರರ 125ನೇ ಪ್ರಮಥ ಗಣಾರಾಧನೆ, ಗುರುಲಿಂಗ ಸ್ವಾಮಿಗಳ 33ನೇ ವಾರ್ಷಿಕ ಗಣಾರಾಧನೆ, ತೋಂಟದಾರ್ಯ ಸ್ವಾಮಿಗಳ ಪ್ರಾರ್ಥನಾ ಮಂದಿರ ಉದ್ಘಾಟನೆ, ಗುರುಶಾಂತ ಸ್ವಾಮಿಗಳ ಗುರುವಂದನಾ ಕಾರ್ಯಕ್ರಮವನ್ನು ಜೂ.22 ಹಾಗೂ 23ರಂದು ಆಯೋಜಿಸಲಾಗಿದೆ ಎಂದು ತ್ರಿವಿಧ ದಾಸೋಹಿ ಶ್ರೀ ಶಿವಕುಮಾರ ಮಹಾಸ್ವಾಮಿಗಳವರ ಭಕ್ತ ಮಂಡಳಿ ಅಧ್ಯಕ್ಷ ಚಿಕ್ಕಳ್ಳಿ ಸ್ವಾಮಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂ.22ರಂದು ಸಂಜೆ 6ಗಂಟೆಗೆ ಆಲನಹಳ್ಳಿ ಬಡಾವಣೆಯ ವಿವಿಧ ರಸ್ತೆಗಳಲ್ಲಿ ಶ್ರೀ ಗುರುಮಲ್ಲೇಶ್ವರರ ಉತ್ಸವಮೂರ್ತಿ ಮೆರವಣಿಗೆ ನಡೆಯಲಿದೆ. ಗ್ರಾಮಾಂತರ ಭಜನಾ ತಂಡಗಳಿಂದ ಭಜನೆ, ರಾತ್ರಿ 7.30ಕ್ಕೆ ವಿದ್ವಾನ್ ಬಿ. ಶಿವಕುಮಾರ ಶಾಸ್ತ್ರೀ ಅವರಿಂದ ಶಿವಕಥಾ ಕಾಲಕ್ಷೇಪ, ರಾತ್ರಿ 9.30ಕ್ಕೆ ಡಾ.ಶಿವಕುಮಾರ ಸ್ವಾಮೀಜಿಯವರ ಭಕ್ತವೃಂದ, ನುರಿತ ಕಲಾವಿದರಿಂದ ದಕ್ಷಯಜ್ಞ ನಾಟಕ ಪ್ರದರ್ಶನ ಇರಲಿದೆ ಎಂದರು.

23ರಂದು ಬೆಳಗ್ಗೆ 10ಕ್ಕೆ ಧಾರ್ಮಿಕ ಸಭೆ ನಡೆಯಲಿದ್ದು, ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಕೃಪಾಶೀರ್ವಾದ ನೀಡುವರು. ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿ ತೋಂಟದಾರ್ಯ ಸ್ವಾಮಿಗಳ ಪ್ರಾರ್ಥನಾ ಮಂದಿರ ಉದ್ಘಾಟಿಸುವರು. ದೇವನೂರು ಮಠದ ಮಹಾಂತ ಸ್ವಾಮೀಜಿ ಅಧ್ಯಕ್ಷತೆ ವಹಿಸಲಿದ್ದು, ಮಲ್ಲನಮೂಲೆ ಮಠದ ಚನ್ನಬಸವ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸುವರು. ಕುದೇರು ಮಠದ ಕುರಿತು ಸದಾಶಿವಮೂರ್ತಿ ಅವರು ರಚಿಸಿರುವ ಕೃತಿಯನ್ನು ಕುಂದೂರು ಮಠದ ಡಾ.ಶರತ್ ಚಂದ್ರ ಸ್ವಾಮೀಜಿ ಬಿಡುಗಡೆಗೊಳಿಸುವರು. ಕನಕಪುರ ದೇಗುಲ ಮಠದ ಮುಮ್ಮಡಿ ನಿರ್ವಾಣ ಸ್ವಾಮೀಜಿ, ಕುದೇರು ಮಠದ ಗುರುಶಾಂತ ಸ್ವಾಮೀಜಿ, ಮಹದೇಶ್ವರ ಬೆಟ್ಟದಲ್ಲಿರುವ ಸಾಲೂರು ಮಠದ ಶಾಂತಮಲ್ಲಿಕಾರ್ಜುನ ಸ್ವಾಮೀಜಿ, ಮಾದಾಪಟ್ಟಣ ಮಠದ ತೋಂಟದಾರ್ಯ ಸ್ವಾಮೀಜಿ ಉಪಸ್ಥಿತರಿದ್ದು ಆಶೀರ್ವಚನ ನೀಡಲಿದ್ದಾರೆ ಎಂದು ಕಾರ್ಯಗಳ ವಿವರ ನೀಡಿದರು.

ಮುಖ್ಯ ಅತಿಥಿಗಳಾಗಿ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕರಾದ ಜಿ.ಟಿ.ದೇವೇಗೌಡ, ಬಿ.ವೈ.ವಿಜಯೇಂದ್ರ, ಟಿ.ಎಸ್.ಶ್ರೀವತ್ಸ, ಹೆಚ್.ಎಂ. ಗಣೇಶ್ ಪ್ರಸಾದ್, ಎಂಎಲ್‌ಸಿ ಡಾ.ಯತೀಂದ್ರ ವಿಶೇಷ ಅತಿಥಿಗಳಾಗಿ ಮಾಜಿ ಸಂಸದ ಪ್ರತಾಪಸಿಂಹ, ಮಾಜಿ ಶಾಸಕರಾದ ಎಸ್.ಎ.ರಾಮದಾಸ್, ಎಂ.ಕೆ.ಸೋಮಶೇಖರ್ ಸೇರಿದಂತೆ ಹಲವಾರು ಗಣ್ಯರು ಭಾಗ ವಹಿಸುವರು ಎಂದರು. ಸುದ್ದಿಗೋಷ್ಠಿಯಲ್ಲಿ ಭಕ್ತ ಮಂಡಳಿಯ ದಾರಿಪುರ ಚಂದ್ರಶೇಖರ್, ಮಹದೇವು ಮಾರಶೆಟ್ಟಿಹಳ್ಳಿ, ಕೀಳನಪುರ ಮಂಜುನಾಥ್, ಅಶೋಕ್ ಉಪಸ್ಥಿತರಿದ್ದರು.

ವಿಜ್ಞಾನ ನಾಟಕೋತ್ಸವಕ್ಕೆ ಚಾಲನೆ



ಮೈಸೂರು, ಜೂ.21(ಎಂಕೆ)–ರಾಮಕೃಷ್ಣನಗರದ ರಮಾಗೋವಿಂದ ರಂಗಮಂದಿರದಲ್ಲಿ 7ನೇ ಆವೃತ್ತಿಯ ಮೈಸೂರು ವಿಜ್ಞಾನ ನಾಟಕೋತ್ಸವಕ್ಕೆ ಚಾಲನೆ ದೊರೆಯಿತು.

ಬೆಂಗಳೂರಿನ ದಿ ಅಕಾಡೆಮಿ ಟ್ರಸ್ಟ್‌ನ ಕಾರ್ಯದರ್ಶಿ ಶುಭಾಂಕರ್ ಬಿಸ್ವಾಸ್, ವಿಜ್ಞಾನ ಲೇಖಕ ಕೊಳ್ಳೇಗಾಲ ಶರ್ಮ ಅವರ ಕೃತಿ 'ಕಾಣದ ಲೋಕ' ಬಿಡುಗಡೆ ಮಾಡುವ ಮೂಲಕ ಉತ್ಸವಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ವಿಜ್ಞಾನಿ ಹಾಗೂ ಕಲಾವಿದನೂ ಆಗಿರುವ ಮಗು, ಬೆಳೆಯುತ್ತಾ ಇವೆರಡನ್ನೂ ಕಳೆದುಕೊಳ್ಳುವಂತೆ ಸಮಾಜವು ಮಾಡುತ್ತದೆ. ಶೈಕ್ಷಣಿಕ ವ್ಯವಸ್ಥೆಯು ಮಗುವಿನ ಕುತೂಹಲಗಳನ್ನು ತಣಿಸಬೇಕು. ಜ್ಞಾನವನ್ನು ನೀಡಬೇಕು. ವೈಜ್ಞಾನಿಕ ಚಿಂತನೆ ಹಾಗೂ ವೈಚಾರಿಕ ಮನೋಭಾವ ಬೆಳೆಸಬೇಕು. ಆಗ ಮಾತ್ರ ವಿಶ್ವಮಾನವ ಆಗಲು ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಅರಿವು ಟ್ರಸ್ಟ್‌ನ ಡಾ.ಎಂ.ಸಿ.ಮನೋಹರ ಪ್ರಾಸ್ತಾವಿಕವಾಗಿ ಮಾತನಾಡಿ, 2016 ರಿಂದಲೂ ಕಲೆ ಹಾಗೂ ವಿಜ್ಞಾನ ಸಂಯೋಜಿಸುವ ಪ್ರಯೋಗವನ್ನು ಉತ್ಸವದ ಮೂಲಕ ನಡೆಸಿದ್ದೇವೆ. ವೈಜ್ಞಾನಿಕ ಆಲೋಚನೆಗಳನ್ನು ನಾಟಕ ಮೂಲಕ ಹೇಳುತ್ತಿದ್ದೇವೆ ಎಂದರು. ಕುತೂಹಲಿ ಸಂಸ್ಥೆಯ ಕೊಳ್ಳೇಗಾಲ ಶರ್ಮಾ, ಲಿಂಗರಾಜ್ ಹಾಜರಿದ್ದರು.

ನಾಟಕ ಪ್ರದರ್ಶನ: ನಂತರ ಸರಗೂರಿನ ವಿವೇಕ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿನಿಯರು ವಿಜ್ಞಾನ–ವಿಕಾಸ–ವಾದ ನಾಟಕ ಪ್ರದರ್ಶನ ನೀಡಿದರು. ಯತೀಶ್ ಎನ್. ಕೊಳ್ಳೇಗಾಲ ನಿರ್ದೇಶನ, ಮಧು ಮಳವಳ್ಳಿ ಬೆಳಕು ಹಾಗೂ ಬರ್ಟ್ ಎಫ್ ಒಲಿವೆರಾ ಮಾರ್ಗದರ್ಶನದಲ್ಲಿ ಮನುಷ್ಯ ಹಂತ ಹಂತವಾಗಿ ವಿಕಾಸ ಹೊಂದಿದ್ದು, ವಿಜ್ಞಾನದ ಅಳವಡಿಕೆಯನ್ನು ಆಕರ್ಷಕ ಸಂಭಾಷಣೆಯೊಂದಿಗೆ ವಿದ್ಯಾರ್ಥಿಗಳು ಪ್ರಸ್ತುತ ಪಡಿಸಿದರು.

ಇಂದು ರಾಜ್ಯದ ಕೇಂದ್ರ ಸಚಿವರು, ಎನ್‌ಡಿಎ ಸಂಸದರಿಗೆ ಬಿಜೆಪಿಯಿಂದ ಸನ್ಮಾನ

ಬೆಂಗಳೂರು, ಜೂ.21(ಕೆಎಂಶಿ)–ಕೇಂದ್ರದಲ್ಲಿ ರಾಜ್ಯವನ್ನು ಪ್ರತಿನಿಧಿಸುತ್ತಿರುವ ಎಚ್.ಡಿ.ಕುಮಾರಸ್ವಾಮಿ, ಪ್ರಹ್ಲಾದ್ ಜೋಷಿ, ವಿ.ಸೋಮಣ್ಣ, ಶೋಭಾ ಕರಂದ್ಲಾಜೆ ಸೇರಿದಂತೆ ಎನ್‌ಡಿಎ ಮೈತ್ರಿಕೂಟದಿಂದ ಲೋಕಸಭೆಗೆ ಆಯ್ಕೆಗೊಂಡಿರುವ ಎಲ್ಲಾ ಸದಸ್ಯರಿಗೂ ನಾಳೆ ರಾಜ್ಯ ಬಿಜೆಪಿ ಅಭಿನಂದನಾ ಕಾರ್ಯಕ್ರಮ ಹಮ್ಮಿಕೊಂಡಿದೆ.

ಸುದ್ದಿಗಾರರಿಗೆ ಈ ವಿಷಯ ತಿಳಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ನಗರದ ಅರಮನೆ ಮೈದಾನದಲ್ಲಿ ರಾಜ್ಯದಿಂದ ಆಯ್ಕೆಗೊಂಡಿರುವ 19 ಜನ ಎನ್‌ಡಿಎ ಸಂಸದರಿಗೆ ಸನ್ಮಾನ ಹಾಗೂ ಕೇಂದ್ರ ಸಂಪುಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿರುವ ಸಚಿವರಿಗೆ ಅಭಿನಂದನೆ ಹಮ್ಮಿಕೊಳ್ಳಲಾಗಿದೆ ಎಂದರು.

ಈ ನಾಲ್ವರು ಸಚಿವರಲ್ಲದೆ, ಯದುವೀರ್ ಕೆಸಿ ಒಡೆಯರ್ (ಮೈಸೂರು–ಕೊಡಗು), ಡಾ.ಮಂಜುನಾಥ್ (ಬೆಂಗಳೂರು ಗ್ರಾಮಾಂತರ), ತೇಜಸ್ವಿ ಸೂರ್ಯ (ಬೆಂಗಳೂರು ದಕ್ಷಿಣ), ಪಿ.ಸಿ.ಮೋಹನ್ (ಬೆಂಗಳೂರು ಕೇಂದ್ರ), ಮಲ್ಲೇಶ್ ಬಾಬು (ಕೋಲಾರ), ಡಾ.ಕೆ.ಸುಧಾಕರ್ (ಚಿಕ್ಕಬಳ್ಳಾಪುರ), ಗೋವಿಂದ ಕಾರಜೋಳ್ (ಚಿತ್ರದುರ್ಗ). ಬಿ.ವೈ.ರಾಘವೇಂದ್ರ (ಶಿವಮೊಗ್ಗ), ವಿಶ್ವೇಶ್ವರ ಹೆಗಡೆ ಕಾಗೇರಿ (ಉತ್ತರ ಕನ್ನಡ), ಕ್ಯಾಪ್ಟನ್ ಬ್ರಿಜೇಶ್ ಚೌಟ (ದಕ್ಷಿಣ ಕನ್ನಡ), ಕೋಟ ಶ್ರೀನಿವಾಸ ಪೂಜಾರಿ (ಉಡುಪಿ–ಚಿಕ್ಕಮಗಳೂರು), ಬಸವರಾಜ ಬೊಮ್ಮಾಯಿ (ಹಾವೇರಿ), ಜಗದೀಶ್ ಶೆಟ್ಟರ್ (ಬೆಳಗಾವಿ), ರಮೇಶ್ ಜಿಗಜಿಣಗಿ (ಬಿಜಾಪುರ), ಪಿ.ಸಿ.ಗದ್ದಿಗೌಡರ್ (ಬಾಗಲಕೋಟೆ) ಅವರುಗಳಿಗೆ ಸನ್ಮಾನ ಮಾಡಲಾಗುವುದು.

ಈ ಕಾರ್ಯಕ್ರಮದಲ್ಲಿ ಎಲ್ಲ ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು, ರಾಜ್ಯದ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು, ಕಾರ್ಯಕರ್ತರು ಭಾಗವಹಿಸಲಿದ್ದಾರೆ ಎಂದರು.

ಜೂ.27ರಂದು ನಾಡಪ್ರಭು ಕೆಂಪೇಗೌಡರ ಜಯಂತಿ

ಒಂದೇ ವೇದಿಕೆಯಲ್ಲಿ ಸಿದ್ದರಾಮಯ್ಯ, ಕುಮಾರಸ್ವಾಮಿ ಮುಖಾಮುಖಿ ಸಾಧ್ಯತೆ

ಮೈಸೂರು, ಜೂ.21(ಬಿಎಲ್‌ಯು)–ಮೈಸೂರಿನಲ್ಲಿ ಜೂನ್ 27ರಂದು ನಾಡಪ್ರಭು ಕೆಂಪೇಗೌಡರ ಜಯಂತಿ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ಒಂದೇ ವೇದಿಕೆಯಲ್ಲಿ ಮುಖಾಮುಖಿಯಾಗಲಿದ್ದಾರೆ.

ಮೈಸೂರು ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜೂನ್ 27ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಕಲಾ ಮಂದಿರದಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮ ಆಯೋಜಿಸಿದೆ. ಅಂದಿನ ಸಭೆಯಲ್ಲಿ ಸಿದ್ದರಾಮಯ್ಯ, ಹೆಚ್.ಡಿ.ಕುಮಾರಸ್ವಾಮಿ ಒಂದೇ ವೇದಿಕೆಯಲ್ಲಿ ಉಪಸ್ಥಿತರಿರುವರು. ಜೊತೆಗೆ ಮೈಸೂರು ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಮಠಾಧೀಶರು ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮಕ್ಕೂ ಮೊದಲು ಮೈಸೂರಿನ ಪ್ರಮುಖ ರಸ್ತೆಗಳಲ್ಲಿ ನಾಡಪ್ರಭು ಕೆಂಪೇಗೌಡರ ಅದ್ದೂರಿ ಮೆರವಣಿಗೆ ನಡೆಯಲಿದೆ.




ಪ್ರತಾಪ್ ಸಿಂಹ ಹುಟ್ಟುಹಬ್ಬದ ಅಂಗವಾಗಿ ಶುಭಾಶಯ

ಮಾಜಿ ಸಂಸದ ಪ್ರತಾಪ್ ಸಿಂಹ ಹುಟ್ಟುಹಬ್ಬದ ಅಂಗವಾಗಿ ಮೈಸೂರಿನ ಬಿಜೆಪಿ ಮುಖಂಡರು ಸಸಿ ನೆಟ್ಟು ಶುಭ ಕೋರಿದರು. ಬಿಜೆಪಿ ನಗರ ಕಾರ್ಯದರ್ಶಿ ಎಂ.ಜೆ.ಕಿರಣ್ ಗೌಡ, ಯುವ ಮೋರ್ಚಾ ಉಪಾಧ್ಯಕ್ಷ ಪುನೀತ್ ಕುಮಾರ್, ಕಾರ್ಯದರ್ಶಿ ಧನರಾಜ್ ಸೇರಿದಂತೆ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಸಾರ್ವಜನಿಕರಿಗೆ ಗುಣಮಟ್ಟದ ಆಹಾರ ಪದಾರ್ಥ ಪೂರೈಸಿ

ಅಧಿಕಾರಿಗಳಿಗೆ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ. ಹೆಚ್.ಕೃಷ್ಣ ಸೂಚನೆ



ಮೈಸೂರಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ. ಹೆಚ್.ಕೃಷ್ಣ ಅವರು ಶುಕ್ರವಾರ ಸಭೆ ನಡೆಸಿದರು.

ಮೈಸೂರು, ಜೂ.21(ಆರ್‌ಕೆ)–ಸಾರ್ವಜನಿಕರಿಗೆ ಗುಣಮಟ್ಟದ ಆಹಾರ ಪದಾರ್ಥ ಪೂರೈಸುವ ಮೂಲಕ ಶ್ರಮಿಕರು, ಅಶಕ್ತರು, ಬಡವರು, ರೈತರು, ಮಹಿಳೆಯರು ಹಾಗೂ ಮಕ್ಕಳಿಗೆ ಶಕ್ತಿ ತುಂಬಬೇಕು ಎಂದು ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ. ಹೆಚ್.ಕೃಷ್ಣ ಅಧಿಕಾರಿಗಳಿಗೆ ಇಂದಿಲ್ಲಿ ಸೂಚನೆ ನೀಡಿದ್ದಾರೆ.

ಜಿಲ್ಲೆಯಾದ್ಯಂತ ಮೂರು ದಿನಗಳ ಕಾಲ ಸಂಚರಿಸಿ ಅವಲೋಕನ ನಡೆಸಿದ ಅವರು, ಇಂದು ಮೈಸೂರಿನ ಡಿಸಿ ಕಚೇರಿ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಕೆಲವು ನ್ಯೂನತೆಗಳು ಕಂಡು ಬಂದರೂ ಸಹ ಆಹಾರ ಸರಬರಾಜಿನಲ್ಲಿ ಪ್ರಗತಿ ಸಾಧಿಸಿರುವ ಬಗ್ಗೆ ಶ್ಲಾಘಿಸಿದ ಅವರು, ಪ್ರತೀ ಪ್ರಜೆಗೂ ಗುಣಮಟ್ಟದ ಆಹಾರ ಪದಾರ್ಥ ಒದಗಿಸುವುದು ಸರ್ಕಾರ ಹಾಗೂ ಅಧಿಕಾರಿಗಳ ಜವಾಬ್ದಾರಿ ಎಂದರು.

ನ್ಯಾಯ ಬೆಲೆ ಅಂಗಡಿಗಳಲ್ಲಿ ಜಾಗೃತ ಸಮಿತಿ ಸದಸ್ಯರುಗಳ ಹೆಸರು, ವಿಳಾಸ, ದೂರವಾಣಿ ಸಂಖ್ಯೆಗಳನ್ನು ಹಾಕಬೇಕೆಂಬ ನಿಯಮ ಪಾಲಿಸಿಲ್ಲ. ಗೋದಾಮುಗಳಲ್ಲಿರುವ ದಾಸ್ತಾನಿಗೂ ರಿಜಿಸ್ಟರ್‌ನಲ್ಲಿ ನಮೂದಾಗಿರುವ ಸಂಖ್ಯೆಗೂ ತಾಳೆಯಾಗದಿರುವುದು ಪರಿಶೀಲನೆ ವೇಳೆ ಕಂಡು ಬಂದಿದೆ ಎಂದ ಅಧ್ಯಕ್ಷರು, ಈ ಬಗ್ಗೆ ಫುಡ್ ಇನ್ಸ್‌ಪೆಕ್ಟರ್‌ಗಳು ಎಚ್ಚರಿಕೆಯಿಂದ ಕೆಲಸ ಮಾಡಬೇಕೆಂದರು.

ಜಿಲ್ಲಾಧಿಕಾರಿ ಡಾ. ಕೆ.ವಿ.ರಾಜೇಂದ್ರ ಅವರು ಪ್ರತಿಕ್ರಿಯಿಸಿ ಅಗತ್ಯಕ್ಕಿಂತ ಹೆಚ್ಚು ಸ್ಟಾಕ್ ಇದ್ದರೆ ಅಂತಹವರಿಗೆ ಶೋಕಾಸ್ ನೋಟಿಸ್ ನೀಡಲು ಆಹಾರ ಇಲಾಖೆಯ ಜಂಟಿ ನಿರ್ದೇಶಕರಿಗೆ ಸೂಚಿಸಿದ ಅವರು, ಗೋದಾಮುಗಳಿಗೆ ಸಿಸಿ ಕ್ಯಾಮರಾ ಅಳವಡಿಸಿ ಪಡಿತರ ಎಲ್ಲಾದರೂ ಬೇರೆ ಕಡೆ ಹೋಗುತ್ತದೆಯೇ ಎಂಬುದನ್ನು ಗಮನಿಸಿ, ಒಂದು ವೇಳೆ ಲೋಪ ಕಂಡು ಬಂದಲ್ಲಿ ಫುಡ್ ಇನ್ಸ್‌ಪೆಕ್ಟರ್‌ಗಳ ಮೇಲೆ ಕ್ರಮ ಕೈಗೊಳ್ಳಿ ಎಂದರು.

ಆಯೋಗದ ಸದಸ್ಯ ಸುಮಂತರಾವ್ ಮಾತನಾಡಿ, ಅಂಗನವಾಡಿ ಕೇಂದ್ರಗಳಲ್ಲಿ ಸರಿಯಾಗಿ ಮೊಟ್ಟೆ ವಿತರಣೆ ಆಗುತ್ತಿಲ್ಲ. ಮಂಗಳವಾರ ಹಾಗೂ ಶುಕ್ರವಾರ ಮೊಟ್ಟೆ ನೀಡಬೇಕೆಂದಿದ್ದರೂ ನಾವು ಭೇಟಿ ನೀಡಿದ ಮಂಗಳವಾರ ಮೊಟ್ಟೆ ನೀಡಿಲ್ಲ. ಕೆಲ ಪೆಟ್ರೋಲ್ ಬಂಕ್‌ಗಳಲ್ಲಿ ಶೌಚಾಲಯದ ವ್ಯವಸ್ಥೆ ಸಮರ್ಪಕವಾಗಿರುವುದಿಲ್ಲ ಎಂದರು.

ಸದಸ್ಯರಾದ ರೋಹಿಣಿ ಪ್ರಿಯ ಮಾತನಾಡಿ, ಬಹುತೇಕ ಹಾಸ್ಟೆಲ್‌ಗಳಲ್ಲಿ ಸರಿಯಾದ ಹಾಸಿಗೆ ವ್ಯವಸ್ಥೆಯಿಲ್ಲ ಹಾಗೂ ಹೆಣ್ಣು ಮಕ್ಕಳಿಗೆ ಸ್ಯಾನಿಟರಿ ಪ್ಯಾಡ್‌ಗಳ ವ್ಯವಸ್ಥೆ ಸಮರ್ಪಕವಾಗಿಲ್ಲ ಮಕ್ಕಳು ಕೀಳರಿಮೆ ಬಿಟ್ಟು, ಈ ಬಗೆಗೆ ಶಿಕ್ಷಕರೊಂದಿಗೆ ಸಂವಾದಿಸಬೇಕು. ತಕ್ಷಣ ಸಮಸ್ಯೆ ಬಗೆಹರಿಸಲು ಗಮನ ನೀಡಿ ಎಂದರು.

ಡಿ.ಬಿ.ಕುಪ್ಪೆಯ ಆಶ್ರಮ ಶಾಲೆಯಲ್ಲಿ ವಿಜ್ಞಾನ ಹಾಗೂ ಗಣಿತ ಶಿಕ್ಷಕರಿಲ್ಲ. ಮುಖ್ಯ ಅಡುಗೆಯವರಿಗೆ ಹೆಡ್ ಮಾಸ್ಟರ್ ಚಾರ್ಜ್ ಕೊಟ್ಟಿದ್ದಾರೆ ಎಂದಾಗ ಅಧಿಕಾರಿ ಪ್ರತಿಕ್ರಿಯಿಸಿ ಅಲ್ಲಿನ ಶಿಕ್ಷಕರು ಯಾರೂ ಪರ್ಮನೆಂಟ್ ಅಲ್ಲ. ಹಾಗಾಗಿ ಅವರಿಗೆ ಪ್ರಭಾರ ನೀಡಲಾಗಿದೆ ಎಂದರು.

ಸಭೆಯಲ್ಲಿ ಆಯೋಗದ ಸದಸ್ಯರುಗಳಾದ ಮಾರುತಿ ಎಂ.ದೊಡ್ಡಲಿಂಗಣ್ಣನವರ್, ಕೆಎಸ್. ವಿಜಯಲಕ್ಷ್ಮಿ, ಸದಸ್ಯ ಕಾರ್ಯದರ್ಶಿ ಸುಜಾತ ಹೊಸಮನಿ, ಜಿಪಂ ಸಿಇಒ ಕೆ.ಎಂ.ಗಾಯತ್ರಿ, ಆಹಾರ ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕರಾದ ಕುಮುದ ಹಾಗೂ ವಿವಿ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

ಏಕಕಾಲದಲ್ಲಿ 700ಕ್ಕೂ ಹೆಚ್ಚು ಜನ ಯೋಗಾಭ್ಯಾಸ

ಕೊಡಗು ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ 10ನೇ ಯೋಗ ದಿನಾಚರಣೆ



ಮಡಿಕೇರಿ ಗೌಡ ಸಮಾಜದಲ್ಲಿ ನಡೆದ ಯೋಗ ದಿನಾಚರಣೆಯಲ್ಲಿ ಜಿಲ್ಲಾಧಿಕಾರಿ ವೆಂಕಟ್ ರಾಜಾ, ಜಿಪಂ ಸಿಇಓ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್ ಯೋಗಾಭ್ಯಾಸ ನಡೆಸಿದರು.

ಮಡಿಕೇರಿ, ಜೂ.21– ನಗರದ ಗೌಡ ಸಮಾಜದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಯುಷ್ ಇಲಾಖೆ ಸೇರಿದಂತೆ ವಿವಿಧ ಇಲಾಖೆ ಹಾಗೂ ಸಂಘಸಂಸ್ಥೆಗಳ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಅಂತಾರಾಷ್ಟ್ರೀಯ 10ನೇ ಯೋಗ ದಿನಾಚರಣೆಯಲ್ಲಿ 700ಕ್ಕೂ ಹೆಚ್ಚು ಜನ ಏಕಕಾಲದಲ್ಲಿ ಯೋಗಾಭ್ಯಾಸ ನಡೆಸಿದರು.

'ಯೋಗ ಫಾರ್ ಸೆಲ್ಫ್ ಅಂಡ್ ಸೊಸೈಟಿ' ಹೆಸರಿನಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಸೂರ್ಯ ನಮಸ್ಕಾರ, ವೃಕ್ಷಾಸನ, ಪಾದಹಸ್ತಾಸನ, ಉರ್ದ್ವಾಸನ, ತಾಡಾಸನ, ಅರ್ಧ ಮತ್ಸ್ಯೇಂದ್ರಾಸನ, ಭುಜಂಗಾಸನ, ಪವನಮುಕ್ತಾಸನ, ಭದ್ರಾಸನ, ತ್ರಿಕೋನಾಸನ, ಉಷ್ಟ್ರಾಸನ, ವಜ್ರಾಸನ, ಶಲಭಾಸನ, ಶಶಾಂಕಾಸನ, ಮಂಡೂಕಾಸನ, ವಕ್ರಾಸನ, ಮಕರಾಸನ, ಸೇತುಬಂಧಾಸನ, ಉತ್ಥಾನ ಪಾದಾಸನ, ಅರ್ಧಹಲಾಸನ, ಶವಾಸನ, ಕಪಾಲಭಾತಿ, ಶೀತಲಿ ಪ್ರಾಣಾಯಾಮ, ಭ್ರಾಮರಿ ಪ್ರಾಣಾಯಾಮ, ಧ್ಯಾನ, ನಾಡಿಶೋಧ ಪ್ರಾಣಾಯಾಮ ಹೀಗೆ ಹಲವು ಯೋಗ ಮಾಡಲಾಯಿತು. ಇದೇ ವೇಳೆ ಮದೆನಾಡು ಬಿಜಿಎಸ್ ಶಾಲೆಯ 5ನೇ ತರಗತಿ ವಿದ್ಯಾರ್ಥಿನಿ ಸಿಂಚನಾ ಯೋಗ ಪ್ರದರ್ಶಿಸಿ ಎಲ್ಲರ ಗಮನ ಸೆಳೆದಳು.

ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾತನಾಡಿ, ದೇಹ ಮತ್ತು ಮನಸ್ಸಿನ ನಡುವೆ ಸಮನ್ವಯ ಸಾಧಿಸಲು ಯೋಗಾಭ್ಯಾಸ ಅಗತ್ಯವಾಗಿದೆ. ಆರೋಗ್ಯವೇ ಭಾಗ್ಯವಾಗಿದ್ದು, ಈ ನಿಟ್ಟಿನಲ್ಲಿ ಪ್ರತಿಯೊಬ್ಬರಿಗೂ ಆರೋಗ್ಯ ಕಾಪಾಡಿಕೊಳ್ಳುವಲ್ಲಿ ಯೋಗ ಸಹಕಾರಿಯಾಗಿದೆ. ಯೋಗ, ವ್ಯಾಯಾಮ ಮಾಡುವುದರಿಂದ ಪ್ರತಿನಿತ್ಯ ಚಟುವಟಿಕೆಯಿಂದ ಇರಲು ಸಾಧ್ಯ ಎಂದು ಹೇಳಿದರು.

ಯೋಗ ಶಿಕ್ಷಕ ಮಹೇಶ್ ಕುಮಾರ್ ಯೋಗಾಭ್ಯಾಸ ಶಿಕ್ಷಣ ನೀಡಿದರು. ಜಿಪಂ ಸಿಇಓ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ನಗರ ಸಭೆ ಮಾಜಿ ಅಧ್ಯಕ್ಷೆ ಅನಿತಾ ಪೂವಯ್ಯ, ಜಿಲ್ಲಾ ಆಯುಷ್ ಅಧಿಕಾರಿ ಡಾ.ರೇಣುಕಾ ದೇವಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿ.ಟಿ. ವಿಸ್ಮಯಿ, ಕ್ಷೇತ್ರ ಶಿಕ್ಷಣಾಧಿಕಾರಿ ದೊಡ್ಡೇಗೌಡ, ನೀಮಾ ಜಿಲ್ಲಾ ಅಧ್ಯಕ್ಷ ಡಾ.ರಾಜಾರಾಮ್ ಮತ್ತಿತರರು ಪಾಲ್ಗೊಂಡಿದ್ದರು.

ಕಾಡ್ಯಮಾಡ ಐನ್‌ಮನೆಯಲ್ಲೂ ಯೋಗಾಭ್ಯಾಸ



ಅರ್ವತೊಕ್ಲು ಗ್ರಾಮದ ಕಾಡ್ಯಮಾಡ ಕುಟುಂಬದ ಐನ್‌ಮನೆಯಲ್ಲಿ ಆರ್ಟ್ ಆಫ್ ಲಿವ್ಹಿಂಗ್ ಶಿಕ್ಷರ ಸಮಿತಿ ಮುಖ್ಯಸ್ಥ ಅಳಮೇಂಗಡ ಡಾನ್ ರಾಜಪ್ಪ ಅವರನ್ನು ಸನ್ಮಾನಿಸಲಾಯಿತು.

ಗೋಣಿಕೊಪ್ಪದ ಅರ್ವತೊಕ್ಲು ಗ್ರಾಮದ ಕಾಡ್ಯಮಾಡ ಕುಟುಂಬ ಐನ್‌ಮನೆಯಲ್ಲಿ ಶುಕ್ರವಾರ ಯೋಗಾ ದಿನ ಆಚರಿಸಲಾಯಿತು. ಕಾಡ್ಯಮಾಡ ಕುಟುಂಬದ ಗೋಪಾಲಗೌರಿ ಟ್ರಸ್ಟ್ ವತಿಯಿಂದ ಒಂದು ಗಂಟೆ ಕಾಲ ಯೋಗಾಭ್ಯಾಸ ನಡೆಸಲಾಯಿತು. ಆರ್ಟ್ ಆಫ್ ಲಿವ್ಹಿಂಗ್ ಶಿಕ್ಷರ ಸಮಿತಿ ಮುಖ್ಯಸ್ಥ ಅಳಮೇಂಗಡ ಡಾನ್ ರಾಜಪ್ಪ ಯೋಗಾಭ್ಯಾಸ ನೀಡಿದರು.

ಟ್ರಸ್ಟ್ ಅಧ್ಯಕ್ಷ ಡಾ.ಕೆ.ಎಂ.ಬೋಪಣ್ಣ, ಕಾರ್ಯದರ್ಶಿ ಕೆ.ಬಿ.ನವೀನ್, ಕಾಡ್ಯಮಾಡ ಕುಟುಂಬದ ಕೆ.ಸಿ.ಮೋಹನ್, ಕೆ.ಟಿ. ಸೋಮಯ್ಯ, ಕೆ.ಎಸ್.ಉದಯ, ಕೆ.ಬಿ. ಸುಮನ್, ಹರೀಶ್, ರಮಣ, ಅಪ್ಪಚ್ಚಿ ಹರೀಶ್, ದೇವಯ್ಯ, ವಿನುತ ಜೀವನ್ ಇದ್ದರು.

ಕಾಂಗ್ರೆಸ್ ನಾಯಕರ ಪ್ರತಿಕೃತಿ ದಹನ ಖಂಡನೀಯ

ವಿರಾಜಪೇಟೆ: ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ವಿಷಯ ಮುಂದಿಟ್ಟುಕೊಂಡು ಬಿಜೆಪಿ ಕಾರ್ಯಕರ್ತರು ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹಾಗೂ ಶಾಸಕ ಎ.ಎಸ್.ಪೊನ್ನಣ್ಣ ಅವರ ಪ್ರತಿಕೃತಿ ದಹಿಸಿರುವುದು ಖಂಡನೀಯ ಎಂದು ವಿರಾಜಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪಟ್ಟಡ ರಂಜಿ ಪೂಣಚ್ಚ ಹೇಳಿದರು.

ನಗರದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗುರುವಾರ ವಿರಾಜಪೇಟೆ ಗಡಿಯಾರ ಕಂಬದ ಬಳಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ವಿರೋಧಿಸಿ ಪ್ರತಿಭಟನೆ ನಡೆಸಿದ್ದರು. ಈ ವೇಳೆ ಪ್ರತಿಭಟನಾಕಾರರು ವಿಕೃತ ಮನಸ್ಸಿನಿಂದ ಕಾಂಗ್ರೆಸ್ ನಾಯಕರ ಪ್ರತಿಕೃತಿಗಳನ್ನು ದಹಿಸಿದ್ದಾರೆ. ಈ ವರ್ತನೆ ತೀವ್ರ ಖಂಡನೀಯ. ಬಿಜೆಪಿ ಸರ್ಕಾರವಿದ್ದಾಗಲೇ ಪೆಟ್ರೋಲ್, ಡೀಸೆಲ್ ದರ 100 ರೂ. ಗಡಿ ದಾಟಿದ್ದು, ಗ್ಯಾಸ್ ಸಿಲಿಂಡರ್ ಬೆಲೆಯೂ 1000 ರೂ.ಗೆ ಏರಿಕೆಯಾಗಿದೆ. ಆದರೂ ಬಿಜೆಪಿ ಪ್ರತಿಭಟನೆ ಹೆಸರಿನಲ್ಲಿ ದುರ್ವರ್ತನೆ ತೋರುತ್ತಿದೆ ಎಂದರು.

ಕಾಂಗ್ರೆಸ್ ನಗರಾಧ್ಯಕ್ಷ ಮಾದಂಡ ತಿಮ್ಮಯ್ಯ, ಪುರಸಭೆ ಸದಸ್ಯ ಡಿ.ಪಿ.ರಾಜೇಶ್ ಮಾತನಾಡಿ, ಬಿಜೆಪಿ ಪ್ರತಿಭಟನೆ ಮೂಲಕ ನೀಚ ಕೆಲಸ ಮಾಡಿದೆ. ಪ್ರಜಾಪ್ರಭುತ್ವದಲ್ಲಿ ಪ್ರತಿಭಟನೆ ಮಾಡುವುದು ಎಲ್ಲರ ಹಕ್ಕು. ಆದರೆ, ಪ್ರತಿಭಟನೆ ಹೆಸರಿನಲ್ಲಿ ಬಿಜೆಪಿ ತನ್ನ ನೈತಿಕತೆಯನ್ನು ಕಳೆದುಕೊಂಡಿದೆ. ಕೊಡಗಿನ ಇತಿಹಾಸದಲ್ಲಿ ಇದೇ ಮೊದಲು ಇಷ್ಟು ಕೀಳುಮಟ್ಟದಲ್ಲಿ ಪ್ರತಿಕೃತಿ ದಹಿಸಿ ಪ್ರತಿಭಟಿಸಲಾಗಿದೆ ಬೇಸರ ವ್ಯಕ್ತಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಪುರಸಭೆ ಸದಸ್ಯರಾದ ಮಹ್ಮದ್ ರಾಫಿ ಮತ್ತು ಎಸ್.ಹೆಚ್. ಮತೀನ್, ಮನೆಯಪಂಡ ದೇಚಮ್ಮ ಕಾಳಪ್ಪ, ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಆರ್.ಕ್ಷೆಬ್ಬುಲ್ ಸಲಾಂ ಹಾಜರಿದ್ದರು.



ವಿರಾಜಪೇಟೆಯಲ್ಲಿ ಸುದ್ದಿಗೋಷ್ಠಿಯಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪಟ್ಟಡ ರಂಜಿ ಪೂಣಚ್ಚ ಮಾತನಾಡಿದರು.

ಬಿಜೆಪಿ 30 ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲು

ಮಡಿಕೇರಿ, ಜೂ.21–ಪ್ರತಿಭಟನೆ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಶಿವಕುಮಾರ್ ಹಾಗೂ ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಅವರ ಪ್ರತಿಕೃತಿ ದಹಿಸಿದ ವಿಧಾನ ಪರಿಷತ್ ಸದಸ್ಯ ಸುಜಾ ಕುಶಾಲಪ್ಪ ಸೇರಿ ಒಟ್ಟು ಬಿಜೆಪಿಯ 30 ಕಾರ್ಯಕರ್ತರ ವಿರುದ್ಧ ವಿರಾಜಪೇಟೆ ಠಾಣೆ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಗುರುವಾರ ವಿರಾಜಪೇಟೆಯ ಗಡಿಯಾರ ಕಂಬದ ಬಳಿ ಇಂಧನ ಬೆಲೆ ಏರಿಕೆ ಖಂಡಿಸಿ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಪ್ರತಿಭಟನೆ ನಡೆಸಿದ್ದರು. ಈ ವೇಳೆ ಸಿಎಂ, ಡಿಸಿಎಂ ಹಾಗೂ ಶಾಸಕರ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು. ಈ ಹಿನ್ನೆಲೆಯಲ್ಲಿ ಬಿಜೆಪಿಯ 30 ಕಾರ್ಯಕರ್ತರ ವಿರುದ್ಧ ಮೊಕದ್ದಮೆ ದಾಖಲಾಗಿದೆ.

ಇಂದು ಕಾಂಗ್ರೆಸ್ ಪ್ರತಿಭಟನೆ: ಪ್ರತಿಕೃತಿ ದಹನ ವಿರೋಧಿಸಿ ಜೂ.22ರಂದು ಸಂಪಾಜೆ ಮತ್ತು ಜಿಲ್ಲೆಯ ಹಲವೆಡೆ ಬಿಜೆಪಿ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ ನಡೆಸಲಿದೆ.

ಪ್ರತಿಕೃತಿ ದಹನಕ್ಕೆ ಜಿಲ್ಲಾ ಕಾಂಗ್ರೆಸ್‌ನಿಂದ ತೀವ್ರ ಖಂಡನೆ ವ್ಯಕ್ತವಾಗಿದೆ. ಈ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಚರ್ಚೆಯೂ ನಡೆಯುತ್ತಿದ್ದು, ರಾಜಕೀಯವಾಗಿ ಕಾಂಗ್ರೆಸ್ ಹಾಗೂ ಬಿಜೆಪಿ ನಡುವೆ ಕಿಡಿ ಹೊತ್ತಿಕೊಂಡಂತಾಗಿದೆ.



ಹಳೇ ಕಟ್ಟಡ ತೆರವಿಗೆ ನೋಟಿಸ್

ಕುಶಾಲನಗರ: ಇಲ್ಲಿನ ಒಂದನೇ ಬ್ಲಾಕ್ ದಂಡಿನಪೇಟೆ ಬಡಾವಣೆಯ ಹಳೆಯ ಹೆಂಚಿನ ಕಟ್ಟಡದಲ್ಲಿ ವಾಸವಾಗಿರುವ ಜನರು ಸುರಕ್ಷಿತ ಸ್ಥಳಕ್ಕೆ ತೆರಳಿ, ಅತಂಹ ಕಟ್ಟಡಗಳನ್ನು ತೆರವುಗೊಳಿಸಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ಕೃಷ್ಣಪ್ರಸಾದ್ ನಾಲ್ವರು ಮಾಲೀಕರಿಗೆ ನೋಟಿಸ್ ನೀಡಿದ್ದಾರೆ.


ಗೋಣಿಕೊಪ್ಪದಲ್ಲಿ ಗುರುವಾರ 80 ವರ್ಷದ ಹಳೆಯ ಕಟ್ಟಡ ಕುಸಿದಿದೆ. ಪುರಸಭೆ ಅಧಿಕಾರಿಗಳು ಹಳೆಯ ಕಟ್ಟಡ ತೆರವಿಗೆ ಮುಂದಾಗಿದ್ದು, ಈ ಹಿನ್ನೆಲೆಯಲ್ಲಿ 1ನೇ ಬ್ಲಾಕ್‌ನ ಹಳೆಯ ಕಟ್ಟಡದ ಮಾಲೀಕರಾದ ಎಂ.ಜಿ.ಮಹಮ್ಮದ್ ಖಾಸಿಂ, ಎಂ.ಜಿ. ಅಹ್ಮದ್ ಹುಸೇನ್, ಎಂ.ಜಿ.ಫಜಲುಲ್, ರೆಹಮಾನ್ ಅವರಿಗೆ ಪುರಸಭೆ ಮುಖ್ಯಾಧಿಕಾರಿಗಳು ಕೂಡಲೇ ಕಟ್ಟಡ ತೆರವುಗೊಳಿಸುವಂತೆ ನೋಟಿಸ್ ನೀಡಿದ್ದಾರೆ.

ಸೈನಿಕ ಶಾಲೆಯಲ್ಲಿ 'ಸಮಾಜಕ್ಕಾಗಿ ಯೋಗ'

ಕುಶಾಲನಗರ, ಜೂ.21–ಕೊಡಗು ಸೈನಿಕ ಶಾಲೆಯಲ್ಲಿ ಸ್ವಯಂ ಮತ್ತು ಸಮಾಜಕ್ಕಾಗಿ ಯೋಗ ಎಂಬ ಧ್ಯೇಯವಾಕ್ಯದಡಿ ಶುಕ್ರವಾರ ಅರ್ಥಪೂರ್ಣವಾಗಿ ಯೋಗ ದಿನ ಆಚರಿಸಲಾಯಿತು.

ಶಾಲೆಯ ಎನ್‌ಸಿಸಿ ಜೆಡಿ ಘಟಕ ಆಯೋಜಿಸಿದ್ದ ಯೋಗ ದಿನಾಚರಣೆಯಲ್ಲಿ ಸಾಮೂಹಿಕವಾಗಿ ವಿವಿಧ ಯೋಗಾಸನ ಪ್ರದರ್ಶಿಸಲಾಯಿತು. ಉತ್ತಮ ಆರೋಗ್ಯ ರಕ್ಷಣೆ ಮತ್ತು ದೀರ್ಘಕಾಲದ ರೋಗಮುಕ್ತ ಬದುಕಿಗಾಗಿ ಯೋಗಾ, ಉಸಿರಾಟದ ತಂತ್ರ ವ್ಯಾಯಾಮ ಮತ್ತು ಧ್ಯಾನ ಪ್ರದರ್ಶಿಸಲಾಯಿತು.

ಪ್ರಾಂಶುಪಾಲ ಕರ್ನಲ್ ಅಮರ್ ಜೀತ್ ಸಿಂಗ್ ಮಾತನಾಡಿ, ಯೋಗ ಕೇವಲ ದೈಹಿಕ ವ್ಯಾಯಾಮಕ್ಕೆಷ್ಟೇ ಸೀಮಿತವಾಗಿರದೆ, ಇದು ಮನಸ್ಸು ಮತ್ತು ಚೈತನ್ಯವನ್ನು ಸಂಯೋಜಿಸುವ ಸಮಗ್ರ ಅಭ್ಯಾಸ ಒಳಗೊಂಡಿದೆ. ನಿಯಮಿತ ಯೋಗಾಭ್ಯಾಸ ಮಾನಸಿಕ ಒತ್ತಡ ನಿವಾರಿಸುತ್ತದೆ. ಜೊತೆಗೆ ಮಾನಸಿಕ ಕೇಂದ್ರೀಕರಣಕ್ಕೆ ಸಹಕಾರಿಯಾಗಿದೆ ಎಂದರು. ಶಾಲಾ ಆಡಳಿತಾಧಿಕಾರಿ ವಿಂಗ್ ಕಮಾಂಡರ್ ಪಿ.ಪ್ರಕಾಶ್ ರಾವ್, ಉಪ ಪ್ರಾಂಶುಪಾಲ ಸ್ಕ್ವಾಡ್ರನ್ ಲೀಡರ್ ಮೊಹಮ್ಮದ್ ಶಾಜಿ, ಬೋಧಕ–ಬೋಧಕೇತರ ವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.



ಕೊಡಗು ಸೈನಿಕ ಶಾಲೆಯಲ್ಲಿ ನಡೆದ ಯೋಗ ದಿನಾಚರಣೆಯಲ್ಲಿ ಬೋಧಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಯೋಗಾಭ್ಯಾಸ ನಡೆಸಿದರು.

ದೈನಂದಿನ ಜೀವನದಲ್ಲಿ ಯೋಗ ಅಳವಡಿಸಿಕೊಳ್ಳಿ

ಚಾಮರಾಜನಗರ, ಜೂ.21–ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಯೋಗ ಅಳವಡಿಸಿಕೊಂಡರೆ ಉತ್ತಮ ಆರೋಗ್ಯ ಹೊಂದಬಹುದು ಎಂದು ತಾಪಂ ಕಾರ್ಯ ನಿರ್ವಾಹಕಾಧಿಕಾರಿ ಪೂರ್ಣಿಮಾ ಹೇಳಿದರು.

ತಾಲೂಕಿನ ಶಿವಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯಡಬೆಟ್ಟದಸುತ್ತು ಕಟ್ಟೆ ಅಮೃತಸರೋವರ ಆವರಣದಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ನಡೆದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಯೋಗ ದೈಹಿಕ ಆರೋಗ್ಯ, ಮಾನಸಿಕ ಸ್ಪಷ್ಟತೆ ಮತ್ತು ಭಾವನಾತ್ಮಕ ಯೋಗಕ್ಷೇಮವನ್ನು ಹೆಚ್ಚಿಸುತ್ತದೆ. ಸಮತೋಲಿತ ಮತ್ತು ಸಾಮರಸ್ಯದ ದೈನಂದಿನ ಜೀವನವನ್ನು ಪೋಷಿಸುತ್ತದೆ ಎಂದರು.

ಜೀವನದ ಜಂಜಾಟದ ನಡುವೆ ದೇಹ ಮತ್ತು ಮನಸ್ಸು ಎರಡನ್ನೂ ಪೋಷಿಸುವ ಯೋಗಾಭ್ಯಾಸ ಮೈಗೂಡಿಸಿಕೊಳ್ಳುವುದು ಅತಿಮುಖ್ಯ. ಭಾರತದಲ್ಲಿ ಹುಟ್ಟಿದ ಪ್ರಾಚೀನ ಅಭ್ಯಾಸವಾದ ಯೋಗ ಇಂದು ಜಗತ್ತಿನಾದ್ಯಂತ ಲಕ್ಷಾಂತರ ಜನರಿಗೆ ಭರವಸೆ ಮತ್ತು ಸಮಗ್ರ ಯೋಗಕ್ಷೇಮದ ದಾರಿದೀಪವಾಗಿದೆ ಎಂದು ತಿಳಿಸಿದರು.

ದೈಹಿಕ ವ್ಯಾಯಾಮದ ಹೊರತಾಗಿ, ಯೋಗ ನಮ್ಮ ಅಸ್ತಿತ್ವದ ಪ್ರತಿಯೊಂದು ಅಂಶವನ್ನು ಸ್ಪರ್ಶಿಸುವ ಜೀವನ ವಿಧಾನವಾಗಿದೆ. ನಮ್ಮ ದೈನಂದಿನ ಜೀವನದಲ್ಲಿ ಯೋಗ ಆಳವಾದ ಪ್ರಾಮುಖ್ಯತೆ ಮತ್ತು ಅದು ನಮ್ಮ ದೈಹಿಕ, ಮಾನಸಿಕ ಮತ್ತು ಭಾವನಾತ್ಮಕ ಯೋಗಕ್ಷೇಮವನ್ನು ಹೇಗೆ ಧನಾತ್ಮಕವಾಗಿ ಪರಿವರ್ತಿಸುತ್ತದೆ ಎಂಬುದನ್ನು ನಾವು ಅನ್ವೇಷಿಸುತ್ತೇವೆ ಎಂದರು.

ಇದೇ ವೇಳೆ ಪತಂಜಲಿ ಯೋಗ ಶಿಕ್ಷಣ ಸಮಿತಿಯ ನಿಜಗುಣ ಹಾಗೂ ಸಿದ್ದರಾಜು ಯೋಗ ಪ್ರಯೋಜನ ಕುರಿತು ಮಾಹಿತಿ ನೀಡಿದರು. ಗ್ರಾಪಂ ಅಧ್ಯಕ್ಷೆ ಮಹದೇವಮ್ಮ ಅಧ್ಯಕ್ಷತೆ ವಹಿಸಿದ್ದರು. ತಾಪಂ ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕ ಪಿ.ಎಸ್. ಪ್ರಕಾಶ್ ಕುಮಾರ್, ಗ್ರಾಪಂ ಸದಸ್ಯರಾದ ಮಹದೇವಸ್ವಾಮಿ, ಪ್ರಮೋದ್, ರಂಗಸ್ವಾಮಿ, ಕುಮಾರಸ್ವಾಮಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವಿ, ಕಾರ್ಯದರ್ಶಿ ಪಿ.ಮಂಜುನಾಥ್ ಹಾಗೂ ಸಿಬ್ಬಂದಿ ಭಾಗವಹಿಸಿದ್ದರು.



ಚಾಮರಾಜನಗರ ತಾಲೂಕಿನ ಶಿವಪುರದಲ್ಲಿ ಯೋಗ ದಿನ ಆಚರಿಸಲಾಯಿತು.

ಆರೋಗ್ಯಪೂರ್ಣ ಜೀವನಕ್ಕೆ ಯೋಗ ಸಹಕಾರಿ

- ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ಅಭಿಮತ
- ವಿವಿಧೆಡೆ ಯೋಗ ದಿನಾಚರಣೆ



ಚಾಮರಾಜನಗರ: ದೈಹಿಕ, ಮಾನಸಿಕ ಸುಸ್ಥಿತಿ ಹಾಗೂ ಆರೋಗ್ಯಪೂರ್ಣ ಜೀವನಕ್ಕಾಗಿ ಯೋಗ ಸಹಕಾರಿಯಾಗಿದ್ದು, ಪ್ರತಿಯೊಬ್ಬರು ಯೋಗಾಭ್ಯಾಸ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು ತಿಳಿಸಿದರು.

ನಗರದ ಪೊಲೀಸ್ ಪೆರೇಡ್ ಮೈದಾನದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆಯುಷ್ ಇಲಾಖೆ, ಪತಂಜಲಿ ಯೋಗ ಶಿಕ್ಷಣ ಸಮಿತಿ, ವಿವಿಧ ಇಲಾಖೆ ಹಾಗೂ ಸಂಘಸಂಸ್ಥೆಗಳ ಸಹಯೋಗದಲ್ಲಿ 'ಮಹಿಳಾ ಸಬಲೀಕರಣಕ್ಕಾಗಿ ಯೋಗ' ಘೋಷವಾಕ್ಯದೊಂದಿಗೆ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ 10ನೇ ಯೋಗ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಭಾರತೀಯ ಪರಂಪರೆಯಲ್ಲಿ ಯೋಗಕ್ಕೆ ಮಹತ್ವಪೂರ್ಣ ಸ್ಥಾನವಿದೆ. ಯೋಗ ನಮ್ಮ ಅವಿಭಾಜ್ಯ ಅಂಗವಾಗಿದ್ದು, ಪ್ರತಿಯೊಬ್ಬರು ಪ್ರತಿದಿನ ಯೋಗಾಭ್ಯಾಸ ನಡೆಸುವುದರಿಂದ ಸಾಕಷ್ಟು ರೋಗರುಜಿನಗಳಿಂದ ಮುಕ್ತರಾಗಬಹುದು. ಎಲ್ಲರೂ ಯೋಗದಲ್ಲಿ ಪಾಲ್ಗೊಳ್ಳಬಹುದು ಎಂದರು.

ಜಿಪಂ ಸಿಇಓ ಆನಂದ್ ಪ್ರಕಾಶ್ ಮೀನಾ, ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಆಯುಷ್ ಅಧಿಕಾರಿ ಸುಜಾತ ಚಾನಗರ ಮತ್ತು ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನ, ಪತಂಜಲಿ ಯೋಗ ಶಿಕ್ಷಣ ಸಮಿತಿ ಅಧ್ಯಕ್ಷ ಕುಮಾರಸ್ವಾಮಿ, ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಕೇಂದ್ರದ ವೈದ್ಯಾಧಿಕಾರಿ ಡಾ.ಮಾನಸ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ರೈತರ ನಿದ್ದೆ ಗೆಡಿಸಿದ್ದ ಚಿರತೆ ಸೆರೆ

ಹನೂರು: ತಾಲೂಕಿನ ಹುಲಿ ಸಂರಕ್ಷಿತ ಅರಣ್ಯ ಪ್ರದೇಶದ ಗುಂಡಲ್ ಜಲಾಶಯ ವಲಯ ಸುತ್ತಮುತ್ತ ಹತ್ತಾರು ಸಾಕುಪ್ರಾಣಿಗಳ ಮೇಲೆ ದಾಳಿ ನಡೆಸಿ, ಕೊಂದುಹಾಕಿದ್ದ ರೇಡಿಯೋ ಕಾಲರ್ ಅಳವಡಿಸಿದ್ದ ಚಿರತೆಯನ್ನು ಗುರುವಾರ ಸಂಜೆ ಗುಂಡಲ್ ಜಲಾಶಯದ ಕೋಳಿ ಫಾರಂ ಹಿಂಭಾಗದ ಲಕ್ಷ್ಮಿಪುರಂ ರೈತರ ಜಮೀನಿನಲ್ಲಿ ಸೆರೆ ಹಿಡಿಯಲಾಗಿದೆ.



ಕಳೆದ 15 ದಿನಗಳಿಂದ ರೇಡಿಯೋ ಕಾಲರ್ ಇರುವ ಚಿರತೆ ದಾಳಿ ನಡೆಸಿ, ಸಾಕುಪ್ರಾಣಿಗಳನ್ನು ಕೊಂದುಹಾಕುತ್ತಿತ್ತು. ಇದರಿಂದ ಈ ಭಾಗದ ರೈತರಿಗೆ ಆತಂಕ ಉಂಟಾಗಿ ನಿದ್ದೆ ಗೆಡಿಸುವಂತಾಗಿತ್ತು

ಈ ಚಿರತೆ ಸೆರೆ ಹಿಡಿಯಲು ಅರಣ್ಯ ಇಲಾಖೆ ಅದರ ಚಲನವಲನ ಗಮನಿಸಿ, 40ಕ್ಕೂ ಹೆಚ್ಚು ಅರಣ್ಯ ಅಧಿಕಾರಿ ಹಾಗೂ ಚಿರತೆ ಕಾರ್ಯಪಡೆ ಸಿಬ್ಬಂದಿ ಸತತವಾಗಿ ಶ್ರಮಿಸುವ ಮೂಲಕ ಗುಂಡಾಲ್ ಜಲಾಶಯ ಸುತ್ತಮುತ್ತಲಿನ ರೈತರ ಜಮೀನು ಹಾಗೂ ಸೋಲಾರ್ ಪ್ಲಾಂಟ್ ಬಳಿ ಕಾರ್ಯಾಚರಣೆ ನಡೆಸಿದ್ದರು.

ಈ ಚಿರತೆ ರೈತರ ಜಮೀನುಗಳಲ್ಲೇ ಓಡಾಡುತ್ತಿರುವುದನ್ನು ಪತ್ತೆಹಚ್ಚಿದ ಸಿಬ್ಬಂದಿ, ಗುರುವಾರ ಸಂಜೆ ಗುಂಡಲ್ ಜಲಾಶಯದ ಕೋಳಿ ಫಾರಂ ಹಿಂಭಾಗದ ಲಕ್ಷ್ಮಿಪುರಂ ಜಮೀನಿನಲ್ಲಿ ಬೋನು ಇಟ್ಟು ಚಿರತೆಯನ್ನು ಸೆರೆ ಹಿಡಿದಿದ್ದಾರೆ. ನಂತರ ಮೈಸೂರಿನ ಚಿರತೆ ಕಾರ್ಯಪಡೆ ವಶಕ್ಕೆ ಈ ಚಿರತೆಯನ್ನು ನೀಡಲಾಯಿತು.

ಖಿನ್ನತೆಗೊಳಗಾಗಿದ್ದ ವ್ಯಕ್ತಿ ಆತ್ಮಹತ್ಯೆ

ಕೊಳ್ಳೇಗಾಲ, ಜೂ.21–ಸಾಲಬಾಧೆಯಿಂದ ಖಿನ್ನತೆಗೊಳಗಾಗಿದ್ದ ವ್ಯಕ್ತಿಯೋರ್ವ ಕಾವೇರಿ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಶಿವನಸಮುದ್ರ ಸಮೀಪದ ವೆಸ್ಲಿ ಸೇತುವೆ ಬಳಿ ಶುಕ್ರವಾರ ನಡೆದಿದೆ.



ನಂಜನಗೂಡು ತಾಲೂಕಿನ ತಗಡೂರು ಗ್ರಾಮದ ರಾಮಕೃಷ್ಣ (46) ಆತ್ಮಹತ್ಯೆ ಮಾಡಿಕೊಂಡಿದ್ದು, ಈತ ವ್ಯವಸಾಯಕ್ಕೆ ಮಾಡಿದ್ದ ಸಾಲ ತೀರಿಸಲಾಗದೆ ಖಿನ್ನತೆಗೊಳಗಾಗಿ ಕೆಲ ದಿನಗಳ ಹಿಂದೆ ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದರು. ಈ ವೇಳೆ ಪತ್ನಿ ಮಾದೇವಿ ರಾಮಕೃಷ್ಣಗೆ ಸಮಾಧಾನ ಮಾಡಿದ್ದರು.

ಆದರೆ, ಈತ 9 ದಿನಗಳ ಹಿಂದೆ ಕೆಲಸ ಹುಡುಕುವುದಾಗಿ ಮನೆಯಿಂದ ಹೊರ ಹೋಗಿದ್ದರು. ಶುಕ್ರವಾರ ವೆಸ್ಲಿ ಸೇತುವೆ ಬಳಿಯ ಕಾವೇರಿ ನದಿಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಸಂಬಂಧ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ಪ್ರಕರಣ ದಾಖಲಾಗಿದೆ.

ತಮಿಳುನಾಡಿನಲ್ಲಿ ಕಳ್ಳಭಟ್ಟಿ ದುರಂತ ಹಿನ್ನೆಲೆ

ವಿವಿಧೆಡೆ ಅಬಕಾರಿ ಅಧಿಕಾರಿಗಳ ದಿಢೀರ್ ದಾಳಿ



ಚಾಮರಾಜನಗರ ಗ್ರಾಮವೊಂದರ ಗ್ರಾಮಸ್ಥರಿಗೆ ಪೊಲೀಸರು ಕಳ್ಳಭಟ್ಟಿ ಕುರಿತು ಜಾಗೃತಿ ಮೂಡಿಸಿದರು.

ಚಾಮರಾಜನಗರ: ತಮಿಳುನಾಡಿನಲ್ಲಿ ಕಳ್ಳಭಟ್ಟಿ ದುರಂತದಲ್ಲಿ ಹಲವರು ಮೃತಪಟ್ಟಿರುವ ಹಿನ್ನೆಲೆಯಲ್ಲಿ ಅಬಕಾರಿ ಇಲಾಖೆ ಅಧಿಕಾರಿಗಳು ಜಿಲ್ಲೆಯಲ್ಲಿ ಕಳ್ಳಭಟ್ಟಿ ತಯಾರಿಸುತ್ತಿದ್ದ ಹಳೆಯ ಅಡ್ಡೆಗಳ ಸ್ಥಳಗಳ ಮೇಲೆ ಶುಕ್ರವಾರ ದಾಳಿ ನಡೆಸಿ, ಹಳೇ ಪ್ರಕರಣಗಳ ಆರೋಪಿಗಳ ಮನೆಗಳನ್ನು ಪರಿಶೀಲಿಸಿದರು.

> ಈಗಾಗಲೇ ಚಾಮರಾಜನಗರ ಜಿಲ್ಲೆಯಲ್ಲಿ ಕಳ್ಳಭಟ್ಟಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲಾಗಿದೆ. ತಮಿಳುನಾಡಿನಲ್ಲಿ ನಡೆದ ದುರಂತದಿಂದ ಮುನ್ನೆಚ್ಚರಿಕೆ ಕ್ರಮವಾಗಿ ಜಿಲ್ಲೆಯ ವಿವಿಧೆಡೆ ದಿಢೀರ್ ಪರಿಶೀಲನೆ ನಡೆಸಿದ್ದು, ಯಾವುದೇ ಕಳ್ಳಭಟ್ಟಿ ಪ್ರಕರಣ ಕಂಡುಬಂದಿಲ್ಲ.
>
> – ನಾಗಶಯನ, ಅಬಕಾರಿ ಉಪ ಆಯುಕ್ತ

ಅಬಕಾರಿ ಉಪ ಆಯುಕ್ತ ನಾಗಶಯನ ಮಾರ್ಗದರ್ಶನದಲ್ಲಿ ಉಪ ಅಧೀಕ್ಷಕ ಮೋಹನ್‌ಕುಮಾರ್, ಇನ್ಸ್‌ಪೆಕ್ಟರ್‌ಗಳಾದ ಸುನೀಲ್, ಉಮಾಶಂಕರ್, ಸುರೇಶ್, ಹನೂರು ಠಾಣೆ ಇನ್ಸ್‌ಪೆಕ್ಟರ್ ಮನೋಜ್ ಕುಮಾರ್ ಹಾಗೂ ಸಿಬ್ಬಂದಿ ಚಾಮರಾಜನಗರ ತಾಲೂಕಿನ ಮೂಕನಪಾಳ್ಯ ಗ್ರಾಮದ ಹಳೇ ಆರೋಪಿಗಳ ಮನೆ ಹಾಗೂ ಕಳ್ಳಭಟ್ಟಿ ತಯಾರಿಸುತ್ತಿದ್ದ ಸ್ಥಳಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ, ಯಾವುದೇ ಅಕ್ರಮಗಳು ನಡೆಯದಿರುವುದನ್ನು ಖಚಿತಪಡಿಸಿಕೊಂಡಿದ್ದಾರೆ.

ಇದೇ ವೇಳೆ ಹನೂರು ತಾಲೂಕಿನ ಕೊತ್ತಗುಳಿ, ಸಾಹೇಬರ ದೊಡ್ಡಿ, ವೀರನಾಯ್ಕನ ದೊಡ್ಡಿ, ಮಾರಳ್ಳಿ, ದೊಮ್ಮನಗದ್ದೆ ಹಾಗೂ ಕಾಂಚಳ್ಳಿ ಗ್ರಾಮ ಹಾಗೂ ಸುತ್ತಮುತ್ತಲ ಬೆಟ್ಟಗುಡ್ಡ ಪ್ರದೇಶಗಳಲ್ಲಿ ಪರಿಶೀಲಿಸಿದರು. ನಂತರ ಹಳೇ ಆರೋಪಿಗಳ ಮನೆಗಳ ಮೇಲೆ ದಾಳಿ ಮಾಡಿದ ಪೊಲೀಸರು, ಯಾವುದೇ ಕಳ್ಳಭಟ್ಟಿ ತಯಾರಿಸದಂತೆ ಎಚ್ಚರಿಸಿದರು.

ಜಿಪಂ ಸಿಇಓಗೆ ಗುತ್ತಿಗೆದಾರರ ದೂರು....



ತಾಪಂ ಎಇಇ ಸಂತೋಷ್ ಕುಮಾರ್, ಜೆಇ ಮಂಜು ವಿರುದ್ಧ ಕ್ರಮ ವಹಿಸುವಂತೆ ಜಿಪಂ ಸಿಇಓ ಆನಂದ್ ಪ್ರಕಾಶ್ ಮೀನಾ ಅವರಿಗೆ ಕರವೇ ತಾಲೂಕು ಅಧ್ಯಕ್ಷ ವೈ.ಕೆ.ಮೋಳೆ ನಾಗರಾಜು, ಜಿಪಂ ಮಾಜಿ ಸದಸ್ಯ ಜೆ.ಯೋಗೇಶ್, ಗುತ್ತಿಗೆದಾರರು ಮನವಿ ಸಲ್ಲಿಸಿದರು.

ಸತ್ತಿ ರಸ್ತೆ ಕಾಮಗಾರಿಯಲ್ಲಿ ಅವ್ಯವಹಾರ

ಚಾಮರಾಜನಗರದ ಕರಿನಂಜನಪುರ ರಸ್ತೆಯ ಸ್ಥಗಿತಗೊಂಡಿರುವ ಕಾಮಗಾರಿಯನ್ನು ಕಾಡಾ ಮಾಜಿ ಅಧ್ಯಕ್ಷ ಜಿ. ನಿಜಗುಣ ರಾಜು ಪರಿಶೀಲಿಸಿದರು.



ಚಾಮರಾಜನಗರ: ನಗರದ ಸತ್ತಿ ರಸ್ತೆಯಿಂದ ಡಿವೈಎಸ್ಪಿ ಕಚೇರಿ ಸಂಪರ್ಕ ರಸ್ತೆ ಕಾಂಕ್ರೀಟೀಕರಣ ಕಾಮಗಾರಿಯಲ್ಲಿ ಅವ್ಯವಹಾರ ನಡೆದು ಸ್ಥಗಿತಗೊಂಡಿದ್ದು, ಇದರಿಂದ ಸಾರ್ವಜನಿಕರ ಸಂಚಾರಕ್ಕೆ ತೀವ್ರ ತೊಂದರೆಯಾಗಿದೆ ಎಂದು ಕಾಡಾ ಮಾಜಿ ಅಧ್ಯಕ್ಷ ಜಿ.ನಿಜಗುಣ ರಾಜು ಆರೋಪಿಸಿದರು.

ನಗರದ ಕರಿನಂಜನಪುರ ರಸ್ತೆ ಕಾಮಗಾರಿ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, 2 ತಿಂಗಳ ಹಿಂದೆ ಕಾಮಗಾರಿ ಸ್ಥಗಿತಗೊಂಡಿದೆ. ಯಂತ್ರೋಪಕರಣ ಬಳಸಿ ಕಾಂಕ್ರೀಟೀಕರಣ ಮಾಡಬೇಕು. ಆದರೆ, ಕಾಮಗಾರಿ ತೀವ್ರ ಕಳಪೆಯಾಗಿದ್ದು, ಸರಳುಗಳು ಎದ್ದು ಕಾಣುತ್ತಿವೆ. ಈಗಾಗಲೇ ಕಾಂಕ್ರೀಟ್ ರಸ್ತೆ ಹಳ್ಳ ದಿಣ್ಣೆಯಿಂದ ಕೂಡಿದೆ ಎಂದು ದೂರಿದರು.

ರಸ್ತೆಯ ಅರ್ಧಭಾಗವನ್ನು ಮಾತ್ರ ಕಾಂಕ್ರೀಟೀಕರಣ ಮಾಡಲಾಗಿದ್ದು, ಉಳಿದ ಅರ್ಧಭಾಗವನ್ನು ಹಾಗೆಯೇ ಬಿಡಲಾಗಿದೆ. ಇದರಿಂದ ವಾಹನಗಳ ಸಂಚಾರಕ್ಕೆ ತೀವ್ರ ತೊಂದರೆಯಾಗಿದೆ. ನಗರಸಭೆ ವತಿಯಿಂದ ನಡೆದ ಈ ಕಾಮಗಾರಿ ಅತ್ಯಂತ ಕಳಪೆಯಾಗಿದೆ. ರಸ್ತೆಯಲ್ಲಿದ್ದ ಒಳಚರಂಡಿ ಮುಚ್ಚಿದ್ದಾರೆ. ಇದರಿಂದ ಅಕ್ಕಪಕ್ಕದ ಮನೆಯವರು, ವ್ಯಾಪಾರಿಗಳು ತೊಂದರೆ ಅನುಭವಿಸುತ್ತಿದ್ದಾರೆ. ಕಳಪೆ ಕಾಮಗಾರಿ ನಡೆಸಿದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಈ ಸಂಬಂಧ ಜಿಲ್ಲಾಧಿಕಾರಿ ಶಿಲ್ಪನಾಗ್ ಮತ್ತು ಲೋಕಾಯುಕ್ತರಿಗೆ ದೂರು ನೀಡಲಾಗುವುದು ಎಂದರು.

ಇದೇ ವೇಳೆ ಚಾಮುಲ್ ಅಧ್ಯಕ್ಷ ನಾಗೇಂದ್ರ, ಮಾಜಿ ನಿರ್ದೇಶಕ ಬಸವರಾಜು, ನಗರಸಭೆ ಸದಸ್ಯ ಮನೋಜ್ ಪಟೇಲ್, ಮೂಡಹಳ್ಳಿ ಮೂರ್ತಿ, ಚಂದ್ರಶೇಖರ್ ಹಾಜರಿದ್ದರು.

ಭಾಗ್ಯಮ್ಮ ನಿಧನ

ಕೊಳ್ಳೇಗಾಲ: ಪಟ್ಟಣದ ಭೀಮನಗರ ನಿವಾಸಿ, ಪುರಸಭೆ ಮಾಜಿ ಉಪಾಧ್ಯಕ್ಷ ದಿವಂಗತ ಡಿ.ಸಿದ್ದರಾಜು ಅವರ ಪತ್ನಿ ಭಾಗ್ಯಮ್ಮ (62) ಅನಾರೋಗ್ಯದಿಂದ ಶುಕ್ರವಾರ ನಿಧನರಾದರು.



ಮೃತರು ಇಬ್ಬರು ಪುತ್ರರು, ಪುತ್ರಿ, ಸೊಸೆಯಂದಿರು, ಅಳಿಯ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಪಟ್ಟಣದ ಹೊರವಲಯದ ಹೊಸ ಹಂಪಾಪುರದ ದಲಿತರ ರುದ್ರಭೂಮಿಯಲ್ಲಿ ಶನಿವಾರ ಮಧ್ಯಾಹ್ನ 3 ಗಂಟೆಗೆ ಅಂತ್ಯಕ್ರಿಯೆ ನಡೆಯಲಿದೆ.

ಮೈಸೂರಿಗೂ ಯೋಗಕ್ಕೂ ಅವಿನಾಭಾವ ಸಂಬಂಧ

- ಸಂಸದ ಯದುವೀರ್ ಕೆಸಿ ಒಡೆಯರ್ ಅಭಿಮತ
- ಅಂಧ ಮಕ್ಕಳ ಶಾಲೆಯಲ್ಲಿ ವಿಶ್ವ ಯೋಗ ದಿನಾಚರಣೆ



ಮೈಸೂರಿನ ತಿಲಕ್‌ನಗರದಲ್ಲಿರುವ ಸರ್ಕಾರಿ ಅಂಧ ಮಕ್ಕಳ ಶಾಲೆ ಆವರಣದಲ್ಲಿ ಇಕ್ವಿಬಿಯಿಂಗ್ ಫೌಂಡೇಷನ್ ವತಿಯಿಂದ ಆಯೋಜಿಸಿದ್ದ ಅಂತರರಾಷ್ಟ್ರೀಯ ಯೋಗ ದಿನ ಕಾರ್ಯಕ್ರಮದಲ್ಲಿ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮಕ್ಕಳೊಂದಿಗೆ ಯೋಗ ಪ್ರದರ್ಶಿಸಿದರು.

ಮೈಸೂರು,ಜೂ.21(ಎಂಟಿವೈ)– ಸಾಂಸ್ಕೃತಿಕ ನಗರಿ ಮೈಸೂರಿಗೂ ಯೋಗಕ್ಕೂ ಅವಿನಾಭಾವ ಸಂಬಂಧವಿದ್ದು, ಎಲ್ಲರೂ ಆರೋಗ್ಯವಂತರಾಗಿರಲು ಯೋಗಾಭ್ಯಾಸ ಮಾಡಬೇಕು ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ತಿಲಕ್‌ನಗರದಲ್ಲಿರುವ ಸರ್ಕಾರಿ ಅಂಧ ಮಕ್ಕಳ ಶಾಲೆಯಲ್ಲಿ ಇಕ್ವಿಬಿಯಿಂಗ್ ಫೌಂಡೇಷನ್ ವತಿಯಿಂದ ಶುಕ್ರವಾರ ಆಯೋಜಿಸಿದ್ದ ಅಂಧ ಮಕ್ಕಳೊಂದಿಗಿನ ಯೋಗ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮೈಸೂರು ಎಂದರೆ ಯೋಗ, ಯೋಗ ಎಂದರೆ ಮೈಸೂರು ಎನ್ನುವಂತಾಗಿದೆ. ಯೋಗಕ್ಕೆ ಮೈಸೂರು ನೀಡಿದ ಕೊಡುಗೆ ಅಪಾರ. ಆಧುನಿಕ ಯೋಗ ಸೃಷ್ಟಿಯಾಗಿದ್ದೇ ಮೈಸೂರಲ್ಲಿ. ಈ ಹಿಂದೆ ತಿರುಮಲಾ ಕೃಷ್ಣಮಾಚಾರ್ಯರು ಮಹಾರಾಜರ ಅನುಮತಿಯನುಸಾರ ಮನ್ಮಹಾರಾಜ ಸಂಸ್ಕೃತ ಪಾಠಶಾಲೆಯಲ್ಲಿ ಯೋಗಾಭ್ಯಾಸ ಮಾಡಿದರು. ಅದಾದ ಬಳಿಕ ಆಧುನಿಕ ಯೋಗ ಇಲ್ಲಿಯೇ ಸೃಷ್ಟಿಯಾಯಿತು ಎಂದು ಹೇಳಿದರು.

ಮಹಾರಾಜರ ಸಲಹೆ ಮೇರೆಗೆ ಯೋಗದ ವಿನ್ಯಾಸವನ್ನು ಟಿ.ಕೃಷ್ಣಮಾಚಾರ್ಯರು ರೂಪಿಸಿದರು. ಇಂದು ನಾವು ಮಾಡುವ ಯೋಗದ ವಿವಿಧ ಭಂಗಿ, ಸೂರ್ಯ ನಮಸ್ಕಾರದಂತಹ ಡೈನಾಮಿಕ್ ಯೋಗ ಇಲ್ಲಿಯೇ ಆರಂಭವಾಗಿದ್ದು ಹೆಮ್ಮೆ ಪಡುವ ಸಂಗತಿ. ಆ ನಂತರ ಕೃಷ್ಣಮಾಚಾರ್ಯರ ಶಿಷ್ಯಂದಿರಾದ ಪಟ್ಟಾಭಿ ಜೋಯಿಸ್, ಬಿ.ಕೆ.ಎಸ್. ಅಯ್ಯಂಗಾರ್ ಅವರು ಅಂತರರಾಷ್ಟ್ರೀಯ ಮಟ್ಟಕ್ಕೆ ಯೋಗವನ್ನು ಕೊಂಡೊಯ್ದರು. ಮೈಸೂರಿನವರೇ ಆದ ನಾವು ಯೋಗದ ಪರಂಪರೆಯನ್ನು ರಕ್ಷಣೆ ಮಾಡಿ, ಪರಂಪರೆಯ ರಾಯಭಾರಿಗಳಾಗಿ ಮುಂದುವರೆಯಲು ಮುಂದಾಗಬೇಕು.

ಈ ಹಿನ್ನೆಲೆಯಲ್ಲಿ ಯೋಗ ಮಾಡುವುದನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಅಂಧ ಮಕ್ಕಳ ಶಾಲೆಯ ಅಧೀಕ್ಷಕ ಸತೀಶ್, ಇಕ್ವಿಬಿಯಿಂಗ್ ಫೌಂಡೇಷನ್ ಪದಾಧಿಕಾರಿಗಳು, ಸದಸ್ಯರು ಈ ವೇಳೆ ಉಪಸ್ಥಿತರಿದ್ದರು. ಇದೇ ವೇಳೆ ಶಾಲೆಯ ಮಕ್ಕಳಿಗೆ ಹೈಜೆನಿಕ್ ಕಿಟ್ ವಿತರಿಸಲಾಯಿತು.

ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಯೋಗ ಪ್ರದರ್ಶನ



ಅವಧೂತ ದತ್ತ ಪೀಠದ ನಾದಮಂಟಪದಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಶ್ರೀಗಣಪತಿ ಸಚ್ಚಿದಾನಂದ ಸ್ವಾಮೀಜಿ ಮಕ್ಕಳೊಂದಿಗೆ ಯೋಗಾಸನ ಮಾಡಿದರು.

ಯೋಗದಿಂದಾಗುವ ಪ್ರಯೋಜನ ವಿವರಿಸಿದ ಶ್ರೀಗಳು

ಮೈಸೂರು, ಜೂ.21(ಎಂಟಿವೈ)– ಪ್ರತಿದಿನ ಯೋಗ, ಧ್ಯಾನ ಮಾಡಿದರೆ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ಅವಧೂತ ದತ್ತ ಪೀಠದ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಅಭಿಪ್ರಾಯಪಟ್ಟಿದ್ದಾರೆ.

ನಾದ ಮಂಟಪದಲ್ಲಿ ಶುಕ್ರವಾರ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಮಕ್ಕಳೊಂದಿಗೆ ಸಾಮೂಹಿ ಯೋಗ ಪ್ರದರ್ಶನದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಎಲ್ಲರೂ ಯೋಗ ಮಾಡುವ ಹವ್ಯಾಸ ಬೆಳೆಸಿಕೊಳ್ಳಬೇಕು. ಪ್ರತಿದಿನ ಕನಿಷ್ಠ 40 ನಿಮಿಷ ಧ್ಯಾನ ಮಾಡುವುದರಿಂದ ಆಗುವ ಅನುಭವ ಅದ್ಭುತ. ಅಂತಹ ಸಮಯವನ್ನು ಮಿಸ್ ಮಾಡದೆ ಸದುಪಯೋಗ ಮಾಡಿಕೊಳ್ಳಬೇಕು 40 ನಿಮಿಷ ಕಣ್ಣು ಮುಚ್ಚಿ ಉಸಿರನ್ನು ಒಂದೇ ತರ ಸಮತುಷ್ಟಿಯಲ್ಲಿ ತೆಗೆದುಕೊಳ್ಳಬೇಕು. ಮುಖದಲ್ಲಿ ನಗು ಇರಬೇಕು. ಕೋಪ, ಹಸಿವು ತೋರಬಾರದು. ಧ್ಯಾನ ಮಾಡುವಾಗ ಯಾವುದೇ ಯೋಚನೆ ಮಾಡಬಾರದು ಯಾವ ಕೆಟ್ಟ ಶಬ್ದವನ್ನಾಗಲಿ, ಹಾಡು, ಮಾತುಗಳನ್ನು ಆಲಿಸದೆ ತದೇಕಚಿತ್ತರಾಗಿ ಧ್ಯಾನ ಮಾಡಬೇಕು ಎಂದು ಸಲಹೆ ನೀಡಿದರು.

ಯೋಗ ಮಾಡುವುದರಿಂದ ದೇಹ ಸದೃಢವಾಗಿ, ಮನಸು ತಿಳಿಯಾಗುತ್ತದೆ. ದೇಹ ರಬ್ಬರ್‌ನಂತೆ ಹೇಗೆ ಬೇಕಾದರೂ ಬೆಂಡ್ ಮಾಡಬಹುದು. ಆಗ ನಿಮ್ಮ ಆರೋಗ್ಯ ಅತ್ಯುತ್ತಮವಾಗಿರುತ್ತದೆ. ಯೋಗ ಧ್ಯಾನದೊಂದಿಗೆ ಹಠಯೋಗ ಮಾಡುವುದು ಉತ್ತಮ. ನಮ್ಮ ಆಶ್ರಮದ ಮಕ್ಕಳು ಹೀಗೆ ಹಠಯೋಗ ಮಾಡಿ ಸದೃಢರಾಗಿದ್ದಾರೆ ಎಂದರು. ಆಶ್ರಮದಲ್ಲಿ ನಡೆದ ಯೋಗ ದಿನಾಚರಣೆಯಲ್ಲಿ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ವಿಶೇಷ ಮಕ್ಕಳು ಸ್ವಾಮೀಜಿಯೊಂದಿಗೆ ಯೋಗಭ್ಯಾಸ ಮಾಡಿ ಗಮನ ಸೆಳೆದರು. ಅವಧೂತ ಪೀಠದ ಕಿರಿಯ ಶ್ರೀಗಳಾದ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಕೂಡ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಚಾಮುಂಡೇಶ್ವರಿ ಕ್ಷೇತ್ರದ ಬಿಜೆಪಿ ಯೋಗ ದಿನಾಚರಣೆ



ಮೈಸೂರು, ಜೂ. 21– ಭಾರತದ ಪ್ರಾಚೀನ ವಿದ್ಯೆಗಳಲ್ಲಿ ಯೋಗ ಪ್ರಮುಖವಾದದ್ದು, ಇಡೀ ಜಗತ್ತನ್ನು ಭಾರತದಡೆಗೆ ಸೆಳೆಯುತ್ತಾ ಜನರ ಶಾರೀರಿಕ ಹಾಗೂ ಮಾನಸಿಕ ಆರೋಗ್ಯವನ್ನು ಸದೃಢಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಬಿಜೆಪಿ ಚಾಮುಂಡೇಶ್ವರಿ ನಗರ ಮಂಡಲದ ಅಧ್ಯಕ್ಷ ರಾಕೇಶ್ ಭಟ್ ತಿಳಿಸಿದರು. ಬಿಜೆಪಿ ಚಾಮುಂಡೇಶ್ವರಿ ಕ್ಷೇತ್ರದ ನಗರ ಮಂಡಲದ ವತಿಯಿಂದ ರಾಮಕೃಷ್ಣನಗರದ ವಿಶ್ವಮಾನವ ಶಾಲೆಯ ಆವರಣದಲ್ಲಿ ನಡೆದ ಯೋಗ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಪ್ರಧಾನಿ ನರೇಂದ್ರ ಮೋದಿಯವರು ಫಿಟ್ ಇಂಡಿಯಾ ಹಾಗೂ ಯೋಗ ದಿನಾಚರಣೆಗೆ ಕರೆ ನೀಡುವ ಮೂಲಕ ದೇಶದ ನಾಗರಿಕರು ಹಾಗೂ ಬಿಜೆಪಿ ಕಾರ್ಯಕರ್ತರು ಸದೃಢರಾಗಿ, ಆರೋಗ್ಯವಂತರಾಗಿ ದೇಶ ಸೇವೆಯಲ್ಲಿ ತೊಡಗಬೇಕೆಂಬ ಇಚ್ಛೆ ಹೊಂದಿದ್ದಾರೆ. 365 ದಿನದಲ್ಲಿ ಜೂನ್ 21 ಅತೀ ದೀರ್ಘ ಹಗಲು ಹೊಂದಿರುವ ದಿನ. ಇಂದು ಭೂಮಿಯ ಉತ್ತರಾರ್ಧ ಗೋಳದಲ್ಲಿ ಸೂರ್ಯ ಅತೀ ಹೆಚ್ಚು ಹೊತ್ತು ಕಂಗೊಳಿಸುತ್ತಾನೆ. ಇಂಥಹ ಸುದಿನದಂದು ಯೋಗಾಸನ ಮಾಡುವುದರ ಜೊತೆಗೆ ಹೆಚ್ಚಿನ ಜನರಿಗೆ ಯೋಗ ಮಾಡಲು ಪ್ರೇರೇಪಿಸಬೇಕು ಎಂದು ತಿಳಿಸಿದರು.

ಯುವ ಯೋಗ ಪಟು ಸ್ಫೂರ್ತಿ ಈ. ಗೌಡ ಅವರು ಆಯ್ದ ಆಸನಗಳನ್ನು ಪ್ರದರ್ಶಿವುದರ ಜೊತೆ ಕಾರ್ಯಕರ್ತರಿಗೆ ಮಾರ್ಗದರ್ಶನ ಮಾಡಿದರು.

ನಗರ ಪ್ರಧಾನ ಕಾರ್ಯದರ್ಶಿ ಬಿ.ಎಂ. ರಘು, ಪಾಲಿಕೆ ಮಾಜಿ ಸದಸ್ಯ ಆರ್.ಕೆ. ಶರತ್ ಕುಮಾರ್, ಮಂಡಲದ ಪ್ರಧಾನ ಕಾರ್ಯದರ್ಶಿ ಈರೇಗೌಡ, ಆರ್. ಸೋಮಶೇಖರ್ ಉಪಾಧ್ಯಕ್ಷ ಹೆಚ್. ಜಿ. ರಾಜಮಣಿ, ಬಿ.ಸಿ ಶಶಿಕಾಂತ್ ಶಿವಕುಮಾರ್, ಲಲಿತ, ಜೆಡಿಎಸ್ ಮುಖಂಡರಾದ ದಿನೇಶ್, ಬಿಜೆಪಿ ಮುಖಂಡರಾದ ತುಳಸಿ, ನಾಗರಾಜ್ ಜನ್ನು, ಚಂದ್ರಶೇಖರ ಸ್ವಾಮಿ, ಶುಭಶ್ರೀ, ನವೀನ್, ಸುಬ್ರಮಣಿ, ಪುಟ್ಟಮಣಿ, ಹೇಮಲತಾ, ರವಿಕುಮಾರ್ ಸೇರಿದಂತೆ ಇತರರು ಭಾಗವಹಿಸಿದ್ದರು.

ಕೇಂದ್ರ ರೇಷ್ಮೆ ಸಂಶೋಧನಾ ಸಂಸ್ಥೆಯಲ್ಲಿ ಯೋಗಾಭ್ಯಾಸ ಯೋಗ ನಿರಂತರವಾಗಿರಬೇಕು

ಡಾ.ಎಸ್.ಗಾಂಧಿ ದಾಸ್



ಮೈಸೂರು, ಜೂ. 21– ಕೇಂದ್ರ ರೇಷ್ಮೆ ಸಂಶೋಧನೆ ಮತ್ತು ತರಬೇತಿ ಸಂಸ್ಥೆಯಲ್ಲಿ ನಿರ್ದೇಶಕ ಡಾ.ಎಸ್. ಗಾಂಧಿ ದಾಸ್ ನೇತೃತ್ವದಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಲಾಯಿತು.

ಸಂಸ್ಥೆಯಲ್ಲಿ ಬೆಳಿಗ್ಗೆ 7 ಗಂಟೆಗೆ ಯೋಗಾಭ್ಯಾಸವನ್ನು ರಮೇಶ್‌ಕುಮಾರ್, ಮೈಸೂರು ಅಕ್ಯಾಡೆಮಿ ಆಫ್ ಯೋಗ ಮತ್ತು ಸೂರ್ಯ ಸಂತೋಷ, ಪಿ, ಶ್ರೀಹರಿ ದ್ವಾರಕನಾಥ ಜಿಎಸ್‌ಎಸ್ ಯೋಗ ಫೌಂಡೇಷನ್ ಮೈಸೂರು ಅವರ ಮಾರ್ಗದರ್ಶನದಲ್ಲಿ ಸ್ವಯಂ ಸಮಾಜಕ್ಕಾಗಿ ಯೋಗ ಘೋಷಣೆಯೊಂದಿಗೆ ಯೋಗ ಮಾಡಲಾಯಿತು. ಈ ಸಮಯದಲ್ಲಿ ಭದ್ರಾಸಾನ, ವಕ್ರಾಸನ, ವೃಕ್ಷಾಸನ, ಮಕರಾಸನ, ಭುಜಂಗಾಸನ, ಸೇತುಬಂಧು, ಪ್ರಾಣಯಾಮ ನಾಡಿಶೋಧನಾಸನ ಮುಂತಾದ ಯೋಗಾಸನಗಳನ್ನು ಅಭ್ಯಸಿಸಲಾಯಿತು.

ಸಂಸ್ಥೆ ನಿರ್ದೇಶಕ ಡಾ. ಎಸ್. ಗಾಂಧಿ ದಾಸ್ ಮಾತನಾಡಿ, ಈ ದಿನ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಯೋಗಾಭ್ಯಾಸ ಮಾಡಲು ಸರ್ಕಾರದ ನಿರ್ದೇಶನವಿದೆ. ಪ್ರತಿಯೊಬ್ಬರು ಸ್ವಯಂ ಇಚ್ಛೆಯಿಂದ ನಮ್ಮ ಆರೋಗ್ಯದ ದೃಷ್ಟಿಯಿಂದ ಪ್ರತಿದಿನ ಯೋಗ ಮಾಡಬೇಕು ಎಂದು ಕಿವಿ ಮಾತು ಹೇಳಿದರು.

ಯೋಗ ಗುರು ರಮೇಶ್‌ಕುಮಾರ್ ಮಾತನಾಡಿ, ಮೈಸೂರಲ್ಲಿ ತುಂಬಾ ಯೋಗ ಶಾಲೆಗಳಿವೆ. ಯೋಗ ತಿಳಿದಿರುವವರು ಇದ್ದಾರೆ ಎಂದರು. ಯೋಗಕ್ಕೆ ಮೈಸೂರಿನ ನಾಲ್ವಡಿ ಕೃಷ್ಣರಾಜ ಒಡೆಯರ್‌ರವರ ಕೊಡುಗೆಯನ್ನು ಸ್ಮರಿಸಿದರು. ತಮ್ಮ ಜೀವನದಲ್ಲಿ ಪ್ರತಿ ದಿನ ಕೇವಲ 10 ನಿಮಿಷವಾದರೂ ಯೋಗ ಮಾಡುವ ಕಲೆಯನ್ನು ಅಳವಡಿಸಿಕೊಂಡು ಆರೋಗ್ಯವನ್ನು ಕಾಪಾಡಿಕೊಳ್ಳಲು ಸಲಹೆ ನೀಡಿದರು. ಕಾರ್ಯಕ್ರಮವನ್ನು ಗಾಯಿತ್ರಿ, ಕೆ, ಡಾ.ಆರ್.ಭಾಗ್ಯ ಆಯೋಜಿಸಿದ್ದರು.

ಡಾ.ಎಸ್.ಬಾಲಸರಸ್ವತಿ, ಡಾ.ಮೀನಾಲ್, ಆರ್, ಡಾ.ಸಿ.ಎಮ್. ಬಾಬು, ಶ್ರೀಹರಿದ್ವಾರಕನಾಥ ಜಿಎಸ್‌ಎಸ್ ಯೋಗ ಫೌಂಡೇಷನ್ ಮೈಸೂರಿನ ಸ್ವಾಮಿ ಮತ್ತು ಸುಮಾರು 90 ಕ್ಕೂ ಹೆಚ್ಚು ವಿಜ್ಞಾನಿಗಳು, ಅಧಿಕಾರಿಗಳು, ಯೋಜನೆಯ ಸಹಾಯಕರು, ಕಾರ್ಮಿಕರು ಭಾಗವಹಿಸಿದ್ದರು.

ಅಹಂನಿಂದ ಸ್ವಯಂ ಕಡೆಗೆ ಹೋಗುವ ಮಾರ್ಗವೇ ಯೋಗ

ಯೋಗ ದಿನಾಚರಣೆಯಲ್ಲಿ ಮಾಜಿ ಸಚಿವ ಎನ್.ಮಹೇಶ್ ಅಭಿಮತ



ಮೈಸೂರು, ಜೂ. 21– ಮೈಸೂರು ನಗರ ಬಿಜೆಪಿ ಯುವ ಮೋರ್ಚಾ ತಂಡದ ವತಿಯಿಂದ ಪಕ್ಷದ ಕಚೇರಿಯ ಮುಂಭಾಗ ವಿವಿಧ ಭಂಗಿಯ ಬೃಹತ್ ಯೋಗಾಸನದ ಮುಖಾಂತರ ಅರ್ಥಪೂರ್ಣ ಯೋಗ ದಿನಾಚರಣೆ ಆಚರಿಸಲಾಯಿತು.

ಯೋಗಾಸನ ಕುರಿತು ಮಾತನಾಡಿದ ಮಾಜಿ ಸಚಿವ ಎನ್.ಮಹೇಶ್, ಯೋಗಾಸನ ಕೇವಲ ಒಂದು ದಿನಕ್ಕೆ ಮಾತ್ರ ಸೀಮಿತವಾಗಬಾರದು. ಪ್ರತಿದಿನ ಪ್ರತಿಯೊಬ್ಬರು ತಮ್ಮ ಮನೆಯಲ್ಲಿ ಯೋಗಾಸನವನ್ನು ಮಾಡಿದರೆ ನಮ್ಮ ದೈನಂದಿನ ಜೀವನ ಬಹಳ ಉಲ್ಲಾಸಕರವಾಗಿರುತ್ತದೆ. ಮನೆಯಲ್ಲಿ ಹಿರಿಯರು, ವೃದ್ಧರು, ಮಕ್ಕಳು, ಯುವಕರು, ಯುವತಿಯರು ಯೋಗಭ್ಯಾಸ ಮಾಡಲೇಬೇಕು. ಇದರಿಂದ ಆರೋಗ್ಯ ಹಾಗೂ ದೇಹದ ನರನಾಡಿಗಳು ಬಹಳ ಉತ್ತಮಕಾರಿಯಾಗಿ ಸಹಕರಿಸುತ್ತವೆ ಎಂದು ತಿಳಿಸಿದರು.

ಮಾಜಿ ಶಾಸಕ ನಿರಂಜನ್ ಕುಮಾರ್ ಮಾತನಾಡಿ, ನಿಜಕ್ಕೂ ದೇಶಾದ್ಯಂತ ನಡೆಯುತ್ತಿರುವ ಯೋಗಾ ದಿನಾಚರಣೆ ಶ್ಲಾಘನೀಯ. ಭಾರತವು ಇಡೀ ಪ್ರಪಂಚಕ್ಕೆ ಯೋಗವನ್ನು ತೋರಿಸಿ ಕೊಡುವ ಮುಖಾಂತರ ವಿಶ್ವಗುರು ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಪ್ರಧಾನಿ ನರೇಂದ್ರ ಮೋದಿಯವರು ಯೋಗ ಮಾಡುವ ಮುಖಾಂತರ ಜಗತ್ತಿನ ಪ್ರತಿಯೊಬ್ಬರ ಗಮನ ಸೆಳೆದಿದ್ದಾರೆ. ಜೊತೆಗೆ ಆರೋಗ್ಯಕರ ಭಾರತ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ತಿಳಿಸಿದರು.

ಮೈಸೂರು ಜಿಲ್ಲಾ ಅಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ, ಯೋಗ ಶಿಕ್ಷಕ ಮುತ್ತಣ್ಣ, ಬಿಡಣಾಳು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಜಲಪುರಿ, ಮೈಸೂರು ನಗರದ ಯುವ ಮೋರ್ಚಾ ಅಧ್ಯಕ್ಷ ರಾಕೇಶ್‌ಗೌಡ, ನಗರ ಉಪಾಧ್ಯಕ್ಷ ಜೋಗಿ ಮಂಜು, ಮೋರ್ಚಾ ಪ್ರಧಾನ ಕಾರ್ಯದರ್ಶಿ ಸಚ್ಚಿನ್, ಲೋಹಿತ್, ಮಧು, ನಿಶಾಂತ್, ಅರ್ಜುನ್, ದೇವರಾಜ್, ಗಜೇಂದ್ರ, ರಂಗಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು.

ಅನಂತಗೀತ ವಿದ್ಯಾಲಯದಲ್ಲಿ ಯೋಗ ದಿನಾಚರಣೆ



ಮೈಸೂರಿನ ವಿಜಯನಗರದಲ್ಲಿರುವ ಅನಂತಗೀತ ವಿದ್ಯಾಲಯದಲ್ಲಿ ವಿಶ್ವದ ಹತ್ತನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಯೋಗ ಪಟು ಕುಮಾರಿ ಉಷಾ ಯೋಗಾಭ್ಯಾಸ ಮಾಡಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ವೇಣುಗೋಪಾಲ್, ಮುಖ್ಯ ಶಿಕ್ಷಕ ಲೋಕೇಶ್ ಹೆಚ್ ಪಿ, ಶಿಕ್ಷಕರಾದ ಜಮುನಾ, ಶಿಲ್ಪಾ ಕಾವೇರಮ್ಮ ಉಷಾ, ಶಿಲ್ಪಶ್ರೀ ಹಾಜರಿದ್ದರು.

ದೀಪಾ ಶಾಲೆಯಲ್ಲಿ ಯೋಗ ದಿನ ಆಚರಣೆ




ಮೈಸೂರಿನ ರೂಪಾ ನಗರದ ದೀಪಾ ಶಾಲೆಯಲ್ಲಿ ಅಂತರರಾಷ್ಟ್ರೀಯ ಯೋಗ ದಿನ ಆಚರಿಸಲಾಯಿತು. ಈ ಸಂದರ್ಭದಲ್ಲಿ ದೀಪಾ ಪ್ರೌಢಶಾಲೆಯ ಮುಖ್ಯೋಪಾಧ್ಯಾಯಿನಿ ಶಿಲ್ಪಾ ಜಗದೀಶ್ ಹಾಗೂ ಶಾಲೆಯ ಎಲ್ಲಾ ಶಿಕ್ಷಕರು, ವಿದ್ಯಾರ್ಥಿ–ವಿದ್ಯಾರ್ಥಿನಿಯರೊಂದಿಗೆ ಯೋಗಾಭ್ಯಾಸ ಮಾಡುವ ಮೂಲಕ ಅಂತಾರಾಷ್ಟ್ರೀಯ ಯೋಗ ದಿನವನ್ನು ಆಚರಿಸಿದರು. ಯೋಗ ಶಿಕ್ಷಕರಾದ ವಿಜಯಲಕ್ಷ್ಮಿ ವಿದ್ಯಾರ್ಥಿಗಳಿಗೆ ಯೋಗದ ಆಸನಗಳನ್ನು ಹೇಳಿಕೊಟ್ಟರು.

ಮಹಾವೀರ ವಿದ್ಯಾ ಮಂದಿರದಲ್ಲಿ ಯೋಗ ಪ್ರದರ್ಶನ



ಮೈಸೂರಿನ ಶ್ರೀರಾಂಪುರದಲ್ಲಿರುವ ಮಹಾವೀರ ವಿದ್ಯಾಮಂದಿರದಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ಅನಿತಾ, ಸವಿತಾ (ಯೋಗ ತರಬೇತಿದಾರರು) ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಸವಿತಾ ವಿದ್ಯಾರ್ಥಿಗಳಿಗೆ ಕೆಲವು ಯೋಗಾಸನವನ್ನು ಮಾಡಿಸುವ ಮೂಲಕ ಅದರಿಂದಾಗುವ ಉಪಯೋಗದ ಬಗ್ಗೆ ಮಾಹಿತಿ ನೀಡಿದರು.

ರಾಷ್ಟ್ರೋತ್ಥಾನ ವಿದ್ಯಾಕೇಂದ್ರದಲ್ಲಿ ಯೋಗ ಸಂಭ್ರಮ



ಮೈಸೂರು, ಜೂ. 21– ಮೈಸೂರಿನ ವಿಜಯನಗರದಲ್ಲಿರುವ ರಾಷ್ಟ್ರೋತ್ಥಾನ ವಿದ್ಯಾಕೇಂದ್ರದಲ್ಲಿ ಅಂತರರಾಷ್ಟ್ರೀಯ ಯೋಗದಿನ ಆಚರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಎ. ಶಂಕರಚೆಟ್ಟಿ & ಸನ್ಸ್ ನಿರ್ದೇಶಕರಾದ ಶ್ರೀಮತಿ ಪಲ್ಲವಿ ಆದರ್ಶ್ ಆಗಮಿಸಿದ್ದರು. ಶಾಲೆಯ 203 ವಿದ್ಯಾರ್ಥಿಗಳಿಂದ ಅನಾವರಣಗೊಂಡ ಯೋಗವ್ಯೂಹ ರಚನಾ ಪ್ರದರ್ಶನವನ್ನು ಕಣ್ತುಂಬಿಕೊಂಡ ಪೋಷಕರು ಹಾಗೂ ಗಣ್ಯರು ಅತೀವ ಮೆಚ್ಚುಗೆ ವ್ಯಕ್ತಪಡಿಸಿದರು.

ತದನಂತರ ದೀಪ ಪ್ರಜ್ವಲನೆ ಹಾಗೂ ಶಾಲಾ ಪ್ರಾರ್ಥನೆಯೊಂದಿಗೆ ಸಭಾ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಈ ವರ್ಷದ ಧ್ಯೇಯ ವಾಕ್ಯವಾದ 'ಮಹಿಳಾ ಸಬಲೀಕರಣ' ಪರಿಕಲ್ಪನೆಯ ಆಶಯದಂತೆ, ವಿದ್ಯಾರ್ಥಿಗಳೊಂದಿಗೆ ಮಹಿಳಾ ಪೋಷಕರು ಕೂಡ ಯೋಗ ಮಾಡುವ ಮೂಲಕ ಉತ್ಸಾಹದಿಂದ ಯೋಗ ದಿನದ ಆಚರಣೆಯಲ್ಲಿ ಪಾಲ್ಗೊಂಡರು.

ಆಯ್ದ ವಿದ್ಯಾರ್ಥಿ– ವಿದ್ಯಾರ್ಥಿನಿಯರ ಪ್ರತ್ಯೇಕ ತಂಡಗಳು ನೀಡಿದ ಯೋಗ ಪಿರಾಮಿಡ್ ಪ್ರದರ್ಶನವು ಮನಮೋಹಕವಾಗಿತ್ತು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಶ್ರೀಮತಿ ಪಲ್ಲವಿ ಆದರ್ಶ್, ಆಧ್ಯಾತ್ಮಿಕ ಉನ್ನತೀಕರಣದಲ್ಲಿ ಯೋಗದ ಪಾತ್ರ, ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾದ ಅಷ್ಟಾಂಗ ಯೋಗದ ಅವಶ್ಯಕತೆಯನ್ನು ಕುರಿತು ಸರಳ, ಸುಂದರವಾಗಿ ವಿವರಿಸಿದರು.

ಶಾಲೆಯ ಕಾರ್ಯದರ್ಶಿ ಮಲ್ಲರಾಜೇ ಅರಸ್ ಎ. ಆರ್, ಆಡಳಿತಾಧಿಕಾರಿ ಕೆ. ಎಲ್. ಚಂದ್ರಶೇಖರ್, ಶೈಕ್ಷಣಿಕ ಸಂಯೋಜಕರಾದ ಶ್ರೀಮತಿ ದಿವ್ಯ ಗಣೇಶ್, ಬೋಧಕ – ಬೋಧಕೇತರ ವರ್ಗ ಹಾಗೂ ಪೋಷಕರ ಬಂಧುಗಳು ಉಪಸ್ಥಿತರಿದ್ದರು.

ಇಟ್ನಾ ಗ್ರಾಮದ ಅಭಿವೃದ್ಧಿಗೆ ಒತ್ತು: ಶಾಸಕ ಅನಿಲ್



ಸರಗೂರು, ಜೂ.21– ಇಟ್ನಾ ಗ್ರಾಮದ ಸರ್ವತೋಮುಖ ಅಭಿವೃದ್ಧಿಗೆ ಒತ್ತು ನೀಡಲಾಗುವುದು ಎಂದು ಶಾಸಕ ಅನಿಲ್ ತಿಳಿಸಿದರು.

ತಾಲೂಕಿನ ಇಟ್ನಾ ಗ್ರಾಮದಲ್ಲಿ ಶ್ರೀರಾಮಮಂದಿರ ಉದ್ಘಾಟಿಸಿ, ವಾಲ್ಮೀಕಿ ಪುತ್ಥಳಿ ಅನಾವರಣಗೊಳಿಸಿ ಮಾತನಾಡಿದ ಅವರು, ಗ್ರಾಮದಲ್ಲಿ ಶ್ರೀರಾಮಮಂದಿರ ನಿರ್ಮಿಸುವ ಮೂಲಕ ರಾಮ, ಲಕ್ಷ್ಮಣ, ಸೀತೆ, ಹನುಮ ಹಾಗೂ ಆದಿಕವಿ ವಾಲ್ಮೀಕಿ ಅವರ ಮೂರ್ತಿ ಸ್ಥಾಪಿಸಲಾಗಿದೆ. ಪ್ರತಿಯೊಬ್ಬರೂ ಶ್ರೀರಾಮ, ವಾಲ್ಮೀಕಿ ಅವರ ಆದರ್ಶಗಳನ್ನು ಪಾಲಿಸಬೇಕು ಎಂದರು.

ಇಟ್ನಾ ಗ್ರಾಮದ ಹೊಳೆಯಮ್ಮನವರ ಭವನಕ್ಕೆ 10 ಲಕ್ಷ, ವಾಲ್ಮೀಕಿ ಭವನದ ಮುಂದುವರೆದ ಕಾಮಗಾರಿಗೆ 30 ಲಕ್ಷ ಅನುದಾನ ನೀಡಲಾಗುವುದು ಎಂದರು.

ಜಿಪಂ ಮಾಜಿ ಸದಸ್ಯ ಚಿಕ್ಕವೀರನಾಯಕ ಮಾತನಾಡಿದರು. ಈ ವೇಳೆ ಗ್ರಾಮದ ಯಜಮಾನರಾದ ಕೆ.ನಾಗರಾಜು, ಬಿ.ಬೆಟ್ಟನಾಯಕ, ರಾಮನಾಯಕ, ಹೀರನಾಯಕ, ಗ್ರಾಪಂ ಅಧ್ಯಕ್ಷ ಜಯರಾಮ್, ಉಪಾಧ್ಯಕ್ಷ ಕಾಳಿಂಗ ನಾಯಕ, ಮಾಜಿ ಅಧ್ಯಕ್ಷ ಬಸವರಾಜು, ಸದಸ್ಯ ಎನ್.ಬಸವನಾಯಕ, ಮುಖಂಡರಾದ ಶಂಭುಲಿಂಗ ನಾಯಕ, ರಾಜನಾಯಕ, ನಾಗರಾಜು, ಪ್ರತೀಪ್, ಮಾದಾಪುರ ಗ್ರಾಪಂ ಅಧ್ಯಕ್ಷ ಮಹೇಶ್, ಅರ್ಚಕ ಶಿವರಾಜಪ್ಪ, ಪಿಡಿಓ ಹೆಚ್.ಎಸ್.ಚಿನ್ನಸ್ವಾಮಿ, ಗ್ರಾಮಸ್ಥರು ಇದ್ದರು.

ಕ್ಷೇತ್ರದಲ್ಲಿ ಮೈತ್ರಿ ಅಭ್ಯರ್ಥಿ ಯದುವೀರ್ ಗೆಲುವಿಗೆ ಬೆಂಬಲ

ಕೃತಜ್ಞತಾ ಸಭೆಯಲ್ಲಿ ಶಾಸಕ ಜಿ.ಡಿ.ಹರೀಶ್‌ಗೌಡ

ಹುಣಸೂರು, ಜೂ.21– ಹುಣಸೂರು ಕ್ಷೇತ್ರದಲ್ಲಿ 2004ರಿಂದ 2024ರವರೆಗೆ ಜೆಡಿಎಸ್, ಬಿಜೆಪಿ ಪರ ಒಲವು ತೋರದ ಮತದಾರರು ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿ ಅಭ್ಯರ್ಥಿ ಬೆಂಬಲಿಸಿ ಗೆಲುವಿಗೆ ಸಹಕರಿಸಿದ್ದಾರೆ. ಕೇಂದ್ರದಲ್ಲಿ ಮತ್ತೊಮ್ಮೆ ಮೋದಿ ಪ್ರಧಾನಿಯಾಗಿದ್ದು, ಹೆಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾಗಿದ್ದಾರೆ. ಎರಡೂ ಪಕ್ಷಗಳ ಮೇಲೆ ವಿಶ್ವಾಸ ತೋರಿರುವ ಜನರು ಅಧಿಕ ಮತಗಳಿಂದ ಯದುವೀರ್ ಅವರನ್ನು ಗೆಲ್ಲಿಸಿದ್ದಾರೆ ಎಂದು ಶಾಸಕ ಜಿ.ಡಿ.ಹರೀಶ್‌ಗೌಡ ತಿಳಿಸಿದರು.



ಕೃತಜ್ಞತಾ ಸಭೆಯನ್ನು ಸಂಸದ ಯದುವೀರ್, ಶಾಸಕ ಜಿ.ಡಿ.ಹರೀಶ್‌ಗೌಡ ಉದ್ಘಾಟಿಸಿದರು.

ನಗರದ ಕನಕ ಭವನದಲ್ಲಿ ಆಯೋಜಿಸಿದ್ದ ಕೃತಜ್ಞತಾ ಸಭೆಯಲ್ಲಿ ಮಾತನಾಡಿದ ಅವರು, ಗ್ಯಾರಂಟಿಗಳ ಹೆಸರೇಳುವ ರಾಜ್ಯ ಸರ್ಕಾರ ಅಭಿವೃದ್ಧಿಯಲ್ಲಿ ಶೂನ್ಯವಾಗಿದೆ. ಹೀಗಾಗಿ ಸರ್ಕಾರ ಅಭಿವೃದ್ಧಿ ಕೆಲಸಗಳತ್ತ ಗಮನ ಹರಿಸಬೇಕಿದೆ. ಕಾಡಂಚಿನ ಸಮಸ್ಯೆಗಳ ಬಗ್ಗೆ ಅರಣ್ಯ ಸಚಿವರು, ನಗರಾಭಿವೃದ್ಧಿ ಬಗ್ಗೆ ನಗರಾಭಿವೃದ್ಧಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಸಮಸ್ಯೆಗಳ ಬಗ್ಗೆ ಚರ್ಚಿಸಿದ್ದೇನೆ. ಆದರೆ ಯಾರೂ ಈ ಬಗ್ಗೆ ಗಮನ ಹರಿಸಿಲ್ಲ. ಅಭಿವೃದ್ಧಿ ಕೆಲಸಗಳಿಗೆ ಹಣವೂ ಇಲ್ಲ. ಅನುದಾನವೂ ಇಲ್ಲ ವಾಗಿದೆ. ಎಲ್ಲಾ ಸಂಪನ್ಮೂಲವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಲಾಗುತ್ತಿದೆ ಎಂದು ಆರೋಪಿಸಿದರು.

ಕ್ಷೇತ್ರದ ಕಾಲೇಜುಗಳಿಗೆ ಸಿಡಿಸಿ ಸಮಿತಿಗಳನ್ನು ರಚನೆ ಮಾಡಿ ಒಂದು ವರ್ಷವಾದರೂ ಇನ್ನೂ ಅನುಮೋದನೆ ದೊರೆತಿಲ್ಲ. ಅಲ್ಲದೇ ಕಂದಾಯ ಇಲಾಖೆಯ ದರಖಾಸ್ತು ಸಮಿತಿ ಇನ್ನೂ ರಚನೆಯಾಗಿಲ್ಲ. ತಾಲೂಕಿನಲ್ಲಿ ರೈತರ ಸಮಸ್ಯೆ ಬಹಳಷ್ಟಿದ್ದು, ಅವುಗಳನ್ನು ಬಗೆಹರಿಸಲು ದರಖಾಸ್ತು ಸಮಿತಿ ಇಲ್ಲವಾಗಿದೆ. ಇದರಿಂದ ಸಮಸ್ಯೆ ಹೇಳತೀರದಾಗಿದೆ. ನಮ್ಮ ಕ್ಷೇತ್ರಕ್ಕೆ ತಾರತಮ್ಯ ಮಾಡಲಾಗುತ್ತಿದ್ದು, ಹೊಟ್ಟೆಕಿಚ್ಚಿನ ರಾಜಕಾರಣ ಸರಿಯಲ್ಲ ಎಂದು ಸರ್ಕಾರದ ಬಗ್ಗೆ ಕಿಡಿಕಾರಿದರು.

ರಾಜ್ಯದೆಲ್ಲೆಡೆ ಅಭಿವೃದ್ಧಿ ಕೆಲಸಗಳಾಗುತ್ತಿದ್ದರೂ, ಹುಣಸೂರಿನಲ್ಲಿ ಯಾವುದೇ ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ. ತಾಲೂಕಿಗೆ ಯಾವುದೇ ಅನುದಾನ ನೀಡಬೇಡಿ ಎಂದು ಯಾರೋ ಹೇಳುವ ಮಾತಿಗೆ ತಲೆದೂಗಿ ಅನುದಾನವಿಲ್ಲ ಎಂದು ತೋರಿಕೆ ಉತ್ತರ ನೀಡುತ್ತಿರುವ ಸರ್ಕಾರ ಜನರ ಕೆಂಗಣ್ಣಿಗೆ ಗುರಿಯಾಗಲಿದೆ ಎಂದ ಅವರು, ಹುಣಸೂರು ರಾಜ್ಯಕ್ಕೆ ಸಿಎಂ ಸೇರಿದಂತೆ ಅನೇಕ ನಾಯಕರನ್ನು ಕೊಟ್ಟಿದೆ. ಇಂತಹ ಕ್ಷೇತ್ರಕ್ಕೆ ತಾರತಮ್ಯವೇಕೆ ಎಂದು ಪ್ರಶ್ನಿಸಿದರು. ಕ್ಷೇತ್ರದ ಅಭಿವೃದ್ಧಿಗೆ ಪಕ್ಷಾತೀತವಾಗಿ ಕೈಜೋಡಿಸಿ ಜನ ಮೆಚ್ಚುತ್ತಾರೆ ಎಂದರು.

ಇದೇ ವೇಳೆ ಸಂಸದ ಯದುವೀರ್ ಅವರಿಗೆ ಮೈಸೂರು ಪೇಟ ತೊಡಿಸಿ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ರೈತ ಸಂಘದ ರಾಮೇಗೌಡ ಮತ್ತಿತರರು ಮೈಸೂರು–ಕುಶಾಲನಗರ ರಸ್ತೆ ಅಭಿವೃದ್ಧಿಗಾಗಿ ಕೈಗೊಂಡಿರುವ ಭೂಸ್ವಾಧೀನ ಪರಿಹಾರದಲ್ಲಿ ತಾರತಮ್ಯವಾಗಿದ್ದು, ಅದನ್ನು ಸರಿಪಡಿಸಿ ನ್ಯಾಯ ದೊರಕಿಸಿ ಕೊಡಬೇಕೆಂದು ಸಂಸದರಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಗ್ರಾಮಾಂತರ ಅಧ್ಯಕ್ಷ ನಾಗರಾಜು, ನಗರ ಅಧ್ಯಕ್ಷ ನಾರಾಯಣ್, ದೇವರಾಜ ಒಡೆಯರ್, ಸೂರ್ಯಕುಮಾರ್, ದಿನೇಶ್, ದೇವರಾಜ್, ರವಿಕುಮಾರ್, ಶಿವಕುಮಾರ್, ಕೆಂಪೇಗೌಡ, ಗೋವಿಂದೇಗೌಡ, ನಾಗರಾಜ ಮಲ್ಲಾಡಿ, ಗಣೇಶ್ ಕುಮಾರಸ್ವಾಮಿ, ಹೆಚ್.ಪಿ.ಸತೀಶ್, ಜಿಲ್ಲಾ ಗ್ರಾಮಾಂತರ ಅಧ್ಯಕ್ಷೆ ವೆಂಕಟಮ್ಮ, ಕಮಲಮ್ಮ, ಬಸವಲಿಂಗಯ್ಯ, ಬಸವರಾಜು, ಗಣಪತಿ, ಮಂಜುನಾಥ್, ಅಣ್ಣಯ್ಯನಾಯಕ, ವಾಸುಗೌಡ, ತಾಪಂ ಮಾಜಿ ಉಪಾಧ್ಯಕ್ಷ ದೇವರಾಜು ಸೇರಿದಂತೆ ಇನ್ನಿತರರಿದ್ದರು.

> ‘ನಮ್ಮ ಕುಮಾರಣ್ಣ ಕೇಂದ್ರದ ಬೃಹತ್ ಕೈಗಾರಿಕಾ ಸಚಿವರಾಗಿದ್ದಾರೆ. ನಮ್ಮ ಮಹಾರಾಜರು ಸಂಸದರಾಗಿದ್ದಾರೆ. ಅಲ್ಲದೇ ಮತ್ತೊಮ್ಮೆ ಮೋದಿ ಪ್ರಧಾನಿಯಾಗಿದ್ದು, ಇವರೆಲ್ಲರ ಸಹಕಾರದೊಂದಿಗೆ ಹುಣಸೂರಿನಲ್ಲಿ ಗಾರ್ಮೆಂಟ್ಸ್ ತೆರೆದು ಸಾವಿರಾರು ಮಹಿಳೆಯರಿಗೆ ಉದ್ಯೋಗ ನೀಡಲಾಗುವುದು. ನಿತ್ಯ ಸಾವಿರಾರು ಮಹಿಳೆಯರು ಮೈಸೂರಿನ ಗಾರ್ಮೆಂಟ್ಸ್‌ಗಳಿಗೆ ಕೆಲಸಕ್ಕೆ ಹೋಗುತ್ತಿದ್ದಾರೆ. ಅದನ್ನು ತಪ್ಪಿಸಲು ಕೇಂದ್ರ ಸಚಿವ ಕುಮಾರಸ್ವಾಮಿ ಅವರಲ್ಲಿ ಕಾರ್ಖಾನೆ ಆರಂಭಿಸಲು ಮನವಿ ಸಲ್ಲಿಸಿ ಅನುಮೋದನೆ ಪಡೆದು ಕಾರ್ಖಾನೆ ತೆರೆದು ನಿರುದ್ಯೋಗ ಸಮಸ್ಯೆ ನಿವಾರಿಸಲಾಗುವುದು.
>
> – **ಜಿ.ಡಿ.ಹರೀಶ್‌ಗೌಡ,** ಶಾಸಕ.

ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ಪ್ರತಿಭಟನೆ

ನಂಜನಗೂಡು, ಜೂ.21– ರಾಜ್ಯ ಸರ್ಕಾರ ಪೆಟ್ರೋಲ್, ಡೀಸೆಲ್ ದರ ಏರಿಕೆ ಮಾಡಿರುವುದನ್ನು ಖಂಡಿಸಿ ಮಾಜಿ ಶಾಸಕ ಬಿ.ಹರ್ಷವರ್ಧನ್ ನೇತೃತ್ವದಲ್ಲಿ ನಗರದಲ್ಲಿ ಶುಕ್ರವಾರ ಬೃಹತ್ ಪ್ರತಿಭಟನೆ ನಡೆಸಲಾಯಿತು.

ನಗರದ ವಿಶ್ವೇಶ್ವರಯ್ಯ ವೃತ್ತದಲ್ಲಿ ಜಮಾಯಿಸಿದ ನೂರಾರು ಬಿಜೆಪಿ–ಜೆಡಿಎಸ್ ಕಾರ್ಯಕರ್ತರು ಕೆಲಕಾಲ ರಸ್ತೆ ತಡೆದು ಪ್ರತಿಭಟನೆ ನಡೆಸಿ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕ ಬಿ.ಹರ್ಷವರ್ಧನ್ ಮಾತನಾಡಿ, ಯಾವುದೇ ದೂರದೃಷ್ಟಿ ಇಲ್ಲದೇ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳಿಂದ ಬಡ ಜನರಿಗೆ ಪ್ರಯೋಜನವಾಗಿಲ್ಲ. ಗ್ಯಾರಂಟಿ ಯೋಜನೆ ನೆಪದಲ್ಲಿ ಕಳೆದ ವರ್ಷವೇ ವಿದ್ಯುತ್ ದರವನ್ನು ಶೇ.33ರಷ್ಟು ಏರಿಕೆ ಮಾಡಿರುವ ರಾಜ್ಯ ಸರ್ಕಾರ ಇದೀಗ ಪೆಟ್ರೋಲ್, ಡೀಸೆಲ್ ದರ ಹೆಚ್ಚಿಸಿದೆ. ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಜನರ ಮೇಲೆ ಬರೆ ಎಳೆದಂತಾಗಿದೆ ಎಂದು ಆರೋಪಿಸಿದರು.

ಜನಪರ ಆಡಳಿತ ನೀಡುವುದಾಗಿ ಅಧಿಕಾರಕ್ಕೆ ಬಂದ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಎಸ್ಟಿ ಅಭಿವೃದ್ಧಿ ನಿಗಮದಲ್ಲಿ ಬಹುಕೋಟಿ ಹಗರಣ ಮಾಡಿ ಸಚಿವರ ತಲೆದಂಡವಾಗಿದೆ. ದಲಿತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡದೆ ವಂಚಿಸಲಾಗುತ್ತಿದೆ. ರಾಜ್ಯದಲ್ಲಿ ಅಭಿವೃದ್ಧಿ ಯೋಜನೆಗಳಿಗೆ ಕಳೆದ ಒಂದು ವರ್ಷದಿಂದ ಎಳ್ಳುನೀರು ಬಿಡಲಾಗಿದೆ. ತನ್ನ ಬೊಕ್ಕಸ ಹೆಚ್ಚಿಸಿಕೊಳ್ಳಲು ಸರ್ಕಾರ ಎಂಆರ್‌ಪಿ ಮದ್ಯದಂಗಡಿಗಳನ್ನು ಹೆಚ್ಚಳ ಮಾಡುವ ಮೂಲಕ ಬಡಜನರ ಬದುಕಿನ ಜೊತೆ ಚೆಲ್ಲಾಟವಾಡುತ್ತಿದೆ. ರಾಜ್ಯ ಸರ್ಕಾರದ ಬೆಲೆ ಏರಿಕೆ ನೀತಿಯಿಂದ ಬಡಜನರು ತತ್ತರಿಸಿ ಹೋಗಿದ್ದಾರೆ ಎಂದು ದೂರಿದರು.



ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.

ಬಿಜೆಪಿ ರಾಜ್ಯ ಘಟಕದಿಂದ ಜಿಲ್ಲಾ, ತಾಲೂಕು ಕೇಂದ್ರಗಳಲ್ಲಿ ಪ್ರತಿಭಟನೆ ಮಾಡುವ ಮೂಲಕ ಸರ್ಕಾರಕ್ಕೆ ಎಚ್ಚರಿಕೆ ನೀಡಲಾಗುತ್ತಿದ್ದು, ಬೆಲೆ ಏರಿಕೆ ನೀತಿಯಿಂದ ರಾಜ್ಯ ಸರ್ಕಾರ ಹಿಂದೆ ಸರಿಯಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಕರ್ನಾಟಕ ಬಂದ್ ಮಾಡಿ ರಾಜ್ಯ ಸರ್ಕಾರಕ್ಕೆ ಬಿಸಿ ಮುಟ್ಟಿಸಲಾಗುವುದು ಎಂದು ಎಚ್ಚರಿಸಿದರು. ಬಳಿಕ ತಾಲೂಕು ಆಡಳಿತಕ್ಕೆ ಮನವಿ ಸಲ್ಲಿಸುವ ಮೂಲಕ ಪ್ರತಿಭಟನೆ ಅಂತ್ಯಗೊಳಿಸಲಾಯಿತು.

ಈ ವೇಳೆ ಬಿಜೆಪಿ ಮಂಡಲ ಅಧ್ಯಕ್ಷ ಕೆಂಡಗಣ್ಣಪ್ಪ, ನಗರಾಧ್ಯಕ್ಷ ಸಿದ್ದರಾಜು, ಜೆಡಿಎಸ್ ಜಿಲ್ಲಾಧ್ಯಕ್ಷ ಎನ್.ನರಸಿಂಹಸ್ವಾಮಿ, ತಾಲೂಕು ಅಧ್ಯಕ್ಷ ಮಹದೇವಸ್ವಾಮಿ, ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಜಿಪಂ ಮಾಜಿ ಸದಸ್ಯರಾದ ಮಂಗಳ ಸೋಮಶೇಖರ್, ಸಿ.ಚಿಕ್ಕರಂಗನಾಯ್ಕ, ಡಾ.ಶಿವರಾಂ, ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಂದಿನಿ, ಕಾರ್ಯದರ್ಶಿ ಎನ್.ಸಿ.ಬಸವಣ್ಣ, ನಗರಸಭಾ ಸದಸ್ಯರಾದ ಮಹದೇವಸ್ವಾಮಿ, ಮಹದೇವಪ್ರಸಾದ್, ಮೀನಾಕ್ಷಿ, ಮಹದೇವಮ್ಮ, ಬಾಲಚಂದ್ರು, ಉಮೇಶ್ ಮೋದಿ, ಮಧುರಾಜ್ ಸೇರಿದಂತೆ ಹಲವರಿದ್ದರು.

ಗಿರಿಜನರ ಕಲೆ, ಸಂಸ್ಕೃತಿ ಅಧ್ಯಯನ ಮಾಡಿ

ಶಿಬಿರಾರ್ಥಿಗಳಿಗೆ ಸಹ ಪ್ರಾಧ್ಯಾಪಕ ಡಾ.ಎಂ.ಪಿ.ಸೋಮಶೇಖರ್ ಸಲಹೆ

ಹೆಚ್.ಡಿ.ಕೋಟೆ, ಜೂ.21– ಆದಿವಾಸಿ ಗಿರಿಜನರ ಜೀವನ ಶೈಲಿ, ಆಚಾರ ವಿಚಾರ, ಕಲೆ ಮತ್ತು ಸಂಸ್ಕೃತಿಯನ್ನು ಶಿಬಿರಾರ್ಥಿಗಳು ಅಧ್ಯಯನ ಮಾಡಬೇಕು ಎಂದು ಸ್ನಾತಕೋತ್ತರ ಸಮಾಜ ವಿಭಾಗದ ಸಹ ಪ್ರಾಧ್ಯಾಪಕ ಡಾ.ಎಂ.ಪಿ. ಸೋಮಶೇಖರ್ ಸಲಹೆ ನೀಡಿದರು.

ಪಟ್ಟಣದ ನಿಸರ್ಗ ಫೌಂಡೇಶನ್ ಕಚೇರಿಯಲ್ಲಿ ಮೈಸೂರಿನ ಜೆಎಸ್‌ಎಸ್ ಕಲಾ ಮತ್ತು ವಿಜ್ಞಾನ ಕಾಲೇಜು, ಸ್ನಾತಕೋತ್ತರ ಸಮಾಜ ವಿಭಾಗದಿಂದ ನಡೆದ ಸಮಾಜ ಕಾರ್ಯ ಶಿಬಿರದಲ್ಲಿ ಅವರು ಮಾತನಾಡಿದರು.

ಸಮಾಜದ ಅಭಿವೃದ್ಧಿಗೆ ಅನೇಕ ಸಂಘಟನೆಗಳು ತಾಲೂಕಿನಲ್ಲಿ ಕೆಲಸ ಮಾಡುತ್ತಿವೆ. ಈ ಸಂಘಟನೆಗಳ ಕೆಲಸ ಮತ್ತು ಸಂಘಟನೆಗಳಿಗೆ ಆದಿವಾಸಿ ಗಿರಿಜನರ ಸಹಕಾರ ಸೇರಿದಂತೆ ಎಲ್ಲಾ ವಿಷಯಗಳನ್ನು ಅಧ್ಯಯನ ಮಾಡಬೇಕು. ಅವರ ಆಚಾರ ವಿಚಾರಗಳ ಬಗ್ಗೆ ಲೇಖನಗಳನ್ನು ಬರೆಯಬೇಕು ಎಂದರು.

ಶಿಬಿರಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳ ವ್ಯಕ್ತಿತ್ವ ಶಿಬಿರ ನಡೆದ ನಂತರ ಬದಲಾವಣೆ ಆಗಿರುವುದನ್ನು ನೋಡಿದ್ದೇವೆ.



ಕಾರ್ಯಕ್ರಮವನ್ನು ಪ್ರೊ.ಬಿ.ವಿ.ಸಾಂಬಶಿವಮೂರ್ತಿ ಉದ್ಘಾಟಿಸಿದರು.

ಇದುವರೆಗೂ ನೀವು ನಿಮ್ಮ ಮನೆಗಳಲ್ಲಿ ವಾಸ ಮಾಡುತ್ತಿದ್ದೀರಿ. ಆದರೆ ಇಲ್ಲಿ ಗುಂಪಿನಲ್ಲಿ 7 ದಿನಗಳ ಕಾಲ ಜೀವನ ಮಾಡುತ್ತೀರಿ. ನಿಮ್ಮ ಎಲ್ಲಾ ಕೆಲಸಗಳನ್ನು ನೀವೆ ಮಾಡಿಕೊಳ್ಳುತ್ತೀರಿ. ನಿಮ್ಮ ವ್ಯಕ್ತಿತ್ವ ಇಲ್ಲಿಂದ ಬದಲಾಗಬೇಕು. ಮೊಬೈಲ್ ಬಳಕೆ ಮಾಡಲು ಇಲ್ಲಿ ಅವಕಾಶ ಇರುವುದಿಲ್ಲ. ಇಲ್ಲಿಂದ ನಿಮ್ಮ ಸಂಶೋಧನಾ ಸಾಮರ್ಥ್ಯ ಹೆಚ್ಚಾಗಬೇಕು. ಸಮಾಜ ನಮಗೆ ಏನು ಕೊಟ್ಟಿದೆ ಎನ್ನುವುದಕ್ಕಿಂತ, ಸಮಾಜಕ್ಕೆ ನಾವು ಏನು ಕೊಡುಗೆ ಕೊಡಬಹುದು ಎನ್ನುವ ಬಗ್ಗೆ ಯೋಚನೆ ಮಾಡಿ. ಇದರೊಂದಿಗೆ ಕನ್ನಡ ಭಾಷೆಯೊಂದಿಗೆ ಆಂಗ್ಲ ಭಾಷೆ ಸಂವಹನ ಕಲೆ ಬೆಳೆಸಿಕೊಳ್ಳಿ ಮತ್ತು ಕಂಪ್ಯೂಟರ್ ಜ್ಞಾನ ಇದ್ದರೆ, ವಿಶ್ವದಲ್ಲಿ ಎಲ್ಲಿ ಬೇಕಾದರೂ ಜೀವನ ರೂಪಿಸಿಕೊಳ್ಳಬಹುದು ಎಂದರು.

ಬುಡಕಟ್ಟು ಕೃಷಿಕರ ಸಂಘದ ಅಧ್ಯಕ್ಷ ವಿಜಯಕುಮಾರ್ ಮಾತನಾಡಿದರು. ಪ್ರೊ.ಬಿ.ವಿ.ಸಾಂಬಶಿವಮೂರ್ತಿ ಕಾರ್ಯಕ್ರಮ ಉದ್ಘಾಟಿಸಿದರು. ಶಿಬಿರದ ಉಪ ನಿರ್ದೇಶಕ ಡಾ.ಎಂ.ಪ್ರಭು, ಸಹ ಪ್ರಾಧ್ಯಾಪಕಿ ಡಾ.ಕುಮುದಿನ ಅಚ್ಚಿ, ಹಿರಿಯ ಮುಖಂಡರಾದ ಸಿ.ಎನ್.ನಾಗಣ್ಣ, ಜೆ.ಪಿ.ಶಿವರಾಜು, ನಿಸರ್ಗ ಸಂಸ್ಥೆಯ ದಿವ್ಯ, ಚಿಕ್ಕತಿಮ್ಮ ನಾಯಕ ಮತ್ತು ಶಿಬಿರಾರ್ಥಿಗಳು ಹಾಜರಿದ್ದರು.

ಜಯಪುರ ಶಾಲೆಯಲ್ಲಿ ಯೋಗ ದಿನಾಚರಣೆ



ಜಯಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶ್ವ ಯೋಗ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳು ಯೋಗ ಮಾಡಿದರು.

ಸುನೀಲ್ ಬೋಸ್, ಡಾ.ಯತೀಂದ್ರಗೆ ಸನ್ಮಾನ



ಸಂಸದ ಸುನಿಲ್ ಬೋಸ್ ಹಾಗೂ ಎಂಎಲ್‌ಸಿ ಡಾ.ಯತೀಂದ್ರ ಅವರನ್ನು ತಿ.ನರಸೀಪುರ ತಾಲೂಕು ಕುರುಬರ ಸಂಘದ ನಿರ್ದೇಶಕ ಅರುಣ ಸನ್ಮಾನಿಸಿದರು. ಈ ವೇಳೆ ತಾಪಂ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಎಂ.ರಮೇಶ್, ಪುರಸಭಾ ಸದಸ್ಯ ನಾಗರಾಜು, ಹರೀಶ್, ಕುಮಾರ್, ರಾಜೀವ್, ನಿಂಗರಾಜು, ವೆಂಕಟೇಶ್, ಇತರರಿದ್ದರು.

ನಾಳೆ ಕನ್ನಡ ಮಠದ ಗಣರಾಧನಾ ಮಹೋತ್ಸವ

ಬೆಟ್ಟದಪುರ, ಜೂ.21– ಇಲ್ಲಿನ ಸ್ವತಂತ್ರ ಸಲೀಲಾಖ್ಯ ವಿರಕ್ತ ಮತ್ತು ಕನ್ನಡ ಮಠದಲ್ಲಿ ವಾರ್ಷಿಕ ಮಹೋತ್ಸವ ಹಾಗೂ ಹಿರಿಯ ಶ್ರೀಗಳ ಗಣರಾಧನಾ ಮಹೋತ್ಸವ ಜೂ.23ರಂದು ನಡೆಯಲಿದೆ.



ಶ್ರೀಚಿಕ್ಕವೀರ ದೇಶಿಕೇಂದ್ರ ಸ್ವಾಮಿಗಳ 96ನೇ ಗಣರಾಧನೆ ಹಾಗೂ ಶ್ರೀಚನ್ನವೀರ ದೇಶಿಕೇಂದ್ರ ಸ್ವಾಮಿಯವರ 43ನೇ ಗಣರಾಧನೆಯನ್ನು ಮಠದ ಗದ್ದುಗೆಯಲ್ಲಿ ಹಮ್ಮಿಕೊಂಡಿದ್ದು ಭಾನುವಾರ ಮುಂಜಾನೆಯಿಂದಲೇ ರುದ್ರಾಭಿಷೇಕ, ಬಿಲ್ವಾರ್ಚನೆ, ಮಹಾ ಮಂಗಳಾರತಿ, ಷಟ್‌ಸ್ಥಲ ಧ್ವಜಾರೋಹಣ ಮುಂತಾದ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ.

ಕ್ರಿಶ 1809ರಲ್ಲಿ ರಾಜ ಶ್ರೀವೀರರಾಜೇಂದ್ರ ಒಡೆಯರ್ ಅವರು ಕೊಡಗಿನ ಅಮ್ಮತ್ತಿ ಬಳಿಯ ಬೆಟಗೇರಿ ವ್ಯಾಪ್ತಿಯಲ್ಲಿ ಕನ್ನಡ ಮಠ ಸ್ಥಾಪಿಸಿ 197 ಎಕರೆ ಭೂಮಿ ದಾನ ನೀಡಿದ್ದರು. ಪ್ರತಿವರ್ಷದಂತೆ ಈ ಬಾರಿಯೂ ಕನ್ನಡ ಮಠದ 215ನೇ ಸ್ಥಾಪನಾ ವರ್ಷಾಚರಣೆ ಸಭಾ ಕಾರ್ಯಕ್ರಮ ಯಡಿಯೂರು ಜಗದ್ಗುರು ತೋಂಟದಾರ್ಯ ಮಹಾ ಸಂಸ್ಥಾನ ಮಠದ ಡಾ.ಶ್ರೀತೋಂಟದ ಸಿದ್ದರಾಮ ಸ್ವಾಮಿಗಳ ಸಾನಿಧ್ಯದಲ್ಲಿ ನಡೆಯಲಿದೆ. ಮಲ್ಲನ ಮೂಲೆ ಮಠದ ಶ್ರೀಚನ್ನಬಸವ ಸ್ವಾಮೀಜಿ ಅಧ್ಯಕ್ಷತೆ ವಹಿಸಲಿದ್ದು, ಕೊಳ್ಳೇಗಾಲ ತಾಲೂಕಿನ ಆಲನಹಳ್ಳಿ ಮಠದ ಪಟ್ಟದ ಶಿವಕುಮಾರ ಸ್ವಾಮೀಜಿ, ಹುಲಿಯೂರು ದುರ್ಗ ಮಠದ ಶ್ರೀಸಿದ್ದಲಿಂಗ ಶಿವಾನಂದ ಸ್ವಾಮೀಜಿ, ಬೆಳಗಾವಿಯ ಸಾಗನೂರು ಮಠದ ಅಲ್ಲಮಪ್ರಭು ಸ್ವಾಮೀಜಿ, ನೆಲಮಂಗಲದ ಪವಾಡ ಶ್ರೀಬಸವಣ್ಣ ದೇವರ ಮಠ ಸೇರಿದಂತೆ ಹಲವಾರು ಮಠಾಧೀಶರು ಪಾಲ್ಗೊಳ್ಳಲಿದ್ದು ಸಲೀಲಾಖ್ಯ ಮಠದ ಪರಂಪರೆ, ಶರಣರ ತತ್ವಗಳು, ಪರಾತ್ಪರ ವಸ್ತುವಿನ ಬಿನ್ನಾಣ ಸೇರಿದಂತೆ ಮತ್ತಿತರ ವಿಷಯಗಳನ್ನೊಳಗೊಂಡ ಶಿವಾನುಭವ ಗೋಷ್ಠಿ ನಡೆಸಲಾಗುವುದು.

ಕಾರ್ಯಕ್ರಮದಲ್ಲಿ ಯುವ ಚೇತನ ಶ್ರೀಗಳು, ಬಸವ ಬಳಗ ಜಿಲ್ಲಾಧ್ಯಕ್ಷ ಪ್ರದೀಪ್ ಕುಮಾರ್, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಹೋಬಳಿ ಅಧ್ಯಕ್ಷ ಕೂರ್ಗಲ್ ಶಿವಕುಮಾರಸ್ವಾಮಿ, ಹಿರಿಯ ಚೇತನ ಪಾರ್ವತಮ್ಮ ಮತ್ತು ಸಿ.ಎಂ.ಈಶ್ವರ್ ಭಾಗವಹಿಸಲಿದ್ದು, ವಿವಿಧ ಸಮಾಜ ಸೇವಕರಿಗೆ ಸನ್ಮಾನ ಹಾಗೂ ಎಸ್‌ಸಿವಿಡಿಎಸ್ ಸಮೂಹ ವಿದ್ಯಾಸಂಸ್ಥೆಗಳಲ್ಲಿ ಸಾಧನೆ ಮಾಡಿರುವ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುತ್ತದೆ. ನಂತರ ಅನ್ನ ಸಂತರ್ಪಣೆ ಏರ್ಪಡಿಸಲಾಗಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಕನ್ನಡ ಮಠದ ಶ್ರೀಚನ್ನವೀರ ದೇಶಿಕೇಂದ್ರ ಸ್ವಾಮೀಜಿ ಕೋರಿದರು.

ಲಯನ್ಸ್ ವಿದ್ಯಾಸಂಸ್ಥೆಯಲ್ಲಿ ಯೋಗ ದಿನಾಚರಣೆ



ಯೋಗ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದ ಮಕ್ಕಳು.

ಕೆ.ಆರ್.ನಗರ, ಜೂ.21– ಪಟ್ಟಣದ ಲಯನ್ಸ್ ವಿದ್ಯಾ ಸಂಸ್ಥೆಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಮಕ್ಕಳು ಯೋಗಾಭ್ಯಾಸ ಮಾಡಿದರು.

ಮುಖ್ಯಶಿಕ್ಷಕ ಟಿ.ಪಿ.ನಂದೀಶ್ ಮಾತನಾಡಿ, ವಿದ್ಯಾರ್ಥಿಗಳು ಮೊಬೈಲ್, ಟಿವಿ ನೋಡುವುದರಲ್ಲಿ ಹೆಚ್ಚಿನ ಸಮಯ ಕಳೆಯುತ್ತಿದ್ದಾರೆ. ವಿದ್ಯಾರ್ಥಿಗಳ ಓದಿಗೆ ಯೋಗಾಭ್ಯಾಸ ಪೂರಕವಾಗಲಿದ್ದು, ಎಲ್ಲಾ ವಿದ್ಯಾರ್ಥಿಗಳು ಪ್ರತಿದಿನ ಮನೆಯಲ್ಲಿ ಅರ್ಧ ಗಂಟೆ ಯೋಗಾಭ್ಯಾಸ ಮಾಡುವಂತೆ ಮಕ್ಕಳಿಗೆ ಕಿವಿಮಾತು ಹೇಳಿದರು.

ನಮ್ಮ ಆರೋಗ್ಯ ನಮ್ಮ ಕೈಯಲ್ಲಿ ಇರುವುದರಿಂದ ಆರೋಗ್ಯದ ಕಡೆಗೆ ಹೆಚ್ಚು ಗಮನ ಹರಿಸಬೇಕು. ಆಹಾರ ಎಷ್ಟು ಮುಖ್ಯವೋ ಆರೋಗ್ಯವೂ ಅಷ್ಟೇ ಮುಖ್ಯ. ಮಕ್ಕಳು ಯೋಗ ಮಾಡುವುದರಿಂದ ಆರೋಗ್ಯದ ಜೊತೆಗೆ ಬುದ್ಧಿಶಕ್ತಿಯೂ ಹೆಚ್ಚಾಗಲಿದ್ದು, ವಿದ್ಯೆ ಜೊತೆಗೆ ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲೂ ಭಾಗವಹಿಸಬಹುದು ಎಂದರು.

ಈ ವೇಳೆ ಮುಖ್ಯ ಶಿಕ್ಷಕರಾದ ಎಲ್.ಎಸ್.ಲೋಕೇಶ್, ಜಿ.ರಮೇಶ್, ಶಿಕ್ಷಕರಾದ ಅನಿಲ್ ಕುಮಾರ, ಬಿ.ಎಸ್.ಹರೀಶ್, ಹೆಚ್. ದಿವಾಕರ್, ಸಿ.ರಾಮೇಗೌಡ, ಎ.ಎಸ್.ಅಶ್ವಿನಿ, ನಳಿನಿ, ಆಶಾ, ನಂದಿನಿ, ಸುಜಾತ, ಗಾಯತ್ರಿ, ಎಂಕೆ. ರುಕ್ಮಿಣಿ, ಯೋಗೇಶ್, ವನಾಜಾಕ್ಷಿ, ಬೀಬಿ ಜಾನ್, ಕೆ.ಆರ್.ವಿನುತ ಇದ್ದರು. ದೈಹಿಕ ಶಿಕ್ಷಕಿ ಪಾರ್ವತಿ ಯೋಗಾಭ್ಯಾಸ ಮಾಡಿಸಿದರು.

ಹವಾಮಾನ ವೈಪರಿತ್ಯದಿಂದ ಕೃಷಿ ಮೇಲೆ ಕೆಟ್ಟ ಪರಿಣಾಮ

ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ಅಭಿಪ್ರಾಯ

ತಿ.ನರಸೀಪುರ, ಜೂ.21– ಜನಸಂಖ್ಯೆಗೆ ಅನುಗುಣವಾಗಿ ಪರಿಸರ ಸಂಪತ್ತು ಏರಿಕೆಯಾಗುತ್ತಿಲ್ಲ. ಇದರಿಂದ ಹವಾಮಾನ ವೈಪರಿತ್ಯವಾಗುತ್ತಿದ್ದು, ಕೃಷಿ ಕ್ಷೇತ್ರದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಕುರುಬೂರು ಶಾಂತಕುಮಾರ್ ಅಭಿಪ್ರಾಯಪಟ್ಟರು.



ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ತಾಲೂಕಿನ ಬನ್ನೂರು ಎಪಿಎಂಸಿ ಆವರಣ ದಲ್ಲಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ಆಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ರೈತರಿಗೆ ಪರಿಸರ ರಕ್ಷಣೆ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ರೈತರಿಗೆ ಸಸಿ ವಿತರಿಸಿ ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಅವರು ಮಾತನಾಡಿದರು.

ಪರಿಸರ ರಕ್ಷಣೆ ಪ್ರತಿಯೊಬ್ಬರ ಆದ್ಯ ಕರ್ತವ್ಯ. ಆದರೆ ಅದನ್ನು ನಾವು ಮರೆತಿರುವುದರಿಂದ ಗೋಮಾಳ, ಕೆರೆಕಟ್ಟೆಗಳು, ಮೀಸಲು ಅರಣ್ಯಗಳು ಬಲಾಢ್ಯರ ಪಾಲಾಗುವ ಮೂಲಕ ಪರಿಸರಕ್ಕೆ ಧಕ್ಕೆಯಾಗುತ್ತಿದೆ. ಹೈಕೋರ್ಟ್ ಕಠಿಣ ಸೂಚನೆ ಇದ್ದರೂ ಪರಿಸರ ಪರಿಸರ ರಕ್ಷಣೆ ಮಾಡಲು ಅಧಿಕಾರಿಗಳು ಮೀನಾಮೇಷ ಎಣಿಸುತ್ತಿದ್ದಾರೆ ಎಂದು ಆರೋಪಿಸಿದ ಅವರು ಇದು ಪರಿಸರ ನಾಶಕ್ಕೆ ಕಾರಣವಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಮುಖ್ಯ ಅತಿಥಿ ಬನ್ನೂರು ರಾಜು ಮಾತನಾಡಿ, ಪರಿಸರ ಉಳಿದಿರುವುದು ರೈತರಿಂದಲೇ, ರೈತರೇ ಅದನ್ನು ಮತ್ತಷ್ಟು ಸಂರಕ್ಷಿಸಲು ಚಿಂತಿಸಬೇಕು. ಸರ್ವ ರೋಗಕ್ಕೂ ಪರಿಸರವೇ ಮದ್ದು. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮುಳುಗಿರುವ ನಾವು ಪರಿಸರ ಸಂರಕ್ಷಣೆ ಮಾಡುವುದನ್ನು ಮರೆಯುತ್ತಿದ್ದೇವೆ ಹಾಗಾಗಿ ನಾವು ಈಗಲಾದರೂ ಎಚ್ಚೆತ್ತುಕೊಂಡು ಪರಿಸರ ರಕ್ಷಣೆಗೆ ಮುಂದಾಗಬೇಕು ಎಂದರು.

ತಾಲೂಕು ಸಾಮಾಜಿಕ ವಲಯ ಉಪ ಅರಣ್ಯಾಧಿಕಾರಿ ಆಂತೋಣಿ ಸರ್ಕಾರದ ಕಾರ್ಯಕ್ರಮಗಳ ಬಗ್ಗೆ ತಿಳಿಸಿಕೊಟ್ಟರು. ಸರ್ಕಾರಿ ಕಾಲೇಜು ಹಾಗೂ ಪ್ರೌಢಶಾಲೆಯಲ್ಲಿ ಹೆಚ್ಚು ಅಂಕ ಪಡೆದ 13 ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಅಲ್ಲದೇ ರೈತರಿಗೆ ಉಚಿತವಾಗಿ ಸಸಿ ವಿತರಿಸಲಾಯಿತು.

ಈ ವೇಳೆ ರಾಜ್ಯ ಸಂಘಟನಾ ಕಾರ್ಯದರ್ಶಿ ದೇವರಾಜ್, ರೈತ ಮುಖಂಡ ಶಂಕರ್, ಪ್ರಾಚಾರ್ಯರಾದ ಗೂಳಿಗೌಡ, ರವೀಶ್, ಉಪನ್ಯಾಸಕ ರವೀಂದ್ರ, ಪ್ರೌಢಶಾಲೆ ಮುಖ್ಯ ಶಿಕ್ಷಕರಾದ ಚಿನ್ನಸ್ವಾಮಿ, ತಿಬ್ಬೇಗೌಡ, ಶಿಕ್ಷಕ ಕುಮಾರ್, ರೈತ ಮುಖಂಡರಾದ ಲಿಂಗಣ್ಣ, ಅರುಣ್ ಕುಮಾರ್, ಸೂರಿ, ಶ್ರೀನಿವಾಸ, ಬಾ.ಮ.ದೇವರಾಜ್, ಎನ್. ಜಯರಾಮು, ಸ್ವಾಮಿ, ಕುಳ್ಳೇಗೌಡ, ರೇವಣ್ಣ, ಮಹೇಶ್, ನಟೇಶ್, ರಾಮಲಿಂಗೇಗೌಡ, ನಿಂಗರಾಜು, ಚೆಲುವಣ್ಣ, ಲೋಕೇಶ್, ಸಾ.ಜಗದೀಶ್, ನಾಗೇಶ್, ರಂಗಸ್ವಾಮಿ, ಕುಮಾರ್, ನಾರಾಯಣಸ್ವಾಮಿ, ಕಾಳಪ್ಪ ಸೇರಿದಂತೆ ರೈತರು, ವಿದ್ಯಾರ್ಥಿಗಳು, ಪೋಷಕರು ಕಾರ್ಯಕ್ರಮದಲ್ಲಿದ್ದರು.

ಶ್ರೀಪತಂಜಲಿ ಯೋಗ ಶಿಕ್ಷಣ ಸಮಿತಿಯಿಂದ ಯೋಗ

ನಂಜನಗೂಡು, ಜೂ.21– ವಿಶ್ವ ಯೋಗ ದಿನಾಚರಣೆ ಅಂಗವಾಗಿ ನಗರದ ತಾಲೂಕು ಕ್ರೀಡಾಂಗಣದಲ್ಲಿ ಶುಕ್ರವಾರ ಶ್ರೀಪತಂಜಲಿ ಯೋಗ ಶಿಕ್ಷಣ ಸಮಿತಿಯಿಂದ ಆಯೋಜಿಸಿದ್ದ ಸಾಮೂಹಿಕ ಯೋಗ ಪ್ರದರ್ಶನದಲ್ಲಿ ನೂರಾರು ಯೋಗಬಂಧುಗಳು ಭಾಗವಹಿಸಿದ್ದರು.

ಯೋಗಾಭ್ಯಾಸದಲ್ಲಿ ಸಮಿತಿ ಯೋಗಬಂಧುಗಳು ಸಮವಸ್ತ್ರ ಧಾರಿಯಾಗಿ ಪಾಲ್ಗೊಂಡು ಗಮನ ಸೆಳೆದರೆ, ಕಸ್ತೂರ ಬಾ ಬಾಲಕಿಯರ ವಸತಿ ಶಾಲೆಯ ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.



ವಿಶ್ವ ಯೋಗ ದಿನಾಚರಣೆ ಅಂಗವಾಗಿ ನಡೆದ ಸಾಮೂಹಿಕ ಯೋಗಾಭ್ಯಾಸದಲ್ಲಿ ನೂರಾರು ಮಂದಿ ಭಾಗವಹಿಸಿದ್ದರು.

ಸಾಮೂಹಿಕ ಯೋಗಾಭ್ಯಾಸಕ್ಕೆ ಚಾಲನೆ ನೀಡಿ ಮಾತನಾಡಿದ ಚಾಮರಾಜನಗರ ವೈದ್ಯಕೀಯ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಡಾ.ಸಂತೋಷ್ ಕುಮಾರ್ ಬನ್ನೂರು, ಇತ್ತೀಚಿನ ದಿನಗಳಲ್ಲಿ ಮಾನಸಿಕ ಖಿನ್ನತೆಗೆ ಒಳಗಾಗುವವರ ಸಂಖ್ಯೆ ಹೆಚ್ಚಳವಾಗುತ್ತಿದೆ. ಇದಕ್ಕೆ ಬದಲಾದ ಜೀವನ ಶೈಲಿಯೇ ಕಾರಣ. ನಿಯಮಿತ ಯೋಗ, ಆಹಾರ ಕ್ರಮ ಅಳವಡಿಸಿಕೊಳ್ಳದೇ ಸಾಕಷ್ಟು ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ. ಮಾನಸಿಕ ಖಿನ್ನತೆಗೆ ಯೋಗವೇ ಮದ್ದು ಎಂಬುದು ನಿಮ್ಹಾನ್ಸ್ ಆಸ್ಪತ್ರೆಯಲ್ಲಿ ನಡೆದಿರುವ ಅನೇಕ ಸಂಶೋಧನೆಗಳ ಮೂಲಕ ರುಜುವಾತಾಗಿದೆ. ಓಂಕಾರ ಧ್ಯಾನದ ಮೂಲಕ ನಮ್ಮ ನರಮಂಡಲ ಉದ್ದೀಪನಗೊಂಡು ಚೈತನ್ಯ ಶಕ್ತಿ ಹೆಚ್ಚುವ ಜೊತೆಗೆ ಖಿನ್ನತೆಯಿಂದ ಬಳಲುವ ಅನೇಕರು ಸಹಜ ಸ್ಥಿತಿಗೆ ಮರಳಿರುವುದು ಸಂಶೋಧನೆಯಲ್ಲಿ ದೃಢಪಟ್ಟಿದೆ. ಹಾಗಾಗಿ ಎಲ್ಲರೂ ಗುರುವಿನ ಮಾರ್ಗದರ್ಶನದಲ್ಲಿ ಯೋಗಾಭ್ಯಾಸ ಮಾಡಬೇಕು ಎಂದು ಸಲಹೆ ನೀಡಿದರು.

ಶ್ರೀಪತಂಜಲಿ ಯೋಗ ಶಿಕ್ಷಣ ಸಮಿತಿ ಪ್ರಧಾನ ಯೋಗ ಶಿಕ್ಷಕ ಪ್ರಕಾಶ್ ಜಿ.ಉಡಿಗಾಲ ಮಾತನಾಡಿ, ಪ್ರಕೃತಿಗೆ ಅನುಗುಣವಾಗಿ ಮಾಡುವ ಆಸನಗಳನ್ನು ಅತ್ಯಂತ ಪ್ರೀತಿಯಿಂದ ಮಾಡಬೇಕು. ಮಾಡುವುದನ್ನು ಗಮನಿಸಿ ಅನುಭವಿಸಿ ಆನಂದಿಸುವುದನ್ನು ಕಲಿಯುವುದೇ ನಿಜವಾದ ಯೋಗ ಕ್ರಮ. ನಾವು ದ್ವೇಷ, ಅಸೂಯೆ, ಕೋಪದ ಕಡೆ ಹೆಚ್ಚು ಕೇಂದ್ರೀಕರಿಸುತ್ತಿದ್ದೇವೆ. ಅವೆಲ್ಲವನ್ನೂ ತ್ಯಜಿಸಿ ಪ್ರೀತಿ, ಕರುಣೆ, ದಯೆ ಗುಣಗಳತ್ತ ಮುಖ ಮಾಡಿದರೆ ನಮ್ಮ ಆರೋಗ್ಯ ಸುಧಾರಣೆ ಜತೆಗೆ ಉತ್ತಮ ಜೀವನ ಕಂಡುಕೊಳ್ಳಲು ಸಹಕಾರಿಯಾಗಲಿದೆ. ನಮ್ಮ ಪೂರ್ವಿಕರು ಕಟ್ಟಿಕೊಟ್ಟಿರುವ ಜೀವನ ಪದ್ಧತಿ ಅತ್ಯಂತ ವೈಜ್ಞಾನಿಕತೆಯಿಂದ ಕೂಡಿದೆ. ಅದರಿಂದ ನಾವು ವಿಮುಖರಾಗಿ ಆಧುನಿಕ ಜೀವನಶೈಲಿಗೆ ಮಾರುಹೋಗದಂತೆ ಎಚ್ಚರವಹಿಸಬೇಕಿದೆ ಎಂದರು. ಆಯುಷ್ ಇಲಾಖೆ ತಾಲೂಕು ನೋಡಲ್ ಅಧಿಕಾರಿ ಡಾ.ಅಶೋಕ್ ಕುಮಾರ್ ಮಾತನಾಡಿದರು.

ಇನ್ನು ಶ್ರೀಪತಂಜಲಿ ಯೋಗ ಶಿಕ್ಷಣ ಸಮಿತಿ ದಿನವಿಡೀ ಯೋಗ ಅರಿವು ಅಭಿಯಾನ ನಡೆಯಿತು. ನ್ಯಾಯಾಲಯ ಸಂಕೀರ್ಣ, ವಿಸ್ಡಂ ಶಾಲೆ, ಕಾರ್ಮೆಲ್ ಶಾಲೆ, ಲಯನ್ಸ್ ಶಾಲೆ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ, ಐಟಿಸಿ ಕಾರ್ಖಾನೆ, ಎಫ್‌ಸಿಐ ಸೇರಿದಂತೆ ಹಲವೆಡೆ ಸಮಿತಿ ಯೋಗ ಶಿಕ್ಷಕರ ನೇತೃತ್ವದಲ್ಲಿ ಯೋಗಾಭ್ಯಾಸದೊಂದಿಗೆ ಅರಿವು ಮೂಡಿಸಲಾಯಿತು.

ಶ್ರೀಪತಂಜಲಿ ಯೋಗ ಶಿಕ್ಷಣ ಸಮಿತಿ ಅಧ್ಯಕ್ಷ ಆರ್.ವಿ.ರೇವಣ್ಣ, ಕಾರ್ಯದರ್ಶಿ ಎನ್.ಆರ್.ಗಣೇಶ್‌ಮೂರ್ತಿ, ನಂಜನಗೂಡು ಯೋಗ ಫೌಂಡೇಶನ್ ಅಧ್ಯಕ್ಷ ಡಿಗ್ಗನೇಹಳ್ಳಿ ಪ್ರಕಾಶ್ ಉಪಸ್ಥಿತರಿದ್ದರು.

ಸದ್ಯವೇ ಮೈಸೂರು ರಂಗಾಯಣಕ್ಕೆ ನಿರ್ದೇಶಕರ ನೇಮಕ

ಉಳಿದ ರಂಗ ಸ್ಥಳಗಳಿಗೂ ಸಾರಥಿ ನೇಮಕಕ್ಕೆ ಸಿದ್ಧತೆ

● ಮೋಹನ್ ಕಾಯಕ

ಮೈಸೂರು, ಜೂ.21– ಪ್ರತಿಷ್ಠಿತ ಮೈಸೂರು ರಂಗಾಯಣ ಸೇರಿದಂತೆ ರಾಜ್ಯದ ಆರು ರಂಗಾಯಣಕ್ಕೂ ಸದ್ಯದಲ್ಲೇ ನಿರ್ದೇಶಕರು ನೇಮಕಗೊಳ್ಳುವ ಸಾಧ್ಯತೆ ಇದೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ವರ್ಷ ಕಳೆದರೂ ರಂಗಾಯಣಗಳಿಗೆ ನಿರ್ದೇಶಕರನ್ನು ನಿಯೋಜಿಸುವ ಕಾರ್ಯವಾಗಿಲ್ಲ ಇದುದರಿಂದಾಗಿ ಮೈಸೂರು ರಂಗಾಯಣ ಹೊರತು ಪಡಿಸಿ, ಉಳಿದ ರಂಗಾಯಣಗಳ ಕಾರ್ಯಚಟುವಟಿಕೆಗಳು ಬಹುತೇಕ ಕುಂಠಿತವಾಗಿವೆ. ಕಡೆಗೂ ರಂಗಾಯಣಗಳನ್ನು ಮುನ್ನಡೆಸುವ ಸೂತ್ರದಾರರನ್ನು ನಿಯೋಜಿಸುವ ಪ್ರಕ್ರಿಯೆ ಆರಂಭವಾಗಿದ್ದು, ತಿಂಗಳಲ್ಲಿ ನಿರ್ದೇಶಕರ ನೇಮಕ ಮಾಡುವುದು ಬಹುತೇಕ ಖಚಿತ ಎನ್ನಲಾಗಿದೆ.

ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಜಾರಿಯಾಗುವ ಒಂದೆರಡು ದಿನದ ಹಿಂದೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಅಧ್ಯಕ್ಷತೆಯಲ್ಲಿ ಅಧಿಕಾರಿಗಳು ಸೇರಿದಂತೆ 15 ಸದಸ್ಯರ ರಂಗ ಸಮಾಜ ರೂಪುಗೊಂಡಿದೆ. ಬಳಿಕ ಚುನಾವಣೆ ನೀತಿ ಸಂಹಿತೆಯಿಂದಾಗಿ ಯಾವುದೇ ಕಾರ್ಯಚಟುವಟಿಕೆಗಳು ನಡೆದಿರಲಿಲ್ಲ. ಪ್ರಸ್ತುತ ಸಚಿವ ಅಧ್ಯಕ್ಷತೆಯಲ್ಲಿ ಇಲಾಖೆಯ ಎಲ್ಲಾ ಉನ್ನತ ಮಟ್ಟದ ಅಧಿಕಾರಿಗಳು, ಪ್ರಾಧಿಕಾರದ ಅಧ್ಯಕ್ಷರುಗಳ ಸಭೆ ನಡೆಸಲಾಗಿದ್ದು, ರಂಗ ಸಮಾಜದ ಮೊದಲ ಸಭೆಯನ್ನು ಜೂ.28 ರಂದು ನಡೆಸಲು ನಿರ್ಧರಿಸಲಾಗಿದೆ.

ಮೊದಲ ಸಭೆಯ ನಂತರದ 15–20 ದಿನಗಳಲ್ಲಿ ಮೈಸೂರು ರಂಗಾಯಣ ಸೇರಿದಂತೆ ರಾಜ್ಯದ ಶಿವಮೊಗ್ಗ, ದಾವಣಗೆರೆ, ಕಲಬುರಗಿ, ಕಾರ್ಕಳ, ಧಾರವಾಡ ರಂಗಾಯಣಗಳಿಗೂ ನಿರ್ದೇಶಕರನ್ನು ನೇಮಕ ಮಾಡಲಾಗುತ್ತದೆ. ರಾಜ್ಯದ ಆರು ರಂಗಾಯಣದ ನಿರ್ದೇಶಕ ಸ್ಥಾನಕ್ಕೆ 40–50 ಮಂದಿ ಆಕಾಂಕ್ಷಿಗಳಿದ್ದಾರೆ.

ಕಾರ್ಯಚಟುವಟಿಕೆಗಳು ಸ್ಥಗಿತ: ನಿರ್ದೇಶಕರಿಲ್ಲದೆ ಯಾವುದೇ ಗಟ್ಟಿ ನಿರ್ಧಾರಗಳನ್ನು ಕೈಗೊಳ್ಳದ ರಂಗಾಯಣಗಳಲ್ಲಿ ರಂಗಭೂಮಿ ಕಾರ್ಯಚಟುವಟಿಕೆಗಳು ಸ್ಥಗಿತವಾಗಿವೆ. ಮೈಸೂರು ರಂಗಾಯಣದಲ್ಲಿ ನಿರ್ದೇಶಕರ ಅನುಪಸ್ಥಿತಿಯಲ್ಲೂ ಬಹುರೂಪಿ ರಾಷ್ಟ್ರೀಯ ನಾಟಕೋತ್ಸವ, ಮಕ್ಕಳ ಶಿಬಿರ ಸೇರಿದಂತೆ ಕೆಲವು ಹೊಸ ನಾಟಕ ಪ್ರಯೋಗಗಳು ನಡೆದವು. ಆದರೆ ಉಳಿದ ರಂಗಾಯಣಗಳ ಕಾರ್ಯಚಟುವಟಿಕೆಗಳು ಬಹುತೇಕ ಸ್ಥಗಿತವಾಗಿವೆ.

ಕಾರ್ಯಚಟುವಟಿಕೆಗಳಿಲ್ಲದೆ ಕುಂಠಿತವಾಗಿರುವ ರಂಗಾಯಣಗಳಿಗೆ ಸದ್ಯದಲ್ಲಿಯೇ ನಿರ್ದೇಶಕರ ನೇಮಕ ತುರ್ತಾಗಿ ಆಗಬೇಕಿದೆ. ಲೋಕಸಭಾ ಚುನಾವಣೆ ನೀತಿ ಸಂಹಿತೆಯಿಂದಾಗಿ ಇನ್ನೂ ತಡವಾಯಿತು. ಅಧಿಕಾರಿಗಳು 15 ಮಂದಿ ಸದಸ್ಯರಿರುವ ರಂಗ ಸಮಾಜ ರೂಪುಗೊಂಡಿದ್ದು, ಸದ್ಯದಲ್ಲಿಯೇ ನಿರ್ದೇಶಕರುಗಳ ನೇಮಕವಾಗಲಿದೆ ಎಂದು ರಂಗ ಸಮಾಜದ ಸದಸ್ಯರೂ ಆದ ಹಿರಿಯ ರಂಗಕರ್ಮಿ ರಾಜಪ್ಪ ದಳವಾಯಿ 'ಮೈಸೂರು ಮಿತ್ರ'ನಿಗೆ ಮಾಹಿತಿ ನೀಡಿದರು.

ಮೂವರ ಹೆಸರು: ರಾಜ್ಯದ ಪ್ರತೀ ರಂಗಾಯಣದ ನಿರ್ದೇಶಕರ ಸ್ಥಾನಕ್ಕೆ ಮೂವರ ಹೆಸರನ್ನು ರಂಗ ಸಮಾಜ ಶಿಫಾರಸ್ಸು ಮಾಡಲಿದೆ. ಅಂತಿಮ ಆಯ್ಕೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಮುಖ್ಯಮಂತ್ರಿಗಳು ನಿರ್ಧರಿಸಲಿದ್ದಾರೆ. ಆಕಾಂಕ್ಷಿಗಳ ಸಂಖ್ಯೆ ದೊಡ್ಡಮಟ್ಟದಲ್ಲಿದೆ.



ಹಚ್ಚ ಹಸಿರಿನಿಂದ ಕೂಡಿರುವ ಮೈಸೂರು ರಂಗಾಯಣ



ಮೈಸೂರು ರಂಗಾಯಣ ಸೇರಿದಂತೆ ರಾಜ್ಯದ ಆರು ರಂಗಾಯಣಗಳಿಗೂ ಶೀಘ್ರದಲ್ಲಿಯೇ ನಿರ್ದೇಶಕರ ನೇಮಕವಾಗಲಿದೆ. ಜೂ.28 ರಂದು ರಂಗ ಸಮಾಜದ ಸಭೆ ನಡೆಯಲಿದ್ದು, ಮೊದಲ ಸಭೆ ಬಳಿಕ ನಡೆಯುವ ಒಂದೆರಡು ಸಭೆಯಲ್ಲಿ ನಿರ್ದೇಶಕ ಆಕಾಂಕ್ಷಿಗಳ ಪಟ್ಟಿಯನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು. ಆದಾದ ಕೆಲ ದಿನಗಳಲ್ಲಿ ನಿರ್ದೇಶಕರ ನೇಮಕವಾಗಲಿದೆ. ರಾಜ್ಯದ 6 ರಂಗಾಯಣಕ್ಕೆ 40–50 ಮಂದಿ ಆಕಾಂಕ್ಷಿಗಳಿದ್ದು, ಸೂಕ್ತರನ್ನು ರಂಗ ಸಮಾಜ ಶಿಫಾರಸ್ಸು ಮಾಡಲಿದೆ.
- ಸುರೇಶ್ ಬಾಬು, ರಂಗ ಸಮಾಜದ ಸದಸ್ಯ

ಈಗಾಗಲೇ ನಿರ್ದೇಶಕರಾದವರಿಗೆ ಅವಕಾಶ ನೀಡಬಾರದು ಎಂದು ಬೈಲಾದಲ್ಲಿ ಇಲ್ಲ. ಆದರೆ ಹೊಸಬರಿಗೆ ಬಹುತೇಕ ಆದ್ಯತೆ ನೀಡಲಾಗುತ್ತದೆ ಎಂದು ರಂಗ ಸಮಾಜದ ಸದಸ್ಯರೂ ಆದ ಮೈಸೂರಿನ ಹವ್ಯಾಸಿ ರಂಗಕರ್ಮಿ ಸುರೇಶ್ ಬಾಬು ತಿಳಿಸಿದರು.

ಮೈಸೂರು ರಂಗಾಯಣ ಮಾದರಿ: ನಿರ್ದೇಶಕರ ಅನುಪಸ್ಥಿತಿಯಲ್ಲೂ ಮೈಸೂರು ರಂಗಾಯಣದ ಕಾರ್ಯ ಚಟುವಟಿಕೆಗಳು ಮುಂದುವರೆದಿವೆ. ಆದರೆ ಇತರ ರಂಗಾಯಣಗಳಲ್ಲಿ ಏನೂ ನಡೆಯುತ್ತಿಲ್ಲ. ಪ್ರಮುಖ ನಿರ್ಣಯಗಳನ್ನು ತೆಗೆದುಕೊಳ್ಳುವ ಸಭೆಗಳನ್ನು ನಡೆಸಿಲ್ಲ. ಅದ್ದರಿಂದ ಅದಷ್ಟು ಶೀಘ್ರವಾಗಿ ಮೈಸೂರು ರಂಗಾಯಣ ಸೇರಿದಂತೆ ರಾಜ್ಯದ ಎಲ್ಲಾ ರಂಗಾಯಣಗಳಿಗೂ ಒಳ್ಳೆಯ ಹಾಗೂ ಯುವ ನಿರ್ದೇಶಕರನ್ನು ಕೊಡುವ ನಿಟ್ಟಿನಲ್ಲಿ ರಂಗ ಸಮಾಜ ಕಾರ್ಯೋನ್ಮುಖವಾಗಿದೆ ಈ ನಿಟ್ಟಿನಲ್ಲಿ ಆಕ್ಷಾಂಕ್ಷಿಗಳಲ್ಲಿ ಸೂಕ್ತರ ಹುಡುಕಾಟ ನಡೆಯುತ್ತಿದೆ ಎಂದರು.

ಹಿರಿಯ ಕಲಾವಿದರ ಕೊರತೆ: ಮೈಸೂರು ರಂಗಾಯಣದಲ್ಲಿ ಮೂವರು ಮಹಿಳಾ ಕಲಾವಿದರನ್ನು ಬಿಟ್ಟರೆ ಬಹುತೇಕ ಹಿರಿಯ ಕಲಾವಿದರು ನಿವೃತ್ತಿಯಾಗಿದ್ದಾರೆ. ಗುತ್ತಿಗೆ ಆಧಾರದಲ್ಲಿಯಾದರೂ ಕಲಾವಿದರ ನೇಮಕವಾಗಬೇಕು. ಅಲ್ಲದೆ ರಂಗಾಯಣಗಳು ಉತ್ಸವ ನಡೆಸುವ ಇಲಾಖೆಯಂತಾಗದೆ ಬಹುದೊಡ್ಡ ರೆಪರ್ಟರಿಯಾಗಬೇಕು. ಈ ನಿಟ್ಟಿನಲ್ಲಿ ರಂಗಸಮಾಜದ ಸದಸ್ಯರು ಒಗ್ಗೂಡಿ ಒಮ್ಮತದ ನಿಲುವು ತೆಗೆದುಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ದೇಶ–ವಿದೇಶಗಳಲ್ಲಿ ನಾಟಕ ಪ್ರಯೋಗ: ಮೈಸೂರು ರಂಗಾಯಣದಲ್ಲಿ ಕಳೆದ ಆರೇಳು ವರ್ಷದಿಂದ ದೇಶ–ವಿದೇಶಗಳಲ್ಲಿ ಪ್ರಯೋಗವಾಗುವಂತಹ ನಾಟಕಗಳು ರಚನೆಯಾಗಿಲ್ಲ ಕುಸುಮ ಬಾಲೆ, ಮಲೆಗಳಲ್ಲಿ ಮಧು ಮಗಳು, ಗಾಂಧಿ–ಅಂಬೇಡ್ಕರ್ ಮುಂತಾದ ನಾಟಕಗಳು ವಿದೇಶಗಳಲ್ಲಿಯೂ ಪ್ರದರ್ಶನ ಕಂಡಿದ್ದವು. ಆದರೆ ಇವತ್ತು ನಾಟಕ ಪ್ರಯೋಗಗಳು ಆಯಾ ರಂಗಾಯಣ ವ್ಯಾಪ್ತಿಗಷ್ಟೇ ಸೀಮಿತವಾಗಿವೆ ಎಂದು ಬೇಸರ ವ್ಯಕ್ತಪಡಿಸಿದರು.

ಬೆಂಗಳೂರಿಗೆ ಮತ್ತೊಂದು ವಿಮಾನ ನಿಲ್ದಾಣ

ವರದಿ ನೀಡುವಂತೆ ಅಧಿಕಾರಿಗಳಿಗೆ ಸಚಿವ ಎಂ.ಬಿ.ಪಾಟೀಲ್ ಸೂಚನೆ

ಬೆಂಗಳೂರು, ಜೂ.21– ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿರುವ ಹಾಗೂ ವೇಗವಾಗಿ ಬೆಳೆಯುತ್ತಿರುವ ಬೆಂಗಳೂರಿಗೆ ಮತ್ತೊಂದು ವಿಮಾನ ನಿಲ್ದಾಣ ನಿರ್ಮಾಣದ ಅವಶ್ಯಕತೆಯಿದ್ದು, ಅದಕ್ಕೆ ಸಂಬಂಧಿಸಿದಂತೆ ಸಾಧ್ಯಾ ಸಾಧ್ಯತೆ ವರದಿ ನೀಡುವಂತೆ ಬಾರೀ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಗುರುವಾರ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಎಂ.ಬಿ. ಪಾಟೀಲ್, ದೆಹಲಿ ಮತ್ತು ಮುಂಬೈ ನಂತರ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವು ಮೂರನೇ ಅತೀ ದಟ್ಟಣೆಯ ವಿಮಾನ ನಿಲ್ದಾಣವಾಗಿದೆ. 2023–24ನೇ ಸಾಲಿನಲ್ಲಿ 3.75 ಕೋಟಿ ಪ್ರಯಾಣಿಕರು ಕೆಐಎ ಮೂಲಕ ಪ್ರಯಾಣಿಸಿದ್ದಾರೆ. ಅಲ್ಲದೆ, 4 ಲಕ್ಷ ಟನ್‌ಗೂ ಹೆಚ್ಚಿನ ಸರಕು ಸಾಗಣೆ ಮಾಡ ಲಾಗಿದೆ. ಈ ಒತ್ತಡ ವರ್ಷ ದಿಂದ ವರ್ಷಕ್ಕೆ ಹೆಚ್ಚಲಿದ್ದು, ಅದನ್ನು ಗಮನದಲ್ಲಿಟ್ಟುಗೊಂಡೇ ಬೆಂಗಳೂರಿನ ಎರಡನೇ ವಿಮಾನ ನಿಲ್ದಾಣದ ಅಗತ್ಯವಿದೆ ಎಂದರು.

ಕೆಐಎ ನಿರ್ಮಿಸುವಾಗ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸಂಸ್ಥೆಯು ಮುಂದಿನ 25 ವರ್ಷಗಳವರೆಗೆ (2033ರವರೆಗೆ) 150 ಕಿಮೀ ವ್ಯಾಪ್ತಿಯಲ್ಲಿ ಹೊಸ ವಿಮಾನ ನಿಲ್ದಾಣ ಅಭಿವೃದ್ಧಿಪಡಿಸುವುದಿಲ್ಲ ಎಂದು ಸರ್ಕಾರದೊಂದಿಗೆ ಒಪ್ಪಂದ ಮಾಡಿಕೊಂಡಿದೆ. ಈ ಷರತ್ತು ಮುಗಿಯಲು ಇನ್ನೂ ಒಂಬತ್ತು ವರ್ಷಗಳಿದ್ದು, ಈಗಿನಿಂದಲೇ ಎರಡನೇ ವಿಮಾನನಿಲ್ದಾಣ ನಿರ್ಮಾಣಕ್ಕೆ ಯೋಜನೆ ರೂಪಿಸಬೇಕಿದೆ ಎಂದು ಹೇಳಿದರು.

ಬೆಂಗಳೂರಿನ ಜನಸಂಖ್ಯೆ ಈಗಾಗಲೇ ಒಂದು ಕೋಟಿ ದಾಟಿದ್ದು, ಹಲವು ಜಾಗತಿಕ ಮಟ್ಟದ ಸಂಸ್ಥೆಗಳು ಇಲ್ಲಿ ಕಾರ್ಯ ನಿರ್ವಹಿಸುತ್ತಿವೆ. ರಾಜ್ಯವಷ್ಟೇ ಅಲ್ಲದೆ ಆಂಧ್ರಪ್ರದೇಶದ ಕೆಲ ಜಿಲ್ಲೆಗಳ ಜನರೂ ಕೆಐಎ ಮೇಲೆ ಅವಲಂಬಿತರಾಗಿದ್ದಾರೆ. 2033ರ ವೇಳೆಗೆ ಕೆಐಎ ಪ್ರಯಾಣಿಕರ ನಿರ್ವಹಣೆಯ ಒತ್ತಡ ಸಾಕಷ್ಟು ಹೆಚ್ಚಲಿದೆ. 2040ರ ವೇಳೆಗೆ ಸರಕು ಸಾಗಣೆ ಪ್ರಮಾಣದ ನಿರ್ವಹಣೆ ಕಷ್ಟವಾಗಲಿದೆ. ಭೂ ಸ್ವಾಧೀನ, ಪರಿಹಾರ ಹಂಚಿಕೆ ಸೇರಿದಂತೆ ಇನ್ನಿತರ ಕಾರ್ಯಗಳಿಗೆ ದೀರ್ಘ ಸಮಯ ಬೇಕಾಗಲಿದೆ. ಆದ್ದರಿಂದ ಈಗಿನಿಂದಲೇ ಕಾರ್ಯ ಪ್ರವೃತ್ತರಾಗಬೇಕು. ಎರಡನೇ ವಿಮಾನ ನಿಲ್ದಾಣ ನಿರ್ಮಾಣದೊಂದಿಗೆ ಬೆಂಗಳೂರಿನ ಆಚೆಗೂ ಕೈಗಾರಿಕಾ ಬೆಳವಣಿಗೆ ಮಾಡಬಹುದಾಗಿದೆ ಎಂದು ತಿಳಿಸಿದರು.

ಮೂಲ ಸೌಕರ್ಯ ಅಭಿವೃದ್ಧಿ ಇಲಾಖೆ ಕಾರ್ಯದರ್ಶಿ ಡಾ. ಎನ್. ಮಂಜುಳಾ, ಕರ್ನಾಟಕ ಕೈಗಾರಿಕಾ ಮೂಲಸೌಕರ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಡಾ. ಬಿ.ಸಿ.ಸತೀಶ, ಕಾರ್ಯನಿರ್ವಾಹಕ ನಿರ್ದೇಶಕ ಡಿ.ಪಿ.ಪ್ರಕಾಶ ಸಭೆಯಲ್ಲಿದ್ದರು.

ನಾಗಮಂಗಲವೇ ಸೂಕ್ತ ಸ್ಥಳ...

ಮೈಸೂರು, ಜೂ.21(ಎಂಕೆ)– ಬೆಂಗಳೂರಿನ ನಾಡಪ್ರಭು ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಂತೆಯೇ ಮತ್ತೊಂದು ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಮಂಡ್ಯದ ನಾಗಮಂಗಲ ಸೂಕ್ತ ಸ್ಥಳವಾಗಿದೆ ಎಂದು ಶೈಕ್ಷಣಿಕ ಸಲಹೆಗಾರ ಗಿರೀಶ್ ಬಾಗಾ ಅಭಿಪ್ರಾಯಿಸಿದ್ದಾರೆ.

ಶ್ರೀರಂಗಪಟ್ಟದ ಸಮೀಪ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣದ ಬಗ್ಗೆ ಈ ಹಿಂದೆ ಸುದ್ದಿಯಾಗಿದೆ. ಆದರೆ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಂತೆಯೇ ಮತ್ತೊಂದು ವಿಮಾನ ನಿಲ್ದಾಣ ನಿರ್ಮಾಣಕ್ಕೆ ಶ್ರೀರಂಗಪಟ್ಟಣದ ಹಸಿರು ಕೃಷಿ ವಲಯಕ್ಕಿಂತ ಮಂಡ್ಯದ ನಾಗಮಂಗಲದ ಒಣ ಭೂಮಿಯಲ್ಲಿ ಸ್ಥಾಪಿಸುವುದು ಅನುಕೂಲಕಾರಿ.

ಮಂಡ್ಯ ಜಿಲ್ಲೆಯ ನಾಗಮಂಗಲ ಅನೇಕ ಸ್ಥಳಗಳಿಗೆ ಸುಲಭ ಸಂಪರ್ಕ ಕಲ್ಪಿಸುವ ಸ್ಥಳವಾಗಿರುವುದರಿಂದ ಸೂಕ್ತ ಆಯ್ಕೆಯಾಗಿದೆ. ಇದು ಕೃಷಿ ವಲಯವಲ್ಲ. ಶ್ರೀರಂಗಪಟ್ಟಣಕ್ಕೆ ಹೋಲಿಸಿದರೆ ಇಲ್ಲಿಯದ್ದು ಬಹುತೇಕ ಒಣಭೂಮಿ. ನಾಗಮಂಗಲದಿಂದ ವಿವಿಧ ಜಿಲ್ಲಾ ಕೇಂದ್ರಗಳ ನಡುವಿನ ಅಂತರವೂ ಕಡಿಮೆ ಇದೆ. ಮೈಸೂರಿಗೆ ಕೇವಲ 68 ಕಿ.ಮೀ, ಮಂಡ್ಯಕ್ಕೆ 43, ಬೆಂಗಳೂರು 127, ರಾಮನಗರ 75, ಚಾಮರಾಜನಗರ 125, ಮಡಿಕೇರಿ 153, ಹಾಸನ 92, ಚಿಕ್ಕಮಗಳೂರು 153, ತುಮಕೂರು 86, ಶಿವಮೊಗ್ಗ 207, ದಾವಣಗೆರೆ 254, ತಿಪಟೂರು 73, ಶ್ರೀರಂಗಪಟ್ಟಣ 52 ಕಿ.ಮೀ ಅಂತರವಿದೆ.

ಮಾಗಡಿಯಿಂದ ಸೋಮವಾರಪೇಟೆಗೆ ಹೊಸ ರಸ್ತೆ ಕಾರ್ಯಾರಂಭವಾದ ನಂತರ ತಡೆರಹಿತ ಸಂಪರ್ಕ ಸಾಧ್ಯವಾಗಲಿದೆ. ದಕ್ಷಿಣ ಕರ್ನಾಟಕ, ಮಧ್ಯ ಕರ್ನಾಟಕದ ಕೆಲವು ಭಾಗಗಳನ್ನು ಸಂಪರ್ಕಿಸುವುದರ ಜೊತೆಗೆ ಪರಿಸರದ ಮೇಲೆ ಪರಿಣಾಮ ಬೀರದೆ ಅಭಿವೃದ್ಧಿಗೆ ಪೂರಕವಾಗಿರಲಿದೆ. ಕೈಗಾರಿಕಾ, ಧಾರ್ಮಿಕ ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೂ ಸಹಕಾರಿಯಾಗಿದೆ. ವಿಶ್ವದರ್ಜೆಯ ಶಿಕ್ಷಣ ಸಂಸ್ಥೆಗಳನ್ನು ಒಳಗೊಂಡು ದೊಡ್ಡ ಆರ್ಥಿಕ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವ ಮೂಲಕ ಸುಮಾರು 2 ಕೋಟಿ ಜನರಿಗೆ ಅನುಕೂಲಕರವಾಗಲಿದೆ. ಆದ್ದರಿಂದ ಮಂಡ್ಯದ ನಾಗಮಂಗಲದಲ್ಲಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸುವ ಅಭಿಯಾನ ನಡೆಯಬೇಕು ಎಂದು ಭಾಗಾ ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯದಲ್ಲಿ 64 ಯೋಜನೆಗಳಿಗೆ 3587 ಕೋಟಿ ಬಂಡವಾಳ ಹೂಡಿಕೆ

ಏಕಗವಾಕ್ಷಿ ಅನುಮೋದನೆ ಸಮಿತಿ ಒಪ್ಪಿಗೆ



ಬೆಂಗಳೂರು, ಜೂ.21– ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಅಧ್ಯಕ್ಷತೆಯಲ್ಲಿ ಶುಕ್ರವಾರ ನಡೆದ 146ನೇ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಯಲ್ಲಿ 3,587 ಕೋಟಿ ಮೊತ್ತದ ಬಂಡವಾಳ ಹೂಡಿಕೆಗೆ ಒಪ್ಪಿಗೆ ದೊರೆಯಿತು.

ಇಂಟರ್‌ನ್ಯಾಷನಲ್ ಬ್ಯಾಟರಿ ಕಂಪನಿ ಇಂಡಿಯಾ, ರಿವರ್ ಮೊಬಿಲಿಟಿ, ವೇಗಾ ಆಟೊ ಆಕ್ಸೆಸರೀಸ್, ಮಿರ್ರಾ ಆಂಡ್ ಮಿರ್ರಾ ಇಂಡಸ್ಟ್ರೀಸ್ ಸೇರಿದಂತೆ ಒಟ್ಟಾರೆ 64 ಯೋಜನೆಗಳ ಒಪ್ಪಿಗೆ ನೀಡಲಾಯಿತು. ಅನುಮೋದನೆ ಪಡೆದ ಯೋಜನೆಗಳಲ್ಲಿ ವಿದ್ಯುತ್ ಚಾಲಿತ ದ್ವಿಚಕ್ರ ವಾಹನ ತಯಾರಿಕಾ ಘಟಕ, ಸಂಶೋಧನೆ ಹಾಗೂ ಅಭಿವೃದ್ಧಿ ಕೇಂದ್ರ, ವಿದ್ಯುತ್ ಉತ್ಪಾದನಾ ಕೇಂದ್ರ ಹಾಗೂ ಹಾಲು ಉತ್ಪಾದನಾ ಘಟಕಗಳು ಸೇರಿವೆ.

ಸಭೆಯಲ್ಲಿ ಕೈಗೊಂಡ ನಿರ್ಧಾರಗಳಿಂದ ಮೈಸೂರು, ಬೆಂಗಳೂರು ನಗರ ಹಾಗೂ ಗ್ರಾಮಾಂತರ, ಬೆಳಗಾವಿ, ತುಮಕೂರು, ಯಾದಗಿರಿ, ಹಾವೇರಿ, ಗದಗ ಜಿಲ್ಲೆಗಳಲ್ಲಿ ಕೈಗಾರಿಕೆಗಳ ಬೆಳವಣಿಗೆಗೆ ಇನ್ನಷ್ಟು ಉತ್ತೇಜನ ದೊರೆಯುವುದರ ಜೊತೆಗೆ ರಾಜ್ಯದಲ್ಲಿ 13,896 ಮಂದಿಗೆ ಉದ್ಯೋಗಾವಕಾಶ ಸೃಷ್ಟಿಯಾಗಲಿದೆ.


ಇಂಟರ್‌ನ್ಯಾಷನಲ್ ಬ್ಯಾಟರಿ ಕಂಪನಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ದೇವನಹಳ್ಳಿ ಬಳಿ 390 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಿರುವ ಪ್ರೈಮರಿ ಸೆಲ್ಸ್ ಅಂಡ್ ಬ್ಯಾಟರೀಸ್ ಘಟಕದಿಂದ 300 ಜನರಿಗೆ ಉದ್ಯೋಗ ದೊರಕಲಿದೆ. ಬೆಂಗಳೂರು ಮೂಲದ ರಿವರ್ ಮೊಬಿಲಿಟಿ ಪ್ರೈವೇಟ್ ಲಿಮಿಟೆಡ್‌ನ ನವೋದ್ಯಮ ವಿದ್ಯುತ್ ಚಾಲಿತ ದ್ವಿಚಕ್ರ ವಾಹನ ತಯಾರಿಕಾ ಘಟಕ ಹೊಸಕೋಟೆ ಬಳಿ 306.9 ಕೋಟಿ ವೆಚ್ಚದಲ್ಲಿ ಸ್ಥಾಪನೆಯಾಗಲಿದ್ದು, ಇದರಿಂದ 690 ಜನರಿಗೆ ಉದ್ಯೋಗ ಸಿಗಲಿದೆ. ವೇಗಾ ಆಟೊ ಆಕ್ಸೆಸರೀಸ್ ಪ್ರೈವೇಟ್ ಲಿಮಿಟೆಡ್ ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲೂಕಿನಲ್ಲಿ ಇಪಿಎಸ್ ಲೀನರ್ ತಯಾರಿಕಾ ಘಟಕ ಸ್ಥಾಪಿಸಲು 205 ಕೋಟಿ ವೆಚ್ಚ ಮಾಡಲಿದೆ. ಮಿರ್ರಾ ಅಂಡ್ ಮಿರ್ರಾ ಇಂಡಸ್ಟ್ರೀಸ್ ತುಮಕೂರು ಜಿಲ್ಲೆಯ ವಸಂತನರಸಾಪುರದಲ್ಲಿ ಉಕ್ಕಿನ ತಂತಿ ಸಂಸ್ಕರಣಾ ಘಟಕ ಸ್ಥಾಪಿಸಲು 200 ಕೋಟಿ ವೆಚ್ಚ ಹೂಡಿಕೆ ಮಾಡಲಿದೆ ಎಂದು ಸಚಿವ ಎಂ.ಬಿ. ಪಾಟೀಲ ಸಭೆ ನಂತರ ಮಾಹಿತಿ ನೀಡಿದರು.

ಕಾಲೇಜು ಕಟ್ಟಡದಿಂದ ಹಾರಿ ವಿದ್ಯಾರ್ಥಿನಿ ಆತ್ಮಹತ್ಯೆ

ಮೈಸೂರು, ಜೂ.21(ಎಸ್‌ಪಿಎನ್)– ಪರೀಕ್ಷೆಯಲ್ಲಿ ಕಾಪಿ ಹೊಡೆದಿದ್ದಿಯಾ ಎಂದು ಪೋಷಕರನ್ನು ಕಾಲೇಜಿಗೆ ಕರೆಸಿದ್ದಕ್ಕೆ ಮನನೊಂದ ವಿದ್ಯಾರ್ಥಿನಿ ಕಾಲೇಜಿನ ನಾಲ್ಕನೇ ಮಹಡಿಯಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮೈಸೂರಿನ ಬನ್ನಿಮಂಟಪದ ಕಾಲೇಜುವೊಂದರಲ್ಲಿ ಗುರುವಾರ ನಡೆದಿದೆ.

ಈ ಕಾಲೇಜಿನಲ್ಲಿ ಲ್ಯಾಬ್ ಟೆಕ್ನಿಷಿಯನ್ ಕೋರ್ಸ್(ಪ್ರಥಮ ವರ್ಷ) ವ್ಯಾಸಂಗ ಮಾಡುತ್ತಿದ್ದ ಲಷ್ಕರ್ ಮೊಹಲ್ಲಾದ ವಿದ್ಯಾರ್ಥಿನಿ ಆತ್ಮಹತ್ಯೆಗೆ ಶರಣಾದವಳಾಗಿದ್ದು, ಇತ್ತೀಚೆಗೆ ನಡೆದ ಪರೀಕ್ಷೆಯಲ್ಲಿ ಈಕೆ ಕಾಪಿ ಹೊಡೆದಿದ್ದಳು ಎಂದು ಹೇಳಲಾಗಿದೆ. ಈ ಹಿನ್ನೆಲೆಯಲ್ಲಿ ಕಾಲೇಜಿನ ಮುಖ್ಯಸ್ಥರು ಆಕೆಯ ತಾಯಿಯನ್ನು ಕಾಲೇಜಿಗೆ ಕರೆಸಿದ್ದಾರೆ. ಮುಖ್ಯಸ್ಥರು ಈಕೆಯ ತಾಯಿಯೊಂದಿಗೆ ಮಾತನಾಡುತ್ತಿದ್ದಾಗಲೇ ಅವರ ಕೊಠಡಿಯಿಂದ ಹೊರಹೋದ ವಿದ್ಯಾರ್ಥಿನಿ ಕಾಲೇಜಿನ ನಾಲ್ಕನೇ ಮಹಡಿಗೆ ಹೋಗಿ ಅಲ್ಲಿಂದ ಜಿಗಿದಿದ್ದಾಳೆ. ಪರಿಣಾಮ ತೀವ್ರವಾಗಿ ಗಾಯಗೊಂಡಿದ್ದಾಳೆ. ತಕ್ಷಣವೇ ಆಕೆಯನ್ನು ಆಸ್ಪತ್ರೆಗೆ ಸಾಗಿಸಿದರೂ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾಳೆ. ಈ ಸಂಬಂಧ ಮಂಡಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನೀಟ್ ಪೇಪರ್ ಸೋರಿಕೆ: 32 ಲಕ್ಷ ರೂ.ಗೆ ಪ್ರಶ್ನೆ ಪತ್ರಿಕೆ ಮಾರಾಟ



ನವದೆಹಲಿ: ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಬಂಧಿತರಾಗಿರುವ ಅಭ್ಯರ್ಥಿಗಳು ಸೋರಿಕೆಯಾದ ಪ್ರಶ್ನೆ ಪತ್ರಿಕೆಗಳನ್ನು ಸುಮಾರು 30 ರಿಂದ 32 ಲಕ್ಷ ರೂ. ನೀಡಿ ಖರೀದಿಸಿರುವುದಾಗಿ ತನಿಖಾ ತಂಡಕ್ಕೆ ತಿಳಿಸಿದ್ದಾರೆ.

ಬಂಧಿತ ಅಭ್ಯರ್ಥಿ ಅನುರಾಗ್ ಯಾದವ್ ಮತ್ತು ಅವರ ಚಿಕ್ಕಪ್ಪ ಸಿಕಂದರ್ ಯಾದವೆಂದು ಹಾಗೂ ಇತರ ಇಬ್ಬರು – ನಿತೀಶ್ ಕುಮಾರ್ ಮತ್ತು ಅಮಿತ್ ಆನಂದ್ ಅವರು ತಪ್ಪೊಪ್ಪಿಗೆ ಹೇಳಿಕೆ ನೀಡಿದ್ದು, ಅವರು ಪೇಪರ್ ಸೋರಿಕೆಯ ಹಿಂದಿನ ಮಾಸ್ಟರ್‌ಮೈಂಡ್‌ಗಳು ಎಂದು ನಂಬಲಾಗಿದೆ.

ತನಿಖಾ ತಂಡದ ಮೂಲಗಳ ಪ್ರಕಾರ, ಬಂಧಿತ ಆರೋಪಿಗಳಲ್ಲಿ ನಾಲ್ವರು ಪರೀಕ್ಷೆಗೆ ಒಂದು ದಿನ ಮೊದಲು ಕೆಲವು ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಗಳನ್ನು ಸೋರಿಕೆ ಮಾಡಿದ್ದಾರೆ. ಸೋರಿಕೆಯಾದ ಪ್ರಶ್ನೆ ಪತ್ರಿಕೆಗಳಿಗೆ ಸುಮಾರು 30 ರಿಂದ 32 ಲಕ್ಷ ರೂಪಾಯಿಗಳನ್ನು ಪಾವತಿಸಿದ್ದಾರೆ ಎಂದು ತಪ್ಪೊಪ್ಪಿಕೊಂಡಿದ್ದಾರೆ.

ಮೇ 5 ರಂದು ನಡೆದ ಪರೀಕ್ಷೆಯ ಮುನ್ನಾದಿನದಂದು ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಮತ್ತು ಉತ್ತರ ಪತ್ರಿಕೆಯನ್ನು ತನಗೆ ನೀಡಲಾಗಿತ್ತು ಮತ್ತು ಉತ್ತರಗಳನ್ನು ನೆನಪಿಟ್ಟುಕೊಳ್ಳುವಂತೆ ಮಾಡಲಾಯಿತು ಎಂದು ಅನುರಾಗ್ ಪೊಲೀಸರಿಗೆ ನೀಡಿದ ತಪ್ಪೊಪ್ಪಿಗೆ ಪತ್ರದಲ್ಲಿ ತಿಳಿಸಿದ್ದಾರೆ.

ಬಿಹಾರ, ಗುಜರಾತ್ ಮತ್ತು ಹರಿಯಾಣದಲ್ಲಿ ನಡೆದಿರುವ ಬಂಧನಗಳು ಯೋಜಿತ ರೀತಿಯಲ್ಲಿ ಪರೀಕ್ಷೆಯಲ್ಲಿ ಭ್ರಷ್ಟಾಚಾರ ನಡೆದಿರುವುದನ್ನು ಸ್ಪಷ್ಟವಾಗಿ ತೋರಿಸುತ್ತಿದೆ ಮತ್ತು ಈ ಬಿಜೆಪಿ ಆಡಳಿತದ ರಾಜ್ಯಗಳು ಪೇಪರ್ ಸೋರಿಕೆಯ ಕೇಂದ್ರಬಿಂದುವಾಗಿವೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆರೋಪಿಸಿದ್ದಾರೆ.

ಜೆಡಿಎಸ್ ಕಾರ್ಯಕರ್ತನ ಮೇಲೆ ಅಸಹಜ ಲೈಂಗಿಕ ದೌರ್ಜನ್ಯ: ಎಂಎಲ್‌ಸಿ ಸೂರಜ್ ರೇವಣ್ಣ ವಿರುದ್ಧ ಆರೋಪ

ಆರೋಪಿಸಿದವನ ಮೇಲೆ ದೂರು ದಾಖಲು

ಹಾಸನ, ಜೂ.21– ಮಾಜಿ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧದ ಲೈಂಗಿಕ ದೌರ್ಜನ್ಯದ ಆರೋಪದ ತನಿಖೆ ನಡೆಯುತ್ತಿರುವಾಗಲೇ, ಅವರ ಸಹೋದರ, ವಿಧಾನ ಪರಿಷತ್ ಸದಸ್ಯ ಡಾ. ಸೂರಜ್ ರೇವಣ್ಣ ವಿರುದ್ಧ ಅಸಹಜ ಲೈಂಗಿಕ ದೌರ್ಜನ್ಯ ಆರೋಪ ಕೇಳಿಬಂದಿದೆ.



ನನ್ನ ಮೇಲೆ ಸೂರಜ್ ರೇವಣ್ಣ ಅಸಹಜ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಅರಕಲಗೂಡು ಜೆಡಿಎಸ್ ಕಾರ್ಯಕರ್ತ ಎನ್ನಲಾದ ವ್ಯಕ್ತಿ, ಬೆಂಗಳೂರಿನಲ್ಲಿ ಪೊಲೀಸ್ ಮಹಾನಿರ್ದೇಶಕರು, ಗೃಹ ಸಚಿವರಿಗೆ ದೂರು ಸಲ್ಲಿಸಿದ್ದಾರೆ ಎಂದು ತಿಳಿದು ಬಂದಿದೆ. ಆದರೆ, ಈ ಬಗ್ಗೆ ಜಿಲ್ಲೆಯಲ್ಲಿ ಯಾವುದೇ ಪ್ರಕರಣ ದಾಖಲಾಗಿಲ್ಲ.

ಇದಕ್ಕೆ ಪ್ರತಿಯಾಗಿ, ಆರೋಪ ಮಾಡಿರುವ ವ್ಯಕ್ತಿಯ ವಿರುದ್ಧ ಹೊಳೆನರಸೀಪುರ ಟೌನ್ ಪೊಲೀಸ್ ಠಾಣೆಯಲ್ಲಿ ಶುಕ್ರವಾರ ಪ್ರಕರಣ ದಾಖಲಾಗಿದೆ. 5 ಕೋಟಿಗೆ ಬೇಡಿಕೆ ಇಟ್ಟಿದ್ದು, ಹಣ ನೀಡದಿದ್ದರೆ, ಲೈಂಗಿಕ ದೌರ್ಜನ್ಯದ ಆರೋಪ ಮಾಡುವುದಾಗಿ ಬೆದರಿಕೆ ಹಾಕಿದ್ದಾನೆ ಎಂದು ಸೂರಜ್ ಬ್ರಿಗೇಡ್‌ನ ಖಜಾಂಚಿ ಶಿವಕುಮಾರ್ ಎಂಬುವವರು ದೂರಿನಲ್ಲಿ ಆರೋಪಿಸಿದ್ದಾರೆ.

ಖಾಸಗಿ ಫೈನಾನ್ಸ್‌ನಲ್ಲಿ ಕೆಲಸ ಮಾಡುತ್ತಿದ್ದಾಗ, ಈ ವ್ಯಕ್ತಿ ಪರಿಚಿತನಾಗಿದ್ದ ನಾನು ಸೂರಜ್ ಬ್ರಿಗೇಡ್ ಖಜಾಂಚಿಯಾಗಿರುವುದರಿಂದ, ಸೂರಜ್ ಅವರನ್ನು ಭೇಟಿ ಮಾಡಿಸುವಂತೆ ಕೇಳಿದ್ದ. ಅದರಂತೆ ಜೂನ್ 16ರಂದು ಸೂರಜ್ ಅವರು ಚನ್ನರಾಯಪಟ್ಟಣ ತಾಲೂಕಿನ ಗನ್ನಿಗಡದ ತೋಟದ ಮನೆಯಲ್ಲಿ ಸಿಗುತ್ತಾರೆ ಎಂದು ತಿಳಿಸಿದ್ದೆ.

ಅಂದು ಸೂರಜ್ ಅವರನ್ನು ಭೇಟಿ ಮಾಡಿದ್ದು, ಕೆಲಸ ಕೊಡಿಸಿ ಎಂದು ಕೇಳಿದೆ. ಆದರೆ, ಸೂರಜ್ ಈಗ ಸಾಧ್ಯವಿಲ್ಲ ಮುಂದೆ ನೋಡೋಣ ಎಂದಿದ್ದಾರೆ ಎಂದು ಆ ವ್ಯಕ್ತಿ ನನಗೆ ತಿಳಿಸಿದ್ದ. ಈಗ ನೀನು ಹೇಳಿ ಕೆಲಸ ಕೊಡಿಸದಿದ್ದರೆ ಸೂರಜ್ ರೇವಣ್ಣ ನನ್ನ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪ ಮಾಡುವುದಾಗಿ ಬೆದರಿಕೆ ಹಾಕಿದ್ದ ಎಂದು ಶಿವಕುಮಾರ್ ಆರೋಪಿಸಿದ್ದಾರೆ.

ನಾನು ಹೊರಗಡೆ ಈ ವಿಚಾರ ಹೇಳಬಾರದು ಎಂದರೆ, 5 ಕೋಟಿ ಕೊಡಿಸು. ಇಲ್ಲದಿದ್ದರೆ, ಆಸ್ಪತ್ರೆಗೆ ದಾಖಲಾಗಿ ಸುಳ್ಳು (ಮೆಡಿಕೋ ಲೀಗಲ್) ವರದಿ ಮಾಡಿಸಿ, ಪ್ರಕರಣ ದಾಖಲಿಸುತ್ತೇನೆ ಎಂದು ಬೆದರಿಕೆ ಹಾಕಿದ್ದ ಎಂದು ದೂರಿದ್ದಾರೆ.

ಈ ಬಗ್ಗೆ ಸೂರಜ್ ಅವರನ್ನು ವಿಚಾರಿಸಿದ್ದು, ಅವರು ಆರೋಪ ನಿರಾಕರಿಸಿದ್ದರು. ಜೂನ್ 18 ರಂದು ಮತ್ತೆ ಹಾಸನದ ಹಿಮ್ಸ್ ಆಸ್ಪತ್ರೆ ಬಳಿ ಕರೆಸಿಕೊಂಡ ವ್ಯಕ್ತಿ, 5 ಕೋಟಿ ಕೊಡಲಾಗದಿದ್ದರೆ, ರೂ.3 ಕೋಟಿಯಾದರೂ ಕೊಡಿಸು. ಕೇಸ್ ಮಾಡಲು ದೊಡ್ಡಮಟ್ಟದಲ್ಲಿ 1 ಕೋಟಿ ಅಡ್ವಾನ್ಸ್ ಕೊಡಿಸಲು ಸಿದ್ಧರಿದ್ದಾರೆ. ಕೊನೆಯ ಪಕ್ಷ ರೂ. 2.5 ಕೋಟಿಯಾದರೂ ಕೊಡಿಸು ಎಂದು ಬೇಡಿಕೆ ಇಟ್ಟಿದ್ದ. ಆ ವ್ಯಕ್ತಿಯ ಭಾವ ಕೂಡ ಕರೆ ಮಾಡಿ, ರೂ.2 ಕೋಟಿಯಾದರೂ ಕೊಡಿಸು ಎಂದು ಬೇಡಿಕೆ ಇಟ್ಟಿದ್ದ ಎಂದು ತಿಳಿಸಿದ್ದಾರೆ.

ಜೂನ್ 19ರಂದು ಮತ್ತೆ ಕರೆ ಮಾಡಿದ ಆ ವ್ಯಕ್ತಿ, ಇದುವರೆಗೆ ದುಡ್ಡು ಕೊಡಿಸಿಲ್ಲ. ದುಡ್ಡು ಕೊಡದಿದ್ದರೆ, ಸೂರಜ್ ಹಾಗೂ ನಿನ್ನ ವಿರುದ್ಧ ದೂರು ಕೊಡುತ್ತೇನೆ. ಬೆಂಗಳೂರಿಗೆ ಹೋಗಿ ಪತ್ರಿಕಾಗೋಷ್ಠಿ ಮಾಡುತ್ತೇನೆ ಎಂದು ಹೆದರಿಸಿದ್ದ ಎಂದು ಶಿವಕುಮಾರ್ ದೂರಿನಲ್ಲಿ ತಿಳಿಸಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಚಿತ್ರಮಂದಿರ / ಚಿತ್ರ	
ಪದ್ಮ ಚಿತ್ರಮಂದಿರ	(ದೂ: 2521923)
ಬಹದ್ದೂರ್ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಅರನ್‌ಮನೈ–4 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಎ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಜಡ್ಜ್‌ಮೆಂಟ್ (ಕ)	4 ಪ್ರದರ್ಶನಗಳು
ರಾಜಕಮಲ್	
ಮಹಾರಾಜ (ತ)	4 ಪ್ರದರ್ಶನಗಳು
ಸಂಗಂ	
ಕೋಟಿ (ಕ)	4 ಪ್ರದರ್ಶನಗಳು
ಲಿಡೋ	
ಕರಟಕ ದಮನಕ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಬಹದ್ದೂರ್ (ಕ)	4 ಪ್ರದರ್ಶನಗಳು
ಪ್ರಭಾ	
ಬಹದ್ದೂರ್ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಇನ್‌ಸೈಟ್ ಔಟ್ 2(3ಡಿ) (ಇಂ): ಬೆ.11ಕ್ಕೆ, ಪೋಕಿರಿ (ತ): ಮ.1ಕ್ಕೆ, ಹಮಾರೆ ಬಾರಹ್ (ಹಿಂ): ಸಂ.4.10ಕ್ಕೆ, ರಾ.7.05ಕ್ಕೆ, ಕ್ರಿಯೇಷನ್ಸ್ ಆಫ್ ದಿ ಗಾಡ್ಸ್ 1 (ಚೈ): ರಾ.10ಕ್ಕೆ.
ಸ್ಕ್ರೀನ್ 2	ಲವ್ ಲಿ (ಕ): ಬೆ.10.25ಕ್ಕೆ, ರಾ.7.10ಕ್ಕೆ, ಮುಂಜ್ಯಾ (ಹಿಂ): ಮ.1.35ಕ್ಕೆ, ಶಿವಮ್ಮ ಚಂದು ಚಾಂಪಿಯನ್ (ಹಿಂ): ಸಂ.4.10ಕ್ಕೆ, ನಡನ್ನ ಸಂಭವಂ (ಮ): ರಾ.10.15ಕ್ಕೆ.
ಸ್ಕ್ರೀನ್ 3	ಮಹಾರಾಜ (ತ): ಬೆ.10.30ಕ್ಕೆ, ಸಂ.4.15ಕ್ಕೆ, ಸಂಭವಾಮಿ ಯುಗೇ ಯುಗೆ (ಕ): ಮ.1.25ಕ್ಕೆ, ಉಲ್ಲೋಝುಕ್ಕು (ಮ): ರಾ.7.15ಕ್ಕೆ, ಜಹಂಗೀರ್ ನ್ಯಾಷನಲ್ ಯೂನಿವರ್ಸಿಟಿ (ಹಿಂ): ರಾ.9.50ಕ್ಕೆ.
ಸ್ಕ್ರೀನ್ 4	ಚಿಲ್ಲಿ ಚಿಕನ್ (ಕ): ಬೆ.10.50ಕ್ಕೆ, ಕೋಟಿ (ಕ): ಮ.1.25ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಇನ್‌ಸೈಟ್ ಔಟ್ (3ಡಿ)(ಇಂ): ಸಂ.4.40ಕ್ಕೆ.

INOX LIVE THE MOVIE — ಐನಾಕ್ಸ್ ಮೂವೀಸ್
ದೂ : 2533444 / 2433456

ಸ್ಕ್ರೀನ್ 1	ಇನ್‌ಸೈಟ್ ಔಟ್ (3ಡಿ)(ಹಿಂ): ಬೆ.11ಕ್ಕೆ, ಇನ್‌ಸೈಟ್ ಔಟ್ (3ಡಿ)(ಇಂ): ಮ.1.20ಕ್ಕೆ, ಸಂ.4.20ಕ್ಕೆ, ಸಂ.6.40ಕ್ಕೆ, ಮುಂಜ್ಯಾ (ಹಿಂ): ರಾ.9ಕ್ಕೆ.
ಸ್ಕ್ರೀನ್ 2	ಮುಂಜ್ಯಾ (ಹಿಂ): ಬೆ.10ಕ್ಕೆ, ರಾ.7.35ಕ್ಕೆ, ರಾಕ್‌ಸ್ಟಾರ್ (ಹಿಂ): ಮ.12.45ಕ್ಕೆ, ಕೋಟಿ (ಕ): ಸಂ.4.05ಕ್ಕೆ, ರಾ.10.20ಕ್ಕೆ,
ಸ್ಕ್ರೀನ್ 3	ಚಂದು ಚಾಂಪಿಯನ್ (ಹಿಂ): ಬೆ.9.50ಕ್ಕೆ, ಮ.1ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.05ಕ್ಕೆ, ಮಹಾರಾಜ (ತ): ಮ.1.35ಕ್ಕೆ, ರಾ.7.05ಕ್ಕೆ, ಶಿವಮ್ಮ ಹರೆಹಂಚಿನಾಳ (ಕ): ಸಂ.4.40ಕ್ಕೆ, ಜಿಆರ್‌ಆರ್‌ಆರ್ (ಮ): ರಾ.10.10ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಕೋಟಿ (ಕ): ಮ.1ಕ್ಕೆ, ಸಂಭವಾಮಿ ಯುಗೇ ಯುಗೆ (ಕ): ಸಂ.4.05ಕ್ಕೆ, ಚಿಲ್ಲಿ ಚಿಕನ್ (ಕ): ರಾ.7.05ಕ್ಕೆ, ಮಹಾರಾಜ (ತ): ರಾ.9.30ಕ್ಕೆ.
ಸ್ಕ್ರೀನ್ 2	ದೇಸಾಯಿ (ಕ): ಸಂ.4.15ಕ್ಕೆ, ಕೋಟಿ (ಕ): ರಾ.7.45ಕ್ಕೆ
ಸ್ಕ್ರೀನ್ 3	ಪೋಕಿರಿ (ತ): ಮ.1.15ಕ್ಕೆ, ಲವ್ ಲಿ (ಕ): ಸಂ.4.20ಕ್ಕೆ, ರಾ.7.10ಕ್ಕೆ.
ಸ್ಕ್ರೀನ್ 4	ಲವ್ ಲಿ (ಕ): ಮ.1.30ಕ್ಕೆ, ಮಹಾರಾಜ (ತ): ಸಂ.6.45ಕ್ಕೆ, ಕೋಟಿ (ಕ): ರಾ.9.25ಕ್ಕೆ.

PVR CINEMAS — ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಕರಾಮುವಿಯಲ್ಲಿ ಯೋಗ ದಿನಾಚರಣೆ



ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ(ಕರಾಮುವಿ)ದ ವತಿಯಿಂದ ಮುಕ್ತ ಗಂಗೋತ್ರಿಯಲ್ಲಿ ಅಂತರರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಯಿತು. ಪ್ರಾದೇಶಿಕ ಶಿಕ್ಷಣ ಸಂಸ್ಥೆ ನಿವೃತ್ತ ಪ್ರಾಧ್ಯಾಪಕ ಡಾ.ಎನ್.ಎನ್.ಪ್ರಹ್ಲಾದ ಅವರು ವ್ಯಕ್ತಿ ವಿಕಾಸ ಮತ್ತು ಯೋಗದ ಬಗ್ಗೆ ಉಪನ್ಯಾಸ ನೀಡಿದರು. ಆಯುರ್ ಯೋಗ ಕೇಂದ್ರದ ಗಂಗಾಧರ ಗುರೂಜಿ ಯೋಗ ಕಾರ್ಯಕ್ರಮ ನಡೆಸಿಕೊಟ್ಟರು. ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ, ಶೈಕ್ಷಣಿಕ ಡೀನ್ ಪ್ರೊ.ಎನ್.ಲಕ್ಷ್ಮೀ, ವಿವಿಯ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕೇಜ್ರೀವಾಲ್ ಜಾಮೀನಿಗೆ ದೆಹಲಿ ಹೈಕೋರ್ಟ್ ತಡೆ

ನವದೆಹಲಿ, ಜೂ.21– ದೆಹಲಿ ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಥಳೀಯ ನ್ಯಾಯಾಲಯದ ಜಾಮೀನಿಂದ ನಿರಾಳವಾಗಿದ್ದ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರಿಗೆ ದೆಹಲಿ ಹೈಕೋರ್ಟ್ ಶುಕ್ರವಾರ ಶಾಕ್ ನೀಡಿದೆ. ಕೇಜ್ರಿವಾಲ್ ಬಿಡುಗಡೆ ಮಾಡುವ ಆದೇಶಕ್ಕೆ ದೆಹಲಿ ಹೈಕೋರ್ಟ್ ತಡೆ ನೀಡಿದೆ.

ನ್ಯಾಯಮೂರ್ತಿಗಳಾದ ಸುಧೀರ್ ಕುಮಾರ್ ಜೈನ್ ಮತ್ತು ರವೀಂದ್ರ ದುಡೇಜಾ ಅವರ ರಜಾಕಾಲೀನ ವಿಭಾಗೀಯ ಪೀಠದ ಮುಂದೆ ಜಾರಿ ನಿರ್ದೇಶನಾಲಯದ ಹೆಚ್ಚುವರಿ ಸಾಲಿಸಿಟರ್ ಜನರಲ್ ಎಸ್.ವಿ. ರಾಜು ಉಲ್ಲೇಖಿಸಿದರು. ವಿಚಾರಣಾಧೀನ ನ್ಯಾಯಾಲಯದ ಜಾಮೀನು ಆದೇಶಕ್ಕೆ ತುರ್ತು ತಡೆ ನೀಡಬೇಕು ಎಂದು ಕೋರುತ್ತಿದ್ದೇನೆ. ರಾತ್ರಿ 8ಕ್ಕೆ ಆದೇಶ ಮಾಡಲಾಗಿದೆ. ಇನ್ನೂ ಆದೇಶವನ್ನು ಅಪ್‌ಲೋಡ್ ಮಾಡಲಾಗಿಲ್ಲ. ಜಾಮೀನು ವಿರೋಧಿಸಲು ನಮಗೆ ಸೂಕ್ತ ಅವಕಾಶ ನೀಡಿಲ್ಲ ಎಂದು ಎಎಸ್‌ಜಿ ಹೇಳಿದರು.

ಪ್ರಮೀಳಾ ನಿಧನ



ಮೈಸೂರು, ಜೂ.21– ಮೈಸೂರಿನ ಹಿರಿಯ ವಕೀಲ ಸಿದ್ದನಾಯಕ ಅವರ ಪತ್ನಿ ಪ್ರಮೀಳಾ (54) ಶುಕ್ರವಾರ ನಿಧನರಾದರು. ಮೃತರು ಮೂವರು ಪುತ್ರಿಯರು, ಓರ್ವ ಪುತ್ರ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶನಿವಾರ ಮಧ್ಯಾಹ್ನ 12 ಗಂಟೆಗೆ ವರುಣ ಹೋಬಳಿಯ ಬೊಕ್ಕಹಳ್ಳಿ ಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಖಾಸಗಿ ಬಡಾವಣೆಗಳು ನಗರಸಭೆ, ಪಟ್ಟಣ, ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸಲು ಚಿಂತನೆ

ಮುಡಾ ಅಧ್ಯಕ್ಷ ಕೆ.ಮರೀಗೌಡ ಹೇಳಿಕೆ



ಮೈಸೂರು ಜೂ.21–ಮೈಸೂರಿನ ಹೊರ ವಲಯದಲ್ಲಿರುವ ಖಾಸಗಿ ಬಡಾವಣೆಗಳನ್ನು ಆಯ ವ್ಯಾಪ್ತಿಯ ನಗರಸಭೆ, ಪಟ್ಟಣ ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳಿಗೆ ಹಸ್ತಾಂತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಅಧ್ಯಕ್ಷ ಕೆ.ಮರೀಗೌಡ ತಿಳಿಸಿದರು.

ಮೈಸೂರು ನಗರ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಜಿ.ಟಿ.ದಿನೇಶ್ ಕುಮಾರ್ ನೇತೃತ್ವದ ಅಧಿಕಾರಿಗಳ ತಂಡದೊಂದಿಗೆ ಸೋಮನಾಥನಗರ, ಆರ್.ಟಿ.ನಗರ, ಸಿದ್ದರಾಮಯ್ಯ ಬಡಾವಣೆ, ಐಶ್ವರ್ಯ ನಗರ, ಎಸ್‌ಬಿಎಂ ಲೇಔಟ್, ಚಾಮುಂಡಿ ಬೆಟ್ಟದ ಬಳಿ ಇರುವ ವಿದ್ಯುತ್ ಚಿತಗಾರ ಪರಿಶೀಲಿಸಿ ಮಾತನಾಡಿದ ಅವರು ಸೋಮನಾಥನಗರಕ್ಕೆ ಒಳಚರಂಡಿ ವ್ಯವಸ್ಥೆ ಮತ್ತು ಸೆಪ್ಟಿಕ್ ಟ್ಯಾಂಕ್ ನಿರ್ಮಾಣ ಮಾಡಲು ಕ್ರಮ ವಹಿಸಲಾಗುವುದು.

ಕೇರ್ಗಳ್ಳಿ ಕೆರೆಯಿಂದ ಬರುವ ನೀರು ಹರಿದು ಹೋಗಲು ಚರಂಡಿ ನಿರ್ಮಿಸಲಾಗುವುದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸೂಚನೆ ಮೇರೆಗೆ ಲಿಂಗಾಂಬುದಿ ಪಾಳ್ಯದ ಸಿದ್ದರಾಮಯ್ಯ ಬಡಾವಣೆಗಳಿಗೆ ಒಳಚರಂಡಿ, ಕುಡಿಯುವ ನೀರು ಒದಗಿಸಿ ಸಂಪೂರ್ಣ ಅಭಿವೃದ್ಧಿಪಡಿಸಲಾಗುವುದು. ಆರ್‌ಟಿ ನಗರದಲ್ಲಿ ನಿಜವಾದ ಭೂ ಮಾಲೀಕನಿಗೆ ತಲುಪಬೇಕಾದ ಹಣವನ್ನು ತಲುಪಿಸಲು ಕ್ರಮ ಕೈಗೊಳ್ಳಲಾಗುವುದು. ಜನಸ್ಪಂದನ ಕಾರ್ಯಕ್ರಮದಲ್ಲಿ ಎಸ್‌ಬಿಎಂ ಲೇಔಟ್‌ನ 36 ಮನೆಗಳಿಗೆ ತಿರುಗಾಡಲು ರಸ್ತೆ ಇಲ್ಲದೆ ತೊಂದರೆಯಾಗಿದೆ ಎಂದು ದೂರು ಬಂದಿದ್ದು ಅಧಿಕಾರಿಗಳು ಕಾಂಪೌಂಡ್ ಹಾಕಲು ಮುಂದಾಗಿರುವ ವ್ಯಕ್ತಿಗೆ ನೋಟಿಸ್ ನೀಡಿ ಸಾರ್ವಜನಿಕರಿಗೆ ರಸ್ತೆ ನಿರ್ಮಾಣ ಮಾಡಿಕೊಡಲು ಸೂಚಿಸಲಾಯಿತು.

ಶಾಸಕ ಶ್ರೀವತ್ಸ ಅವರ ಸೂಚನೆ ಮೇರೆಗೆ ಐಶ್ವರ್ಯ ಬಡಾವಣೆಯಲ್ಲಿ ಒಳಚರಂಡಿ ನೀರು ಮುಂದೆ ಹೋಗಲು ತೊಂದರೆಯಾಗಿದ್ದು ಭೂ ಮಾಲೀಕರೊಂದಿಗೆ ಮಾತನಾಡಿ ಚೆನ್ನರೆಡ್ಡಿ ಜಮೀನಿನ ವರೆಗೆ ಒಳಚರಂಡಿ ಮಾಡಲು ಸೂಚಿಸಲಾಯಿತು.

ನಾಯ್ಡು ಸ್ಟೋರ್‌ನಿಂದ ಜೋಡಿ ರಸ್ತೆ ಮಾಡಲು ಕ್ರಮ ಕೈಗೊಳ್ಳಲಾಗುವುದು ಹಾಗೂ ಜೆ.ಪಿ.ನಗರದ ಗೊಬ್ಬಳಿ ಮರ ಸರ್ಕಲ್‌ನಿಂದ ದಕ್ಷಿಣಕ್ಕೆ ಹೋಗುವ ರಸ್ತೆಯಲ್ಲಿ ಸಾರ್ವಜನಿಕರಿಗೆ ಓಡಾಡಲು ತೊಂದರೆಯಾಗಿದ್ದು, ಖಾಸಗಿ ವ್ಯಕ್ತಿಗೆ ಬದಲಿ ನಿವೇಶನ ನೀಡಿ ಸಮಸ್ಯೆ ಪರಿಹರಿಸಲು ತಿಳಿಸಲಾಯಿತು. ಖಾಸಗಿ ಬಡಾವಣೆ ನಿರ್ಮಿಸಿದವರು ಸಾರ್ವಜನಿಕರಿಗೆ ಮೂಲಭೂತ ಸೌಕರ್ಯ ಸರಿಯಾಗಿ ನೀಡಿಲ್ಲ. ಪಟ್ಟಣ ಪಂಚಾಯಿತಿ ನಗರಸಭೆಯವರು ಸಮಸ್ಯೆ ಪರಿಹರಿಸದೆ ತೊಂದರೆಯಾಗಿರುವುದರಿಂದ ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಗಮನಕ್ಕೆ ತಂದು ಎಲ್ಲಾ ಸಮಸ್ಯೆಗಳನ್ನು ಹಂತ ಹಂತವಾಗಿ ಪರಿಹರಿಸಲಾಗುವುದು. ಮುಂದಿನ ದಿನಗಳಲ್ಲಿ ಮುಡಾದಲ್ಲಿ ಜನಸ್ಪಂದನ ಕಾರ್ಯಕ್ರಮವನ್ನು ನಡೆಸಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಕಾರ್ಯದರ್ಶಿ ಶೇಖರ, ತಹಸೀಲ್ದಾರ್ ಮೋಹನ್ ಕುಮಾರಿ, ಸಮೀನಾ, ಮೀನಾಕ್ಷಿ, ಸಹಾಯಕ ನಿರ್ದೇಶಕರಾದ ರೂಪ, ಪ್ರಶಾಂತ, ಗಂಗಾಧರ್, ಮುಖಂಡರಾದ ರವಿ, ಪ್ರಕಾಶ್, ಜವರೇಗೌಡ, ಲಕ್ಷ್ಮಯ್ಯ, ದೇವಯ್ಯ, ಬಂಗಾರಪ್ಪ, ಮಾದೇವ ಇನ್ನಿತರರಿದ್ದರು.

ನೆಕ್ಸಸ್ ಸೆಂಟರ್ ಸಿಟಿ ಮಾಲ್‌ನಲ್ಲಿ 'ಇಂಡಿಯಾ ಇನ್ ಸ್ಪೇಸ್' ಪ್ರದರ್ಶನ



ಮೈಸೂರು, ಜೂ. 21– ಮೈಸೂರಿನ ನೆಕ್ಸಸ್ ಸೆಂಟರ್ ಸಿಟಿ ಮಾಲ್, ಇಸ್ರೋ ಮತ್ತು ಕ್ರಾಫ್ಟಿಜಾನ್‌ನೊಂದಿಗೆ ಪಾಲುದಾರಿಕೆ ಹೊಂದಿದ್ದು, ಜೂ. 30 ರವರೆಗೆ 'ಇಂಡಿಯಾ ಇನ್ ಸ್ಪೇಸ್' ಹೆಸರಿನಲ್ಲಿ ವಿಶೇಷ ಬಾಹ್ಯಾಕಾಶ ಸಾಹಸ ಪ್ರದರ್ಶನ ಏರ್ಪಡಿಸಿದೆ. ಇದರ ಮೂಲಕ ನಾವು ಮುಂದಿನ ಪೀಳಿಗೆಯ ಬಾಹ್ಯಾಕಾಶವನ್ನು ತಲುಪಲು ಮತ್ತು ಪ್ರೇರೇಪಿಸಲು ಪ್ರಯತ್ನಿಸುತ್ತಿದ್ದೇವೆ. ವಿವಿಧ ಬಾಹ್ಯಾಕಾಶ ಪರಿಶೋಧನೆಗಳು, ಕೊಡುಗೆಗಳು ಮತ್ತು ಸ್ಪೇಸ್ ಕ್ಷೇತ್ರದಲ್ಲಿ ಇಸ್ರೋದ ಸಾಧನೆ ಗಳನ್ನು ಪ್ರದರ್ಶಿಸುತ್ತಿದೆ.

ಪ್ರದರ್ಶನವು ಇಂಟರಾಕ್ಟೀವ್ ಸ್ಪೇಸ್ ಪ್ರದರ್ಶನಗಳು, ಬಾಹ್ಯಾಕಾಶ ವಿಷಯದ ಆಟಗಳು ಮತ್ತು ಸವಾಲುಗಳು, ಮಕ್ಕಳಿಗಾಗಿ ಬಾಹ್ಯಾಕಾಶ ತಜ್ಞರ DIY ಕಾರ್ಯಾಗಾರವನ್ನು ಭೇಟಿ ಮಾಡಿ, ಸ್ವಾಗತಿಸಿ ಖಗೋಳ ಶಾಸ್ತ್ರದ ಉಪಕರಣಗಳು ಮತ್ತು ಪರಿಕರಗಳು PSLV, ಚಂದ್ರಯಾನ 3 ಮತ್ತು HRLVಯ ರಾಕೆಟ್ ಮಾದರಿಗಳ ಪ್ರದರ್ಶನವನ್ನು ಇಸ್ರೋ ಮಾಜಿ ನಿರ್ದೇಶಕ ಸಿಬಿಪಿಓ ಡಾ.ಪಿ.ವಿ.ವೆಂಕಟ ಕೃಷ್ಣನ್ ಉದ್ಘಾಟಿಸಿದರು.

ನೆಕ್ಸಸ್ ಸೆಲೆಕ್ಟ್ ಮಾಲ್‌ಗಳ ಸಿಓಓ ಜಯನ್ ನಾಯಕ್, ಪ್ರಾದೇಶಿಕ ನಿರ್ದೇಶಕ ದಕ್ಷಿಣ ತನ್ವೀರ್ ಶೇಕ್, ನೆಕ್ಸಸ್ ಸೆಲೆಕ್ಟ್ ಮಾಲ್‌ಗಳ ಸಿಬ್ಬಂದಿ ಉಪಸ್ಥಿತರಿದ್ದರು.

ಜೂ.24, ಶ್ರೀನಿವಾಸ್ ಪ್ರಸಾದ್, ಧ್ರುವನಾರಾಯಣ್, ಶಿವರಾಮ್ ಅವರಿಗೆ ನುಡಿನಮನ

ಮೈಸೂರು, ಜೂ.21(ಜಿಎ)–ಕರ್ನಾಟಕ ಭೀಮ್ ಸೇನೆ ವತಿಯಿಂದ ಜೂ. 24 ರ ಬೆಳಗ್ಗೆ 10ಗಂಟೆಗೆ ನಗರದ ಪುರಭವನದಲ್ಲಿ ಮಾಜಿ ಸಂಸದರಾದ ವಿ.ಶ್ರೀನಿವಾಸ ಪ್ರಸಾದ್, ಆರ್.ಧ್ರುವನಾರಾಯಣ್ ಹಾಗೂ ನಿವೃತ್ತ ಕೆಎಎಸ್ ಅಧಿಕಾರಿ ಕೆ.ಶಿವರಾಮ್ ಅವರಿಗೆ ನುಡಿ ನಮನ ಕಾರ್ಯಕ್ರಮ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸೇನೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಎಂ.ಮಂಜುನಾಥ್ ಈ ವಿಷಯ ತಿಳಿಸಿ, ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಗಳಿಸಿದ ಸುಮಾರು 200 ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ, ಫಲಕ ನೀಡಿ ಗೌರವಿಸಲಾಗುವುದು. ಅನೇಕ ಗಣ್ಯರು ಆಗಮಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಸರ್ವೇಶ್, ಮಾದೇಶ್, ಮಲ್ಲೇಶ್ ಉಪಸ್ಥಿತರಿದ್ದರು.

ಕಾಡಂಚಿನ ಗ್ರಾಮಗಳ ಜನರ ರಕ್ಷಣೆಗೆ ಶಾಸಕ ಜಿ.ಡಿ.ಹರೀಶ್‌ಗೌಡ ಮನವಿ




ಬೆಂಗಳೂರಿನ ವಿಕಾಸಸೌಧದಲ್ಲಿ ಅರಣ್ಯದಂಚಿನ ಜನರ ನಾನಾ ಸಮಸ್ಯೆ ನಿವಾರಣೆಗಾಗಿ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರಿಗೆ ಹುಣಸೂರು ಕ್ಷೇತ್ರದ ಶಾಸಕ ಜಿ.ಡಿ.ಹರೀಶ್ ಗೌಡ ಮನವಿ ಸಲ್ಲಿಸಿದರು.

ಬೆಂಗಳೂರು, ಜೂ.21– ಮೈಸೂರಿನ ನಾಗರಹೊಳೆ ರಾಷ್ಟ್ರೀಯ ಉದ್ಯಾನವನದಂಚಿನಲ್ಲಿ ಗಡಿ ವಿವಾದ, ಕಾಡು ಪ್ರಾಣಿಗಳ ಹಾವಳಿ ಮತ್ತು ವನ್ಯಜೀವಿ–ಮಾನವ ಸಂಘರ್ಷಕ್ಕೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಅವರಿಗೆ ಹುಣಸೂರು ಕ್ಷೇತ್ರದ ಶಾಸಕ ಜಿ.ಡಿ.ಹರೀಶ್ ಗೌಡ ಮನವಿ ಮಾಡಿದರು.

ನಾಗರಹೊಳೆ ರಾಷ್ಟ್ರೀಯ ಉದ್ಯಾನವನದ ಗಡಿಯಲ್ಲಿ ಹಲವು ವರ್ಷಗಳಿಂದ ಹತ್ತು ಹಲವು ಸಮಸ್ಯೆಗಳಿದ್ದು, ಶೀಘ್ರವೇ ಪರಿಹಾರ ಒದಗಿಸಲು ಸರ್ಕಾರ ಮತ್ತು ಅರಣ್ಯ ಇಲಾಖೆ ಮುಂದಾಗಬೇಕು. ವನ್ಯಜೀವಿಗಳ ದಾಳಿಯಿಂದ ಸಾವನ್ನಪ್ಪಿದವರ ಕುಟುಂಬಕ್ಕೆ ಹಾಗೂ ಬೆಳೆ ನಷ್ಟಕ್ಕೆ ನೀಡುವ ಪರಿಹಾರ ಮೊತ್ತವನ್ನು ಹೆಚ್ಚಿಸಬೇಕು ಎಂದು ಒತ್ತಾಯಿಸಿದರು.

ಕಾಡಂಚಿನ ಗ್ರಾಮಗಳಾದ ಉಡುವೆಪುರ, ಬೆಕ್ಕೆಸೆಡ್ಡು, ಕಿಕ್ಕೇರಿಕಟ್ಟೆ ಅಳೂರು ಗ್ರಾಮ ಸೇರಿದಂತೆ ಹಲವು ಗ್ರಾಮಗಳ ಜಮೀನಿಗೂ ಅರಣ್ಯ ಇಲಾಖೆಗೂ ಗಡಿ ವಿವಾದವಿದ್ದು, ತಡೆಗೋಡೆ ನಿರ್ಮಾಣವಾಗದೆ, ಕಾಡು ಪ್ರಾಣಿಗಳು ಜಮೀನಿಗಳಿಗೆ ಲಗ್ಗೆ ಇಡುವುದರಿಂದ ಸಂಘರ್ಷಗಳು ಮುಂದುವರೆಯುತ್ತಲೇ ಇವೆ. ಈ ಸಂಬಂಧ ಅರಣ್ಯ ಮತ್ತು ಕಂದಾಯ ಇಲಾಖೆ ಜಂಟಿ ಸರ್ವೆ ನಡೆಸಿ ಗಡಿ ಗುರುತಿಸ ಬೇಕು. ಬಾಕಿ ಉಳಿದಿರುವ ರೈಲ್ವೆ ಕಂಬಿ ತಡೆ ಗೋಡೆ ಪೂರ್ಣಗೊಳಿಸಿ, ಪ್ರಾಣಿಗಳು ಅರಣ್ಯ ಪ್ರದೇಶದಿಂದ ಹೊರಬಾರದಂತೆ ಎಚ್ಚರ ವಹಿಸಬೇಕು.

ಕಾಡು ಪ್ರಾಣಿಗಳ ದಾಳಿಯಿಂದ ಪ್ರಾಣಹಾನಿಯಾದರೆ ಅವರ ಕುಟುಂಬಕ್ಕೆ ನೀಡುವ 15 ಲಕ್ಷ ರೂ. ಪರಿಹಾರ ಮೊತ್ತವನ್ನು ಕನಿಷ್ಠ 50 ಲಕ್ಷ ರೂ.ಗೆ ಹೆಚ್ಚಿಸಬೇಕು. ಪ್ರಾಣಿಗಳು ಜಮೀನಿನ ಫಸಲು ನಾಶಪಡಿಸಿದರೆ ನಾಲ್ಕು ಸಾವಿರ ರೂ. ಪರಿಹಾರ ನೀಡುವ ಬದಲು ತೋಟಗಾರಿಕೆ, ವಾಣಿಜ್ಯ ಮತ್ತು ಇತರ ಬೆಳೆಗಳಿಗೆ ನ್ಯಾಯಯುತ ಬೆಲೆ ನಿಗದಿ ಮಾಡಿ ಸಮರ್ಪಕವಾದ ಪರಿಹಾರ ನೀಡಬೇಕು. ಅರಣ್ಯ ಇಲಾಖೆ ಅಧಿಕಾರಿಗಳು ಕಾಡಂಚಿನ ಜನರಿಗೆ ಗಡಿ ನೆಪವೊಡ್ಡಿ ವಿನಾಕಾರಣ ತೊಂದರೆ ನೀಡದಂತೆ ಸೂಚನೆ ನೀಡಬೇಕೆಂದು ಆಗ್ರಹಿಸಿದರು.





ಕರ್ನಾಟಕ ಸರ್ಕಾರ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ

ಉಪ ನಿರ್ದೇಶಕರ ಕಛೇರಿ, ರಂಗಾಯಣ,

ವಿನೋಬ ರಸ್ತೆ, ಮೈಸೂರು

Ph: 0821-2512639 Email: rangayanamysore@gmail.com

ನಂ: ನಾಕರಂ/ಇ–ಟೆಂಡರ್/325/2024–25 ದಿನಾಂಕ: 19.06.2024

ಇ–ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ

ರಂಗಾಯಣ ಮೈಸೂರು ಇಲ್ಲಿ ಹೊರಗುತ್ತಿಗೆ ಮೂಲಕ ಗ್ರೂಪ್ 'ಸಿ' ವೃಂದದ ಪ್ರಥಮ ದರ್ಜೆ ಸಹಾಯಕರು, ಡಾಟಾ ಎಂಟ್ರಿ ಆಪರೇಟರ್ ಹಾಗೂ ಗ್ರೂಪ್ 'ಡಿ' ವೃಂದದ ಕಾವಲುಗಾರ ಹಾಗೂ ಸ್ವಚ್ಛತೆಗಾರರು ಸೇವೆಯನ್ನು ಒದಗಿಸಲು ನೋಂದಾಯಿತ ಮತ್ತು ಪರವಾನಗಿಯುಳ್ಳ ಅರ್ಹ ಏಜೆನ್ಸಿ ಸಂಸ್ಥೆಗಳಿಂದ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ನಿಗಧಿತ ನಮೂನೆಯಲ್ಲಿ 2 ಬಿಡ್ ವಿಧಾನದಲ್ಲಿ ಟೆಂಡರ್ ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳನ್ನು ಹಾಗೂ ಟೆಂಡರ್ ದಾಸ್ತಾವೇಜುಗಳನ್ನು ದಿ: 19.06.2024 ರಿಂದ 19.07.2024 ರವರೆಗೆ website: www.eproc.karnataka.gov.in ನಲ್ಲಿ ಪಡೆಯಬಹುದಾಗಿದೆ. E-portal ನಲ್ಲಿ ಟೆಂಡರ್ ಸಲ್ಲಿಸಲು ಅಂತಿಮ ದಿ: 19.07.2024 ರ 5.30 ಗಂಟೆಗೆ ನಿಗದಿಪಡಿಸಿದೆ.

DIPR/DDMYS-102/KSMCA-87/2024-25 ಸಹಿ/– ಉಪ ನಿರ್ದೇಶಕರು

ಕರ್ನಾಟಕ ಸರ್ಕಾರ

ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ

ಕಾವೇರಿಜಲಾನಯನ ಯೋಜನೆಗಳು–ಮೈಸೂರು

ಕಾರ್ಯಪಾಲಕ ಅಭಿಯಂತರರವರ ಕಛೇರಿ,

ನಂ–2 ವಿಭಾಗ, ಕಾಡಾ, ಕಾಜಯೋ

ವಿಜಯನಗರ 1 ನೇ ಹಂತ, ಮೈಸೂರು–17

Ph: 0821-2414090 email-eecada2mysore@gmail.com

ಟೆಂಡರ್ ಪ್ರಕಟಣೆ ಸಂಖ್ಯೆ: 03/2024–25 ದಿನಾಂಕ: 13.06.2024

(Through e-procurement only)

ಆಡಳಿತಾಧಿಕಾರಿಗಳು, ಕಾಡಾ, ಕಾಜಯೋ, ಮೈಸೂರುರವರ ಕಛೇರಿಗೆ 02 ಹಾಗೂ ನಿರ್ದೇಶಕರು, ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ಕಛೇರಿಗೆ 01 ಒಟ್ಟು 03 ಹವಾ ನಿಯಂತ್ರಣ ರಹಿತ ವಾಹನಗಳನ್ನು ಬಾಡಿಗೆ ಆಧಾರದ ಮೇಲೆ ಚಾಲಕರ ಸಹಿತ ಸರಬರಾಜು ಮಾಡಲು ಅರ್ಹ ನೊಂದಾಯಿತ ಸರಬರಾಜುದಾರರು/ಟ್ರಾವೆಲ್ ಏಜೆನ್ಸಿರವರಿಂದ e-portal ಮೂಲಕ ಏಕ ಲಕೋಟೆ ಪದ್ಧತಿಯಲ್ಲಿ ಟೆಂಡರ್‌ಅನ್ನು ಆಹ್ವಾನಿಸಲಾಗಿರುತ್ತದೆ. ಭಾಗವಹಿಸಲು ಇಚ್ಛಿಸುವ ಸರಬರಾಜುದಾರರು/ಟ್ರಾವೆಲ್ ಏಜೆನ್ಸಿರವರು ಟೆಂಡರ್‌ಗೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿಗಳನ್ನು http://kppp.karnataka.gov.in ನಲ್ಲಿ ಪಡೆಯಬಹುದಾಗಿರುತ್ತದೆ. ಟೆಂಡರ್ ಡೌನ್‌ಲೋಡ್ ಮಾಡಿಕೊಳ್ಳುವ ದಿ: 14.06.2024ರಿಂದ, ಟೆಂಡರ್ ಸಲ್ಲಿಸಲು ಕೊನೆಯ ದಿ: 28.06.2024 ಸಂಜೆ 4.00ಗಂಟೆಯವರೆಗೆ ಹಾಗೂ ಟೆಂಡರ್ ತೆರೆಯುವ ದಿ: 29.06.2024 ಸಂಜೆ 4.30 ಗಂಟೆಯ ನಂತರ.

ಸಹಿ/– ಕಾರ್ಯಪಾಲಕ ಅಭಿಯಂತರರು

DIPR/DDMYS-118 /KSMCA-90/2024-25

ಕರ್ನಾಟಕ ಸರ್ಕಾರ

ಕಾರ್ಯದರ್ಶಿಗಳ ಕಾರ್ಯಾಲಯ, ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ, ಮಹದೇಶ್ವರಬೆಟ್ಟ, ಹನೂರು ತಾಲ್ಲೂಕು, ಚಾಮರಾಜನಗರ ಜಿಲ್ಲೆ.

ದೂರವಾಣಿ ಸಂಖ್ಯೆ: 08225-272128, ಫ್ಯಾಕ್ಸ್ ಸಂಖ್ಯೆ:08225-272123, Email: sec.mmtemple@gmail.com

ಸಂಖ್ಯೆ: ಶ್ರೀ ಮ.ಮ.ಕ್ಷೇತ್ರ.ಅ.ಪ್ರಾ/ಗುತ್ತಿಗೆ/8/ಪಿಆರ್/05/2024-25 ದಿನಾಂಕ :11-06-2024

ಅಲ್ಪಾವಧಿ ಇ-ಟೆಂಡರ್ ಪ್ರಕಟಣೆ

ಕರ್ನಾಟಕ ಸಾರ್ವಜನಿಕ ಇ-ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಮಾತ್ರ

ಕ್ರ. ಸಂ.	ಹಕ್ಕುಬಾಧ್ಯತೆಗಳ ವಿವರ	ಗುತ್ತಿಗೆ ಅವಧಿ	ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ)	ಇಎಂಡಿ ಮೊತ್ತ (ರೂ.ಗಳಲ್ಲಿ)
1	ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಗಿರಿದರ್ಶಿನಿ ಕ್ಯಾಂಟಿನ್ ನಡೆಸುವ ಹಕ್ಕು ಬಾಧ್ಯತೆಯನ್ನು 2024-26 ನೇ ಸಾಲಿಗೆ ಇ-ಟೆಂಡರ್‌ನಲ್ಲಿ ಬಿಡುವ ಬಗ್ಗೆ.	2 ವರ್ಷ	5.00	50,000-00
2	ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಸಂಕಮ್ಮ ನಿಲಯ ಆವರಣದಲ್ಲಿರುವ ಉಪಹಾರ ದರ್ಶಿನಿ, ಶೇಷಣ್ಣ ಒಡೆಯರ್ ಗದ್ದಿಗೆ ಮುಂಭಾಗದಲ್ಲಿರುವ ಉಪಹಾರ ದರ್ಶಿನಿಯನ್ನು 2024-26ನೇ ಸಾಲಿಗೆ ಇ- ಟೆಂಡರ್‌ನಲ್ಲಿ ಬಿಡುವ ಬಗ್ಗೆ.	2 ವರ್ಷ	5.00	50,000-00
3	ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಅಂತರಗಂಗೆ, ಗಣಪತಿ ಸನ್ನಿಧಿ ಮತ್ತು ಶೇಷಣ್ಣ ಒಡೆಯರ ಗದ್ದುಗೆಯಲ್ಲಿ ಮುಡಿ ತೆಗೆಯಿಸಿ ಬರುವ ಭಕ್ತಾಧಿಗಳಿಗೆ ತೀರ್ಥ ಪ್ರಸಾದ ಕೊಟ್ಟು ಶುಲ್ಕ ವಸೂಲಾತಿ ಮಾಡುವ ಹಾಗೂ ಶ್ರೀಅಯ್ಯಪ್ಪಸ್ವಾಮಿ ಭಕ್ತಾಧಿಗಳು ವಿಸರ್ಜಿಸುವ ಬಟ್ಟೆ ಹಾಗೂ ಮಣಿಸರಗಳನ್ನು ಶೇಖರಿಸಿ ಪಡೆದುಕೊಳ್ಳುವ ಹಕ್ಕು ಬಾಧ್ಯತೆಯನ್ನು 2024-25 ನೇ ಸಾಲಿಗೆ ಇ-ಟೆಂಡರ್‌ನಲ್ಲಿ ಬಿಡುವ ಬಗ್ಗೆ.	1 ವರ್ಷ	50.00	50,000-00
4	ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ದೇವಸ್ಥಾನಕ್ಕೆ ಪೂಜೆ ಮಾಡಿಸಲು ಬರುವ ವಾಹನಗಳಿಗೆ ಮಾತ್ರ ವಾಹನ ಪೂಜಾ ಶುಲ್ಕ ವಸೂಲಾತಿಯ ಹಕ್ಕು ಬಾಧ್ಯತೆಯನ್ನು 2024-25 ನೇ ಸಾಲಿಗೆ ಇ- ಟೆಂಡರ್‌ನಲ್ಲಿ ಬಿಡುವ ಬಗ್ಗೆ.	1 ವರ್ಷ	5.00	50,000-00
5	ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ಪ್ರಾಥಮಿಕ ಆರೋಗ್ಯ ಕೇಂದ್ರದ ಮುಂಭಾಗ ಹೊಸದಾಗಿ ನಿರ್ಮಿಸಿರುವ ಪಾರ್ಕಿಂಗ್ ಯಾರ್ಡ್ ನಲ್ಲಿ ವಾಹನ ನಿಲುಗಡೆ ಶುಲ್ಕ ವಸೂಲಾತಿ ಹಕ್ಕುಬಾಧ್ಯತೆಯನ್ನು 2024-25 ನೇ ಸಾಲಿಗೆ ಇ-ಟೆಂಡರ್‌ನಲ್ಲಿ ಬಿಡುವ ಬಗ್ಗೆ.	1 ವರ್ಷ	10.00	50,000-00
6	ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಸೇ-ರಿದ ಶ್ರೀ ಶೈಲಭವನ ವಸತಿ ಗೃಹದ ಮುಂಭಾಗದ ಟೀ ಸ್ಟಾಲ್‌ನ್ನು 2024-25 ನೇ ಸಾಲಿಗೆ ಇ-ಟೆಂಡರ್‌ನಲ್ಲಿ ಬಿಡುವ ಬಗ್ಗೆ.	1 ವರ್ಷ	2.50	30,000-00

ಕ್ರ.ಸಂ	ಮಳಿಗೆಗಳ ವಿವರ	ಇ.ಎಂ.ಡಿ	ವರ್ಗ ಮತ್ತು ಮಳಿಗೆ ಸಂಖ್ಯೆ
7	ಬಸ್ ನಿಲ್ದಾಣದ ವಾಣಿಜ್ಯ ಸಂಕೀರ್ಣ ಮಳಿಗೆಗಳ ಪೈಕಿ 14 ಮಳಿಗೆಗಳು. 11 ತಿಂಗಳು ಮಾತ್ರ.	10,000.00	ಸಾ.ವರ್ಗ:5,6,7,8,10,11,13,14,25,27,29 ಎಸ್.ಸಿ: 20,24,28, ಎಸ್.ಟಿ:16
	ತಂಬಡಿಗೇರಿಗೆ ಹೋಗುವ ರಸ್ತೆಯ ವಾಣಿಜ್ಯ ಸಂಕೀರ್ಣ–01. 11 ತಿಂಗಳು ಮಾತ್ರ.	30,000.00	ಸಾ.ವರ್ಗ:1
8	ಬಸ್ ನಿಲ್ದಾಣದ ಹತ್ತಿರ ಗುಂಜುಮಲೆ ವಾಣಿಜ್ಯ ಸಂಕೀರ್ಣ ಮಳಿಗೆಗಳ ಪೈಕಿ 14 ಮಳಿಗೆಗಳು. 11 ತಿಂಗಳು ಮಾತ್ರ.	30,000.00	ಸಾ.ವರ್ಗ: 3,5,9,10,13,14,20,22,23,24 ಎಸ್.ಸಿ: 2,8,18 ಎಸ್.ಟಿ:17
9	ಬಸ್ ನಿಲ್ದಾಣದ ಹತ್ತಿರ ನಿರ್ಮಿಸಿರುವ ನಡುಮಲೆ 90 ಎ.ಸಿ ಶೀಟ್ ಮಳಿಗೆಗಳ ಪೈಕಿ 41 ಮಳಿಗೆಗಳು. 11 ತಿಂಗಳು ಮಾತ್ರ	10,000.00	ಸಾ.ವರ್ಗ: 5,12,17,21,26,27,29,31,32 ,35,39,40,42,43,46,51,54,59,60, 71,72,73,74,75,76,83,88,90, (36 ಟೀ ಸ್ಟಾಲ್) ಎಸ್.ಸಿ: 33,22,30,47,48,58,66,84 ಎಸ್.ಟಿ: 23,33,63,81
10	ಮೂಡಲ ಮಲೆ ವಾಣಿಜ್ಯ ಸಂಕೀರ್ಣ 41 ಮಳಿಗೆಗಳು 11 ತಿಂಗಳು ಮಾತ್ರ	30,000.00	ಸಾ.ವರ್ಗ: 1,3,6,8,10,11,12,14,16,16 (A) 18,20,21,22,23,25,28,30,31,,32,33, 36,38,39,40,42,43,46,47 ಎಸ್.ಸಿ: 5,13,19,24,26,29,34,37,44 ಎಸ್.ಟಿ: 7,9, ಅಂಗವಿಕಲರು: 17
11	ಅಂತರಗಂಗೆ ಸಾಲು ಮಳಿಗೆಗಳ ಪೈಕಿ 9 ಮಳಿಗೆ 11 ತಿಂಗಳು ಮಾತ್ರ	30,000.00	ಸಾ.ವರ್ಗ: 1,11,17,19,21,23,30 ಎಸ್.ಸಿ: 3, 29

ವಿವರಗಳನ್ನು https://kppp.karnataka.gov.in/ ಮುಖಾಂತರ ಡೌನ್‌ಲೋಡ್ ಮಾಡಿಕೊಳ್ಳಬಹುದು ಮತ್ತು ಹೆಚ್ಚಿನ ವಿವರಗಳಿಗೆ ಕಛೇರಿಯ ಅವಧಿಯಲ್ಲಿ ಸ್ಪಷ್ಟೀಕರಣಬೇಕಾದಲ್ಲಿ ಉಪಕಾರ್ಯದರ್ಶಿಯವರ ಮೊಬೈಲ್ ನಂ. 9902593369. ವಿಷಯ ನಿರ್ವಾಹಕರು ಮೊಬೈಲ್ ನಂ: 8277244893 ಸಂಪರ್ಕಿಸ ತಕ್ಕದ್ದು.

ಇ–ಪ್ರಕ್ಯೂರ್‌ಮೆಂಟ್ ವ್ಯವಸ್ಥೆಯಡಿ ಟೆಂಡರ್ ವೇಳಾಪಟ್ಟಿ ಈ ಕೆಳಕಂಡಂತಿದೆ

ಕ್ರ.ಸಂ	ವಿವರ	ದಿನಾಂಕ	ಷರಾ
1	ಇ-ಪೋರ್ಟಲ್ ನಲ್ಲಿ ಟೆಂಡರ್ ಪ್ರಕ್ರಿಯೆಗಳು ಚಾಲ್ತಿಗೆ ಬರುವ ದಿನಾಂಕ	15-06-2024	ರ ನಂತರ
2	ಇ-ಟೆಂಡರ್ ಸಲ್ಲಿಸುವ ಕೊನೆ ದಿನಾಂಕ ಮತ್ತು ವೇಳೆ	01-07-2024	ಸಂಜೆ 4 ಗಂಟೆಯವರೆಗೆ
3	ಇ-ಟೆಂಡರ್ ತೆರೆಯುವ ದಿನಾಂಕ ಮತ್ತು ವೇಳೆ	02-07-2024	ಇ-ಟೆಂಡರ್ ಸಂಜೆ 5.00 ಗಂಟೆಯ ನಂತರ ತೆರೆಯಲಾಗುವುದು

ಸಂ.ವಾಸಾಸಂಇ:ಚಾನಗರ:42:2024-25

ಸಹಿ/– ಕಾರ್ಯದರ್ಶಿ, ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ, ಅಭಿವೃದ್ಧಿ ಪ್ರಾಧಿಕಾರ, ಮಹದೇಶ್ವರ ಬೆಟ್ಟ